ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಸೆಪ್ಟೆಂಬರ್ 25 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 160 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮುಖ್ಯಮಂತ್ರಿಯ ತನಿಖೆ ಎತ್ತಿ ಹಿಡಿದ ಹೈಕೋರ್ಟ್

ಸಿಎಂ ಸಿದ್ದರಾಮಯ್ಯ ಅರ್ಜಿ ವಜಾ


ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ | ನ್ಯಾಯಮೂರ್ತಿ ಎಂ.ನಾಗಪ್ರಸನ್ನ


ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಸೆ, 24(ಕೆಎಂಶಿ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಜಾಗೊಳಿಸಿರುವ ಕರ್ನಾಟಕ ಹೈಕೋರ್ಟ್, ರಾಜ್ಯಪಾಲರು ನೀಡಿದ್ದ ಪ್ರಾಸಿಕ್ಯೂಷನ್‌ಗೆ ಅನುಮತಿ ನಿರ್ಧಾರವನ್ನು ಎತ್ತಿಹಿಡಿದಿದೆ.

ರಾಜಭವನದ ನಿರ್ಧಾರ ಪ್ರಶ್ನಿಸಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ, ಇಂದು ಮಹತ್ವದ ತೀರ್ಪು ಪ್ರಕಟಿಸಿದ್ದು, ಮುಡಾ ನಿವೇಶನ ಹಂಚಿಕೆ ಹಗರಣ ಕುರಿತ ವಿಚಾರಣೆಗೆ ಅನುಮತಿ ನೀಡಿದಂತಾಗಿದೆ. ಮುಖ್ಯಮಂತ್ರಿ ಅವರ ರಿಟ್ ಅರ್ಜಿ ಮೇಲೆ ಆರು ದಿನಗಳ ವಾದ–ಪ್ರತಿವಾದವನ್ನು ಸೆ.12ರಂದು ಮುಗಿಸಿ, ■ 6ನೇ ಪುಟಕ್ಕೆ

ನಾನು ಹೆದರಲ್ಲ; ರಾಜೀನಾಮೆ ನೀಡಲ್ಲ

- ಬಿಜೆಪಿ–ಜೆಡಿಎಸ್‌ಗೆ ಸವಾಲೆಸೆದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಹೋರಾಟದಿಂದ ಬಂದಿದ್ದೇನೆ; ನಿಮ್ಮ ಷಡ್ಯಂತ್ರ ಸೋಲಿಸುತ್ತೇನೆ

ಬೆಂಗಳೂರು: ನಾನು ಹೆದರಲ್ಲ, ರಾಜೀನಾಮೆ ನೀಡಲ್ಲ. ನಾನು ಹೋರಾಟದಿಂದ ಬಂದ ವನು. ನಿಮ್ಮ ಷಡ್ಯಂತ್ರವನ್ನು ಸೋಲಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿ–ಜೆಡಿಎಸ್‌ಗೆ ನೇರ ಎಚ್ಚರಿಕೆ ನೀಡಿದರು. ಯಲಹಂಕದ ರಾಜ್ಯದ ಪ್ರಪ್ರಥಮ ನೈಸರ್ಗಿಕ ಅನಿಲ ಆಧಾರಿತ 370 ಮೆ.ವ್ಯಾ ಸಾಮರ್ಥ್ಯದ ಸಂಯುಕ್ತ ಆವರ್ತ ವಿದ್ಯುತ್ ಸ್ಥಾವರವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು. ನಾನು ರಾಜೀನಾಮೆ ಕೊಡ್ತೀನಿ ಅಂತಾ ಕಾಯ್ಕೊಂಡು ಕೂತಿದ್ದೀರಾ. ಯಾವ ತಪ್ಪನ್ನೂ ಮಾಡದ ನನ್ನನ್ನು ಷಡ್ಯಂತ್ರದಿಂದ ಇಳಿಸಲು ನೋಡುತ್ತಿದ್ದೀರಾ. ಇದು ಅಸಾಧ್ಯ. ನಾನು ಹೋರಾಟ ರಾಜಕಾರಣದಿಂದ ಬಂದವನು. ನಿಮ್ಮನ್ನು ರಾಜಕೀಯವಾಗಿ ಎದುರಿಸಿ ಗೆಲ್ತೀನಿ. ನಿಮ್ಮ ಷಡ್ಯಂತ್ರ ಸೋಲಿಸ್ತೀನಿ ಎಂದು ಬಹಿರಂಗವಾಗಿ ತೊಡೆತಟ್ಟಿದರು.

ಪೌರಕಾರ್ಮಿಕರಿಗೆ ಕಣ್ಣಿನ ತಪಾಸಣಾ ಶಿಬಿರ



ಪೌರಕಾರ್ಮಿಕರಿಗೆ ಕಣ್ಣಿನ ಉಚಿತ ತಪಾಸಣಾ ಶಿಬಿರ ನಡೆಸಲಾಯಿತು.

ಮೈಸೂರು,ಸೆ.24–ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಪೌರಕಾರ್ಮಿಕರು ದೇಶದ ಬೆನ್ನೆಲುಬು. ಅವರನ್ನು ಗೌರವಿಸೋಣ ಎಂದು ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮಪ್ರಸಾದ್ ಹೇಳಿದರು.

ಮೈಸೂರಿನ ಚಾಮುಂಡಿಪುರಂ ವೃತ್ತದಲ್ಲಿರುವ ತಗಡೂರು ರಾಮಚಂದ್ರರಾವ್ ಉದ್ಯಾನವನದಲ್ಲಿ ಜನಮನ ವೇದಿಕೆ ವತಿಯಿಂದ ಅನ್ನಪೂರ್ಣ ಕಣ್ಣಿನ ಆಸ್ಪತ್ರೆಯ ಸಹಯೋಗದೊಂದಿಗೆ ಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮಪ್ರಸಾದ್ ನೇತೃತ್ವದಲ್ಲಿ ಪೌರಕಾರ್ಮಿಕರ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಕಣ್ಣಿನ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ನಗರದಲ್ಲಿ ವಾಹನಗಳು ಮನೆ ಮುಂದೆ ಬರುವಾಗ ಸಾರ್ವಜನಿಕರು ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕಿಸಿ, ಕೊಡುವ ಮೂಲಕ ಪೌರಕಾರ್ಮಿಕರೊಂದಿಗೆ ಸಹಕರಿಸಬೇಕು. ಪೌರಕಾರ್ಮಿಕರು ಯಾವುದೇ ಕಾರಣಕ್ಕೂ ಶೌಚ ಗುಂಡಿಗಳಿಗೆ ಇಳಿಯಬಾರದು. ಯಂತ್ರಗಳ ಮೂಲಕ ಸ್ವಚ್ಛಗೊಳಿಸಬೇಕು ಎಂದರು.

ಪೌರಕಾರ್ಮಿಕರು ದೇವರ ಸಮಾನ. ಅವರು ಇಲ್ಲವೆಂದರೆ ನಗರಗಳಲ್ಲಿ ಸ್ವಚ್ಛತೆ ಇರುವುದಿಲ್ಲ. ಪ್ರತಿಯೊಬ್ಬರೂ ಅವರನ್ನು ಗೌರವದಿಂದ ಕಾಣಬೇಕು. ಪ್ರತಿಯೊಬ್ಬರೂ ನಗರದ ಸ್ವಚ್ಛತೆಗೆ ಒತ್ತು ನೀಡಬೇಕು. ಬದುಕಿಗೆ ಕಣ್ಣುಗಳು ಅವಶ್ಯಕವಾಗಿದ್ದು, ಅವುಗಳನ್ನು ಕಾಲ ಕಾಲಕ್ಕೆ ತಪಾಸಣೆ ಮಾಡಿಸಿಕೊಳ್ಳಬೇಕು ಎಂದರು.

ಕಣ್ಣಿನ ತಪಾಸಣೆ ಶಿಬಿರವನ್ನು 100ಕ್ಕೂ ಹೆಚ್ಚು ಪೌರಕಾರ್ಮಿಕರು ಸದುಪಯೋಗಪಡಿಸಿಕೊಂಡರು. ಅನ್ನಪೂರ್ಣ ಐ ಆಸ್ಪತ್ರೆಯ ಎಂಡಿ ಅಶ್ವತ್‌ಕುಮಾರ್, ಶ್ರೀ ದುರ್ಗಾ ಫೌಂಡೇಶನ್ ಪ್ರಧಾನ ಕಾರ್ಯದರ್ಶಿ ರೇಣುಕಾ ಹೊರಕೇರಿ, ಪೂರ್ವ ಸುರೇಶ್, ಮಂಜುನಾಥ್, ಸೋಮೇಶ್, ಮೋಹನ್, ರವಿ, ರಮೇಶ್, ಮಧು, ಆದರ್ಶ್ ಇನ್ನಿತರರು ಹಾಜರಿದ್ದರು.

ಮರದ ಅಂಬಾರಿ ಹೊತ್ತು ಪ್ರಶಾಂತ ಯಶಸ್ವಿ ತಾಲೀಮು



ಮರದ ಅಂಬಾರಿ ಹೊತ್ತು ತಾಲೀಮಿನಲ್ಲಿ ಸಾಗುತ್ತಿರುವ ಪ್ರಶಾಂತ.

ಮೈಸೂರು, ಸೆ.24 (ಎಂಟಿವೈ)– ದಸರಾ ಮಹೋತ್ಸವ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಜಂಬೂಸವಾರಿಗೆ ಗಜಪಡೆಯನ್ನು ಸಜ್ಜುಗೊಳಿಸುವ ಕಾರ್ಯ ತ್ವರಿತ ರೀತಿ ಸಾಗಿದ್ದು, ಮಂಗಳವಾರ ಪ್ರಶಾಂತ ಆನೆಗೆ ಮರದ ಅಂಬಾರಿ ಹಾಗೂ ಭಾರ ಹೊರಿಸುವ ತಾಲೀಮನ್ನು ಯಶಸ್ವಿಯಾಗಿ ನಡೆಸಲಾಯಿತು.

ಗಜಪಡೆಯ ನಾಯಕ ಅಭಿಮನ್ಯು ವಿನೊಂದಿಗೆ ಪರ್ಯಾಯ ಆನೆಗಳಿಗೂ ಅಂಬಾರಿ ಹೊರುವ ಅಭ್ಯಾಸ ಮಾಡಿಸುವುದರೊಂದಿಗೆ ತರಬೇತಿ ನೀಡಲು ಅರಣ್ಯ ಇಲಾಖೆ ಕ್ರಮ ಕೈಗೊಂಡಿದ್ದು, ಇಂದು 51 ವರ್ಷದ ಪ್ರಶಾಂತನಿಗೆ ಮರದ ಅಂಬಾರಿ ಕಟ್ಟಿ, ಭಾರ ಹೊರಿಸಿ ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೂ ತಾಲೀಮಿನಲ್ಲಿ ಕರೆತರಲಾಯಿತು. ಪ್ರಶಾಂತ, ಗಾಂಭೀರ್ಯದಿಂದ ಹೆಜ್ಜೆ ಹಾಕಿ ಗಮನ ಸೆಳೆದ.

ಮರದ ಅಂಬಾರಿ ಕಟ್ಟಿದ ಬಳಿಕ ಲಕ್ಷ್ಮೀ ಹಾಗೂ ಹಿರಣ್ಯ ಕುಮ್ಕಿ ಆನೆಗಳೊಂದಿಗೆ ಸಾಗಿದ ಪ್ರಶಾಂತ ಅರಣ್ಯಾಧಿಕಾರಿಗಳಲ್ಲಿ ಭರವಸೆ ಮೂಡಿಸಿದ್ದಾನೆ.

ಫೋಟೋ ಕ್ಲಿಕ್ಕಿಸಲು ಕಡಿವಾಣ: ತಾಲೀಮು ವೇಳೆ ಆನೆಗಳ ಬಳಿ ಅರಣ್ಯ ಇಲಾಖೆ ಹಾಗೂ ಪೊಲೀಸ್ ಸಿಬ್ಬಂದಿಗಳನ್ನು ಹೊರತುಪಡಿಸಿ, ಬೇರೆ ಯಾರೂ ಸುಳಿಯದಂತೆ ಕಟ್ಟೆಚ್ಚರ ವಹಿಸಲಾಗಿತ್ತು. ಆನೆಗಳು ಸಾಗುವ ವೇಳೆ ಫೋಟೋ ಕ್ಲಿಕ್ಕಿಸಲು ಜನ ಮುಗಿ ಬೀಳುವುದು, ಕೆಲವರು ರೀಲ್ಸ್ ಮಾಡುತ್ತಿರುವ ದೂರು ಕೇಳಿ ಬಂದ ಹಿನ್ನೆಲೆಯಲ್ಲಿ ಮಂಗಳವಾರ ನಡೆದ ತಾಲೀಮಿನ ವೇಳೆ ಕ್ಯಾಮರಾ ಹಿಡಿದು ಹತ್ತಿರ ಬರುವವರಿಗೆ ಕಡಿವಾಣ ಹಾಕಲಾಗಿತ್ತು.

7 ದಿನದೊಳಗೆ ಬಾಕಿ ಪಾವತಿಸದಿದ್ದರೆ ವಿದ್ಯುತ್ ಸಂಪರ್ಕ ಕಡಿತ

ಗ್ರಾಹಕರು, ಸರ್ಕಾರಿ ಕಚೇರಿಗಳಿಗೆ ಸೆಸ್ಕ್ ಎಂಡಿ ಶೀಲಾ ಎಚ್ಚರಿಕೆ



ಮೈಸೂರು, ಸೆ.24(ಬಿಎಲ್‌ಯು)– ಗ್ರಾಹಕರು ಹಾಗೂ ಸರ್ಕಾರಿ ಕಚೇರಿಗಳು ಏಳು ದಿನದೊಳಗೆ ವಿದ್ಯುತ್ ಶುಲ್ಕ ಬಾಕಿ ಪಾವತಿ ಮಾಡದಿದ್ದರೆ ಮುಲಾಜಿಲ್ಲದೆ ವಿದ್ಯುತ್ ಸಂಪರ್ಕ ಕಡಿತಗೊಳಿಸುವುದಾಗಿ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕಿ ಜಿ.ಶೀಲಾ ಎಚ್ಚರಿಸಿದ್ದಾರೆ.

ಗ್ರಾಹಕರು, ಸರ್ಕಾರಿ ಇಲಾಖೆಗಳು, ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರು ಹಾಗೂ ಬೀದಿದೀಪಗಳ ಸ್ಥಾವರಗಳ ವಿದ್ಯುತ್ ಬಾಕಿ ಪಾವತಿಸಿಲ್ಲ. ಈ ಹಿನ್ನೆಲೆ ನಿಗದಿತ ಅವಧಿಯೊಳಗೆ ಶುಲ್ಕ ಪಾವತಿ ಮಾಡದಿದ್ದರೆ ಎಲ್ಲಾ ಸ್ಥಾವರಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸುವುದಾಗಿ ತಿಳಿಸಿದ್ದಾರೆ.

ಶುಲ್ಕ ಪಾವತಿಸುವಂತೆ 15 ದಿನಗಳ ಸ್ಪಷ್ಟ ನೋಟಿಸ್ ನೀಡಲಾಗುವುದು. ಬಿಲ್ ವಿತರಿಸಿದ ಬಳಿಕ 15 ದಿನಗಳ ಅವಧಿಗೆ ಬಿಲ್ ಪಾವತಿಗೆ ಅಂತಿಮ ಗಡುವು ವಿಧಿಸಲಾಗಿರುತ್ತದೆ. ಇದನ್ನು ಪರಿಗಣಿಸಲಾಗುವುದು ಎಂದು ಹೇಳಿದ್ದಾರೆ.


ಗ್ರಾಹಕರಿಗೆ ನೀಡುವ ವಿದ್ಯುತ್ ಬಿಲ್ ಹಿಂಬದಿ ಸೂಚನೆ 1ರಲ್ಲಿ ನಿಗದಿತ ದಿನದೊಳಗೆ ಬಿಲ್ ಪಾವತಿಸದಿದ್ದಲ್ಲಿ ಈ ಬಿಲ್ ಅನ್ನೆ ವಿದ್ಯುತ್ ಸರಬರಾಜು ನಿಲ್ಲಿಸುವ 15 ದಿನಗಳ ನೋಟಿಸ್ ಎಂದು ಪರಿಗಣಿಸಬೇಕು ಎಂದು ನಮೂದಿಸಲಾಗಿದೆ. ಇದಕ್ಕೆ ಹಿಂದಿನ ಬಾಕಿಗೆ ವಾಯ್ದೆ ದಿನಾಂಕ ಅನ್ವಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ತುರ್ತು ಸೇವೆಗಳಾದ ಸರ್ಕಾರಿ ಆಸ್ಪತ್ರೆಗಳು, ಪೊಲೀಸ್ ಸೇವೆ ಹೊರತುಪಡಿಸಿ ಬೇರೆಲ್ಲಾ ಪ್ರವರ್ಗದ ವಿದ್ಯುತ್ ಗ್ರಾಹಕರು, ಸರ್ಕಾರಿ ಇಲಾಖೆಗಳನ್ನು ಒಳಗೊಂಡಂತೆ ತಮ್ಮ ಸ್ಥಾವರಗಳ ವಿದ್ಯುತ್ ಬಾಕಿಯನ್ನು ಇನ್ನು 7 ದಿನದೊಳಗೆ ಚೆಸ್ಕಾಂನ ಅಧಿಕೃತ ಕೌಂಟರ್ ಅಥವಾ ಆನ್‌ಲೈನ್ ಮೂಲಕ ಪಾವತಿಸಬೇಕು. ಇಲ್ಲದಿದ್ದರೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ಎಂದು ಶೀಲಾ ಎಚ್ಚರಿಕೆ ನೀಡಿದ್ದಾರೆ.

ನಾಳೆ ಸುಲೋಚನ ಪಟ್ಟಾಭಿರಾಮನ್ ಸಂಗೀತ ಉತ್ಸವ

ಮೈಸೂರು,ಸೆ.24–ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಅಂಗಸಂಸ್ಥೆಯಾದ ವಿವೇಕಾನಂದ ಭಾರತೀಯ ಅಧ್ಯಯನ ಸಂಸ್ಥೆ, ಸ್ವರಾಲಯ ಆರ್ಟ್ಸ್ ಫೋರಂ ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಲಲಿತ ಕಲೆಗಳ ಕಾಲೇಜು ಸಹಯೋಗದಲ್ಲಿ ಕರ್ನಾಟಕ ಶಾಸ್ತ್ರೀಯ ಸಂಗೀತ ಉತ್ಸವವನ್ನು ಲಲಿತ ಕಲೆಗಳ ಕಾಲೇಜಿನ ಸಭಾಂಗಣದಲ್ಲಿ ಸೆ.26ರಂದು ಸಂಜೆ 4.30ರಿಂದ ಸಂಜೆ 7ರವರೆಗೆ ಆಯೋಜಿಸಲಾಗಿದೆ. ಈ ಸಂಗೀತ ಉತ್ಸವದಲ್ಲಿ ವಿದ್ವಾನ್ ಬಳ್ಳಾರಿ ರಾಘವೇಂದ್ರ, ವಿದುಷಿ ಸುರಭಿ ಪಿ.ನರಸಿಂಹನ್ ಹಾಗೂ ಕು. ಕೀರ್ತನ ಅವರ ಗಾಯನ ಕಛೇರಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 8217478887 ಸಂಪರ್ಕಿಸಬಹುದು.

ಸ್ವಾತಂತ್ರ್ಯ ಯೋಧರಿಗೆ ಸನ್ಮಾನ...



ಪ್ರಧಾನಿ ನರೇಂದ್ರ ಮೋದಿಯವರ ಹುಟ್ಟುಹಬ್ಬದ ಪ್ರಯುಕ್ತ ಚಾಮುಂಡೇಶ್ವರಿ ನಗರ ಮಂಡಲದಿಂದ ಸ್ವಾತಂತ್ರ್ಯ ಹೋರಾಟಗಾರರಾದ ವೈ.ಸಿ.ರೇವಣ್ಣ ಅವರ ಮನೆಗೆ ಭೇಟಿ ನೀಡಿ, ಅಭಿನಂದಿಸಲಾಯಿತು. ಚಾಮುಂಡೇಶ್ವರಿ ನಗರ ಮಂಡಲದ ಅಧ್ಯಕ್ಷ ರಾಕೇಶ್ ಭಟ್, ಪ್ರಧಾನ ಕಾರ್ಯದರ್ಶಿಗಳಾದ ಆರ್.ಸೋಮಶೇಖರ್, ಈರೇಗೌಡ, ಉಪಾಧ್ಯಕ್ಷರಾದ ಹೆಚ್.ಜಿ.ರಾಜಮಣಿ, ಬಿ.ಸಿ.ಶಶಿಕಾಂತ್, ಹೆಚ್.ಎಸ್. ಹಿರಿಯಣ್ಣ, ಕಾರ್ಯದರ್ಶಿಗಳಾದ ವಿನುತಾ, ಕಲಾವತಿ ತುಳಸಿ, ಯುವ ಮೋರ್ಚಾ ಅಧ್ಯಕ್ಷ ಮಧು ಸೋಮಶೇಖರ್, ಪ್ರಧಾನ ಕಾರ್ಯದರ್ಶಿ ಚಂದನ್‌ಗೌಡ, ಸಾಗರ್ ಸಿಂಗ್, ಶಿವು, ರೈತ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಶುಭಶ್ರೀ ಇನ್ನಿತರರು ಉಪಸ್ಥಿತರಿದ್ದರು.

ಸೆ.29, ಮಹಿಳೆಯರ ಸಿಟ್ಟಿಂಗ್ ಪ್ಯಾರಾ ಥ್ರೋಬಾಲ್ ಪಂದ್ಯಾವಳಿ

ಮೈಸೂರು, ಸೆ.24(ಜಿಎ)–ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಪ್ಯಾರಾ ಥ್ರೋಬಾಲ್ ಫೆಡರೇಷನ್ ಹಾಗೂ ರೋಟರಿ ಈಸ್ಟ್ ಮೈಸೂರು ಸಹಯೋಗದೊಂದಿಗೆ ಸೆ.29ರಂದು ಬೆಳಗ್ಗೆ 10 ಗಂಟೆಗೆ ಜೆಎಸ್‌ಎಸ್ ಪಿಎಚ್ ಪಾಲಿಟೆಕ್ನಿಕ್ ಸಂಸ್ಥೆ ಸಭಾಂಗಣದಲ್ಲಿ ಮಹಿಳೆಯರ ಸಿಟ್ಟಿಂಗ್ ಪ್ಯಾರಾ ಥ್ರೋಬಾಲ್ ಪಂದ್ಯಾವಳಿ ಆಯೋಜಿಸಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕಾರ್ಯದರ್ಶಿ ಮಂಜುನಾಥ್ ರಾಚಯ್ಯ ಈ ವಿಷಯ ತಿಳಿಸಿ, ಮೈಸೂರು, ಶಿವಮೊಗ್ಗ, ಬೆಂಗಳೂರು ಹಾಗೂ ಬೆಳಗಾವಿಯಿಂದ 4 ತಂಡಗಳು ಭಾಗವಹಿಸುತ್ತಿದ್ದು, ಇಲ್ಲಿ ಆಯ್ಕೆಯಾದವರನ್ನು ಬರುವ ಮಾರ್ಚ್‌ನಲ್ಲಿ ಕಾಂಬೋಡಿಯಾದಲ್ಲಿ ನಡೆಯುವ ಅಂತರರಾಷ್ಟ್ರೀಯ ಪಂದ್ಯಾವಳಿಗೆ ಕಳುಹಿಸಿಕೊಡಲಾಗುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಹರೀಶ್ ಶಿವಣ್ಣ, ಶಶಿಕುಮಾರ್, ದೇವರಾಜ್, ಅರವಿಂದ್, ಗಣೇಶ್ ಭಟ್ ಉಪಸ್ಥಿತರಿದ್ದರು.

ಮೂಗನಹುಂಡಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಣೆ...



ಮೈಸೂರು ತಾಲೂಕು ಮೂಗನಹುಂಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ರಿಕವರ್ ಫೌಂಡೇಷನ್ ವತಿಯಿಂದ ಮಾದಕ ವ್ಯಸನ ಚಿಕಿತ್ಸೆ ಹಾಗೂ ಮನಃಪರಿವರ್ತನಾ ಕೇಂದ್ರ 6ನೇ ವಾರ್ಷಿಕೋತ್ಸವ ಅಂಗವಾಗಿ ಮಕ್ಕಳಿಗೆ ಉಚಿತ ಸಮವಸ್ತ್ರವನ್ನು ಸಂಸ್ಥೆಯ ಪರವಾಗಿ ನೀಡಲಾಗಿದೆ. ಈ ವೇಳೆ ಸಂಸ್ಥೆಯ ಅಧ್ಯಕ್ಷ ಮೋಹನ್‌ಕುಮಾರ್, ಉಪಾಧ್ಯಕ್ಷ ಶಮಂತ್‌ಗೌಡ, ಗೋಪಾಲಪುರ ಗ್ರಾಪಂ ಮಾಜಿ ಅಧ್ಯಕ್ಷ ಸಿದ್ದೇಗೌಡ, ಗ್ರಾಪಂ ಸದಸ್ಯ ಎಂ.ಎಸ್.ಮಹದೇವ್, ಶಿಕ್ಷಕರು ಉಪಸ್ಥಿತರಿದ್ದರು.

ಬಾಪೂಜಿ ಪ್ರಬಂಧ ಸ್ಪರ್ಧೆ: ವಿಜೇತರ ಪಟ್ಟಿ ಬಿಡುಗಡೆ

ಮೈಸೂರು, ಸೆ.24–ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 155ನೇ ಜಯಂತಿಯ ದಿನಾಚರಣೆಯ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಏರ್ಪಡಿಸಲಾಗಿದ್ದ 'ಬಾಪೂಜಿ ಪ್ರಬಂಧ ಸ್ಪರ್ಧೆ'ಯಲ್ಲಿ ಪ್ರೌಢಶಾಲಾ, ಪದವಿ ಪೂರ್ವ ಶಿಕ್ಷಣ ಹಾಗೂ ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಭಾಗವಹಿಸಿ ಮಂಡಿಸಲಾದ ಪ್ರಬಂಧಗಳನ್ನು ಪರಿಶೀಲಿಸಿ ರಾಜ್ಯ ಮಟ್ಟದಲ್ಲಿ ಬಹುಮಾನಕ್ಕೆ ಆಯ್ಕೆ ಮಾಡಲಾಗಿದೆ. ಪ್ರೌಢಶಾಲಾ ವಿಭಾಗದಲ್ಲಿ ಪ್ರಥಮ ಬಹುಮಾನವನ್ನು ನಂಜನಗೂಡು ತಾಲೂಕಿನ ಟಿಎನ್ ಪುರ ಮೇದಿನಿಯ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಸಿದ್ದರಾಜು, ದ್ವಿತೀಯ ಬಹುಮಾನವನ್ನು ಕೆ.ಆರ್ ನಗರ ತಾಲೂಕಿನ ಹನಸೋಗೆಯ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿ ಎಂ.ಆರ್.ಮಹಾಲಕ್ಷ್ಮಿ ಹಾಗೂ ತೃತೀಯ ಬಹುಮಾನವನ್ನು ನಂಜನಗೂಡಿನ ಬಾಲಕಿಯರ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿ ಪ್ರೀತು.ವಿ ಪಡೆದಿದ್ದಾರೆ.

ಪದವಿಪೂರ್ವ ಶಿಕ್ಷಣ ವಿಭಾಗದಲ್ಲಿ ಪ್ರಥಮ ಬಹುಮಾನವನ್ನು ಮೈಸೂರಿನ ಮರಿಮಲ್ಲಪ್ಪನವರ ಪದವಿ ಪೂರ್ವ ಕಾಲೇಜಿನ ಪರೀಕ್ಷಾ ನಂದ್, ದ್ವಿತೀಯ ಬಹುಮಾನವನ್ನು ಲಕ್ಷ್ಮಿಪುರಂನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಚಂದನ ಎಂ.ಎಸ್. ಹಾಗೂ ತೃತೀಯ ಬಹುಮಾನವನ್ನು ರಾಮಂದೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕೆ.ಯು. ಜಾಹ್ನವಿ ಪಡೆದಿದ್ದಾರೆ. ಪದವಿ, ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಪ್ರಥಮ ಬಹುಮಾನವನ್ನು ಟಿ.ನರಸೀಪುರ ತಾಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಿ.ಎಂ.ಮಾದಲಾಂಬಿಕೆ, ದ್ವಿತೀಯ ಬಹುಮಾನವನ್ನು ಜಯಲಕ್ಷ್ಮೀಪುರಂನ SBRR ಮಹಾಜನ ಪ್ರಥಮ ದರ್ಜೆ ಕಾಲೇಜಿನ(ಸ್ವಾಯತ್ತ) ಸಿ.ಕೆ.ನಿಹಾರಿಕಾ ಹೆಗಡೆ ಹಾಗೂ ತೃತೀಯ ಬಹುಮಾನವನ್ನು ನಂಜನಗೂಡಿನ ಜೆಎಸ್‌ಎಸ್ ಕಾಲೇಜಿನ ಎಂ.ಎಸ್. ಕೀರ್ತನ ಅವರು ಪಡೆದಿರುತ್ತಾರೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರಾದ ಡಿ.ಅಶೋಕ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪನಾಚಿಯ ಗ್ರ್ಯಾಂಡ್ ಫ್ಯಾಷನ್, ಲೈಫ್‌ಸ್ಟೈಲ್ ಎಕ್ಸ್‌ಪೋ ಪ್ರಾರಂಭ



ಮೈಸೂರಿನ ಹೋಟೆಲ್ ಸದರನ್ ಸ್ಟಾರ್‌ನಲ್ಲಿ ವಿಶೇಷ ದೀಪಾವಳಿ ಆವೃತ್ತಿಯ ಗ್ರ್ಯಾಂಡ್ ಫ್ಯಾಷನ್ ಮತ್ತು ಲೈಫ್‌ಸ್ಟೈಲ್ ವಿಶೇಷತೆಯುಳ್ಳ ಪನಾಚಿ ಡಿಸೈನರ್ ಎಕ್ಸಿಬಿಷನ್–ಕಮ್–ಸೇಲ್ ಪ್ರಾರಂಭವಾಯಿತು.

ಮೈಸೂರು, ಸೆ. 24– ಮೈಸೂರಿನ ವಿನೋಬಾ ರಸ್ತೆಯಲ್ಲಿರುವ ಹೋಟೆಲ್ ಸದರನ್ ಸ್ಟಾರ್‌ನಲ್ಲಿ ಬಹುನಿರೀಕ್ಷಿತ ಎರಡು ದಿನಗಳ ವಿಶೇಷ ದೀಪಾವಳಿ ಆವೃತ್ತಿಯ ಗ್ರ್ಯಾಂಡ್ ಫ್ಯಾಶನ್ ಮತ್ತು ಲೈಫ್‌ಸ್ಟೈಲ್ ವಿಶೇಷತೆಯುಳ್ಳ ಪನಾಚಿ ಡಿಸೈನರ್ ಎಕ್ಸಿಬಿಷನ್–ಕಮ್–ಸೇಲ್ ಮಂಗಳವಾರ ಪ್ರಾರಂಭವಾಯಿತು.

ಪನಾಚಿ ಭಾರತದಾದ್ಯಂತ ವಿನ್ಯಾಸಗಳ ಬೆರಗುಗೊಳಿಸುವ ಸಂಗ್ರಹಣೆಗೆ ಹೆಸರುವಾಸಿಯಾಗಿದೆ.

ಪ್ರದರ್ಶನದಲ್ಲಿ ಎಲೆಕ್ಟ್ರಿಕ್ ಮಿಕ್ಸ್ ಆಫ್ ಅಪೆರೇಲ್ಸ್, ಅಸಸೆರೀಸ್, ಹೋಮ್ ಡೆಕೋರ್ ಮತ್ತು ದೇಶದ ಎಲ್ಲಾ ಮೂಲಗಳಿಂದ ಹೆಸರಾಂತ ಮತ್ತು ಉದಯೋನ್ಮುಖ ವಿನ್ಯಾಸಕರು ತಯಾರಿಸಿರುವ ಉಡುಪುಗಳು, ಪರಿಕರಗಳು ಮತ್ತು ಗೃಹಾಲಂಕಾರ ವಸ್ತುಗಳ ಮಿಶ್ರಣ ಪ್ರದರ್ಶನದಲ್ಲಿರಲಿವೆ. ಶಾಪರ್ಸ್ ಅನುರೂಪದ ಉಡುಗೆ, ಸಮಕಾಲೀನ ಉಡುಪುಗಳು, ಕೈಯಿಂದ ಅಣಿಗೊಳಿಸಿದ ಆಭರಣಗಳು ಮತ್ತು ಆಧುನಿಕ ಸೌಂದರ್ಯಶಾಸ್ತ್ರದೊಂದಿಗೆ ಸಾಂಪ್ರದಾಯಿಕ ಕರಕುಶಲತೆಯನ್ನು ಸಂಯೋಜಿಸುವ ಅದ್ಭುತವಾದ ಶ್ರೇಣಿಯನ್ನು ಪ್ರದರ್ಶನದಲ್ಲಿ ಕಾಣಬಹುದು. ದೀಪಾವಳಿಯ ಸ್ಪಾಟ್‌ಲೈಟ್‌ನೊಂದಿಗೆ, ವಿನ್ಯಾಸಗಳು, ರೋಮಾಂಚಕ ಬಣ್ಣಗಳು, ಸಂಕೀರ್ಣ ಮಾದರಿಗಳು ಮತ್ತು ಹಬ್ಬದ ಆಚರಣೆಗಳಿಗೆ ಪರಿಪೂರ್ಣವಾದ ಐಷಾರಾಮಿ ಬಟ್ಟೆಗಳು ಎಕ್ಸ್‌ಪೋದಲ್ಲಿವೆ. ಒಂದು ದಶಕಕ್ಕೂ ಹೆಚ್ಚು ಕಾಲ, ಪನಾಚಿಯು ಫ್ಯಾಷನ್ ಉತ್ಸಾಹಿಗಳಿಗೆ ಮತ್ತು ಜೀವನಶೈಲಿಯ ಅಭಿಜ್ಞರಿಗೆ ಪ್ರತಿಷ್ಠಿತ ವೇದಿಕೆಯಾಗಿದ್ದು, ಉನ್ನತ ಶ್ರೇಣಿಯ ವಿನ್ಯಾಸಕರು ಮತ್ತು ಅನನ್ಯ ಕುಶಲಕರ್ಮಿಗಳನ್ನು ಒಂದೇ ಸೂರಿನಡಿ ತರುತ್ತಿದೆ. ಈ ಪ್ರದರ್ಶನವು ಬೆಳಗ್ಗೆ 10.30ರಿಂದ ರಾತ್ರಿ 8.30ರವರೆಗೆ ತೆರೆದಿರುತ್ತದೆ.


ಅ.2, ತ್ರಿಮತಸ್ಥ ಬ್ರಾಹ್ಮಣರಿಗೆ ತರ್ಪಣ

ಮೈಸೂರು,ಸೆ.24–ಮೈಸೂರು ಜಿಲ್ಲಾ ಬ್ರಾಹ್ಮಣ ಮಹಾಸಭಾವು ಅ.2ರಂದು ಪಿತೃಪಕ್ಷ ಮಹಾಲಯ ಅಮಾವಾಸ್ಯೆ ಪ್ರಯುಕ್ತ ತ್ರಿಮತಸ್ಥ ಬ್ರಾಹ್ಮಣ ಬಂಧುಗಳಿಗೆ ತರ್ಪಣ ಹಾಗೂ ಶ್ರಾದ್ಧ ಕರ್ಮಾದಿಗಳಿಗೆ ದೇವಯ್ಯನಹುಂಡಿ ಮುಖ್ಯ ರಸ್ತೆಯಲ್ಲಿರುವ ಸಂಧ್ಯಾ ಸುರಕ್ಷಾ ಟ್ರಸ್ಟ್, ಶಾಕಂಬರಿ ಧಾರ್ಮಿಕ ಕೇಂದ್ರದಲ್ಲಿ ವ್ಯವಸ್ಥೆ ಕಲ್ಪಿಸಲಾಗಿದೆ. ಆಸಕ್ತರು ತಮ್ಮ ಹೆಸರು ನೋಂದಾಯಿಸಿಕೊಳ್ಳಬೇಕೆಂದು ಎಕೆಬಿಎಂಎಸ್‌ನ ರಾಜ್ಯ ಉಪಾಧ್ಯಕ್ಷ ಡಾ.ಬಿ.ಆರ್.ನಟರಾಜ್ ಜೋಯಿಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊ. 8088799540, 8861998817 ಸಂಪರ್ಕಿಸಬಹುದು.

ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮೈಸೂರು,ಸೆ.24– ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ 2024–25 ನೇ ಸಾಲಿನ ಧನಶ್ರೀ ಯೋಜನೆ, (ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ) ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಚೇತನ ಯೋಜನೆ ಹಾಗೂ ಉದ್ಯೋಗಿನಿ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್‌ಗಳಲ್ಲಿ https://sevasindhu. karnataka.gov.in ವೆಬ್‌ಸೈಟ್ ಮೂಲಕ ಸೆ.30ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರ ಕಚೇರಿಯ ದೂ.ಸಂ: 0821–2495432 ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ನಿಧನ



ಸೈಯದ್ ಹಬೀಬ್

ಮೈಸೂರು,ಸೆ.24–ಮೈಸೂರಿನ ಸದರನ್ ರೈಲ್ವೆ ನಿವೃತ್ತ ಸಿಗ್ನಲ್ ಇನ್ಸ್‌ಪೆಕ್ಟರ್ ಹಾಗೂ ಉದಯಗಿರಿಯ ಎಸ್‌ಬಿಎಂ ಕಾಲೋನಿ ನಿವಾಸಿ ಸೈಯದ್ ಹಬೀಬ್ (82) ಸೋಮವಾರ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಸಹೋದರರು ಹಾಗೂ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಟಿಪ್ಪು ಸರ್ಕಲ್ ಬಳಿ ಇರುವ ಮುಸ್ಲಿಮರ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

25.09.2024 ಬುಧವಾರ, ಮಳೆ ನಕ್ಷತ್ರ: ಉತ್ತರಾ, 13.09.2024ರಿಂದ 26.09.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ಆರ್ದ್ರಾ, ರಾಹುಕಾಲ : ಮಧ್ಯಾಹ್ನ 12 ರಿಂದ 1.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಸಂಧಿವಾತ, ಮಂಡಿ ನೋವು, ಕೀಲು ನೋವು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ಗಂಟೆಯಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ಮಕ್ಕಳಲ್ಲಿ ಕಂಡು ಬರುವ ನೆಗಡಿ, ಕೆಮ್ಮು ಮತ್ತು ಅಸ್ತಮ ಕಾಯಿಲೆಗೆ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 9 ಗಂಟೆಯಿಂದ.
- **ಮೈಸೂರು ಮಕ್ಕಳ ಕೂಟ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಮಹಿಳಾ ಮಹಾವಿದ್ಯಾಲಯ :** ಬೆಳಗ್ಗೆ 9.30ಕ್ಕೆ ಶ್ರೀಮತಿ ಲಕ್ಷ್ಮೀನಾಗರಾಜು ದತ್ತಿ ಸ್ಮಾರಕ ಅಂತರ ಕಾಲೇಜು ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆ, ಉದ್ಘಾಟನೆ : ಕಲಾವಿದ ದಿವಾಕರ ಹೆಗಡೆ ಕೆಂಹೊಂಡ, ಅಧ್ಯಕ್ಷತೆ : ಮಹಾವಿದ್ಯಾಲಯ ಪ್ರಿನ್ಸಿಪಾಲ್ ಪ್ರೊ. ಎನ್. ಭಾರತಿ, ಉಪಸ್ಥಿತರು : ಶ್ರೀಮತಿ ನಳಿನಿ ಶ್ರೀಕಂಠ, ಪ್ರಾಂಶುಪಾಲರಾದ ಶ್ರೀಮತಿ ನಯನಕುಮಾರಿ; ಮಧ್ಯಾಹ್ನ 3.30ಕ್ಕೆ ಬಹುಮಾನ ವಿತರಣಾ ಸಮಾರಂಭ, ಮುಖ್ಯ ಅತಿಥಿಗಳು : ಶ್ರೀಮತಿ ನಳಿನಿ ಶ್ರೀಕಂಠ, ಅಧ್ಯಕ್ಷತೆಯ : ಪ್ರಾಂಶುಪಾಲರಾದ ಪ್ರೊ. ಎನ್. ಭಾರತಿ, ಗೌರವ ಉಪಸ್ಥಿತರು : ಪ್ರಾಂಶುಪಾಲರಾದ ಶ್ರೀಮತಿ ನಯನಕುಮಾರಿ, ಸ್ಥಳ: ಕಾಲೇಜು ಸಭಾಂಗಣ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.
- **ಭಾರತ ಸರಕಾರದ ಜವಳಿ ಮಂತ್ರಾಲಯ, ಗುಜರಾತ್ ರಾಜ್ಯ ಕೈಮಗ್ಗ ಮತ್ತು ಕರಕುಶಲ ಅಭಿವೃದ್ಧಿ ನಿಗಮ :** ಗಾಂಧಿ ಶಿಲ್ಪ ಬಜಾರ್ ಹಾಗೂ ಗರ್ವಿ ಗುರ್ಜರಿ ಕರಕುಶಲ ವಸ್ತುಪ್ರದರ್ಶನ ಮತ್ತು ಮಾರಾಟ, ಸ್ಥಳ: ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ವಲಯ, ಬೆಳಗ್ಗೆ 10 ರಿಂದ.
- **ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ :** ಪೌಷ್ಟಿಕ ಆಹಾರ ವಿತರಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸ್ಥಳ: ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11ಕ್ಕೆ.
- **ಶಾರದಾ ವಿಲಾಸ ಫಾರ್ಮಸಿ ಕಾಲೇಜು :** ವಿಶ್ವ ಔಷಧಿಕಾರರ ದಿನ–2024, ಮುಖ್ಯ ಅತಿಥಿಗಳು : ದಕ್ಷಿಣ ಆಫ್ರಿಕಾದ ರೋಡ್ಸ್ ವಿಶ್ವವಿದ್ಯಾಲಯದ ಫಾರ್ಮಸಿ ಫ್ಯಾಕಲ್ಟಿ ಶ್ರೀನಿವಾಸ್ ಪಟ್ನಾಳ, ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಎನ್. ಚಂದ್ರಶೇಖರ್, ಅಧ್ಯಕ್ಷತೆ : ಶಾರದಾ ವಿಲಾಸ ಫಾರ್ಮಸಿ ಕಾಲೇಜು ಪ್ರಾಂಶುಪಾಲ ಡಾ. ಹನುಮಂತಚಾರ್ ಜೋಶಿ, ಸ್ಥಳ: ಪ್ರೊ. ಚಿನ್ನಸ್ವಾಮಿ ಶೆಟ್ಟಿ ಸಮ್ಮೇಳನ, ಬೆಳಗ್ಗೆ 11ಕ್ಕೆ
- **ದಿ ಆರ್ಗನೈಸೇಷನ್ ಫಾರ್ ದಿ ಡೆವಲಪ್‌ಮೆಂಟ್ ಆಫ್ ಪೀಪಲ್ :** ಡೆಂಗ್ಯೂ, ಸಾಂಕ್ರಾಮಿಕ ರೋಗದ ಕುರಿತು ಅರಿವು, ಸ್ವಚ್ಛತಾ ಕಾರ್ಯಕ್ರಮ, ಸ್ಥಳ: ಓಡಿಪಿ ಆವರಣ, ಬೆಳಗ್ಗೆ 11ಕ್ಕೆ.
- **ವಿಮಾ ನಿಗಮ ನೌಕರರ ಸಂಘ, ಮೈಸೂರು ವಿಭಾಗ :** ವಿಚಾರ ಸಂಕಿರಣ 'ನಿರುದ್ಯೋಗ–ಹಲವು ಆಯಾಮಗಳು' ಪ್ರಮುಖ ಭಾಷಣಕಾರರು : ಶಿಕ್ಷಣ ತಜ್ಞ ಬಿ. ಶ್ರೀಪಾದ ಭಟ್, ಮುಖ್ಯ ಅತಿಥಿಗಳು: ವಿಮಾ ನೌಕರರ ಒಕ್ಕೂಟದ ಜಂಟಿ ಕಾರ್ಯದರ್ಶಿ ಜೆ. ಸುರೇಶ್, ಅಧ್ಯಕ್ಷತೆ : ವಿಮಾ ನಿಗಮ ನೌಕರರ ಸಂಘದ ಅಧ್ಯಕ್ಷ ಎಸ್.ಕೆ. ರಾಮು, ಸ್ಥಳ: ಐಡಿಯಲ್ ಜಾವಾ ರೋಟರಿ ಶಾಲೆ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ. ಹುಣಸೂರಿನಲ್ಲಿಂದು

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ' ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ.ಆರ್. ಸುಧಾ, ಎ.ಎಸ್. ನಾಗಲಕ್ಷ್ಮೀ, ವ್ಯಾಖ್ಯಾನ–ಡಾ. ಸಿ. ನಾಗಣ್ಣ, 6.50 ರೈತರಿಗೆ ಸಲಹೆ, 7.15 ವಾತ್ಸಲ್ಯವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಮಕ್ಕಳ ರಕ್ಷಣೆ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ–ಟೂರಿಸಂ ಅಂಡ್ ಹಾಸ್ಪಿಟಾಲಿಟಿ ಸ್ಟಡೀಸ್ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಮೈಸೂರಿನ ಸಂತ ಫಿಲೋಮಿನಾ ಸ್ವಾಯತ್ತ ಕಾಲೇಜಿನ ಟೂರಿಸಂ ಅಂಡ್ ಹಾಸ್ಪಿಟಾಲಿಟಿ ಸ್ಟಡೀಸ್ ವಿಭಾಗದ ಮುಖ್ಯಸ್ಥರಾದ ಪ್ರೊಫೆಸರ್ ಪಾಲ್ ಇರುದಯರಾಜ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಹರಿಪ್ರಸಾದ್ ಚೌರಾಶಿಯಾ–ಕೊಳಲು ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30 ಆಯುಷ್ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ–ಗೀತಾ ರಾಜು, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಹೆಚ್. ಆರ್. ಲೀಲಾವತಿ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಸಿಕ್ಕಿಲ್ ಸಹೋದರಿಯರು–ಯುಗಳ ಕೊಳಲುವಾದನ, 4.00 ಮಹಿಳಾರಂಗ, ಪ್ರಸ್ತುತಿ: ಸಹನ, 4.45 ಹಿಂದಿ ಪಾಠ–ಶಾಂತಾ. ಡಿ.ಕಿಣಿ, 6.50 ಕೃಷಿರಂಗ–ಕೃಷಿರಂಗ–ಕೃಷಿ ಹಾಡುಗಳು, 7.00 ಪ್ರಾಯೋಜಿತ ನೇರ ಫೋನ್ ಇನ್ ಕಾರ್ಯಕ್ರಮ, ಪ್ರಾಯೋಜಕರು : ಕೃಷಿ ಹಾಗೂ ಜಲಾನಯನ ಅಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ವಿಷಯ : ಬೆಳೆ ವಿಮೆ ಯೋಜನೆ. ಭಾಗವಹಿಸುತ್ತಾರೆ: ಶೋಭಾ. ಹೆಚ್. ಬಿ, ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು, 7.45 ಕನ್ನಡದಲ್ಲಿ ಭಾಷಣ, 8.00 'ಕ್ಷಿತಿಜ ಲಿಟರರಿ ಗುರು' ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಜಿ.ಆರ್. ಭಟ್ – ಗಾಯನ, 10.00 ಜನಪದ ಸಂಗೀತ, 10.30 ಸವಿನೆನಪು

ಹುಣಸೂರಿನಲ್ಲಿಂದು

- ಸಾರ್ವಜನಿಕ ಭಕ್ತ ವಿನಾಯಕ ಮಂಡಲಿ : 57ನೇ ವರ್ಷದ ಗಣೇಶೋತ್ಸವ ಕಾರ್ಯಕ್ರಮದ ಅಂಗವಾಗಿ ಸಂಜೆ 7 ಗಂಟೆಗೆ ಮಂಡಳಿ ವತಿಯಿಂದ ಭಕ್ತಿಗೀತೆಗಳ ಕಾರ್ಯಕ್ರಮ, ಸ್ಥಳ: ಮುನೇಶ್ವರ ಕಾವಲ್ ಮೈದಾನ.

ಮೈಸೂರು ಮಿತ್ರ ಬುಧವಾರ 25 ಸೆಪ್ಟೆಂಬರ್ 2024

ತಾರಾ ಮೆರಗಿನೊಂದಿಗೆ ದಸರಾ ಮುನ್ನದ ಸಡಗರ

ಯುವ ಸಂಭ್ರಮಕ್ಕೆ ವರ್ಣರಂಜಿತ ಚಾಲನೆ

- ಚಿತ್ತಾರ ಮೂಡಿಸುತ್ತಿದ್ದ ಎಲ್‌ಇಡಿ ಪರದೆಗಳು, ವಿದ್ಯುತ್ ದೀಪಗಳಿಂದ ಶೃಂಗಾರಗೊಂಡಿದ್ದ ವೇದಿಕೆಯಲ್ಲಿ ನೃತ್ಯದ ಸೊಬಗು
- ಚಿತ್ರತಾರೆಗಳಾದ ಶ್ರೀಮುರುಳಿ, ರುಕ್ಮಿಣಿ ವಸಂತ್ ಇತರರ ಮೋಡಿ
- ವಿವಿಧ ಕಾಲೇಜು ವಿದ್ಯಾರ್ಥಿಗಳ ಬಹುಮುಖ ಪ್ರತಿಭೆ ಅನಾವರಣ




ಮಾನಸ ಗಂಗೋತ್ರಿಯ ಬಯಲು ರಂಗಮಂದಿರದಲ್ಲಿ ಮಂಗಳವಾರ ಯುವ ಸಂಭ್ರಮ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ನಟ ಶ್ರೀಮುರುಳಿ ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿದರು. ಮತ್ತೊಂದು ಚಿತ್ರದಲ್ಲಿ ಕಿಕ್ಕಿರಿದು ನೆರೆದಿರುವ ಯುವಸಮೂಹ ಹಾಗೂ ಇತರ ಪ್ರೇಕ್ಷಕರನ್ನು ಕಾಣಬಹುದು.

ಮೈಸೂರು,ಸೆ.24(ಪಿಎಂ)– ದಸರಾ ಮಹೋತ್ಸವ ಮುನ್ನದ ಯುವ ಪ್ರತಿಭೆಗಳ ಸಾಂಸ್ಕೃತಿಕ ಸಡಗರವಾದ 'ಯುವ ಸಂಭ್ರಮ'ಕ್ಕೆ ಮಂಗಳವಾರ ವರ್ಣರಂಜಿತ ಚಾಲನೆ ದೊರೆಯಿತು. ಕನ್ನಡ ಚಿತ್ರರಂಗ ತಾರಾ ಮೆರಗು ಹಾಗೂ ವಿವಿಧ ಕಾಲೇಜು ವಿದ್ಯಾರ್ಥಿಗಳ ವೈವಿಧ್ಯಮಯ ನೃತ್ಯ ಪ್ರದರ್ಶನಕ್ಕೆ ಮನಸೋತ ಯುವ ಸಮೂಹದ ಹರ್ಷೋದ್ಗಾರ ಮುಗಿಲು ಮುಟ್ಟಿತು.

ಪ್ರತಿವರ್ಷದಂತೆ ಮಾನಸ ಗಂಗೋತ್ರಿಯ ಬಯಲು ರಂಗಮಂದಿರದಲ್ಲಿ ಹಮ್ಮಿಕೊಂಡಿರುವ ಯುವ ಸಂಭ್ರಮ ಆರಂಭದೊಂದಿಗೆ ದಸರಾ ಸಡಗರ ಕಳೆಗಟ್ಟಿತು. ಬಗೆಬಗೆಯ ಬಣ್ಣಗಳ ವಸ್ತ್ರಾಭರಣಗಳೊಂದಿಗೆ ಮನಮೋಹಕ ನೃತ್ಯಗಳ ಸೊಬಗು ಅನಾವರಣಗೊಂಡು ನೆರೆದಿದ್ದ ಯುವ ಪಡೆ ಹುಚ್ಚೆದ್ದು ಕುಣಿಯಿತು.

ಚಿತ್ತಾರ ಮೂಡಿಸುತ್ತಿದ್ದ ಎಲ್‌ಇಡಿ ಪರದೆಗಳು, ವಿದ್ಯುತ್ ದೀಪಗಳಿಂದ ಶೃಂಗಾರಗೊಂಡಿದ್ದ ವೇದಿಕೆಯಲ್ಲಿ ತಾರಾ ಮೆರಗು ಮತ್ತಷ್ಟು ಕಳೆ ಮೂಡಿಸಿತು. ನಟಿ ರುಕ್ಮಿಣಿ ವಸಂತ್ ಮುಗುಳ್ನಕ್ಕು ಮಾತನಾಡುವ ಮೂಲಕ ಪಡ್ಡೆ ಹುಡುಗರ ಎದೆಗೆ ಲಗ್ಗೆ ಇಟ್ಟರು. ಅಂತೆಯೇ ಖ್ಯಾತ ನಟ ರೋಲಿಂಗ್ ಸ್ಟಾರ್ ಶ್ರೀಮುರುಳಿ ತಮ್ಮ ಸಿನಿಮಾಗಳ ಡೈಲಾಗ್ ಮೂಲಕ ಯುವ ಪಡೆ ಕುಣಿದು ಕುಪ್ಪಳಿಸುವಂತೆ ಮಾಡಿದರು.

ಬಳಿಕ ಎಲ್ಲರ ಅಭಿಮಾನ ಪೂರ್ವಕ ಒತ್ತಾಯಕ್ಕೆ ತಮ್ಮ ರಥಾವರ ಸಿನಿಮಾದ 'ಹುಡುಗಿ ಕಣ್ಣು ಲೋಡೆಡ್ ಗನ್ನು, ಹಾರ್ಟಿಗೆ ಬುಲ್ಲೆಟ್ಟು ಒನ್ ಬೈ ಒನ್ನು' ಗೀತೆ ಮೂಲಕ ಯುವ ಜನರ ಮನಕ್ಕೆ ಪುಳಕವಿಟ್ಟರು. ಬಳಿಕ ಮಾತನಾಡಿದ ಶ್ರೀಮುರುಳಿ, ಮೈಸೂರು ದಸರಾ ಎಂದರೆ ನನಗೆ ಅತ್ಯಂತ ಇಷ್ಟ, ದಸರಾದಂತೆ ವೈಭವದ ಉತ್ಸವ ಬೇರೆ ಯಾವ ಊರಲ್ಲೂ ಇಲ್ಲ ಎಂದು ಅಭಿಮಾನ ವ್ಯಕ್ತಪಡಿಸಿದರು. ನಾಡಹಬ್ಬ ನಮ್ಮ ಹೆಮ್ಮೆಯಾಗಿದೆ. ನಮ್ಮ ಪರಂಪರೆಯ ಹಬ್ಬ ಇದು ಎಂದು ಸಂತಸ ವ್ಯಕ್ತಪಡಿಸಿದರು. ನಂತರ ನಟಿ ರುಕ್ಮಿಣಿ ವಸಂತ್ ಸಹ ಸಪ್ತ ಸಾಗರದ ಆಚೆ ಎಲ್ಲೋ ಸಿನಿಮಾದ ಡೈಲಾಗ್ ಹೇಳಿ ನೆರೆದಿದ್ದವರ ಚಪ್ಪಾಳೆ ಗಿಟ್ಟಿಸಿದರು. ಬಘೀರ ಸಿನಿಮಾದ ಈ ಇಬ್ಬರು ನಟ-ನಟಿಯ ಜುಗಲ್‌ಬಂದಿಗೆ ಯುವ ಪಡೆ ಮನಸೋತು ಅಭಿಮಾನ ಚಪ್ಪಾಳೆ ಮಳೆ ಸುರಿಸಿತು.



ಕಾಲೇಜು ವಿದ್ಯಾರ್ಥಿಗಳ ನೃತ್ಯ ಪ್ರದರ್ಶನ.

ಉದ್ಘಾಟನೆ ನೆರವೇರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ಎಂದಿನಂತೆ ಯುವ ಸಂಭ್ರಮವನ್ನು ಪ್ರಾರಂಭಿಸಿದ್ದೇವೆ. ರಾಜ್ಯದಲ್ಲಿ ಸುಮಾರು 470 ಕಾಲೇಜುಗಳಿಂದ ಯುವ ಪ್ರತಿಭೆಗಳು ಯುವ ಸಂಭ್ರದಲ್ಲಿ ಭಾಗವಹಿಸಲು ಅರ್ಜಿ ಸಲ್ಲಿಸಿದ್ದರು. ಅದರಲ್ಲಿ 150 ಕಾಲೇಜುಗಳಿಗೆ ಅವಕಾಶ ಸಿಕ್ಕಿದೆ. ಉಳಿದ 120 ಕಾಲೇಜುಗಳಿಗೆ ಅವಕಾಶ ಸಾಧ್ಯವಾಗಿಲ್ಲ. ಹಾಗಾಗಿ ಅವುಗಳಿಗೂ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಒಂದು ದಿನ ಯುವ ಸಂಭ್ರಮ ವಿಸ್ತರಣೆ ಮಾಡಿ ಅವಕಾಶ ಸಿಕ್ಕಿಲ್ಲದ ಕಾಲೇಜುಗಳ ತಂಡಗಳಿಗೂ ಅವಕಾಶ ಕೊಡುವಂತೆ ಸೂಚನೆ ನೀಡಿದ್ದಾನೆ. ಏಳು ದಿನ ಎಲ್ಲಾ ಕಾಲೇಜುಗಳ ಪ್ರತಿಭೆಗಳ ಪ್ರದರ್ಶನವಾಗಲಿದೆ ಎಂದು ಹೇಳಿದರು. ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ನಮ್ಮ ನಾಡಿನ ಸಂಸ್ಕೃತಿಯ ಅಭಿವ್ಯಕ್ತಿಯಾಗಲಿದೆ. ಅದು ಯಾವ ರೀತಿ ಇರಲಿದೆ ಎಂದರೆ ನಮ್ಮ ಸಂಸ್ಕೃತಿಯ ತಳಹದಿಯ ಮೇಲೆ ಧರ್ಮ ಇದೆ. ಧರ್ಮದ ತಳಹದಿಯ ಮೇಲೆ ಸಂಸ್ಕೃತಿ ಇಲ್ಲ ಎನ್ನುವುದನ್ನು ನಮ್ಮ ಯುವ ಸಮುದಾಯ ಅನಾವರಣಗೊಳಿಸಲಿದೆ. ಆ ಮೂಲಕ ಬಹುತ್ವದ ರಕ್ಷಣೆಗೆ ಯುವ ಸಮೂಹ ಕಂಕಣ ತೊಡಬೇಕು ಎಂದರು.



ಮೈಸೂರಿನ ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯದ ವಿದ್ಯಾರ್ಥಿಗಳ ತಂಡ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಪ್ರಯೋಜನವನ್ನು ನೃತ್ಯದ ಮೂಲಕ ಅನಾವರಣಗೊಳಿಸಿತು.

ಅಪ್ಪುಗೆ ಗಾನ ನಮನ: ಕಾರ್ಯಕ್ರಮದ ಆರಂಭಕ್ಕೂ ಮುನ್ನ ವೇದಿಕೆಯಲ್ಲಿ ಡಾ.ಮಧುಸೂದನ್ ಮತ್ತು ಅವರ ತಂಡ ಪುನೀತ್‌ರಾಜ್‌ಕುಮಾರ್ ಅಭಿನಯದ 'ರಾಜಕುಮಾರ' ಚಿತ್ರದ 'ಬೊಂಬೆ ಹೇಳುತೈತೆ ಮತ್ತೆ ಹೇಳುತೈತೆ' ಗೀತೆ ಸಾದರಪಡಿಸಿದರು. ಈ ಹಾಡಿಗೆ ನೆರೆದಿದ್ದ ಯುವ ಪಡೆಯಿಂದ ಅಭಿಮಾನದ ಚಪ್ಪಾಳೆ ಮುಗಿಲು ಮುಟ್ಟಿತು. ಅಲ್ಲದೆ, ತಮ್ಮ ಮೊಬೈಲ್ ಟಾರ್ಚ್ ಬೆಳಗಿಸಿ ಅಪ್ಪುವಿಗೆ ನಮನ ಸಲ್ಲಿಸಿದರು.

ತಡವಾಯ್ತು: ಸಂಜೆ 6ಕ್ಕೆ ಕಾರ್ಯಕ್ರಮ ಉದ್ಘಾಟನೆಯಾಗಬೇಕಿತ್ತು (ಉದ್ಘಾಟನಾ ಸಮಾರಂಭದ ಬ್ಯಾನರ್‌ನಲ್ಲಿ 5 ಗಂಟೆ ಉದ್ಘಾಟನೆ ಎಂದು ಉಲ್ಲೇಖಿಸಲಾಗಿದೆ). ಆದರೆ ರಾತ್ರಿ ಸುಮಾರು 8.20ಕ್ಕೆ ಉದ್ಘಾಟನೆ ನೆರವೇರಿತು. ಇದರಿಂದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ನಾನಾ ಕಾಲೇಜಿನ ವಿದ್ಯಾರ್ಥಿಗಳು ಪ್ರದರ್ಶನ ನೀಡಲು ಗಂಟೆಗಟ್ಟಲೆ ಕಾಯಬೇಕಾಯಿತು.

ಹಾಸನ ಜಿಲ್ಲೆಯ ಹೊಳೆನರಸೀಪುರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ತಂಡ ನೃತ್ಯದ ಮೂಲಕ ಜಾನಪದ ಪರಂಪರೆ ಮತ್ತು ದೇಶಿ ಸಂಸ್ಕೃತಿ ಅನಾವರಣಗೊಳಿಸಿತು. ಹುಣಸೂರಿನ ಶ್ರೀ ಮಹಾವೀರ್ ಕಾಲೇಜ್ ಆಫ್ ಎಜುಕೇಷನ್ ವತಿಯಿಂದ ನೃತ್ಯದ ಮೂಲಕ ಮೈಸೂರು ದಸರಾ ವೈಭವದ ಪರಂಪರೆ ಮೂಡಿಸಲಾಯಿತು. ಅಂತೆಯೇ 20 ಕಾಲೇಜು ತಂಡಗಳು ನೃತ್ಯ ಪ್ರದರ್ಶನದೊಂದಿಗೆ ಸಾವಿರಾರು ಸಂಖ್ಯೆಯಲ್ಲಿ ನೆರೆದಿದ್ದ ಯುವ ಜನರು ಹಾಗೂ ಇನ್ನಿತರ ಪ್ರೇಕ್ಷಕರ ಎದೆಗೆ ಲಗ್ಗೆಯಿಟ್ಟರು. ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಕರ್ನಾಟಕ ರಾಜ್ಯ ಗ್ಯಾರೆಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಪಂ ಸಿಇಓ ಕೆ.ಎಂ.ಗಾಯತ್ರಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಡಿಸಿಪಿ ಮುತ್ತುರಾಜ್ ಸೇರಿದಂತೆ ಮತ್ತಿತರರು ಹಾಜರಿದ್ದರು.




ಹಾಸನ ಜಿಲ್ಲೆ ಹೊಳೆನರಸೀಪುರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳ ನೃತ್ಯ. ಬಲಚಿತ್ರದಲ್ಲಿ ಕಾಲೇಜೊಂದರ ವಿದ್ಯಾರ್ಥಿಗಳು ನೃತ್ಯ ಪ್ರದರ್ಶಿಸಿದರು.

ವಾಲ್ಮೀಕಿ ಹಗರಣ: ಸಿಬಿಐ ತನಿಖೆಯೇ ಸೂಕ್ತ

ಅಟಾರ್ನಿ ಜನರಲ್ ವೆಂಕಟರಮಣಿ ಅಭಿಮತ

ಬೆಂಗಳೂರು, ಸೆ.24– ಬ್ಯಾಂಕಿಂಗ್ ವಲಯದ ಪ್ರಾಮಾಣಿಕತೆಯನ್ನು ಖಾತ್ರಿಪಡಿಸಬೇಕಾದರೆ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಮೊತ್ತದ ದುರ್ಬಳಕೆ ಆರೋಪದ ಪ್ರಕರಣವನ್ನು ಸಿಬಿಐಗೆ ತನಿಖೆಗೆ ವಹಿಸುವ ಅಗತ್ಯವಿದೆ ಎಂದು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾವನ್ನು ಹೈಕೋರ್ಟ್‌ನಲ್ಲಿ ಪ್ರತಿನಿಧಿಸುತ್ತಿರುವ ಅಟಾರ್ನಿ ಜನರಲ್ ಆರ್.ವೆಂಕಟರಮಣಿ ಬಲವಾಗಿ ಪ್ರತಿಪಾದಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣವನ್ನು ಸಿಬಿಐ ತನಿಖೆಗೆ ವರ್ಗಾಯಿಸಬೇಕು ಎಂದು ಕೋರಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಯೂನಿಯನ್ ಬ್ಯಾಂಕ್ ಪರ ವಾದ ಮಂಡಿಸಿದ ಸಾಲಿಸಿಟರ್ ಜನರಲ್ ಆರ್.ವೆಂಕಟರಮಣಿ, ತನಿಖೆ ನಡೆಸುವಂತೆ ಕೋರಿ ಬ್ಯಾಂಕ್ ಸಿಬಿಐಗೆ ಪತ್ರ ಬರೆದಿತ್ತು. ದೂರು ದಾಖಲಾಗಿದ್ದು, ಸಿಬಿಐ ತನಿಖೆ ಕೈಗೆತ್ತಿಕೊಂಡಂತಾಗಿದೆ. ಹೀಗಾಗಿ, ಬ್ಯಾಂಕುಗಳ ಹಿತದೃಷ್ಟಿಯಿಂದ ಕೋಟ್ಯಂತರ ರೂಪಾಯಿ ದುರುಪಯೋಗ ಆರೋಪದ ಇಂತಹ ತನಿಖೆಯನ್ನು ಸಿಬಿಐಗೆ ವಹಿಸುವುದು ಅವಶ್ಯ ಇದೆ ಎಂದರು. ಈ ದಿನಗಳಲ್ಲಿ ಬ್ಯಾಂಕುಗಳು ಹಲವು ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಬ್ಯಾಂಕಿಂಗ್ ಉದ್ಯಮ ದೇಶದ ಆರ್ಥಿಕ ಶಿಸ್ತಿನಲ್ಲಿ ಅತ್ಯಂತ ಪ್ರಮುಖ ಸ್ಥಾನವನ್ನು ಹೊಂದಿದೆ. ವಿತ್ತೀಯ ಶಿಸ್ತುಗಳು ಭಾರಿ ದೊಡ್ಡ ಪರಿಣಾಮಗಳನ್ನು ಬೀರುತ್ತಿವೆ. ಈ ದೆಸೆಯಿಂದಲೇ, ಬ್ಯಾಂಕುಗಳ ಪ್ರಾಮಾಣಿಕತೆಯನ್ನು ಖಾತ್ರಿಪಡಿಸಲು ಆರ್‌ಬಿಐ ಮಾಸ್ಟರ್ ಸುತ್ತೋಲೆಯನ್ನು ಹೊರಡಿಸಿದೆ. ಬ್ಯಾಂಕುಗಳ ವಹಿವಾಟಿನ ಯಾವುದೇ ಅಕ್ರಮಗಳಿಗೆ ಸಂಬಂಧಿಸಿದಂತೆ ಸಿಬಿಐ ತನಿಖೆ ಅಗತ್ಯವಿದೆ ಎಂದು ಹೇಳಿದೆ. ಹಾಗಾಗಿ, ವಾಲ್ಮೀಕಿ ನಿಗಮದಲ್ಲಿ ನಡೆದಿದೆ ಎನ್ನಲಾದ ಹಗರಣವನ್ನೂ ಸಿಬಿಐ ತನಿಖೆಗೆ ವಹಿಸುವುದೇ ಸೂಕ್ತ ಎಂದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ರಾಜ್ಯ ಸರ್ಕಾರದ ಪರ ಹಿರಿಯ ವಕೀಲ ಬಿ.ವಿ.ಆಚಾರ್ಯ ಮತ್ತು ಹೆಚ್ಚುವರಿ ಅಡ್ವೊಕೇಟ್ ಜನರಲ್ ವಿ.ಜಿ.ಭಾನುಪ್ರಕಾಶ್, ಅರ್ಜಿಯ ಸಿಂಧುತ್ವದ ಬಗ್ಗೆ ಪ್ರಾಥಮಿಕ ಪ್ರಶ್ನೆ ಇದೆ. ಏಕೆಂದರೆ ಇದು ರಾಜ್ಯ ಮತ್ತು ಕೇಂದ್ರ ಸರ್ಕಾರದ ಮಧ್ಯದ ವ್ಯಾಜ್ಯ ಎಂದರು.

ನೀಟ್, ಸಿಇಟಿ: ಎರಡನೇ ಸುತ್ತಿನ ಅವಧಿ ವಿಸ್ತರಣೆ

ಬೆಂಗಳೂರು, ಸೆ.24– ವೈದ್ಯಕೀಯ, ಇಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ (ಸಿಇಟಿ, ನೀಟ್) ಎರಡನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದವರು ಕಾಲೇಜಿಗೆ ಪ್ರವೇಶ ಪಡೆಯಲು ಸೆ. 28ರವರೆಗೆ ಅವಕಾಶ ನೀಡಲಾಗಿದೆ. ಸಿಇಟಿ ವಿದ್ಯಾರ್ಥಿಗಳಿಗೆ 'ಚಾಯ್ಸ್' ದಾಖಲಿಸಲು ಸೆ. 26ರವರೆಗೆ, ಶುಲ್ಕ ಪಾವತಿ ಮತ್ತು ದಾಖಲೆ ಸಲ್ಲಿಸಲು 27ರವರೆಗೆ ಅವಧಿ ವಿಸ್ತರಿಸಲಾಗಿದೆ.

ಶುಲ್ಕ ಪಾವತಿ, ಪ್ರವೇಶಪತ್ರ ಡೌನ್‌ಲೋಡ್ ಮಾಡಿಕೊಂಡು ಪ್ರವೇಶ ಪಡೆಯಲು ಸೆ. 27 ಮತ್ತು 28 ಕೊನೆಯ ದಿನವಾಗಿದೆ.

ನಕ್ಕರೆ ಅದೇ ಸ್ವರ್ಗ

ಟೀಚರ್ : ಕಲಿತ ಪದ್ಯ ಹೇಳು ಗುಂಡ
ಗುಂಡ : 1–2 ಮೊಬೈಲ್ ನೋಡು, 3–4 ನೆಟ್ ಆನ್ ಮಾಡು, 5–6 ವಾಟ್ಸಪ್ ನೋಡು, 7–8 ಫೇಸ್‌ಬುಕ್ ನೋಡು, 9–10 ಸ್ಟೇಟಸ್ ಹಾಕು, 1 ರಿಂದ 10 ಹೀಗಿತ್ತು ಡೇಟಾ ಖಾಲಿ ಆಗಿತ್ತು.

ಮೈಸೂರು ಮಿತ್ರ
ಬುಧವಾರ, 25 ಸೆಪ್ಟೆಂಬರ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಸುವಾಸನೆಗಿಂತ ದುರ್ವಾಸನೆ ಬೇಗ ಹರಡುತ್ತದೆ. ಸತ್ಕೀರ್ತಿ ಹಬ್ಬುವುದು ನಿಧಾನ. ಕೆಟ್ಟ ಕೀರ್ತಿ ಕಾಳ್ಗಿಚ್ಚಿನಂತೆ ಹಬ್ಬುತ್ತದೆ.–ಕುವೆಂಪು

ವೇದ ಸುಳ್ಳಾದರೂ { ಲೋಕ ತಿಳೀಬೇಕು
ಗಾದೆ ಸುಳ್ಳಾಗದು { ಲೆಕ್ಕ ಕಲೀಬೇಕು.

ನಿಮ್ಮ ಪತ್ರಗಳು

ಸರ್ಕಾರಿ ಶಾಲೆಗಳನ್ನು ಉಳಿಸಲು ಇಚ್ಛಾಶಕ್ತಿ ಬೇಕು

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ದಿನದಿಂದ ದಿನಕ್ಕೆ ಸರ್ಕಾರಿ ಕನ್ನಡ ಶಾಲೆಗಳು ತೀರಾ ದುರ್ಬಲ ಸ್ಥಿತಿಗೆ ತಲುಪುತ್ತಿರುವುದು ದುರದೃಷ್ಟಕರ ಸಂಗತಿ. ಸರ್ಕಾರಿ ಶಾಲೆಗಳೆಂದರೆ ಬಡ ವಿದ್ಯಾರ್ಥಿಗಳ ಶಾಲೆ ಎನ್ನುವ ಮನೋಧೋರಣೆ ಅನೇಕರಲ್ಲಿ ಬೇರೂರಿದೆ. ಈ ಶಾಲೆಗಳೆಂದರೆ ಮೂಗು ಮುರಿಯುವವರೇ ಬಹಳ ಹೆಚ್ಚು. ಆದ್ದರಿಂದ ಪೋಷಕರು ಸರಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಶಿಕ್ಷಣ ಕೊಡಿಸುವಲ್ಲಿ ಮುಂದಾಗ ಬೇಕು. ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಮೂಲ ಸೌಕರ್ಯಗಳಿಗೆ ಆದ್ಯತೆ ನೀಡಿ ಸರ್ಕಾರವು ಅನೇಕ ಯೋಜನೆಗಳನ್ನು ರೂಪಿಸಬೇಕು. ಸರ್ಕಾರಿ ಕನ್ನಡ ಶಾಲೆಗಳು ಉಳಿದರೆ ಮಾತ್ರ ಕನ್ನಡ ಭಾಷೆ ಹಾಗೂ ಸಂಸ್ಕೃತಿ ಉಳಿಯುತ್ತದೆ. ಕರ್ನಾಟಕದಲ್ಲಿ ಕನ್ನಡ ಮಾತನಾಡುವವರೇ ತುಂಬಾ ವಿರಳವಾಗುತ್ತಿದ್ದಾರೆ. ಅನ್ಯ ಭಾಷೆಗಳ ಪ್ರಭಾವವು ಇತ್ತೀಚಿನ ದಿನಗಳಲ್ಲಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಅದರಲ್ಲೂ ಬೆಂಗಳೂರಿನಂತಹ ನಗರ ಪ್ರದೇಶಗಳಲ್ಲಿ ಅವರದೇ ಅಬ್ಬರ ಹೆಚ್ಚಾಗುತ್ತಿದೆ. ಇತರೇ ರಾಜ್ಯಗಳಿಗೆ ಹೋಲಿಸಿದರೆ ಶೇ. 46 ರಷ್ಟು ಜನರು ಮಾತ್ರ ಕನ್ನಡ ಮಾತನಾಡುತ್ತಿದ್ದಾರೆ. ಇದು ಹೀಗೆ ಮುಂದುವರೆದರೆ ಕನ್ನಡಕ್ಕೆ ಮುಂದಿನ ದಿನಗಳಲ್ಲಿ ಕಂಟಕ ಕಟ್ಟಿಟ್ಟ ಬುತ್ತಿ.

–ಪರಶಿವಮೂರ್ತಿ ಎನ್.ಪಿ. ನಂಜೀಪುರ, ಸರಗೂರು ತಾ.

ತಿರುಪತಿ ಲಡ್ಡು ವಿವಾದ : ಭಕ್ತರ ಭಾವನೆಗೆ ಧಕ್ಕೆ ತರುವ ಪ್ರಕರಣ

ಮಾನ್ಯರೆ,

ವಿಶ್ವದ ಅತ್ಯಂತ ಶ್ರೀಮಂತ ದೇಗುಲ ಎಂದೇ ಖ್ಯಾತಿ ಪಡೆದಿರುವ ತಿರುಪತಿ ತಿರುಮಲ ದೇಗುಲದಲ್ಲಿ ಪ್ರಸಾದ ರೂಪವಾಗಿ ನೀಡುವ ಲಡ್ಡುವಿನಲ್ಲಿ ಪ್ರಾಣಿಗಳ ಕೊಬ್ಬಿನ ಅಂಶ ಪತ್ತೆಯಾಗಿರುವ ವಿಚಾರ ಆಘಾತಕಾರಿಯಾಗಿದೆ. ಮುಖ್ಯಮಂತ್ರಿ ಚಂದ್ರಬಾಬು ನಾಯ್ಡುರವರೇ ಇದನ್ನು ಬಹಿರಂಗಪಡಿಸಿದ್ದು ಇದು ಭಕ್ತರ ಭಾವನೆಗೆ ಧಕ್ಕೆ ತರುವ ಪ್ರಕರಣವಾಗಿದೆ.

ಇತಿಹಾಸ ಪ್ರಸಿದ್ಧ ತಿರುಪತಿ ಲಾಡುವಿಗೆ ತನ್ನದೇ ಆದ ವೈಶಿಷ್ಟ್ಯತೆ ಇದ್ದು ಭಕ್ತರ ಭಾವನೆಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದೆ. ಇದರ ಗಾತ್ರ – ಪರಿಮಳ – ರುಚಿ ಬೇರಾವ ಲಡ್ಡುವಿಗೂ ಸಮನಲ್ಲ. ಕೇವಲ ಇತಿಮಿತಿಯಲ್ಲೇ ವಿತರಿಸುವ ಈ ಪ್ರಸಾದವನ್ನು ಕೋಟ್ಯಾಂತರ ತಿಮ್ಮಪ್ಪನ ಭಕ್ತರು ಪ್ರಾಂಜಲ ಮನಸ್ಸಿನಿಂದ ಸ್ವೀಕರಿಸುತ್ತಾರೆ. ಇಂತಹ ರುಚಿಕಟ್ಟಾದ ಲಡ್ಡು ದೇಶದ ಬೇರಾವ ದೇಗುಲಗಳಲ್ಲೂ ಲಭ್ಯವಾಗುವ ನಿದರ್ಶನಗಳಿಲ್ಲ. ಇಂತಹ ಪವಿತ್ರ ಕ್ಷೇತ್ರದಲ್ಲಿ ಅಪವಿತ್ರತೆ ಉಂಟು ಮಾಡಿರುವುದು ಭಕ್ತಾದಿಗಳಿಗೆ ಎಸಗಿದ ಅಪಚಾರವಾಗಿದೆ.

ಭಕ್ತರಿಂದ ಕಾಣಿಕೆ ರೂಪವಾಗಿ ದಿನಕ್ಕೆ ಸರಾಸರಿ 2 ಕೋಟಿಗೂ ಅಧಿಕ ಹಣ ಹರಿದು ಬರುವ ಈ ಶ್ರೀಮಂತ ದೈವ ಸನ್ನಿಧಾನದಲ್ಲಿ ಕಳಪೆ ಮಟ್ಟದ ತುಪ್ಪ ಬಳಸಿ ಪ್ರಸಾದ ತಯಾರಿಸುತ್ತಿರುವುದು ಅಕ್ಷಮ್ಯ ಅಪರಾಧವಾಗಿದ್ದು ಹಿಂದಿನ ಸರ್ಕಾರ ಹಾಗೂ ದೇವಳದ ಆಡಳಿತ ಮಂಡಳಿ ಈ ವಿಚಾರದಲ್ಲಿ ಕ್ಷಮೆಗೆ ಅರ್ಹರಲ್ಲ.

– ಹೆಚ್. ಆರ್. ಪ್ರಸಾದ್, ವಿವೇಕಾನಂದ ನಗರ, ಮೈಸೂರು,

ಮಡಿಕೇರಿ, ಹುಣಸೂರು, ಪಿ.ಪಟ್ಟಣಕ್ಕೆ ಸಾರಿಗೆ ಬಸ್ ವ್ಯವಸ್ಥೆ ಕಲ್ಪಿಸಿ

ಮಾನ್ಯರೆ,

ಮೈಸೂರಿನ ಹೆಬ್ಬಾಳು ಬಡಾವಣೆಯ 2ನೇ ಹಂತ ಮತ್ತು ವಿಜಯನಗರ 2ನೇ ಹಂತದ ಕಡೆಯಿಂದ ಮಡಿಕೇರಿ, ಹುಣಸೂರು, ಪಿರಿಯಾಪಟ್ಟಣ ಕಡೆಗೆ ಬಹಳಷ್ಟು ಜನರು ಕೆಲಸಕ್ಕೆ ಪ್ರತಿ ದಿವಸ ಪ್ರಯಾಣಿಸುತ್ತಾರೆ. ಇವರು ಹಿನಕಲ್‌ಗೆ ನಡೆದು ಹೋಗಿ ಅಲ್ಲಿಂದ ಬಸ್ಸಿನಲ್ಲಿ ಪ್ರಯಾಣ ಮಾಡಬೇಕಿದೆ. ಸಮಯಕ್ಕೆ ಸರಿಯಾಗಿ ಕಚೇರಿಗೆ ಹೋಗಲು ತೊಂದರೆ ಆಗುತ್ತಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಬಸ್ಸಿನ ವ್ಯವಸ್ಥೆ ಕಲ್ಪಿಸಬೇಕೆಂದು ಮನವಿ.

–ಎ.ವಿ. ರಾಜಶೇಖರ, ಹಿರಿಯ ನಾಗರಿಕರ ಸೇವಾ ಸಮಿತಿ, ಹೆಬ್ಬಾಳು, ಮೈಸೂರು

ಸ್ಥಳೀಯರಿಗೆ ಅವಕಾಶ ಕಲ್ಪಿಸಿ

ಮಾನ್ಯರೆ,

ವಿಶ್ವ ವಿಖ್ಯಾತ ಮೈಸೂರು ದಸರಾ 2024ರ ಯುವ ದಸರಾ ಹಾಗೂ ಅರಮನೆಯ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸ್ಥಳೀಯ ಹಾಗೂ ಕನ್ನಡಿಗರಿಗೆ ಹೆಚ್ಚು ಮಾನ್ಯತೆ ಕೊಡುವಂತಾಗಲಿ. ಹೊರಗಿನವರನ್ನು ಆಹ್ವಾನಿಸಿ ಅತೀ ಹೆಚ್ಚು ವೆಚ್ಚವನ್ನು ಭರಿಸುವ ಬದಲು ನಮ್ಮ ಸ್ಥಳೀಯ ಸಂಗೀತಗಾರರು ಹಾಗೂ ಕಲಾವಿದರಿಗೆ ಮನ್ನಣೆ ನೀಡಿದರೆ ಅವರಿಗೂ ಕೂಡ ಒಂದೊಳ್ಳೆಯ ವೇದಿಕೆ ಕಲ್ಪಿಸಿದಂತಾಗುತ್ತದೆ ಹಾಗೂ ಅವರ ಕಲೆಯನ್ನು ಪ್ರೋತ್ಸಾಹಿಸಿದಂತಾಗುತ್ತದೆ. ಯುವ ದಸರಾದಂತಹ ಅದ್ಧೂರಿ ಹಾಗೂ ಪ್ರಖ್ಯಾತ ವೇದಿಕೆಯಲ್ಲಿ ಸ್ಥಳೀಯರಿಗೆ ಅವಕಾಶ ಕಲ್ಪಿಸಿ ಅವರ ಏಳ್ಗೆಗೆ ಮುಂದಾಗಬೇಕೆಂದು ಯುವ ದಸರಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಆಯೋಜಕ ಅಧಿಕಾರಿ ವರ್ಗದವರನ್ನು ವಿನಂತಿಸಿಕೊಳ್ಳುತ್ತೇನೆ.

–ಮಂಜೇಶ್ ದೇವಗಳ್ಳಿ, ಮೈಸೂರು

ಸಮಾಜದಲ್ಲಿ ಕ್ರೌರ್ಯ, ಪುಂಡಾಟಿಕೆಗೆ ಕಡಿವಾಣ ಹಾಕುವವರು ಯಾರು?

ಮಾನ್ಯರೆ,

ಕೊಲೆ, ಕಳ್ಳತನ, ಪುಂಡಾಟಿಕೆ, ದ್ವೇಷ, ಆಸಿಡ್ ಪ್ರಕರಣ ಸಮಾಜದ ಆಸ್ತಿಗಳ ಮೇಲೆ ವಿಕೃತವಾಗಿ ವರ್ತಿಸಿ ಹಾನಿ ಮಾಡುವುದು, ಹೆಣ್ಣು ಮಕ್ಕಳಿಗೆ ಗೌರವ ನೀಡದೆ ವಯಸ್ಸಿನ ಅಂತರವಿಲ್ಲದೆ ಅತ್ಯಾಚಾರ ನಡೆಸುವುದು, ಜಾತಿ ನಿಂದನೆ, ದೇಶ ದ್ರೋಹ... ಹೀಗೆ ಹೇಳುತ್ತಾ ಹೋದರೆ ಪಟ್ಟಿ ಬೆಳೆಯುತ್ತಾ ಹೋಗುತ್ತದೆ. ಇಂತಹ ಕೆಲಸ ಮಾಡುವ ಜನರಿಗೆ ಕಡಿವಾಣ ಹಾಕುವವರು ಯಾರು ಇಲ್ಲವೇ? ಇಂತಹ ಮಂದಿಗೂ ಜಾಮೀನು ವ್ಯವಸ್ಥೆ ಸಿಗುತ್ತದೆ ಎಂದರೆ ನಮ್ಮ ಸಮಾಜದ ಜನರ ಪರಿಸ್ಥಿತಿ ಎತ್ತ ಸಾಗಿದೆ ಎಂದು ಯೋಚಿಸುವಂತಾಗಿದೆ.ಗಣ್ಯ ವ್ಯಕ್ತಿಗಳಿಂದಲೂ ಅನೇಕ ಅಪರಾಧಗಳು ನಡೆದಿರುತ್ತವೆ. ಇವರಿಗೆಲ್ಲಾ ಕಾನೂನಿನ ಹಾಗೂ ಪೊಲೀಸರ ಮೇಲೆ ಗೌರವವಿಲ್ಲವೆ. ಸಮಾಜದ ವ್ಯವಸ್ಥೆಯಲ್ಲಿ ಎಲ್ಲಿ ಲೋಪಗಳಿವೆ ಎಂದು ತಿಳಿಯಬೇಕು. ಇದನ್ನು ಸರಿಪಡಿಸುವ ವ್ಯವಸ್ಥೆಯು ಕಟ್ಟುನಿಟ್ಟಾಗಿ ಸಾಗಬೇಕಾಗಿದೆ. ಅಧಿಕಾರಿಗಳಲ್ಲಿ ದಕ್ಷತೆ ಹಾಗೂ ಭದ್ರತೆ ಇರಬೇಕಾಗಿದೆ.ಸಮಾಜದಲ್ಲಿ ಶಾಂತಿ ನೆಲೆಸಿ ಎಲ್ಲಾ ಪಂಗಡದವರು ಸಮಾನರೆಂದು ಬಾಳಬೇಕಾಗಿದೆ. ಎಲ್ಲರೂ ಸತ್ಯ ಧರ್ಮದ ಹಾದಿಯಲ್ಲಿ ನಡೆದರೆ ಎಲ್ಲರೂ ಸುರಕ್ಷಿತವಾಗಿ ಇರಬಹುದು.

–ಎಂ.ಎಸ್. ಉಷಾ ಪ್ರಕಾಶ್, ಲೇಖಕಿ ಹಾಗೂ ಕವಯಿತ್ರಿ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಎಸ್.ರಾಮಪ್ರಸಾದರ 'ಗುಳಿಗೆಗಳು–2'

ಮೈಸೂರಿನ ಸಾರಸ್ವತ ಹಾಗೂ ಸಾಂಸ್ಕೃತಿಕ ವಲಯದಲ್ಲಿ ತಮ್ಮ ವಿಶಿಷ್ಟ ಕೊಡುಗೆಗಳಿಂದ ಗುರುತಿಸಿಕೊಂಡಿರುವ ಶ್ರೀ ಎಸ್.ರಾಮಪ್ರಸಾದ್ ಸದಾ ಹೊಸ ವಿಚಾರಧಾರಾ ಪೂರಿತವಾದ ಸಾಹಿತ್ಯ ಸೃಷ್ಟಿಯಲ್ಲಿ ತೊಡಗಿರುತ್ತಾರೆ ಮತ್ತು ಅನ್ಯರನ್ನೂ ತೊಡಗಿಸುತ್ತಾರೆ. ಮುಖ್ಯವಾಗಿ ಅವರು ವಿಜ್ಞಾನ ಲೇಖಕರು–ಆಕಾಶ ವೀಕ್ಷಣೆಯಲ್ಲಿ, ನಕ್ಷತ್ರ–ಗ್ರಹ ವರ್ಣನೆಯಲ್ಲಿ ಅವರ ಉತ್ಸಾಹ ಅಪಾರ. **ಯುರೇನಸ್ ಗ್ರಹ, ಆಕಾಶದ ಶ್ರೀಮಂತಿಕೆ, ವಿಶ್ವ ಬ್ರಹ್ಮಾಂಡ, ಖಗೋಳ ವಿಜ್ಞಾನ** ಮುಂತಾದ ವೈಜ್ಞಾನಿಕ, ವೈಚಾರಿಕ ಪುಸ್ತಕಗಳನ್ನು ಬರೆದು ಪ್ರಕಟಿಸಿದ್ದಾರೆ. ಕೇವಲ ಮೇಲಿನ ಆಕಾಶದ ನೋಟದಲ್ಲಿ ಅವರು ತೃಪ್ತರಾಗಿಲ್ಲ. ಭೂಮಿಯ ಮೇಲಿರುವ ಪ್ರಾಣಿ ಪ್ರಪಂಚದ ಬಗೆಗೂ ದೃಷ್ಟಿ ಬೀರಿದ್ದಾರೆ. **ಅಂದಿನ ಇಂದಿನ ಪ್ರಾಣಿಗಳು, ಕೋತಿಗಳ ಪ್ರಪಂಚ** ಮುಂತಾದ ಪುಸ್ತಕಗಳನ್ನು ನಾವು ನೋಡಬಹುದು. **ವಿಜ್ಞಾನದಲ್ಲಿರುವ ಅವರ ಪ್ರೀತಿ ಅತ್ಯಧಿಕ. ವಿಜ್ಞಾನವಾಹಿನಿ, ವಿಜ್ಞಾನ ಸಂಚಯ, ವಿಜ್ಞಾನ ವಿನೋದ** ಎಂಬ ಪುಸ್ತಕಗಳು ಇದಕ್ಕೆ ಸಾಕ್ಷಿ.

ಇದರ ಜೊತೆಗೆ ಛಾಯಾಚಿತ್ರ ಗ್ರಹಣದಲ್ಲಿ ಎಂದರೆ ಫೋಟೋಗ್ರಫಿಯಲ್ಲಿ ಶ್ರೀಯುತ ಎಸ್.ರಾಮಪ್ರಸಾದ್ ಮುಂದಾಳು. ಬ್ರಿಟನ್, ಆಸ್ಟ್ರೇಲಿಯಾ, ಬೆಲ್ಜಿಯಂ ಮುಂತಾದ ದೇಶಗಳ ಫೋಟೋಗ್ರಾಫಿಕ್ ಸೊಸೈಟಿಗಳಲ್ಲಿ ಇವರು ಮಾನ್ಯ ಸದಸ್ಯತ್ವವನ್ನು ಪಡೆದು ಹೆಸರನ್ನು ಗಳಿಸಿದ್ದಾರೆ. ಅನೇಕ ರಾಷ್ಟ್ರೀಯ, ಅಂತಾರಾಷ್ಟ್ರೀಯ ಛಾಯಾಚಿತ್ರ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನೂ ಪುರಸ್ಕಾರಗಳನ್ನೂ ಗಳಿಸಿದ್ದಾರೆ. ಯುವಕರಿಗೆ ಫೋಟೋಗ್ರಫಿಯನ್ನು ಕಲಿಸಿ ಉತ್ತೇಜಿಸುವುದರಲ್ಲೂ ಇವರು ಅಗ್ರಗಣ್ಯರು. ವನ್ಯಜೀವಿಗಳ ಚಿತ್ರಗ್ರಹಣದಲ್ಲಿ ಇವರಿಗೆ ವಿಶೇಷಾಸಕ್ತಿ. ಒಂದು ಸಣ್ಣ ಕೀಟದಿಂದ ಬೃಹತ್ತಾದ ಆನೆಯವರೆಗೆ ಹತ್ತು ಹಲವು ವನ್ಯಜೀವಿಗಳ ವಿಶಿಷ್ಟ ಛಾಯಾಚಿತ್ರಗಳನ್ನು ಸೆರೆ ಹಿಡಿದು ನೈಪುಣ್ಯವನ್ನು ಮೆರೆಸಿದ್ದಾರೆ. ಈ ಹವ್ಯಾಸ ಇವರನ್ನು ಮೈಸೂರು ಫೋಟೋಗ್ರಾಫಿಕ್ ಅಸೋಸಿಯೇಷನ್ನಿನ ಗೌರವಾಧ್ಯಕ್ಷರನ್ನಾಗಿ ಮಾಡಿದೆ.

ಅನುವಾದ ಒಂದು ಕಲೆ, ಅದು ವಿಜ್ಞಾನವೂ ಹೌದು. ಅದರಲ್ಲೂ ನಮ್ಮ ರಾಮಪ್ರಸಾದರು ಸಿದ್ಧಿಯನ್ನು ಗಳಿಸಿದವರು. ಇಂಗ್ಲೀಷಿನಿಂದ ಕನ್ನಡಕ್ಕೆ ಹಲವು ಪುಸ್ತಕಗಳು ಅವರಿಂದ ಭಾಷಾಂತರಗೊಂಡು ಕನ್ನಡಿಗರಿಗೆ ಸಿಕ್ಕಿವೆ. ಮೈಸೂರಿನ ಕೇಂದ್ರೀಯ ಭಾಷಾ ಸಂಸ್ಥಾನ (Central Institute of Indian Languages)ದಲ್ಲಿರುವ ನ್ಯಾಷನಲ್ ಟ್ರಾನ್ಸ್‌ಲೇಶನ್ ಮಿಷನ್ ನಲ್ಲೂ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲೂ ಅವರು ಸಂಪನ್ಮೂಲ ವ್ಯಕ್ತಿಗಳಾಗಿದ್ದಾರೆ. ರಾಮಪ್ರಸಾದರ ಸಾಹಿತ್ಯ ಸೃಷ್ಟಿ ಮಕ್ಕಳಿಗೂ ತಲುಪುತ್ತಿದೆ. **ದುರ್ಬೀನು, ಮಳೆ, ಟಿಕ್ ಟಿಕ್ ಗೆಳೆಯ, ಬೆಳ್ಳಿಯ ಚಂದಿರ, ಮುಗಿಲು** ಮುಂತಾದುವನ್ನು ಅವರು ನೀಡಿ ಕನ್ನಡದ ಮಕ್ಕಳ ಸಾಹಿತ್ಯದ ಹಿರಿಮೆಯನ್ನು ಹೆಚ್ಚಿಸಿದ್ದಾರೆ. ರೇಡಿಯೋ ಮಾಧ್ಯಮದಲ್ಲೂ ಜನಪ್ರಿಯ ಭಾಷಣಗಳನ್ನು ಅವರು ಮಾಡಿದ್ದಾರೆ.

ಮುಕ್ತಕ ಕವಿ ರಾಮಪ್ರಸಾದ್

ರಾಮಪ್ರಸಾದರು ಪ್ರವೃತ್ತಿಯಿಂದ ಮುಕ್ತಕ ಕವಿ. ಮುಕ್ತಕ ಮಾಲೆ, ಮುಕ್ತಕ ಡಿಂಡಿಮ, ಮುಕ್ತಕ ಮುಖಗಳು ಮುಂತಾದ ಪುಸ್ತಕಗಳನ್ನು ಅವರು ರಚಿಸಿ ಸಂಪಾದಿಸಿ ಪ್ರಕಟಿಸಿದ್ದಾರೆ. ಮುಕ್ತಕ ಸಾಹಿತ್ಯ ಅಕಾಡೆಮಿಯ ಸ್ಥಾಪಕಾಧ್ಯಕ್ಷರಾಗಿ ಆ ಪ್ರಕಾರದ ಸಾಹಿತ್ಯಕ್ಕೆ ಅವರು ಮಾಡಿರುವ ಸೇವೆ ಅನನ್ಯ ಸಾಧ್ಯ. ಅವರ ಪ್ರೋತ್ಸಾಹದಿಂದ ನೂರಾರು ಕವಿಗಳು, ಕವಯಿತ್ರಿಯರು ಇಂದು ಕನ್ನಡ ಮುಕ್ತಕ ರಚನೆಯಲ್ಲಿ ತೊಡಗಿ ಶ್ಲಾಘನೀಯ ಸಿದ್ಧಿಯನ್ನು ಪಡೆದು ಹೆಸರನ್ನು ಗಳಿಸಿದ್ದಾರೆ.

ಮುಕ್ತಕ ಎಂದರೆ ಸ್ವತಂತ್ರವಾಗಿ, ಸಂದರ್ಭದ ನಿರ್ಬಂಧವಿಲ್ಲದೆ ಸ್ವಾರಸ್ಯಪೂರ್ಣವಾದ ಚಮತ್ಕಾರವಾದ, ಅನುಭವಪೂರ್ಣವಾದ ಅರ್ಥವನ್ನು ಕೊಡುವ ಪದ್ಯ, ಅದು ಯಾವುದೇ ಛಂದಸ್ಸಿನಲ್ಲಿರಬಹುದು. ಸಂಸ್ಕೃತದಲ್ಲಿ ಭರ್ತೃಹರಿಯ ನೀತಿ ಶತಕ, ಶೃಂಗಾರ ಶತಕ, ವೈರಾಗ್ಯ ಶತಕ, ಜಗನ್ನಾಥ ಪಂಡಿತ ರಾಜನ ಭಾಮಿನೀ ವಿಲಾಸ ಮುಂತಾದ ಹಲವಾರು ಮುಕ್ತಕ ಸಂಗ್ರಹಗಳಿವೆ. ಕನ್ನಡದಲ್ಲಿ ಸರ್ವಜ್ಞನ ವಚನಗಳು, ಸೋಮೇಶ್ವರ ಶತಕ ಇವೆಲ್ಲ ಮುಕ್ತಕಗಳೇ. ಆಧುನಿಕ ಕಾಲದಲ್ಲಿ (20ನೆಯ ಶತಮಾನದಲ್ಲಿ) ದಾರ್ಶನಿಕ ಕವಿ ಡಿ.ವಿ.ಜಿ. ಮಂಕುತಿಮ್ಮನ ಕಗ್ಗವನ್ನು ರಚಿಸಿ ಮುಕ್ತಕ ಸಾಹಿತ್ಯದ ಹೊಸ ಮನ್ವಂತರವನ್ನೇ ಆರಂಭಿಸಿದರು. ಅವರ ನಂತರ ಕುಮಾರ ನಿಜಗುಣರು, ಪ್ರೇಮಕವಿ ಕೆ.ಸಿ.ಶಿವಪ್ಪ ಮುಂತಾದವರು ಈ ಪರಂಪರೆಯನ್ನು ಮುಂದುವರೆಸಿದರು.



ಎಸ್.ರಾಮಪ್ರಸಾದ್

ನಿರ್ದಿಷ್ಟ ಛಂದಸ್ಸಿನ ನಿರ್ಬಂಧವಿಲ್ಲದೆ, ದ್ವಿತೀಯಾಕ್ಷರ ಪ್ರಾಸದ ತ್ರಾಸವಿಲ್ಲದೆ ನಾನಾ ವಿಷಯಗಳ ಮೇಲೆ ಶ್ರೀ ಎಸ್.ರಾಮಪ್ರಸಾದರು ರಚಿಸಿರುವ ಮುಕ್ತಕಗಳು ಗುಳಿಗೆಗಳು. ಈ ಶೀರ್ಷಿಕೆಯಲ್ಲಿ ಆಗಲೇ ಒಂದು ಪುಸ್ತಕವನ್ನು ಅವರು ಪ್ರಕಟಿಸಿರುವುದರಿಂದ ಈಗ ಬೆಳಕಿಗೆ ತರುತ್ತಿರುವ ಪುಸ್ತಕವನ್ನು ಗುಳಿಗೆಗಳು–2 ಎಂದು ಹೆಸರಿಸಿದ್ದಾರೆ. ಗುಳಿಗೆ ಎಂಬುದು ಘುಟಿಕಾ ಎಂಬ ಸಂಸ್ಕೃತ ಶಬ್ಧದ ತದ್ಭವ. ಸಣ್ಣ ಮಾತ್ರೆಯ ರೂಪದ ಔಷಧಕ್ಕೆ ಗುಳಿಗೆ ಎಂದು ಹೆಸರು. ಜೀವನದ ಅನೇಕ ನೋವುಗಳೆಂಬ ರೋಗಗಳಿಗೆ ಈ ಮುಕ್ತಕಗಳು ಔಷಧವಾಗುವುದು ಎಂಬ ಕಾರಣದಿಂದ 'ಗುಳಿಗೆಗಳು' ಎಂಬ ಹೆಸರು ಸಾರ್ಥಕವಾಗಿದೆ. ಇಲ್ಲಿರುವ ಕೆಲವು ಗುಳಿಗೆಗಳು ಲೇಖಕ ರಾಮಪ್ರಸಾದರಿಗೆ ಅತ್ಯಂತ ಆತ್ಮೀಯರಾಗಿದ್ದವರನ್ನು ಕುರಿತದ್ದಾಗಿವೆ. ತಮ್ಮ ಕನ್ನಡ ಪ್ರೀತಿಯಿಂದ ವಿಶ್ವವಿಖ್ಯಾತರಾಗಿರುವ ಹಿರೇಮಗಳೂರು ಕಣ್ಣನ್ ಅವರನ್ನು ಕುರಿತು ಬರೆದ ಗುಳಿಗೆಯನ್ನು ನೋಡೋಣ–

ಇಂಥವರ ಭುವಿಗೆ ಕಳುಹಿಸಿದವ ನೀನೆಂಥವನು
ಚಿಂತನ ಮಂಥನಗಳ ಮೇಳೈಕೆಯನು ಮಾಡುವವನಿವನೆಂಥವನು
ಮಂಥನಶೀಲ ಮನಸಿಗೆ ಗ್ರಾಸವನೊದಗಿಸುತಲಿಹನು
ಎಂಥ ಸೃಷ್ಟಿ ನಿನ್ನದು ಎಂಬುದನರಿಯಲು ಪರಿತಪಿಸುವೆ ನಾನು
ಬಂಧನಗೆ ಸಹಾಯವೆಸಗಯ್ಯ ಗುಳಿಗೆ ಸಿದ್ದೇಶ್ವರಾ॥

ಕನ್ನಡದ ಪೂಜಾರಿ ಕಣ್ಣನ್ ಅವರು ದೇವತಾರ್ಚನೆಯನ್ನೇ ಮಾಡಲಿ, ಭಾಷಣವನ್ನೇ ನೀಡಲಿ, ಹರಟೆಯಲ್ಲಿ ಕಾಲವನ್ನು ದೂಡಲಿ, ಎಲ್ಲರನ್ನೂ ಹೊಸ ಚಿಂತನಕ್ಕೆ ಹಚ್ಚುತ್ತಾರೆಂಬುದು ಸಮಸ್ತ ಕನ್ನಡಿಗರಿಗೂ ಗೊತ್ತು. ಕನ್ನಡಿಗರ ಸ್ವಾಭಿಮಾನವನ್ನು ಜಾಗೃತಗೊಳಿಸಲು ದೇವರು ಹಿರೇಮಗಳೂರು ಕಣ್ಣನ್ ಅವರನ್ನು ಕನ್ನಡ ನಾಡಿಗೆ ಕಳುಹಿಸಿದ್ದಾನೆ ಎಂಬ ಕಲ್ಪನೆ ಇಲ್ಲಿ ಹುದುಗಿದೆ.

ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿ ಕನ್ನಡ ವಿಶ್ವಕೋಶದ ವಿಜ್ಞಾನ ಸಂಪಾದಕರಾಗಿ ಕೆಲಸ ಮಾಡುತ್ತಿದ್ದಾಗ ಅಲ್ಲಿ ಅವರಿಗೆ ಸಹೋದ್ಯೋಗಿಯಾಗಿದ್ದವರು ದಿ. ಜಿ.ಟಿ. ನಾರಾಯಣರಾವ್. ಅವರನ್ನು ಕುರಿತ ಗುಳಿಗೆ ಇಂತಿದೆ–

ವಿಜ್ಞಾನ ಸಂಗೀತ ಸಾಹಿತ್ಯಗಳೊಂದಿಗೆ ಮೇಳೈಸಿಹುದು
ಮತ್ತೊಂದು ಮೂರಕ್ಷರದ ನುಡಿ ಜಿಟಿಎನ್
ಅಜ್ಞಾನ ಮಾರ್ಗಗಳ ದೂರವಿಡುವ ಪರಿಯಲಿ ಮೂಡಿಹುದು
ಋತದ ಪರಿವೇಷ ಅವರ ಸತ್ಯದ ವಾಕ್ಕಿನಲಿ
ಸುಜ್ಞಾನಮೂರುತಿ ಅವರೆಂದು ಅರುಹುದು ಈ ಜಗವು
ಅಲ್ಲವೇ ನೀ ಹೇಳು ಗುಳಿಗೆ ಸಿದ್ದೇಶ್ವರಾ

ಇದರಲ್ಲಿ ಜಿಟಿಎನ್ ಅವರ ವ್ಯಕ್ತಿತ್ವ ಸೊಗಸಾಗಿ ಮೂಡಿ ಬಂದಿವೆ. ಅವರಿಗೆ ಅತ್ಯಂತ ಪ್ರಿಯವಾಗಿದ್ದ ಮೂರು ವಿಜ್ಞಾನ, ಸಂಗೀತ ಮತ್ತು ಸಾಹಿತ್ಯ. ಅವರು 'ಸುಧಾ' ವಾರಪತ್ರಿಕೆಯಲ್ಲಿ ಬರೆಯುತ್ತಿದ್ದ ಅಂಕಣ 'ನಕ್ಷತ್ರ ವೀಕ್ಷಣೆ' ಎಲ್ಲ ಕನ್ನಡಿಗರಿಗೆ ಪ್ರಿಯವಾಗಿತ್ತು. ಮೈಸೂರಿನಲ್ಲಿ ಎಲ್ಲಿ ಖ್ಯಾತ ಸಂಗೀತಗಾರರು ಕಛೇರಿ ನಡೆದರೂ ಜಿಟಿಎನ್ ಅಲ್ಲಿ ಹಾಜರಾಗಿರುತ್ತಿದ್ದರು. ಸಾಹಿತ್ಯದ ಮರ್ಮವನ್ನು ಅರಿತಿದ್ದ ಅವರು ಮಾತನಾಡಿದರೆ ಸಾಕು, ಎಲ್ಲರೂ ಕಿವಿಗೊಟ್ಟು ಕೇಳಬೇಕೆನಿಸುವಂತಿರುತ್ತಿತ್ತು. ಅವರು ಯಾವ ಮುಲಾಜೂ ಇಲ್ಲದೆ ಸತ್ಯವನ್ನು ಹೇಳುತ್ತಿದ್ದರು. ಅವರನ್ನು ಕುರಿತ ಈ ಗುಳಿಗೆ ಪದ್ಯ ಕರಾರುವಾಕ್ಕಾಗಿದೆ.

ಲೇಖಕ ರಾಮಪ್ರಸಾದರಿಗೆ ಪುಸ್ತಕದ ಬಗೆಗಿರುವ ಮಮತೆ ಒಂದು ಗುಳಿಗೆಯಲ್ಲಿ ಮೂಡಿದೆ–

ಪುಸ್ತಕದಲಿ ಅಡಗಿಹುದಾ ವಿಶ್ವದ ಸುಜ್ಞಾನವು
ಪುಸ್ತಕದಲಿ ಇಡುತಲಿರೆ ಮನಕೆ ಹೋಗುವುದು ತಿಳಿವು
ಕಸರತ್ತನು ಒದಗಿಪುದು ಚಿಂತಿಪ ಮನಕೆ ಜ್ಞಾನದಾಹವು
ಬೇಸರವನು ಕಳೆಯುವುದು ಒದಗುವ ಅನವರತ ಗ್ರಾಹವು
ದೇಶವನೇ ತೊರೆದರೂ ಬಿಡಲೊಲ್ಲೆ ಪುಸ್ತಕವ
ಗುಳಿಗೆ ಸಿದ್ದೇಶ್ವರಾ

ನಮಗೆ ಬಂದಿರುವ ತಿಳಿವಿನಲ್ಲಿ ನೂರಕ್ಕೆ ತೊಂಬತ್ತು ಭಾಗ ಪುಸ್ತಕಗಳಿಂದ ಎಂಬುದು ನಿತ್ಯಸತ್ಯ. ಋಷಿಗಳ, ಆಚಾರ್ಯರ, ವಿಜ್ಞಾನಿಗಳ ಚಿಂತನ ತರಂಗಗಳು ನಮಗೆ ತಲುಪಿರುವುದು ಪುಸ್ತಕಗಳಿಂದಲೇ. A good book is the best friend ಎಂಬುದಿಲ್ಲಿ ಚೆನ್ನಾಗಿ ಪ್ರತಿಬಿಂಬಿತವಾಗಿದೆ.

ಬಿಡಿಗವನಗಳು ಎಂಬ ಭಾಗದಲ್ಲಿ ಜಾತ್ಯತೀತ ರಾಷ್ಟ್ರ ಎಂಬುದನ್ನು ಶ್ರೀರಾಮಪ್ರಸಾದರು ವಿಡಂಬಿಸಿ ಹೀಗೆಂದಿದ್ದಾರೆ–

ನಮ್ಮದು ಜಾತ್ಯತೀತ ರಾಷ್ಟ್ರ
ಇದನ್ನು ಒತ್ತಿ ಒತ್ತಿ ಹೇಳುವುದೇ ನಮ್ಮ ಪಾತ್ರ
ಎಂದೇ ನಾವು ಕೇಳುವೆವು ನಿಮ್ಮ ಜಾತಿ ಯಾವುದೆಂದು
ಅದರಲ್ಲೂ ವರ್ಗ ಯಾವುದು, ಎ, ಬೀ, ಸೀ, ಡಿ
ಯಾವುದೆಂದು. ಹೀಗುಂಟು ನಮ್ಮ ಜಾತ್ಯತೀತ ರಾಷ್ಟ್ರ
ಎಂದೇ ಹೇಳುವೆವು ಏನೆಂದು!
ಜಾತಿಯಿಂದಲೇ ಇಹವು ಜಾತಿಯಿಂದಲೇ ಪರವು
ಜಾತಿಯಿಂದಲೇ ಸಕಲ ಸಂಪದವು
ಜಾತಿ ಇಲ್ಲದೊಡೆ ಎಲ್ಲವೂ ಹಾನಿಯಾಗುವುದಯ್ಯ ಎಂದು.

ಹೀಗೆ ಲೇಖಕರು ತಮ್ಮ ಅನುಭವದ ಸಾರವನ್ನು ಭಟ್ಟಿ ಇಳಿಸಿ ಈ ಗುಳಿಗೆಗಳಲ್ಲಿ ನೀಡಿದ್ದಾರೆ. ಪುಸ್ತಕದ ಆರಂಭದಲ್ಲಿ ಶ್ರೀ ಎಸ್. ರಾಮಪ್ರಸಾದ್ ಅವರನ್ನು ಕುರಿತ ಪ್ರಶಂಸಾ ಮುಕ್ತಕಗಳನ್ನು ಕೊಡಲಾಗಿದೆ. ಇವುಗಳನ್ನು ರಚಿಸಿ ಕೊಟ್ಟಿರುವವರು ಮುಕ್ತಕ ಕವಿ ಶ್ರೇಷ್ಠ ಎಂ. ಮುತ್ತುಸ್ವಾಮಿ

ನಾಮ ಧರಿಸಿದ ಯೋಗಿ ಬದುಕಿನಲಿ ಕವಿಯಾಗಿ
ರಾಮಪ್ರಭೆಯು ಕಂಪು ಚೆಲ್ವುದಿಂದು.
ಶ್ಯಾಮನನು ನೆನೆಯುತ್ತ ರಾಮ್‌ಪ್ರಸಾದ್ ಚರಣಕ್ಕೆ
ನೇಮದಿಂದ ಪೊಡಮಡುವೆ ಮುದ್ದುಕೃಷ್ಣ

ಎಂದು ಅವರು ತಮ್ಮ ಆದರಾತಿಶಯವನ್ನು ಮೆರೆಸಿದ್ದಾರೆ. ಮೈಸೂರು ಸಾಹಿತ್ಯ ದಾಸೋಹದ ಸಂಚಾಲಕರೂ ಲೇಖಕರೂ ಆದ ಶ್ರೀಮತಿ ಪದ್ಮಾ ಆನಂದ್ ಉತ್ತಮ ಮುನ್ನುಡಿಯನ್ನು ಬರೆದು ರಾಮಪ್ರಸಾದ್ ಅವರಿಂದ ಮತ್ತಷ್ಟು ಮೌಲ್ಯಯುತ ಕೃತಿಗಳು ಬರಲಿ ಎಂದು ಹಾರೈಸಿ ಶುಭವನ್ನು ಕೋರಿದ್ದಾರೆ.

ಜ್ಞಾನವಿಜ್ಞಾನಗಳ ಸಂಗಮವೆ ತಾವಾಗಿ
ಸ್ವಾನುಭವದಿಂ ಸಕಲ ಜಗವನರಿತು
ಮಾನಾವಮಾನಗಳ ಸಮಚಿತ್ತದಿಂ ನೋಳ್ಪ
ಧ್ಯಾನದೊಳು ಹರಿಕಾಣ್ಬ ಯೋಗಿಯಿವರು.
ಸಾಮಾನ್ಯ ಮಾನವರ ಕರುಣೆಯಿಂ ನೋಡುವರು
ಕಾಮಾದಿ ಶತ್ರುಗಳ ದೂರ ದೂಡುವರು
ಸಾಮದಿಂದಲೇ ಸಕಲ ಕಾರ್ಯಗಳ ಸಾಧಿಸುವ
ರಾಮಪ್ರಸಾದರೇ ಸತತ ಗೆಲ್ಗೆ
ಎಂದು ನಾವೂ ಹಾರೈಸೋಣ.

ರಾಹುಲ್ ಗಾಂಧಿ ಮೀಸಲಾತಿ ವಿರೋಧಿ ಹೇಳಿಕೆ ವಿರುದ್ಧ ಬಿಜೆಪಿ ಪ್ರತಿಭಟನೆ



ಮೈಸೂರಲ್ಲಿ ಬಿಜೆಪಿ ಕಾರ್ಯಕರ್ತರು ನಡೆಸಿದ ಪ್ರತಿಭಟನಾ ಧರಣಿಯಲ್ಲಿ ಮಾಜಿ ಸಚಿವ ಎನ್.ಮಹೇಶ್ ಮಾತನಾಡಿದರು.

ಮೈಸೂರು,ಸೆ.24(ಬಿಎಲ್‌ಯು)– ಮೀಸಲಾತಿ ರದ್ದು ಮಾಡುವ ಬಗ್ಗೆ ರಾಹುಲ್ ಗಾಂಧಿ ನೀಡಿರುವ ಹೇಳಿಕೆ ವಿರೋಧಿಸಿ ಬಿಜೆಪಿ ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ಮೋರ್ಚಾ ಕಾರ್ಯಕರ್ತರು ನಗರದಲ್ಲಿ ಇಂದು ಪ್ರತಿಭಟನೆ ನಡೆಸಿದರು.

ನಗರದ ಪುರಭವನದ ಆವರಣದಲ್ಲಿ ಪ್ರತಿಭಟನಾ ಧರಣಿ ನಡೆಸಿದ ಬಿಜೆಪಿ ಕಾರ್ಯಕರ್ತರು ರಾಹುಲ್ ಗಾಂಧಿಯ ಮೀಸಲಾತಿ ವಿರೋಧಿ ನಡೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್‌ನವರು ದಲಿತರಿಗೆ ಅನ್ಯಾಯ ಮಾಡುತ್ತಿದ್ದು, ಮೀಸಲಾತಿ ರದ್ದು ಮಾಡುವುದಾಗಿ ಹೇಳಿಕೆ ನೀಡಿರುವ ರಾಹುಲ್‌ಗಾಂಧಿ ಮನಃಸ್ಥಿತಿ ಇದಕ್ಕೆ ಸ್ಪಷ್ಟ ಉದಾಹರಣೆ ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಆರೋಪಿಸಿದರು.

ಭಾರತದಲ್ಲಿ ದಲಿತರಿಗೆ ಬೆಂಬಲವಾಗಿರುವುದಾಗಿ ಮಾತನಾಡುವ ರಾಹುಲ್ ಗಾಂಧಿ ವಿದೇಶದಲ್ಲಿ ದಲಿತ ವಿರೋಧಿ ಹೇಳಿಕೆ ನೀಡುತ್ತಾರೆ ಎಂದು ಮಾಜಿ ಸಚಿವ ಎನ್.ಮಹೇಶ್ ಆಪಾದಿಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ಎಸ್‌ಸಿ ಮೋರ್ಚಾ ಅಧ್ಯಕ್ಷ ಶೈಲೇಂದ್ರ, ರಾಹುಲ್ ಗಾಂಧಿ ಹೇಳಿಕೆಯಿಂದ ಕಾಂಗ್ರೆಸ್ ಪಕ್ಷದ ಅಹಿಂದ ವಿರೋಧಿ ಮುಖವಾಡ ಕಳಚಿದೆ. ಇದರ ಜೊತೆಗೆ ಕಾಂಗ್ರೆಸ್ ಪಕ್ಷದ ದಲಿತ ವಿರೋಧಿ ನಡೆಯನ್ನು ತೋರಿಸುತ್ತದೆ ಎಂದು ದೂರಿದರು. ಶಾಸಕ ಟಿ.ಎಸ್.ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಬಿಜೆಪಿ ಮುಖಂಡ ಮಹದೇವಯ್ಯ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಜವಾಹರ ನವೋದಯ ವಿದ್ಯಾಲಯದಲ್ಲಿ 6ನೇ ತರಗತಿ ಪ್ರವೇಶಾತಿ ಆರಂಭ

ಮೈಸೂರು, ಸೆ.24–ಜವಾಹರ ನವೋದಯ ವಿದ್ಯಾಲಯದಲ್ಲಿ 2025–26ನೇ ಶೈಕ್ಷಣಿಕ ಸಾಲಿನ 6ನೇ ತರಗತಿ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಯ್ಕೆ ಬಯಸುವ ಅಭ್ಯರ್ಥಿಗಳು 2024–25ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ಸರ್ಕಾರಿ, ಅನುದಾನಿತ, ಸರ್ಕಾರಿ ಅನುಮತಿ, ಮಾನ್ಯತೆ ಪಡೆದಿರುವ ಮೈಸೂರು ಜಿಲ್ಲೆಯ ಶಾಲೆಯಲ್ಲಿ ಅಧ್ಯಯನ ಮಾಡುತ್ತಿರಬೇಕು. ಅಭ್ಯರ್ಥಿಗಳು ಮೈಸೂರು ಜಿಲ್ಲೆಯ ನಿವಾಸಿಯಾಗಿದ್ದು, 01–05–2013ರಿಂದ 31–07–2015ರೊಳಗೆ ಜನಿಸಿರಬೇಕು. ಅರ್ಜಿ ಸಲ್ಲಿಸಲು ಅ.7 ಕೊನೆಯ ದಿನ. 18–01–2025ರಂದು ಪರೀಕ್ಷೆ ನಡೆಯಲಿದೆ. ಮಾಹಿತಿಗಾಗಿ www.navodaya.gov.in ವೆಬ್‌ಸೈಟ್ ಅಥವಾ ಸಹಾಯವಾಣಿ ಸಂಖ್ಯೆ: 0821–2970040 ಅನ್ನು ಸಂಪರ್ಕಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಮರು ಮದುವೆ' ಉಚಿತ ನೋಂದಣಿ ಕಾರ್ಯಕ್ರಮ

ಮೈಸೂರು,ಸೆ.24–ನಾಡಹಬ್ಬ ದಸರಾ ಪ್ರಯುಕ್ತ ಮೈಸೂರಿನ ಗೋಕುಲ ಮ್ಯಾಟ್ರಿಮೋನಿಯಲ್ ಸರ್ವೀಸಸ್ ಮತ್ತು ಲಕ್ಷ್ಮಿ ಮ್ಯಾಟ್ರಿಮೋನಿಯಲ್ ಸಹಯೋಗದೊಂದಿಗೆ ಮರು–ಮದುವೆ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಮೈಸೂರು ನಗರದ ವಧು–ವರರ ಮಾಹಿತಿ ನೋಂದಣಿ ಮಾಡಿಸಲು ಎರಡು ಕೇಂದ್ರಗಳನ್ನು (ರಾಮಸ್ವಾಮಿ ಸರ್ಕಲ್‌ನಲ್ಲಿರುವ ಲಕ್ಷ್ಮಿ ಟ್ರಾವೆಲ್ ಡೆಸ್ಕ್ ಕಚೇರಿ, ಮೊ.89512–75148), (ಕುವೆಂಪುನಗರದ ಲೇಖನ ಪಾರ್ಟಿ ಹಾಲ್ ಕಚೇರಿ, ಮೊ.95911–63666) ತೆರೆಯಲಾಗಿದೆ. ಒಕ್ಕಲಿಗ ಗೌಡ, ವೀರಶೈವ ಲಿಂಗಾಯಿತ, ಹಾಲು ಮತ ಕುರುಬ ಜನಾಂಗದ ವಿಧವೆ, ವಿಧುರ ಅಥವಾ ವಿಚ್ಛೇದಿತರಿಗೆ ಮಾತ್ರ ನೋಂದಣಿಗೆ ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗೆ ಎಸ್.ಚಂದನ್, ಮೊ. 83174–14184 ಸಂಪರ್ಕಿಸಬಹುದು.

ರಾಜ್ಯಾದ್ಯಂತ ನಾಳೆಯಿಂದ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರ



ಮೈಸೂರು ಜಿಲ್ಲೆಯ ಗ್ರಾಮ ಆಡಳಿತ ಅಧಿಕಾರಿಗಳು ಮಂಗಳವಾರ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಮೈಸೂರು, ಸೆ.24(ಆರ್‌ಕೆ)–ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗ್ರಾಮ ಆಡಳಿತ ಅಧಿಕಾರಿಗಳು (Village Accountants) ಸೆ. 26ರಿಂದ ರಾಜ್ಯದಾದ್ಯಂತ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಿದ್ದಾರೆ.

ಚಿತ್ರದುರ್ಗದಲ್ಲಿ ಸೆಪ್ಟೆಂಬರ್ 22 ರಂದು ನಡೆದ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಕಾರ್ಯಕಾರಿಣಿ ಸಭೆಯಲ್ಲಿ ಮುಷ್ಕರ ನಡೆಸಲು ನಿರ್ಣಯ ಕೈಗೊಂಡ ಹಿನ್ನೆಲೆಯಲ್ಲಿ ಇಂದು ಮೈಸೂರು ಜಿಲ್ಲಾ ಘಟಕದ ಪದಾಧಿಕಾರಿಗಳು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅವರಿಗೆ ಮುಷ್ಕರ ಸಂಬಂಧ ಮನವಿ ಪತ್ರ ಸಲ್ಲಿಸಿದರು.

ಕಂದಾಯ ಇಲಾಖೆಯಿಂದ ಅಭಿವೃದ್ಧಿಪಡಿಸಿರುವ 17 ಮೊಬೈಲ್/ವೆಬ್ ತಂತ್ರಾಂಶಗಳ ಮೂಲಕ ಕರ್ತವ್ಯ ನಿರ್ವಹಿಸುವಂತೆ ಒತ್ತಡ ಹೇರುತ್ತಿದೆಯಾದರೂ, ಮೊಬೈಲ್, ಲ್ಯಾಪ್‌ಟಾಪ್, ಇಂಟರ್‌ನೆಟ್, ಸ್ಕ್ಯಾನರ್ ಸಾಧನಗಳನ್ನು ಒದಗಿಸಿಲ್ಲ. ಪರಿಣಾಮ ಆಧಾರ್ ಸೀಡ್, ಲ್ಯಾಂಡ್ ಬೀಟ್, ಬಗರ್‌ಹುಕುಂ, ಹಕ್ಕು ಪತ್ರ ನಮೂನೆ 1–5 ವೆಬ್ ಅಪ್ಲಿಕೇಷನ್, ಪೌತಿ ಆಂದೋಲನ ಆ್ಯಪ್ ಕಾರ್ಯವನ್ನು ಸೆಪ್ಟೆಂಬರ್ 22ರಿಂದ ಸ್ಥಗಿತಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ತಮಗೆ ಕಚೇರಿ, ಮೂಲ ಸೌಲಭ್ಯಗಳನ್ನು ನೀಡದೇ ಪ್ರಗತಿ ಸಾಧಿಸುವಂತೆ ಇಲಾಖೆ ಅಧಿಕಾರಿಗಳು ಒತ್ತಡ ಹೇರುತ್ತಿರುವುದರಿಂದ ತಮಗೆ ಮಾನಸಿಕ ಹಿಂಸೆಯಾಗುತ್ತಿರುವುದರಿಂದ ತಮ್ಮ ಬೇಡಿಕೆ ಈಡೇರಿಸುವವರೆಗೂ ತಾವು ಮುಷ್ಕರ ನಡೆಸುವುದಾಗಿ ಜಿಲ್ಲಾಧಿಕಾರಿಗಳ ಮೂಲಕ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಗುತ್ತಿಗೆ ರದ್ದುಪಡಿಸಿ ಕಚೇರಿ ವೇತನಕ್ಕೆ ಪಾಲಿಕೆ ಒಳಚರಂಡಿ ಸಹಾಯಕರ ಆಗ್ರಹ

ಮೈಸೂರು,ಸೆ.24(ಆರ್‌ಕೆ)–ತುಂಡು ಗುತ್ತಿಗೆ ವ್ಯವಸ್ಥೆ ರದ್ದುಪಡಿಸಿ ಕಚೇರಿ ವೇತನ ನೀಡುವಂತೆ ಮೈಸೂರು ಮಹಾನಗರಪಾಲಿಕೆ ಒಳಚರಂಡಿ ಸಹಾಯಕರು ಹಾಗೂ ಪೌರಕಾರ್ಮಿಕರ ಸಂಘದ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅವರನ್ನು ಭೇಟಿ ಮಾಡಿ, ಮನವಿ ಪತ್ರ ಸಲ್ಲಿಸಿದ ಒಳಚರಂಡಿ ಸಹಾಯಕರು, ಪಾಲಿಕೆಯ ವಾಣಿವಿಲಾಸ ವಾಟರ್ ವರ್ಕ್ಸ್, ಒಳಚರಂಡಿ ವಿಭಾಗದಲ್ಲಿ ಕೆಲಸ ಮಾಡುತ್ತಿರುವ 231 ಮಂದಿ ಕಾರ್ಮಿಕರೆಂದು ಪರಿಗಣಿಸಿ ಒಳಚರಂಡಿ ಸಹಾಯಕರೆಂಬ ಪದನಾಮ ಬಳಸಲಾಗುತ್ತಿದೆಯಾದರೂ, ತುಂಡು ಗುತ್ತಿಗೆ ಆಧಾರದಲ್ಲೇ ಮುಂದುವರಿಸಲಾಗುತ್ತಿದೆ ಎಂದಿದ್ದಾರೆ. ಗುತ್ತಿಗೆ ಪದ್ಧತಿ ರದ್ದುಗೊಳಿಸಿ ನೇರ ವೇತನವನ್ನು ಕಚೇರಿಯಿಂದಲೇ ನೀಡಬೇಕು. 10 ಲಕ್ಷ ರೂ. ಜೀವ ವಿಮೆ ಮಾಡಿಸಬೇಕು. ಮೃತರ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದಲ್ಲಿ ಉದ್ಯೋಗ ನೀಡಬೇಕೆಂದು ಒತ್ತಾಯಿಸಿದ ಅವರು, ತಮ್ಮ ಬೇಡಿಕೆ ಈಡೇರಿಸದಿದ್ದರೆ ಕೆಲಸ ಬಹಿಷ್ಕರಿಸಿ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಪ್ರಾಸಿಕ್ಯೂಷನ್‌ಗೆ ಆದೇಶ ನೀಡಿದ ರಾಜ್ಯಪಾಲರ ಕ್ರಮ ಎತ್ತಿ ಹಿಡಿದ ಹೈಕೋರ್ಟ್

ಸಿಎಂ ಸಿದ್ದರಾಮಯ್ಯ ಕೂಡಲೇ ರಾಜೀನಾಮೆ ನೀಡಬೇಕು

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹ



ಬೆಂಗಳೂರು, ಸೆ.24(ಕೆಎಂಶಿ)– ಮುಡಾ ಹಗರಣದಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ರಾಜ್ಯಪಾಲರ ಕ್ರಮ ಎತ್ತಿಹಿಡಿದ ರಾಜ್ಯ ಹೈಕೋರ್ಟ್ ತೀರ್ಪು ಗೌರವಿಸಿ, ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ಆಗ್ರಹಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾ ಹಗರಣದಲ್ಲಿ ರಾಜ್ಯಪಾಲರ ಕ್ರಮವನ್ನು ರಾಜ್ಯ ಹೈಕೋರ್ಟ್ ಎತ್ತಿಹಿಡಿದು, ಸಿದ್ದರಾಮಯ್ಯ ಅವರ ಅರ್ಜಿ ವಜಾ ಮಾಡಿ, ಕಾನೂನಿನ ಮುಂದೆ ಎಲ್ಲರೂ ಒಂದೇ ಎಂದು ತಿಳಿಸಿದೆ.

ಹೈಕೋರ್ಟ್‌ನಲ್ಲಿ ಸುದೀರ್ಘ ವಾದ–ಪ್ರತಿವಾದದ ಬಳಿಕ ತೀರ್ಪು ಹೊರಬಿದ್ದಿದೆ, ಕಾಂಗ್ರೆಸ್ಸಿಗರು ಗೌರವಾನ್ವಿತ ರಾಜ್ಯಪಾಲರು ಮತ್ತು ರಾಜಭವನವನ್ನು ಕೇಂದ್ರದ ಏಜೆಂಟ್ ಎಂದು ಆಕ್ಷೇಪಿಸಿದ್ದರು.

ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಳೆದ ಕೆಲವು ತಿಂಗಳಿನಿಂದ ಬಿಜೆಪಿ ನಿರಂತರ ಹೋರಾಟ ನಡೆಸಿತ್ತು, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಭ್ರಷ್ಟಾಚಾರ ವಿರುದ್ಧವೂ ಹೋರಾಟ ಮಾಡಿದ್ದೆವು ಎಂದರು.

ಸ್ವತಃ ಮುಖ್ಯಮಂತ್ರಿ ಅವರ ಕುಟುಂಬವೇ ಫಲಾನುಭವಿಗಳಾಗಿದೆ. ಮೈಸೂರಿನ ಮುಡಾ ಹಗರಣ ವಿರುದ್ಧ ಬಿಜೆಪಿ–ಜೆಡಿಎಸ್ ಒಟ್ಟಾಗಿ ಬೆಂಗಳೂರು–ಮೈಸೂರು ಪಾದಯಾತ್ರೆ ನಡೆಸಿ ಯಶಸ್ವಿ ಹೋರಾಟ ಮಾಡಿತ್ತು.

ಭ್ರಷ್ಟಾಚಾರ ರಹಿತ ಆಡಳಿತ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದರು. ಭ್ರಷ್ಟಾಚಾರ ಕಳಂಕ ಹೊತ್ತ ಅವರು, ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಕೂಡಲೇ ರಾಜೀನಾಮೆ ನೀಡಬೇಕು. ನೈತಿಕ ಹೊಣೆ ಹೊತ್ತು ಅವರು ರಾಜೀನಾಮೆ ನೀಡುವ ವಿಶ್ವಾಸವಿದೆ.

ಮುಡಾ ವಿಚಾರದಲ್ಲಿ ತಮ್ಮ ಪಾತ್ರ ಇಲ್ಲ ಎಂದು ಮುಖ್ಯಮಂತ್ರಿ ಹೇಳಿದ್ದರು, ಹೈಕೋರ್ಟ್ ಸ್ಪಷ್ಟ ಮಾತುಗಳಲ್ಲಿ ಹೇಳಿದೆ, ಸಿದ್ದರಾಮಯ್ಯ ರಾಜೀನಾಮೆ ಕೊಡಲೇಬೇಕು. ನಮ್ಮ ಹೋರಾಟಕ್ಕೆ ಮೊದಲ ಜಯ ಸಿಕ್ಕಿದೆ, ಪಕ್ಷದ ಮುಂದಿನ ನಡೆ ಕುರಿತು ಪ್ರಮುಖರು ಹಾಗೂ ಹಿರಿಯರ ಜೊತೆ ಚರ್ಚಿಸಿ ನಿರ್ಧರಿಸಲಾಗುವುದು ಎಂದರು.

ಬಿಜೆಪಿ–ಜೆಡಿಎಸ್ ಸೇಡಿನ ರಾಜಕೀಯದ ವಿರುದ್ಧ ಹೋರಾಟ



ಬೆಂಗಳೂರು, ಸೆ.24(ಕೆಎಂಶಿ)– ರಾಜಕೀಯ ಹೋರಾಟದಲ್ಲಿ ರಾಜ್ಯದ ಜನ ನನ್ನ ಹಿಂದೆ ಇದ್ದಾರೆ. ಅವರ ಆಶೀರ್ವಾದವೇ ನನಗೆ ಶ್ರೀರಕ್ಷೆ.

ಕಾನೂನು ಮತ್ತು ಸಂವಿಧಾನದಲ್ಲಿ ನನಗೆ ನಂಬಿಕೆ ಇದೆ. ಈ ಹೋರಾಟದಲ್ಲಿ ಅಂತಿಮವಾಗಿ ಸತ್ಯಕ್ಕೆ ಜಯ ಸಿಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅವಕಾಶ ಮಾಡಿಕೊಟ್ಟಿದ್ದನ್ನು ಹೈಕೋರ್ಟ್ ಎತ್ತಿ ಹಿಡಿದ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಇದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ಸೇಡಿನ ರಾಜಕೀಯದ ವಿರುದ್ಧದ ಹೋರಾಟ.

ಬಿಜೆಪಿ–ಜೆಡಿಎಸ್‌ನ ಸೇಡಿನ ರಾಜಕೀಯದ ವಿರುದ್ಧ ನಮ್ಮ ನ್ಯಾಯಾಂಗದ ಹೋರಾಟ ಮುಂದುವರಿಯಲಿದೆ, ನ್ಯಾಯಾಲಯದ ಮೇಲೆ ನಂಬಿಕೆ ಇದೆ ಎಂದಿದ್ದಾರೆ. ನಮ್ಮ ಪಕ್ಷದ ಎಲ್ಲ ಶಾಸಕರು, ನಾಯಕರು, ಕಾರ್ಯಕರ್ತರು ಹಾಗೂ ಕಾಂಗ್ರೆಸ್ ಹೈಕಮಾಂಡ್ ನನ್ನ ಪರವಾಗಿ ಭದ್ರವಾಗಿ ನಿಂತಿದ್ದು, ಕಾನೂನಿನ ಹೋರಾಟ ಮುಂದುವರಿಸುವಂತೆ ಉತ್ತೇಜನ ನೀಡಿದ್ದಾರೆ.

ನಾನು ಬಡವರ ಪರವಾಗಿದ್ದೇನೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿದ್ದೇನೆ ಎನ್ನುವ ಕಾರಣಕ್ಕಾಗಿ ನನ್ನ ವಿರುದ್ಧ ಬಿಜೆಪಿ, ಜೆಡಿಎಸ್ ರಾಜಕೀಯ ಪ್ರತೀಕಾರಕ್ಕೆ ಇಳಿದಿದೆ. ನನ್ನ 40 ವರ್ಷಗಳ ರಾಜಕೀಯ ಜೀವನದ ಉದ್ದಕ್ಕೂ ಇಂತಹ ಸೇಡು, ಸಂಚಿನ ರಾಜಕೀಯ ಎದುರಿಸಿದ್ದೇನೆ, ರಾಜ್ಯದ ಜನರ ಆಶೀರ್ವಾದ, ಹಾರೈಕೆಯ ಬಲದಿಂದ ಗೆಲ್ಲುತ್ತಾ ಬಂದಿದ್ದೇನೆ, ಈ ಹೋರಾಟವನ್ನು ಜನತೆಯ ಆಶೀರ್ವಾದದ ಬಲದಿಂದ ಗೆಲ್ಲುವ ವಿಶ್ವಾಸವಿದೆ.

ಮುಡಾ ಪ್ರಕರಣ ಒಂದು ನೆಪ ಅಷ್ಟೇ. ಬಡವರು ಮತ್ತು ಶೋಷಿತರ ಪರವಾಗಿರುವ ನಮ್ಮ ಸರ್ಕಾರದ ಯೋಜನೆಗಳನ್ನು ನಿಲ್ಲಿಸಬೇಕೆಂಬುದೇ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮುಖ್ಯ ಉದ್ದೇಶ.

ಮುಡಾ ಪ್ರಕರಣ ಸೃಷ್ಟಿಸಿ, ಅದರ ಮೂಲಕ ಸುಳ್ಳು ಆರೋಪಗಳನ್ನು ಮಾಡುತ್ತಿರುವವರ ಮುಖಗಳನ್ನು ಒಮ್ಮೆ ರಾಜ್ಯದ ಜನತೆ ಸರಿಯಾಗಿ ನೋಡಬೇಕೆಂದು ನಾನು ಮನವಿ ಮಾಡುತ್ತೇನೆ.

ನನ್ನ ರಾಜೀನಾಮೆ ಕೇಳುತ್ತಿರುವ ಇದೇ ನಾಯಕರು, ನಾನು ರಾಜ್ಯದ ಬಡವರು, ಶೋಷಿತರ ಪರವಾಗಿ ಜಾರಿಗೆ ತಂದಿದ್ದ ಯೋಜನೆಗಳನ್ನು ವಿರೋಧಿಸಿದವರೇ ಆಗಿದ್ದಾರೆ.

ಬಿಜೆಪಿ–ಜೆಡಿಎಸ್ ನಾಯಕರು ನಾನು ಮೊದಲ ಬಾರಿ ಮುಖ್ಯಮಂತ್ರಿಯಾಗಿದ್ದಾಗ ಜಾರಿಗೆ ತಂದಿದ್ದ ಅನ್ನಭಾಗ್ಯ, ಕ್ಷೀರ ಭಾಗ್ಯ, ಕ್ಷೀರ ಧಾರೆ, ವಿದ್ಯಾಸಿರಿ, ಕೃಷಿಭಾಗ್ಯ, ಪಶುಭಾಗ್ಯ, ಇಂದಿರಾ ಕ್ಯಾಂಟೀನ್ ಯೋಜನೆಗಳನ್ನು ವಿರೋಧಿಸಿದ್ದರು.

ಇಂದು ನನ್ನ ವಿರುದ್ಧ ರಾಜಕೀಯ ಸಂಚು ನಡೆಸುತ್ತಿರುವ ಇದೇ ನಾಯಕರು ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯನ್ನೂ ವಿರೋಧಿಸುತ್ತಿದ್ದಾರೆ. ಕರ್ನಾಟಕದ ಜನತೆ ಇಲ್ಲಿಯವರೆಗೆ ಭಾರತೀಯ ಜನತಾ ಪಕ್ಷಕ್ಕೆ ಸ್ವಂತ ಬಲದಿಂದ ಅಧಿಕಾರಕ್ಕೆ ಬರುವಷ್ಟು ಬಹುಮತ ನೀಡಿಲ್ಲ, ಬಿಜೆಪಿ ಅನೈತಿಕವಾಗಿ, ದುಡ್ಡಿನ ಬಲದಿಂದ ಆಪರೇಷನ್ ಕಮಲ ನಡೆಸಿ ಅಧಿಕಾರಕ್ಕೆ ಬಂದಿದೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಜನತೆ ಆಪರೇಷನ್ ಕಮಲಕ್ಕೆ ಅವಕಾಶವೇ ಇಲ್ಲದಂತೆ ಕಾಂಗ್ರೆಸ್‌ಗೆ 136 ಸದಸ್ಯರ ಬಲ ನೀಡಿ ಗೆಲ್ಲಿಸಿದರು. ಇದರಿಂದ ಹತಾಶೆಗೀಡಾದ ಬಿಜೆಪಿ–ಜೆಡಿಎಸ್ ನಾಯಕರು, ರಾಜಭವನವನ್ನು ದುರ್ಬಳಕೆ ಮಾಡಿಕೊಂಡು ನನ್ನ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವ ಮೂಲಕ ನಮ್ಮ ಸರ್ಕಾರವನ್ನು ಡಿಸ್ಟರ್ಬ್ ಮಾಡುವ ಹುನ್ನಾರ ನಡೆಸಿದರು. ನನ್ನ ಪ್ರಕರಣದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮುಖಭಂಗ ಅನುಭವಿಸುವುದು ಖಂಡಿತ ಎಂದಿದ್ದಾರೆ.

ನಾನು ಯಾವುದೇ ತನಿಖೆಗೆ ಸಿದ್ಧ

ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ

ಬೆಂಗಳೂರು, ಸೆ.24(ಕೆಎಂಶಿ)– ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧ ನ್ಯಾಯಾಲಯದ ತೀರ್ಪು ಹೊರಬೀಳುತ್ತಿದ್ದಂತೆ, ನಾನು ಯಾವುದೇ ತನಿಖೆಗೆ ಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಈ ಸಂಬಂಧ ಸುದೀರ್ಘ ಪತ್ರಿಕಾ ಹೇಳಿಕೆ ನೀಡಿರುವ ಮುಖ್ಯಮಂತ್ರಿ ಅವರು, ಕಾನೂನಿನಡಿ ಯಾವ ತನಿಖೆಗೆ ಅವಕಾಶ ಇದೆ, ಇಲ್ಲ ಎಂಬ ಬಗ್ಗೆ ಸಮಾಲೋಚಿಸುತ್ತೇನೆ.

ಅವರು ನೀಡುವ ಸಲಹೆ ಮುಂದಿಟ್ಟುಕೊಂಡು ಕಾನೂನಿನ ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದಿದ್ದಾರೆ. ನ್ಯಾಯಾಲಯ ಸೆಕ್ಷನ್ 218ರ ಅಡಿ ರಾಜ್ಯಪಾಲರು ನೀಡಿದ್ದ ಅಭಿಯೋಜನೆಯನ್ನು ತಿರಸ್ಕರಿಸಿದೆ, ಕೇವಲ 17ಎಗೆ ಮಾತ್ರ ನ್ಯಾಯಮೂರ್ತಿಗಳು ತಮ್ಮ ತೀರ್ಪನ್ನು ಸೀಮಿತಗೊಳಿಸಿದ್ದಾರೆ.

ದೂರುದಾರ, ಬಿಎನ್‌ಎಸ್‌ಎಸ್ ಸೆಕ್ಷನ್ 218, 17ಎ ಮತ್ತು 19ಪಿಸಿ ಕಾಯಿದೆ ಪ್ರಕಾರ ತನಿಖೆ ಹಾಗೂ ಪ್ರಾಸಿಕ್ಯೂಷನ್‌ಗೆ ಅನುಮತಿ ಕೇಳಿದ್ದರು. ಆದರೆ, ರಾಜ್ಯಪಾಲರು ಪ್ರಾಥಮಿಕ ಹಂತದಲ್ಲಿ 19ಪಿಸಿ ಕಾಯಿದೆ ಪ್ರಕಾರ ಕೇಳಿದ್ದ ಅಭಿಯೋಜನಾ ಅನುಮತಿ ನಿರಾಕರಿಸಿದ್ದರು.

ಬಿಎನ್‌ಎಸ್‌ಎಸ್ ಸೆಕ್ಷನ್ 218ರ ಪ್ರಕಾರ ರಾಜ್ಯಪಾಲರು ನೀಡಿರುವ ಅಭಿಯೋಜನಾ ಅನುಮತಿಯನ್ನು ಘನ ನ್ಯಾಯಾಲಯ ಸ್ಪಷ್ಟವಾಗಿ ತಳ್ಳಿ ಹಾಕಿದೆ.

ಆದೇಶ ಪ್ರತಿ ಪಡೆದು ಓದಿದ ಬಳಿಕ ಪ್ರತಿಕ್ರಿಯೆ ನೀಡುತ್ತೇನೆ. ಮುಂದಿನ ದಿನಗಳಲ್ಲಿ ಸತ್ಯ ಹೊರಬಂದು 17ಎ ಅಡಿ ನೀಡಿರುವ ತನಿಖೆ ರದ್ದಾಗಲಿದೆ ಎಂಬ ದೃಢ ವಿಶ್ವಾಸವಿದೆ.

ಸಿದ್ದರಾಮಯ್ಯರ ಅಹಂಕಾರವೇ ಅವರ ಇಂದಿನ ಪರಿಸ್ಥಿತಿಗೆ ಕಾರಣ



ಮೈಸೂರು, ಸೆ. 24(ಆರ್‌ಕೆ)– ಸಿದ್ದರಾಮಯ್ಯರ ನಡವಳಿಕೆ, ಧಿಕ್ಕಾರ ಧೋರಣೆ ಮತ್ತು ಅಹಂಕಾರವೇ ಅವರ ಇಂದಿನ ಪರಿಸ್ಥಿತಿಗೆ ಕಾರಣ ಎಂದು ವಿಧಾನಪರಿಷತ್ ಸದಸ್ಯ ಎ.ಹೆಚ್. ವಿಶ್ವನಾಥ್ ತಿಳಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲರ ನಿಲುವು ಎತ್ತಿ ಹಿಡಿದು ಹೈಕೋರ್ಟ್ ತೀರ್ಪು ನೀಡುತ್ತಿದ್ದಂತೆಯೇ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿರುವ ಅವರು, ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ರಾಜ್ಯ ಉಚ್ಚನ್ಯಾಯಾಲಯ ಎಲ್ಲವನ್ನೂ ಪರಾಮರ್ಶಿಸಿ ಸರಿಯಾದ ತೀರ್ಪು ನೀಡಿದೆ. ಯಾರನ್ನೋ ರಕ್ಷಿಸಲು ಹೋಗಿ ನೀವೇ ಭ್ರಷ್ಟಾಚಾರದಲ್ಲಿ ಸಿಲುಕಿದ್ದೀರಿ. ಕೆಲವರ ಮಾತು ಕೇಳಿ ಇಂದು ನಿಮಗೆ ಈ ಪರಿಸ್ಥಿತಿ ಬಂದಿದೆ ಎಂದರು.

50 ವರ್ಷ ರಾಜಕೀಯ ಮಾಡಿ ಅನುಭವವಿರುವ ನಿಮ್ಮ ಸಾಧನೆ ನೀರಲ್ಲಿ ಹೋಮ ಮಾಡಿದಂತಾಗಿದೆ. ಕುರುಬ ಸಮುದಾಯದ ಮುಗ್ಧರು, ಹಿಂದುಳಿದವರು, ದಲಿತರು, ಅಹಿಂದ ಸೇರಿದಂತೆ ಈ ನಾಡಿನ ಜನರು ನಿಮ್ಮನ್ನು 2 ಬಾರಿ ಮುಖ್ಯಮಂತ್ರಿ ಮಾಡಿದರು. ಆದರೆ, ನಿಮ್ಮ ನಡವಳಿಕೆ, ಧಿಕ್ಕಾರ ಧೋರಣೆ ಹಾಗೂ ಅಹಂಕಾರ ಆ ಜನರ ವಿಶ್ವಾಸಕ್ಕೆ ಮಸಿ ಬಳಿದಂತಾಗಿದೆ ಎಂದು ಸಿದ್ದರಾಮಯ್ಯ ವಿರುದ್ಧ ಹರಿಹಾಯ್ದರು.

ಈ ರಾಜ್ಯದಲ್ಲಿ ಹಲವು ಮುಖ್ಯಮಂತ್ರಿಗಳು ನಾಡಿನ ರಾಜಕೀಯ ಸಂಸ್ಕೃತಿ, ಘನತೆಯನ್ನು ಕಾಪಾಡಿದ್ದರು. ಅದನ್ನು ಹಾಳು ಮಾಡಿದ ಕೀರ್ತಿ ನಿಮಗೆ ಸಲ್ಲುತ್ತದೆ. ಸಿದ್ದರಾಮಯ್ಯ ಅವರೇ, ನಮಗೆ ತೀವ್ರ ನೋವಾಗುತ್ತಿದೆ. ನಿಮ್ಮ ಪ್ರತಿಯೊಂದು ಏಳ್ಗೆಯಲ್ಲೂ ನಾವು ನಿಮಗೆ ನೆರವಾಗಿದ್ದೇವೆ ಎಂದು ನುಡಿದರು.

ಮುಡಾ ಬ್ರಹ್ಮಾಂಡ ಭ್ರಷ್ಟಾಚಾರ ಪ್ರಕರಣದಲ್ಲಿ ಭಾಗಿಯಾಗಿದ್ದವರ ಕ್ರಮ ಸರಿ ಎಂದು ಸಮರ್ಥಿಸಿಕೊಳ್ಳುತ್ತಿದ್ದ ಜನಪ್ರತಿನಿಧಿಗಳಿಗೆ ನ್ಯಾಯಾಲಯ ಬಿಸಿ ಮುಟ್ಟಿಸಿದೆ. ಈ ತೀರ್ಪು ವಿರುದ್ಧ ಸುಪ್ರೀಂಕೋರ್ಟ್‌ಗೆ ಹೋದರೂ ನಿಮಗೆ ಮುಖಭಂಗವಾಗುತ್ತದೆ. ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಜನತಂತ್ರ ವ್ಯವಸ್ಥೆ ಉಳಿಸಿ. ಹಠ ಮಾಡಿ ವೇದನೆಗೊಳಗಾಗಬೇಡಿ ಎಂದು ಸಿದ್ದರಾಮಯ್ಯರಿಗೆ ಸಲಹೆ ನೀಡಿದರು.

ತಮ್ಮ ಪತ್ನಿಗೆ ಬಂದಿರುವ 14 ನಿವೇಶನಗಳನ್ನು ಒಪ್ಪಿಸಿ. ಮುಡಾ ಹಗರಣವನ್ನು ಸಿಬಿಐ ತನಿಖೆಗೊಪ್ಪಿಸಿ ಎಂದು ಮುಡಾ ಕಚೇರಿ ಎದುರೇ ಹೇಳಿದ್ದೆ. ಅದನ್ನು ಧಿಕ್ಕರಿಸಿ ಯಾರದೋ ಮಾತು ಕೇಳಿ ಸಿದ್ದರಾಮಯ್ಯ ಅವರಿಗೆ ಇಂದು ಈ ಸ್ಥಿತಿ ಬಂದಿದೆ. ಈಗಲೂ ಕಾಲ ಮಿಂಚಿಲ್ಲ, ರಾಜೀನಾಮೆ ನೀಡಿ ತನಿಖೆ ಎದುರಿಸಿ ಎಂದು ವಿಶ್ವನಾಥ್ ತಿಳಿಸಿದ್ದಾರೆ.

ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ: ಡಿಸಿಎಂ ಡಿಕೆಶಿ



ಬೆಂಗಳೂರು, ಸೆ.24– ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ಇಂದು ಹೈಕೋರ್ಟ್ ವಜಾಗೊಳಿಸಿದ್ದರೂ ಸಿದ್ದರಾಮಯ್ಯ ಅವರಿಗೆ ಸಂಪುಟ ಸಹೋದ್ಯೋಗಿಗಳಿಂದ ಸಂಪೂರ್ಣ ಬೆಂಬಲ ವ್ಯಕ್ತವಾಗುತ್ತಿದ್ದು, ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವ ಅಗತ್ಯ ಇಲ್ಲ ಎಂದಿದ್ದಾರೆ.

ಹೈಕೋರ್ಟ್ ತೀರ್ಪು ಕುರಿತು ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಇದು ಬಿಜೆಪಿಯ ರಾಜಕೀಯ ಪಿತೂರಿಯಾಗಿದ್ದು, ಸಿದ್ದರಾಮಯ್ಯ ರಾಜೀನಾಮೆ ಪ್ರಶ್ನೆಯೇ ಇಲ್ಲ ಎಂದರು. ಅವರು ಯಾವುದೇ ತಪ್ಪು ಮಾಡಿಲ್ಲ. ಅವರು ಯಾವುದೇ ಹಗರಣದಲ್ಲಿ ಭಾಗಿಯಾಗಿಲ್ಲ. ಇದು ದೇಶದ ಎಲ್ಲಾ ವಿಪಕ್ಷಗಳ ನಾಯಕರ ವಿರುದ್ಧ ಬಿಜೆಪಿಯ ರಾಜಕೀಯ ಪಿತೂರಿಯಾಗಿದೆ. ಬಿಜೆಪಿಯವರು ತೊಂದರೆ ಸೃಷ್ಟಿಸುತ್ತಿದ್ದಾರೆ. ನಾವು ಸಿದ್ದರಾಮಯ್ಯ ಹಿಂದೆ ನಿಂತಿದ್ದು, ಅವರನ್ನು ಬೆಂಬಲಿಸುತ್ತೇವೆ. ಅವರು ದೇಶ, ಪಕ್ಷ ಹಾಗೂ ರಾಜ್ಯಕ್ಕಾಗಿ ಒಳ್ಳೆಯ ಕೆಲಸ ಮಾಡಿದ್ದಾರೆ ಎಂದರು.

ಹೈಕೋರ್ಟ್ ತೀರ್ಪಿನಿಂದ ಸಿದ್ದರಾಮಯ್ಯಗೆ ಹಿನ್ನಡೆಯಾಗಿದೆ ಎಂಬುದರ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದ ಶಿವಕುಮಾರ್, ಕಾಂಗ್ರೆಸ್‌ನ ಎಲ್ಲಾ ನಾಯಕರ ವಿರುದ್ಧದ ದೊಡ್ಡ ಪಿತೂರಿ ನಡೆಯುತ್ತಿದೆ ಎಂದು ಪುನರುಚ್ಚರಿಸಿದರು. ಆದಾಗ್ಯೂ, ದೇಶದ ನ್ಯಾಯಾಂಗ ವ್ಯವಸ್ಥೆಗೆ ಪಕ್ಷ ಗೌರವ ನೀಡುತ್ತದೆ ಎಂದು ಹೇಳಿದರು.

ಮತ್ತೊಮ್ಮೆ ಹೇಳುತ್ತೇನೆ, ಮುಖ್ಯಮಂತ್ರಿಗೆ ಯಾವುದೇ ಹಿನ್ನಡೆಯಾಗಿಲ್ಲ. ನಾನು ಸೇರಿದಂತೆ ಪಕ್ಷದ ಎಲ್ಲಾ ನಾಯಕರ ವಿರುದ್ಧದ ದೊಡ್ಡ ಪಿತೂರಿಯಾಗಿದೆ. ನಾನು ಎಲ್ಲಾ ದೋಷ, ಆರೋಪಗಳಿಂದ ಹೊರಗೆ ಬಂದಿಲ್ಲವೇ. ಹಾಗೆಯೇ ಈ ವಿಚಾರದಲ್ಲಿಯೂ ಹೋರಾಟ ಮಾಡುತ್ತೇವೆ. ದೇಶದ ನ್ಯಾಯಿಕ ವ್ಯವಸ್ಥೆ ಗೌರವಿಸುತ್ತೇವೆ. ನ್ಯಾಯ ಸ್ಥಾನದಿಂದ ಅನ್ಯಾಯಕ್ಕೆ ಅವಕಾಶವಿಲ್ಲ. ನಮಗೆ ನ್ಯಾಯ ಸಿಗುತ್ತದೆ ಎಂದು ಅವರು ಹೇಳಿದರು.

ಸಿದ್ದರಾಮಯ್ಯ ಅಭಿಮಾನಿ ಬಳಗದಿಂದ ಪ್ರತಿಭಟನೆ



ಮೈಸೂರು, ಸೆ.24(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದರ ಹಿಂದೆ ಬಿಜೆಪಿ ಷಡ್ಯಂತ್ರವಿದೆ ಎಂದು ಆರೋಪಿಸಿ ಸಿದ್ದರಾಮಯ್ಯ ಅಭಿಮಾನಿಗಳ ಬಳಗದವರು ನಗರದ ಜಿಲ್ಲಾ ಪಂಚಾಯತ್ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಿದರು.

ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ತೀರ್ಮಾನವನ್ನು ಹೈಕೋರ್ಟ್ ಎತ್ತಿ ಹಿಡಿದಿರುವ ಹಿನ್ನೆಲೆಯಲ್ಲಿ ಪ್ರತಿಭಟನೆ ನಡೆಸಿದ ಸಿದ್ದರಾಮಯ್ಯ ಅಭಿಮಾನಿಗಳು ಬಿಜೆಪಿ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಭಾರಿ ಹಗರಣ ನಡೆದಿದೆ. ಹೀಗಿರುವಾಗ ಬಿಜೆಪಿಯವರು ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದರೆ ನಾವು ಕೂಡ ರಾಜ್ಯಾದ್ಯಂತ ತೀವ್ರ ರೀತಿಯ ಹೋರಾಟ ಮಾಡಬೇಕಾಗುತ್ತದೆ ಎಂದು ಮಾಜಿ ಕಾರ್ಪೊರೇಟರ್ ಲೋಕೇಶ್ ಪಿಯಾ ಎಚ್ಚರಿಸಿದರು. ಪ್ರತಿಭಟನೆಯಲ್ಲಿ ಬಳಗದ ಶೇಖರ್, ಕೃಷ್ಣನಾಯಕ್, ಮಹದೇವು, ಶಿವು, ಗಿರೀಶ್, ಕುಮಾರ, ಮಲ್ಲುಸ್ವಾಮಿ ಸೇರಿದಂತೆ ಹಲವರು ಹಾಜರಿದ್ದರು.

ಸಿಎಂ ಸಿದ್ದರಾಮಯ್ಯ, ಸಚಿವ ಭೈರತಿ ಸುರೇಶ್ ತಕ್ಷಣ ರಾಜೀನಾಮೆ ನೀಡಬೇಕು



ಟಿ.ಎಸ್. ಶ್ರೀವತ್ಸ

ಮೈಸೂರು, ಸೆ. 24(ಆರ್‌ಕೆ)– ಮುಡಾ ನಿವೇಶನ ಹಂಚಿಕೆ ಹಗರಣದ ತನಿಖೆಗೆ ಹೈಕೋರ್ಟ್ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ತಕ್ಷಣ ರಾಜೀನಾಮೆ ನೀಡಬೇಕೆಂದು ಶಾಸಕ ಟಿ.ಎಸ್. ಶ್ರೀವತ್ಸ ಒತ್ತಾಯಿಸಿದ್ದಾರೆ.


ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿದ್ದ ರಾಜ್ಯಪಾಲರ ಕ್ರಮವನ್ನು ಎತ್ತಿ ಹಿಡಿದು ಹೈಕೋರ್ಟ್ ತೀರ್ಪು ಹೊರಬರುತ್ತಿದ್ದಂತೆಯೇ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿದ ಅವರು, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಉಡಾಫೆತನದಿಂದಾಗಿ ಮುಖ್ಯಮಂತ್ರಿಗೆ ಇಂದು ಈ ಪರಿಸ್ಥಿತಿ ಬಂದಿದೆ ಎಂದರು.

ಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಮತ್ತು ಭೈರತಿ ಸುರೇಶ್ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು, ಮುಡಾ ಹಿಂದಿನ ಆಯುಕ್ತರಾದ ಡಾ. ಡಿ.ಬಿ. ನಟೇಶ್ ಮತ್ತು ಜಿ.ಟಿ. ದಿನೇಶ್‌ಕುಮಾರ್‌ರನ್ನು ಅಮಾನತುಗೊಳಿಸಿ ತನಿಖೆಗೊಳಪಡಿಸಬೇಕು ಎಂದು ಅವರು ಒತ್ತಾಯಿಸಿದರು.

ಪ್ರಕರಣದ ದಾಖಲೆಗಳು, ಮಾಧ್ಯಮಗಳ ವರದಿಗಳು, ಬಿಜೆಪಿ–ಜೆಡಿಎಸ್ ಮೈಸೂರು ಚಲೋದಿಂದಾಗಿ ಇಂದು ಹೋರಾಟಕ್ಕೆ ಜಯ ಸಿಕ್ಕಿದೆ. ಸತ್ಯಮೇವ ಜಯತೆ ಎಂದು ಮೈಸೂರಲ್ಲಿ ಕಾಂಗ್ರೆಸ್ಸಿಗರು ಸುಳ್ಳಿನ ಸಮಾವೇಶ ಮಾಡಿದರು. ಆದರೆ ಇಂದು ಸತ್ಯಕ್ಕೆ ಜಯ ಸಿಕ್ಕಿದೆ ಎಂದ ಶಾಸಕರು, ಶೇ. 50:50ರ ಅನುಪಾತದಲ್ಲಿ ಹಂಚಿಕೆಯಾಗಿರುವ ಎಲ್ಲಾ ನಿವೇಶನಗಳನ್ನು ವಾಪಸ್ ಪಡೆದು ಅರ್ಜಿ ಹಾಕಿ 25–30 ವರ್ಷಗಳಿಂದ ಕಾಯುತ್ತಿರುವ ವಸತಿ ರಹಿತ ನೈಜ ಫಲಾನುಭವಿಗಳಿಗೆ ಮಂಜೂರು ಮಾಡಿದಾಗ ಮಾತ್ರ ನಮ್ಮ ಹೋರಾಟಕ್ಕೆ ನಿಜವಾದ ಜಯ ಸಿಗಲಿದೆ ಎಂದರು.

ಹೈಕೋರ್ಟ್ ತೀರ್ಪಿನಿಂದ ಸಿದ್ದರಾಮಯ್ಯಗೆ ತಾತ್ಕಾಲಿಕ ಹಿನ್ನಡೆ

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಭಿಮತ



ಮೈಸೂರು, ಸೆ.24(ಬಿಎಲ್‌ಯು)– ಮುಡಾ ಹಗರಣದಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ತೀರ್ಮಾನವನ್ನು ಎತ್ತಿ ಹಿಡಿದಿರುವ ಹೈಕೋರ್ಟ್ ತೀರ್ಪಿನಿಂದ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ತಾತ್ಕಾಲಿಕ ಹಿನ್ನಡೆಯಾಗಿದೆ ಅಷ್ಟೇ ಎಂದು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಭಿಪ್ರಾಯಪಟ್ಟಿದ್ದಾರೆ.

ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ದಿನದಿಂದ ಬಿಜೆಪಿಯೇತರ ಆಡಳಿತವಿರುವ ಸರ್ಕಾರಗಳನ್ನು ಅಸ್ಥಿರಗೊಳಿಸಲಾಗುತ್ತಿದೆ. ಇದು ಪ್ರಜಾಪ್ರಭುತ್ವ, ಒಕ್ಕೂಟ ವ್ಯವಸ್ಥೆ, ಸಂವಿಧಾನ ಹಾಗೂ ಕೋಟ್ಯಾಂತರ ಮತದಾರರಿಗೆ ಬಗೆದ ದ್ರೋಹವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಸರ್ಕಾರ ಇಡಿ, ಐಟಿ, ಸಿಬಿಐ ನಂತಹ ಸಂಸ್ಥೆಗಳನ್ನು ಬಳಸಿಕೊಂಡು ಬಿಜೆಪಿಯೇತರ ಪಕ್ಷಗಳ ನಾಯಕರನ್ನು ಹಣಿಯಲು ಪ್ರಯತ್ನಿಸುತ್ತಿದೆ. ವಾಲ್ಮೀಕಿ ಹಗರಣದಲ್ಲಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಹೆಸರು ಹೇಳುವಂತೆ ವಾಲ್ಮೀಕಿ ನಿಗಮದ ವ್ಯವಸ್ಥಾಪಕರಿಗೆ ಒತ್ತಾಯ ಮಾಡಿರುವ ಬಗ್ಗೆ ಎಫ್‌ಐಆರ್ ಕೂಡ ದಾಖಲಾಗಿದೆ. ಇದು ಬಿಜೆಪಿ ಷಡ್ಯಂತ್ರ ತೋರಿಸುತ್ತದೆ ಎಂದು ಸೋಮಶೇಖರ್ ಆರೋಪಿಸಿದ್ದಾರೆ.

ರಾಜಕೀಯ ಹಿನ್ನಲೆ ಇಲ್ಲದ ಸಿದ್ದರಾಮಯ್ಯ ರಾಷ್ಟ್ರ ಮೆಚ್ಚುವ ಆಡಳಿತ ನೀಡಿರುವುದನ್ನು ಸಹಿಸದ ಬಿಜೆಪಿ ಇನ್ನಿಲ್ಲದ ಕುತಂತ್ರ ರೂಪಿಸುತ್ತಿದೆ. 40 ವರ್ಷದ ರಾಜಕೀಯ ಜೀವನದಲ್ಲಿ ಭ್ರಷ್ಟತೆಯ ಕಪ್ಪು ಚುಕ್ಕೆ ಇಲ್ಲದ ಸಿದ್ದರಾಮಯ್ಯಗೆ ಭ್ರಷ್ಟಾಚಾರದ ಹಣೆಪಟ್ಟಿ ಕಟ್ಟಲು ಷಡ್ಯಂತ್ರ ರೂಪಿಸಲಾಗುತ್ತಿದೆ ಎಂದು ಆಪಾದಿಸಿದ್ದಾರೆ.

ಹೈಕೋರ್ಟ್ ನೀಡಿರುವ ತೀರ್ಪು ಪ್ರಶ್ನಿಸಿ ಸಿದ್ದರಾಮಯ್ಯ ಸುಪ್ರೀಂಕೋರ್ಟ್ ಮೆಟ್ಟಿಲೇರಲಿದ್ದಾರೆ. ಈ ಮೂಲಕ ಅಲ್ಲಿ ಸಿದ್ದರಾಮಯ್ಯಗೆ ಜಯ ಸಿಗಲಿದೆ. ಜೀವನದುದ್ದಕ್ಕೂ ಸಿದ್ಧಾಂತ ಬದ್ಧ ಹೋರಾಟ ಮಾಡಿಕೊಂಡು ಬಂದಿರುವ ಸಿದ್ದರಾಮಯ್ಯ ಇದಕ್ಕೆಲ್ಲಾ ಜಗ್ಗುವುದಿಲ್ಲ ಎಂದು ಹೇಳಿದ್ದಾರೆ.

ಭ್ರಷ್ಟಾಚಾರ ವಿರೋಧಿ ಆಂದೋಲನಕ್ಕೆ ಬಹು ದೊಡ್ಡ ಉತ್ತೇಜನ: ಟಿ.ಜೆ.ಅಬ್ರಹಾಂ

ಯಾವುದೇ ನ್ಯಾಯಾಲಯಕ್ಕೆ ಹೋದರೂ ಸೋಲುತ್ತಾರೆ ಎಂದ ಸ್ನೇಹಮಯಿ ಕೃಷ್ಣ



ಟಿಜೆ ಅಬ್ರಹಾಂ



ಸ್ನೇಹಮಯಿ ಕೃಷ್ಣಾ

ಬೆಂಗಳೂರು, ಸೆ.24– ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದ್ದು, ಭ್ರಷ್ಟಾಚಾರ ವಿರೋಧಿ ಆಂದೋಲನಕ್ಕೆ ಬಹಳ ದೊಡ್ಡ ಉತ್ತೇಜನ ಸಿಕ್ಕಂತಾಗಿದೆ ಎಂದು ಭ್ರಷ್ಟಾಚಾರ ವಿರೋಧಿ ಆಂದೋಲನ ಹೋರಾಟಗಾರ ಟಿಜೆ ಅಬ್ರಹಾಂ ಹೇಳಿದ್ದಾರೆ.


ಮುಡಾ ಹಗರಣದಲ್ಲಿ ಪ್ರಾಸಿಕ್ಯೂಷನ್ ಭೀತಿ ಎದುರಿಸುತ್ತಿದ್ದ ಸಿಎಂ ಸಿದ್ದರಾಮಯ್ಯಗೆ ಕರ್ನಾಟಕ ಹೈಕೋರ್ಟ್ ಆಘಾತ ನೀಡಿದ್ದು, ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿ ಸಂಬಂಧ ಕೊನೆಗೂ ಕರ್ನಾಟಕ ಹೈಕೋರ್ಟ್ ತೀರ್ಪು ಪ್ರಕಟಿಸಿದೆ. ಸಿಎಂ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್‌ನ ನ್ಯಾಯಮೂರ್ತಿ ನಾಗಪ್ರಸನ್ನ ನೇತೃತ್ವದ ವಿಭಾಗೀಯ ಪೀಠ ವಜಾಗೊಳಿಸಿದೆ.

ತೀರ್ಪು ಪ್ರಕಟಗೊಂಡ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅರ್ಜಿದಾರರಾದ ಟಿ.ಜೆ.ಅಬ್ರಹಾಂ, ಹೈಕೋರ್ಟ್ ತೀರ್ಪನ್ನು ಸ್ವಾಗತಿಸುತ್ತೇವೆ. ಸುಪ್ರೀಂಕೋರ್ಟ್‌ನಲ್ಲೂ ಕೇವಿಯಟ್ ಸಲ್ಲಿಸಿದ್ದೇವೆ. ಹೈಕೋರ್ಟ್ ನಮ್ಮ ವಾದಕ್ಕೆ ಮತ್ತು ಆಕ್ಷೇಪಣೆಗಳಿಗೆ ಮನ್ನಣೆ ನೀಡಿದೆ. ರಾಜ್ಯಪಾಲರ ಪೂರ್ವಾನುಮತಿ ಸರಿಯಿಲ್ಲ ಎಂದು ವಾದ ಮಾಡುವುದು ಅವರ ಹಕ್ಕಾಗಿತ್ತು. ಆದರೆ ಹೈಕೋರ್ಟ್ ಅದನ್ನು ಮಾನ್ಯ ಮಾಡಿಲ್ಲ ಎಂದರು.

ಅಂತೆಯೇ ತೀರ್ಪು ಸ್ವಾಗತಾರ್ಹ. ಇದನ್ನು ಪ್ರಶ್ನಿಸಿ ಮೇಲ್ಮನವಿ ಸಲ್ಲಿಸುವ ಎಲ್ಲಾ ಹಕ್ಕುಗಳೂ ಅರ್ಜಿದಾರರಿಗಿವೆ. ಈಗಾಗಲೇ ನಾವು ಸುಪ್ರೀಂಕೋರ್ಟ್‌ನಲ್ಲಿ ಕೇವಿಯಟ್ ಸಲ್ಲಿಸಿದ್ದೇವೆ. ಹೈಕೋರ್ಟ್‌ನ ವಿಭಾಗೀಯ ಪೀಠದ ಮುಂದೆಯೂ ಕೇವಿಯಟ್ ಸಲ್ಲಿಸುತ್ತೇವೆ. ಮುಡಾ ಪ್ರಕರಣದ ವಿಚಾರಣೆಗೆ ಯಾವುದೇ ಅಡೆತಡೆ ಇರಲಿಲ್ಲ. ಹೈಕೋರ್ಟ್ ವಿಚಾರಣೆಯಿಂದಾಗಿ ಒಂದಿಷ್ಟು ಕಾಲ ಮುಂದೂಡಿಕೆಯಾಗಿತ್ತು. ಈಗ ತೀರ್ಪಿನಿಂದಾಗಿ ಎಲ್ಲವೂ ಇತ್ಯರ್ಥವಾಗಿದೆ ಎಂದರು.

ಯಾವುದೇ ನ್ಯಾಯಾಲಯಕ್ಕೆ ಹೋದರೂ ಸೋಲುತ್ತಾರೆ: ಇದೇ ವೇಳೆ ಮಾತನಾಡಿದ ಅರ್ಜಿದಾರ ಸ್ನೇಹಮಯಿ ಕೃಷ್ಣಾ, ಅಕ್ರಮದಲ್ಲಿ ಸಿದ್ದರಾಮಯ್ಯ ಅವರ ಪಾತ್ರವಿದೆ ಎಂದು ನಾವು ಹೈಕೋರ್ಟ್ ಗಮನಕ್ಕೆ ತಂದಿದ್ದೇವೆ. ಅದರಂತೆ, ಗೌರವಾನ್ವಿತ ನ್ಯಾಯಾಲಯವು ತನ್ನ ಆದೇಶವನ್ನು ನೀಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಬಲ ಸಾಕ್ಷ್ಯಾಧಾರಗಳಿದ್ದು, ಅವರು ಯಾವುದೇ ನ್ಯಾಯಾಲಯಕ್ಕೆ ಹೋದರೂ ಸೋಲುತ್ತಾರೆ ಎಂದು ಹೇಳಿದ್ದಾರೆ.

ಕಪ್ಪುಚುಕ್ಕೆ ಇಲ್ಲ ಎನ್ನುವುದಾದರೆ ತನಿಖೆ ಎದುರಿಸಿ



ಮೈಸೂರು, ಸೆ. 24(ಆರ್‌ಕೆ)– ನಲ್ವತ್ತು ವರ್ಷಗಳ ರಾಜಕೀಯ ಅನುಭವದಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲ ಎನ್ನುವುದಾದರೆ ತನಿಖೆ ಎದುರಿಸಿ ಎಂದು ವಿಧಾನಪರಿಷತ್ ಮಾಜಿ ಸದಸ್ಯ ಡಿ. ಮಾದೇಗೌಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲಹೆ ನೀಡಿದ್ದಾರೆ.

ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಹೈಕೋರ್ಟ್ ಸಮ್ಮತಿಸಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿದ ಅವರು, ಸಮಾಜವಾದಿ, ಪ್ರಜಾಪ್ರಭುತ್ವವಾದಿ ಎಂದು ಪ್ರತಿಪಾದನೆ ಮಾಡುವ ಸಿದ್ದರಾಮಯ್ಯ ಅವರೇ, 40 ವರ್ಷ ಯಾವುದೇ ಕಪ್ಪು ಚುಕ್ಕೆ ಇಲ್ಲ ಎಂಬುದು ತನಿಖೆಯಿಂದ ತಿಳಿಯಲಿ ಬಿಡಿ ಎಂದಿದ್ದಾರೆ.

ರಾಜ್ಯಪಾಲರ ಆದೇಶವನ್ನು ಧಿಕ್ಕರಿಸಿ ನ್ಯಾಯಾಲಯದಲ್ಲಿ ಚಾಲೆಂಜ್ ಮಾಡಿದ ಫಲವಾಗಿ ನಿಮ್ಮ ವಿಶ್ವಾಸದ ಮೇಲಾಟಗಳು ಸುಳ್ಳು ಎಂಬುದನ್ನು ರಾಜ್ಯ ಉಚ್ಚ ನ್ಯಾಯಾಲಯದ ತೀರ್ಪು ಬಟಾಬಯಲು ಮಾಡಿದೆ ಎಂದು ಅವರು ತಿಳಿಸಿದರು.

ರಾಜ್ಯಪಾಲರು ಅನುಮತಿ ನೀಡಿದಾಗಲೇ ತನಿಖೆಗೆ ಒಪ್ಪಬಹುದಾಗಿತ್ತು. ಆದರೆ ತಾವು ತಪ್ಪು ಮಾಡಿಲ್ಲ ಎಂಬ ಖಾತರಿ ಇಲ್ಲದಿದ್ದರಿಂದ ಕೋರ್ಟ್ ಮೊರೆ ಹೋದಿರಿ. ನಿಮ್ಮ ಸರ್ಕಾರದಲ್ಲಿ ಹಗರಣಗಳ ಮೇಲೆ ಹಗರಣಗಳಿವೆ. ನೀವು ಅದೃಷ್ಟವಂತರು ಸರಿ. ಆದರೆ, ಅದು ನೈತಿಕ ಬಲ ಕೊಡುವುದಿಲ್ಲ. ನಿವೇಶನ ಹಗರಣದಿಂದಾಗಿ ಮುಡಾ ಬಾಗಿಲು ಹಾಕಿದ್ದೀರಿ. ಯಾವುದೇ ಕೆಲಸ ನಡೆಯುತ್ತಿಲ್ಲ. ಆದ್ದರಿಂದ ಈಗಲೂ ಹಠ ಮಾಡದೇ ತನಿಖೆ ಎದುರಿಸಿ ಏನೂ ತಪ್ಪು ಮಾಡಿಲ್ಲ ಎಂಬುದನ್ನು ಖಾತರಿಪಡಿಸಿ ಎಂದು ಮನೆ ಮಾದೇಗೌಡರು ಸಿದ್ದರಾಮಯ್ಯರಿಗೆ ಸಲಹೆ ನೀಡಿದ್ದಾರೆ.

ಸಿದ್ದರಾಮಯ್ಯನವರ ರಾಜೀನಾಮೆಗೆ ಆಗ್ರಹಿಸುತ್ತಿರುವ ವಿಪಕ್ಷಗಳ ವಿರುದ್ಧ ಪ್ರತಿಭಟನೆ

ಕುರುಬರ ಸಂಘ, ಶೋಷಿತ ಸಮುದಾಯಗಳ ಆಕ್ರೋಶ



ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆಗೆ ಆಗ್ರಹಿಸುತ್ತಿರುವ ಪ್ರತಿಪಕ್ಷ ನಾಯಕರ ವಿರುದ್ಧ ಮೈಸೂರಿನಲ್ಲಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಸೆ.24(ಎಸ್‌ಬಿಡಿ)– ಹೈಕೋರ್ಟ್ ತೀರ್ಪಿನ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆಗೆ ಒತ್ತಾಯಿಸುತ್ತಿರುವ ಪ್ರತಿಪಕ್ಷಗಳ ವಿರುದ್ಧ ಕರ್ನಾಟಕ ಪ್ರದೇಶ ಕುರುಬರ ಸಂಘ ಮತ್ತು ಶೋಷಿತ ಸಮುದಾಯಗಳ ವರ್ಗದಿಂದ ಮೈಸೂರು ನ್ಯಾಯಾಲಯ ಮುಂಭಾಗದ ಗಾಂಧಿ ಪುತ್ಥಳಿ ಬಳಿ ಮಂಗಳವಾರ ಸಂಜೆ ಪ್ರತಿಭಟನೆ ನಡೆಸಲಾಯಿತು.

'ನಿಮ್ಮೊಂದಿಗೆ ನಾವಿದ್ದೇವೆ' ಅಡಿಬರಹವುಳ್ಳ ಸಿದ್ದರಾಮಯ್ಯನವರ ಭಾವಚಿತ್ರ ಹಿಡಿದು, ಅವರಿಗೆ ಜೈಕಾರ ಹಾಕಿದರು. ಪ್ರತಿಪಕ್ಷಗಳ ನಾಯಕರು, ರಾಜಕೀಯ ಷಡ್ಯಂತ್ರದಿಂದ ಸುಳ್ಳು ಆರೋಪ ಮಾಡಿ, ರಾಜಕೀಯ ಹಗೆತನ ಸಾಧಿಸುತ್ತಿದ್ದಾರೆ ಎಂದು ಆರೋಪಿಸಿ, ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಧಿಕ್ಕಾರ ಕೂಗಿದರು.

ಈ ವೇಳೆ ಕರ್ನಾಟಕ ಪ್ರದೇಶ ಕುರುಬರ ಸಂಘದ ನಿಕಟಪೂರ್ವ ಅಧ್ಯಕ್ಷ ಬಿ.ಸುಬ್ರಮಣ್ಯ ಮಾತನಾಡಿ, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಪಿತೂರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಂದೂ ಹೆದರುವುದಿಲ್ಲ. ರಾಜಕೀಯ ಸಂಚು, ರಾಜಭವನ ದುರುಪಯೋಗದ ಪ್ರಯತ್ನಗಳಿಗೆ ಅವರು ಜಗ್ಗುವುದಿಲ್ಲ. ರಾಜ್ಯದ ಜನ, ಕಾಂಗ್ರೆಸ್ ಹೈಕಮಾಂಡ್, ಶಾಸಕರು, ಸಚಿವರು, ಕಾರ್ಯಕರ್ತರು ಸಿದ್ದರಾಮಯ್ಯನವರ ಜೊತೆಗಿದ್ದಾರೆ. ಕಾನೂನು ಹೋರಾಟಕ್ಕೆ ಹೈಕಮಾಂಡ್ ಸಹಕಾರ ನೀಡಲಿದೆ. ಮೋದಿಯವರ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರ, ಸಿದ್ದರಾಮಯ್ಯನವರ ಮೇಲಷ್ಟೇ ಅಲ್ಲ, ದೇಶದ ಎಲ್ಲಾ ವಿರೋಧ ಪಕ್ಷಗಳ ನಾಯಕರ ವಿರುದ್ಧ ಸೇಡಿನ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದರು.

ದ್ವೇಷದ ರಾಜಕಾರಣ ಮಾಡುತ್ತಿರುವ ಬಿಜೆಪಿ ಮತ್ತು ಜೆಡಿಎಸ್‌ನವರಿಗೆ ಸಿಎಂ ಸಿದ್ದರಾಮಯ್ಯನವರ ರಾಜೀನಾಮೆ ಕೇಳುವ ನೈತಿಕತೆ ಇಲ್ಲ. ಬಡವರು, ದಲಿತರು, ಹಿಂದುಳಿದವರ ಅಭಿವೃದ್ಧಿಯೊಂದಿಗೆ ಜನಪರ ಆಡಳಿತ ನೀಡುತ್ತಿರುವುದನ್ನು ಸಹಿಸಲಾರದೆ ಅವರ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ. ಯಾರು ಎಷ್ಟೇ ಅಪಪ್ರಚಾರ ಮಾಡಿದರೂ ಸಿದ್ದರಾಮಯ್ಯನವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ. ಮುಂದಿನ ಕಾನೂನು ಹೋರಾಟದಲ್ಲಿ ಸಿದ್ದರಾಮಯ್ಯನವರು ಗೆದ್ದು, ಮುಖ್ಯಮಂತ್ರಿಯಾಗಿ ಐದು ವರ್ಷ ಪೂರೈಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲೆಯ ಅಹಿಂದ ಮುಖಂಡರು, ಶೋಷಿತ ಸಮುದಾಯದ ಮುಖಂಡರು, ಸಿದ್ದರಾಮಯ್ಯನವರ ಅಭಿಮಾನಿಗಳು, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಹಿಂದುಳಿದ ವರ್ಗದವರ ಬೆಂಬಲ: ಕರ್ನಾಟಕ ರಾಜ್ಯ ಹಿಂದುಳಿದ ಜಾಗೃತ ವೇದಿಕೆ ಹಾಗೂ ದಲಿತ ಮತ್ತು ಅಲ್ಪಸಂಖ್ಯಾತರ ಸಂಘಟನೆಗಳ ವತಿಯಿಂದ ಗಾಂಧಿ ಪುತ್ಥಳಿ ಬಳಿ ಸಂಜೆ 6ಕ್ಕೆ 'ಕರಾಳ ತೀರ್ಪು' ಶೀರ್ಷಿಕೆಯಡಿ ಮೌನ ಪ್ರತಿಭಟನೆ ನಿಗದಿಯಾಗಿತ್ತು. ಆದರೆ ಆ ವೇಳೆ ಕರ್ನಾಟಕ ಪ್ರದೇಶ ಕುರುಬರ ಸಂಘ ಇನ್ನಿತರ ಸಂಘಟನೆಗಳ ಪ್ರತಿಭಟನೆ ಮುಂದುವರೆದಿದ್ದ ಹಿನ್ನೆಲೆಯಲ್ಲಿ ಅವರೊಂದಿಗೆ ಕರ್ನಾಟಕ ರಾಜ್ಯ ಹಿಂದುಳಿದ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್. ಶಿವರಾಂ, ರಾಜ್ಯ ಸಂಚಾಲಕ ಎಸ್.ಯೋಗೀಶ್ ಉಪ್ಪಾರ್, ಲೋಕೇಶ್‌ಕುಮಾರ್ ಮಾದಾಪುರ, ಹೆಚ್.ಎಸ್.ಪ್ರಕಾಶ್, ರವಿ ನಜರ್‌ಬಾದ್, ಸುನೀಲ್ ನಾರಾಯಣ್, ಮಂಗಳಾ, ರಾಜೇಶ್, ನಜೀರ್ ಸೇರಿದಂತೆ ಹಿಂದುಳಿದ ವರ್ಗಗಳ ಮುಖಂಡರೂ ಒಂದುಗೂಡಿ, ಪ್ರತಿಭಟಿಸಿದರು.

ಜಗತ್ತಿನ ಕಲಾಪರಂಪರೆಗೆ ಜಾನಪದವೇ ಮೂಲ

ಕಾಲಭೈರವೇಶ್ವರ ಜಾನಪದ ಕಲಾ ಮೇಳ, ಚುಂಚಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕುಮಾರಸ್ವಾಮಿ

ಮಂಡ್ಯ/ಆದಿಚುಂಚನಗಿರಿ, ಸೆ.24– ಜಗತ್ತಿನ ಕಲಾಪರಂಪರೆಗೆ ಜಾನಪದವೇ ಮೂಲ, ಈ ಕಲೆಯನ್ನು ಉಳಿಸಿ ಬೆಳೆಸಿಕೊಂಡು ಬರುತ್ತಿರುವುದು ಗುರುತರವಾದ ಜವಾಬ್ದಾರಿಯಾಗಿದೆ. ಅದಕ್ಕಾಗಿ ಗುರೂಜಿ ಹಾಗೂ ಶ್ರೀ ಮಠಕ್ಕೆ ಅಭಿನಂದನೆಗಳು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪ್ರಶಂಸಿಸಿದರು.

ಮಂಗಳವಾರ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಕ್ಷೇತ್ರದ ಬಿಜಿಎಸ್ ಸಭಾ ಮಂಟಪದಲ್ಲಿ ನಡೆದ ರಾಜ್ಯಮಟ್ಟದ 45ನೇ "ಶ್ರೀ ಕಾಲಭೈರವೇಶ್ವರ ಜಾನಪದ ಕಲಾ ಮೇಳ" ಹಾಗೂ "ಚುಂಚಶ್ರೀ" ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಸಾವಿರಾರು ಸಂಖ್ಯೆಯಲ್ಲಿ ನೆರೆದಿರುವ ಜಾನಪದ ಕಲಾವಿದರನ್ನು ನೋಡಿದರೆ ನಮ್ಮ ಶ್ರೇಷ್ಠ ಭಾರತೀಯ ಸಂಸ್ಕೃತಿಯ ಹಿರಿಮೆ ಹೆಮ್ಮರವಾಗಿ ಅನಾವರಣಗೊಂಡಿದೆ ಎಂದು ಭಾವಿಸುತ್ತೇನೆ. ಶ್ರೀಕ್ಷೇತ್ರದ ವತಿಯಿಂದ ವಿಶ್ವಮಟ್ಟದ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ನಾಡಿನ ಮಕ್ಕಳಿಗೆ ಜ್ಞಾನ ದೀಕ್ಷೆ ನೀಡಿ, ಸಾಮಾನ್ಯ ಮಕ್ಕಳೂ ಜಾಗತಿಕ ಮಟ್ಟದಲ್ಲಿ ವಿಜ್ಞಾನ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪಡೆಯುವಲ್ಲಿ ಸಫಲರಾಗುತ್ತಿದ್ದಾರೆ. ನಾಲ್ವರು ಮಹನೀಯರು ಬದುಕಿನ ಯಶಸ್ಸಿಗೆ ಕಾರಣವಾದ ಸಾಧನೆಯ ದ್ಯೋತಕವಾಗಿ ಇಂದು ಚಿಂಚಶ್ರೀ ಪ್ರಶಸ್ತಿ ಸ್ವೀಕರಿಸಿದ್ದಾರೆ. ಜಾನಪದ ಕಲಾವಿದರು ಹಾಗೂ ಚುಂಚಶ್ರೀ ಪ್ರಶಸ್ತಿ ಪಡೆದಿರುವ ಸಾಧಕರಂತೆ ಯುವಕರೂ ಕೂಡಾ ಮಹತ್ವವನ್ನು ಸಾಧಿಸಿ ನಾಡಿನ ಹಿರಿಮೆಯನ್ನು ಬೆಳಗಿಸುವ ಬೆಳಕಾಗಲಿ ಎಂದು ಹರಸಿದರು.


ಚುಂಚಶ್ರೀ ಪ್ರಶಸ್ತಿ ಪುರಸ್ಕೃತರೊಂದಿಗೆ ಆದಿಚುಂಚನಗಿರಿ ಶ್ರೀಗಳು, ಕೇಂದ್ರ ಸಚಿವ ಕುಮಾರಸ್ವಾಮಿ ಮತ್ತು ಗಣ್ಯರು.

ಹಿರಿಯ ಪತ್ರಕರ್ತ ಹಾಗೂ ಪಬ್ಲಿಕ್ ಟಿವಿ ಮುಖ್ಯಸ್ಥ ಹೆಚ್.ಆರ್.ರಂಗನಾಥ್ ಮಾತನಾಡಿ, ಶ್ರೀ ಬಾಲಗಂಗಾಧರನಾಥ ಸ್ವಾಮೀಜಿ ಯವರೊಂದಿಗಿನ ತಮ್ಮ ಒಡನಾಟ ಬಾಂಧವ್ಯಗಳು ವಯಸ್ಸನ್ನು ಮೀರಿದ್ದು, ಭಾವನೆ ಮತ್ತು ಮಾತೃತ್ವಕ್ಕೆ ಸಂಬಂಧಿಸಿದ್ದು ಎಂದು ಸ್ಮರಿಸಿಕೊಳ್ಳುತ್ತಾ ಈ ವೇದಿಕೆಯಲ್ಲಿ ಮಹನೀಯ ಸಾಧಕರಿಗೆ ನೀಡಿದ ಚುಂಚಶ್ರೀ ಪ್ರಶಸ್ತಿಯು ಈ ನಾಲ್ವರಿಗೆ ಮಾತ್ರ ನೀಡಿದ ಪುರಸ್ಕಾರವಲ್ಲ, ನಮ್ಮ ಸಮಾಜಕ್ಕೇ ಹೆಗ್ಗಳಿಕೆಯಾಗಿ ನಮ್ಮನ್ನು ನಾವು ಗೌರವಿಸಿಕೊಂಡಂತಿದೆ. ಈ ಸಾಧಕರ ಅನೌಪಚಾರಿಕ ಮಾರ್ಗದರ್ಶನ ನಮ್ಮೆಲ್ಲರಿಗೂ ಪ್ರೇರಕ ಶಕ್ತಿಯಾಗಿದೆ, ಶ್ರೀ ಮಠದಿಂದ ಇಂತಹ ನೂರಾರು ಸಾರ್ಥಕ ಕಾರ್ಯಗಳು ಸದಾ ಸಾಧ್ಯವಾಗುತ್ತಿರಲಿ ಎಂದು ಹಾರೈಸಿದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಹಳೇ ಬೇರು ಹೊಸ ಚಿಗುರು ಕೂಡಿರಲು ಮರ ಸೊಬಗು ಎಂಬ ಮಂಕುತಿಮ್ಮನ ಕಗ್ಗದ ಸಾಲುಗಳನ್ನು ಸ್ಮರಿಸುತ್ತಾ ಜಾನಪದವು ದೀರ್ಘಕಾಲದ ಬೇರು, ಈ ಬೇರನ್ನು ಮರೆತರೆ ಭವಿತವ್ಯವಿಲ್ಲ, ಮೂಲವನ್ನು ಕಾಪಾಡುವ ಜವಾಬ್ದಾರಿ ನಮ್ಮದು. ಜಾನಪದದ ಬೇರನ್ನು ಉಳಿಸಿ ಬೆಳೆಸಿ ಎಂದರು. ಪಂಚಭೂತಗಳು ಹಾಗೂ ಜಗತ್ತಿನ ಸೃಷ್ಟಿಗೆ ಸಂಬಂಧಪಟ್ಟ ಜಾನಪದ ಕಥೆಯನ್ನು ಸಮೀಚೀನ ಗೊಳಿಸುತ್ತಾ, ವಿಜ್ಞಾನ ತಂತ್ರಜ್ಞಾನದ ಫಲದಿಂದ ಜಗತ್ತು ಬೆಳೆದಿದೆ ಆದರೆ ಹೆಚ್ಚಾಗಿ ನೆಚ್ಚಿಕೊಂಡರೆ ವಿನಾಶ ಸಂಭವಿಸಲಿದೆ. ನಾಗಾಲೋಟದಲ್ಲಿ ಓಡುವ ವಿಶ್ವದ ಪ್ರಗತಿಯ ಜೊತೆಗೆ ಜ್ಞಾನವು ಬದುಕಿನ ಭಾಗವಾಗಲಿ ಎಂದರು.

ನಾಗಮಂಗಲವು ಜಾನಪದದ ಗಂಗೋತ್ರಿ. ಡಾ.ಬಾಲಗಂಗಾಧರನಾಥ ಮಹಾ ಸ್ವಾಮೀಜಿಯವರ ವಾರ್ಷಿಕ ಪಟ್ಟಾಭಿಷೇಕ ಮಹೋತ್ಸವದ ಪ್ರಯುಕ್ತ ಈ ಜಾನಪದ ಜಾತ್ರೆಯೊಂದಿಗೆ ಪ್ರತಿವರ್ಷ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆಗೈದ ಐವರು ಸಾಧಕರಿಗೆ ಚುಂಚಶ್ರೀ ಪ್ರಶಸ್ತಿ ನೀಡುತ್ತಿರುವುದು ಶ್ರೀ ಮಠದ ಸಂಕಲ್ಪವಾಗಿದೆ. ನಿಜದ ಬದುಕು ಹಳ್ಳಿಯಲ್ಲಿದೆ ಅಲ್ಲಿಂದಲೇ ಜನಪದ ಆರಂಭವಾಗುವುದು ಎಂದು ಆಶೀರ್ವದಿಸಿದರು.

ಜಾನಪದ ವಿದ್ವಾಂಸ ಡಾ.ರಾಮೇಗೌಡ, ಸಮಾಜ ಸೇವಕ ತೀರ್ಥಹಳ್ಳಿಯ ಹಿರಿಯಣ್ಣ ಹೆಗಡೆ, ಶಿಕ್ಷಣ ಕ್ಷೇತ್ರದ ಸಾಧಕರಾದ ಕೆ.ಪಿ.ಬಸವೇಗೌಡ, ಶ್ರೀಕೃಷ್ಣ ಪಾರಿಜಾತ, ಜಾನಪದ ಕಲಾವಿದೆ ಮಲ್ಲವ್ವ ಬಸಪ್ಪ ಮೇಗೇರಿ ಅವರಿಗೆ ಚುಂಚಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಚುಂಚಶ್ರೀ ಸ್ಮರಣ ಸಂಚಿಕೆ ಲೋಕಾರ್ಪಣೆಗೊಳಿಸಿದ ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವಥ್ ನಾರಾಯಣ್ ಹಾಗೂ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿದರು. ವೇದಿಕೆಯಲ್ಲಿ ಶ್ರೀ ಮಠದ ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ, ಮಾಜಿ ಶಾಸಕ ಕೆ.ಸುರೇಶ್‌ಗೌಡ, ಶಾಖಾ ಮಠಗಳ ಪುರುಷೋತ್ತಮಾನಂದಶ್ರೀ, ಶಂಭುನಾಥ ಸ್ವಾಮೀಜಿ, ಧರ್ಮಪಾಲನಾಥ ಸ್ವಾಮೀಜಿ, ಸೌಮ್ಯನಾಥ ಸ್ವಾಮೀಜಿ, ಮಂಗಳನಾಥ ಸ್ವಾಮೀಜಿ, ಗುಣನಾಥ ಸ್ವಾಮೀಜಿ, ಆದಿಚುಂಚನಗಿರಿ ವಿವಿಯ ಉಪಕುಲಪತಿ ಡಾ.ಎಂ.ಎ. ಶೇಖರ್ ಉಪಸ್ಥಿತರಿದ್ದರು.

ನಾನು ಆರೋಪ ಮುಕ್ತನಾಗುವವರೆಗೂ ಸಿಎಂ ಪ್ರಾಸಿಕ್ಯೂಷನ್ ಬಗ್ಗೆ ಮಾತನಾಡಲ್ಲ: ಹೆಚ್ಡಿಕೆ

ಮಂಡ್ಯ/ಆದಿಚುಂಚನಗಿರಿ,ಸೆ.24– ನನ್ನದು ಯಾವುದೇ ತಪ್ಪಿಲ್ಲದಿದ್ದರೂ ಆರೋಪಿಯನ್ನಾಗಿ ಮಾಡಲು ರಾಜ್ಯ ಸರ್ಕಾರ ಹೊರಟಿದೆ. ನನ್ನ ಮೇಲಿನ ಆರೋಪ ಎಲ್ಲಾ ಮುಗಿಯಲಿ. ಅಲ್ಲಿಯವರೆಗೆ ಮುಖ್ಯಮಂತ್ರಿಗಳ ವಿರುದ್ಧದ ಪ್ರಾಸಿಕ್ಯೂಷನ್ ಬಗ್ಗೆ ಮಾತನಾಡುವುದಿಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಆದಿಚುಂಚನಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು ಪಾದಯಾತ್ರೆಗೆ ನಾನು ಹೋಗಿದ್ದೆ. ಪಾದಯಾತ್ರೆಯಲ್ಲಿ ನಾನು ಜನರನ್ನು ಜಾಗೃತರನ್ನಾಗಿ ಮಾಡುವ ಕೆಲಸ ಮಾಡಿದ್ದೇನೆ. ಇವರ ಬಗ್ಗೆ ನಾನೇನು ಮಾತಾಡಿಲ್ಲ. ನಾನು ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯ ಮಾಡಿಲ್ಲ ಇರುವ ಪರಿಸ್ಥಿತಿಯನ್ನು ಜನರಿಗೆ ಹೇಳಿದ್ದೇನೆ ಎಂದರು.

ದೇಶದ ಕಾನೂನಿನಲ್ಲಿ ರಕ್ಷಣೆ ಕೊಡಲು ಸಂವಿಧಾನದಲ್ಲಿ ಅವಕಾಶ ಇದೆ. ಕಾನೂನು ಬಾಹಿರ ಚಟುವಟಿಕೆ ಮಾಡಿದರೆ ಏನು ತೀರ್ಪು ಬೇಕು ಅದು ಕೊಡುತ್ತಾರೆ. ನಾನು ಸಿದ್ದರಾಮಯ್ಯ ಅವರಿಗೆ ಏನು ಹೇಳಲ್ಲ. ನನ್ನ ಅಭಿಪ್ರಾಯ ಹೇಳಲ್ಲ. ಕುಮಾರಸ್ವಾಮಿ ಏನೋ ಮಾಡಿದ್ದಾನೆ ಎಂದು ಹೇಳಿದ್ದು, ನನ್ನ ನೈತಿಕತೆ ಏನು ಎನ್ನೊದು ಕ್ಲಿಯರ್ ಆಗಬೇಕು ಎಂದು ಸ್ಪಷ್ಟಪಡಿಸಿದರು.

ನನ್ನ ಮೇಲೆ ಷಡ್ಯಂತ್ರ ನಡೆಯುತ್ತಿರೋ ಬಗ್ಗೆ ಇನ್ನೂ ಅನುಮಾನ ಇದೆ. ನಾನು ಇದನ್ನು ಷಡ್ಯಂತ್ರ ಅನ್ನಲ್ಲಾ. ಕುಮಾರಸ್ವಾಮಿ ಕೇಂದ್ರ ಸಚಿವನಾಗಿರೋದನ್ನು ಸಹಿಸುತ್ತಿಲ್ಲ. ಜನರ ಮಧ್ಯ ಕಂದಕ ಸೃಷ್ಟಿ ಮಾಡಲು ಹೀಗೆ ಮಾಡುತ್ತಾ ಇದ್ದಾರೆ. ಯಾವ ಮಂತ್ರಿ ಬಿಡಾಡಿಗಳು ಏನು ಮಾಡೋಕೆ ಆಗಲ್ಲ ಎಂದರು.

ಗ್ರೇಟ್ ಪಾಲಿಟಿಷಿಯನ್ ಒಬ್ಬರು ನನ್ನ ಮೇಲೆ ಸುಳ್ಳು ಆರೋಪ ಮಾಡಿದ್ದಾರೆ. ಅದೇಲ್ಲಾ ಕ್ಲಿಯರ್ ಆದ ಬಳಿಕ ಮಾತನಾಡುವೆ. ಸಿಎಂ ನೈತಿಕಹೊಣೆ ಹೊರಲ್ಲಿಲ್ಲ ಅಂದರೆ ನಾನು ಹೇಳೋಕೆ ಆಗುತ್ತಾ. ನನ್ನ ಇಕ್ಕಟ್ಟಿಗೆ ಸಿಗಿಸಲು ಹೋಗಿದ್ದಾರೆ. ನಾನು ಹೆದರುವವನಲ್ಲಾ. ಕಾನೂನಿನ ವ್ಯಾಪ್ತಿಯಲ್ಲಿ ಹೋರಾಟ ಮಾಡೋನು ನಾನು. ನಾಲ್ಕೈದು ಮಂದಿ ಬಿಡಾಡಿ ಮಂತ್ರಿಗಳು ನನ್ನ ಮೇಲೆ ಆರೋಪ ಮಾಡಿದ್ದಾರೆ.

ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ ಮಾತನಾಡಿ, ಸಿಎಂ ವಿರುದ್ಧ ತನಿಖೆಗೆ ಹೈಕೋರ್ಟ್ ಆದೇಶ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ಸತ್ಯ ಎತ್ತಿಹಿಡಿಯುವ ಕೆಲಸವಾಗಿದೆ. ಪಾರದರ್ಶಕ ತನಿಖೆ ನಡೆಯಲಿ. ಹೈಕೋರ್ಟ್ ಆದೇಶ ಸ್ವಾಗತಿಸಿಸುತ್ತೇವೆ, ಸತ್ಯಕ್ಕೆ ಗೆಲುವಿದೆ. ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಬೇಕು. ರಾಜ್ಯದ ಎಲ್ಲಾ ಜನರಿಗೂ ಕೇಸ್ ಬಗ್ಗೆ ಗೊತ್ತಿದ್ದು, ಅವರ ಕೈವಾಡ, ಅಧಿಕಾರ ದುರ್ಬಳಕೆ ಸ್ಪಷ್ಟವಾಗಿದೆ. ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಜನರು ಆಗ್ರಹಿಸುತ್ತಿದ್ದಾರೆ ಎಂದು ಹೇಳಿದರು.

ಪ್ರಾಮಾಣಿಕತೆ ಮೆರೆದ ಕೆಎಸ್‌ಐಎಸ್‌ಎಫ್ ಸಿಬ್ಬಂದಿ

ಪ್ರವಾಸಿಗರ ಬಿಟ್ಟು ಹೋಗಿದ್ದ ಲಕ್ಷಾಂತರ ರೂ. ಆಭರಣ, ನಗದು ಇದ್ದ ಬ್ಯಾಗ್ ಜೋಪಾನ ಮಾಡಿ ವಾಪಸ್ ಹಿಂತಿರುಗಿಸಿದರು.

ಶ್ರೀರಂಗಪಟ್ಟಣ,ಸೆ.24– ತಾಲೂಕಿನ ಕೆಆರ್‌ಎಸ್ ಬೃಂದಾವನ ವೀಕ್ಷಣೆಗೆ ಕುಟುಂಬ ಸಮೇರರಾಗಿ ಆಗಮಿಸಿದ್ದ ಪ್ರವಾಸಿಗರೊಬ್ಬರು ಮರೆತು ಬಿಟ್ಟು ಹೋಗಿದ್ದ ಲಕ್ಷಾಂತರ ರೂ ಮೌಲ್ಯದ ಚಿನ್ನಾಭರಣ ಹಾಗೂ ನಗದು ಇದ್ದ ವ್ಯಾನಿಟಿ ಬ್ಯಾಗ್‌ನ್ನು ಕೆಎಸ್‌ಐಎಸ್‌ಎಫ್ ಸಿಬ್ಬಂದಿಗಳಾದ ಮಾದಪ್ಪ ಹಾಗೂ ಹರೀಶ್ ಅದರ ಮಾಲೀಕರಿಗೆ ವಾಪಸ್ಸು ನೀಡಿ ಪ್ರಾಮಾಣಿಕತೆ ಮೆರೆದಿದ್ದಾರೆ.

ಬೃಂದಾವನದ ಪ್ರವೇಶದ್ವಾರದ ಮುಂಭಾಗದಲ್ಲಿ ಶಿವಮೊಗ್ಗ ಮೂಲದ ಪ್ರವಾಸಿಗರು ಸೆಲ್ಫಿ ತೆಗೆದುಕೊಳ್ಳುವ ಸಲುವಾಗಿ ಅಲ್ಲಿನ ಕಬ್ಬಿಣದ ಗ್ರಿಲ್‌ಗೆ ಲಕ್ಷಾಂತರ ರೂ ಮೌಲ್ಯದ ಚಿನ್ನಾಭರಣ ಮತ್ತು ನಗದು ಇದ್ದ ವ್ಯಾನಿಟಿ ಬ್ಯಾಗ್ ನೇತುಹಾಕಿ ಸೆಲ್ಫಿ ತೆಗೆದುಕೊಂಡ ನಂತರ ಮರೆತು ಹೊರಟು ಹೋಗಿದ್ದರು. ಪ್ರವೇಶ ದ್ವಾರದಲ್ಲಿ ಕರ್ತವ್ಯದಲ್ಲಿದ್ದ ಮುಖ್ಯ ಪೇದೆಗಳಾದ ಮಾದಪ್ಪ ಹಾಗೂ ಹರೀಶ್ ಅನಾಥವಾಗಿದ್ದ ವ್ಯಾನಿಟಿ ಬ್ಯಾಗ್‌ನ್ನು ತಂದು ಜೋಪಾನವಾಗಿರಿಸಿದ್ದರು.

ಸುಮಾರು 15 ಕಿ.ಮೀ ದೂರದ ಮೈಸೂರು ನಗರದ ಹೂಟಗಳ್ಳಿ ಬಳಿ ತೆರಳಿದ್ದ ಪ್ರವಾಸಿಗರಿಗೆ ತಾವು ಮರೆತು ಹೋಗಿದ್ದ ಬ್ಯಾಗಿನ ಬಗ್ಗೆ ನೆನಪಾಗಿ ಮತ್ತೆಬೃಂದಾವನಕ್ಕೆವಾಪಸ್ಸು ಬಂದಾಗ ಅಲ್ಲೇ ಸ್ಥಳದಲ್ಲಿ ಕರ್ನಾಟಕ ಕೈಗಾರಿಕಾ ಭದ್ರತಾ ಪಡೆಯ ಮಾದಪ್ಪ ಹಾಗೂ ಹರೀಶ್ ಬ್ಯಾಗಿನ ಬಗ್ಗೆ ಮಾಹಿತಿ ಪಡೆದು ಪ್ರವಾಸಿಗರಿಗೆ ವಾಪಸ್ಸು ನೀಡಿ ಮಾನವೀಯತೆ ಮೆರೆದಿದ್ದಾರೆ.

ಲಕ್ಷಾಂತರ ಮೌಲ್ಯದ ಚಿನ್ನಾಭರಣ ಹಾಗೂ ನಗದು ಇದ್ದ ಬ್ಯಾಗನ್ನು ಪ್ರವಾಸಿಗರಿಗೆ ಹಿಂದಿರುಗಿಸಿದ ಪೊಲೀಸರ ಕಾರ್ಯವೈಖರಿಗೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದರು. ಪೇದೆಗಳಾದ ಮಾದಪ್ಪ ಮತ್ತು ಹರೀಶ್ ಅವರ ಕಾರ್ಯವನ್ನು ಕೆಆರ್‌ಎಸ್ ಅಣೆಕಟ್ಟೆ ಉಸ್ತುವಾರಿ ಕರ್ನಾಟಕ ಕೈಗಾರಿಕಾ ಪಡೆಯ ಡಿವೈಎಸ್‌ಪಿ ಪ್ರಮೋದ್ ಹಾಗೂ ಉಸ್ತುವಾರಿ ಇನ್ಸ್‌ಪೆಕ್ಟರ್‌ಗಳಾದ ಪ್ರತಾಪ್, ಶಶಿಕಲಾ ಪ್ರಶಂಸಿದ್ದಾರೆ.


ಬ್ಯಾಗನ್ನು ಪ್ರವಾಸಿಗರಿಗೆ ಹಿಂತಿರುಗಿಸುತ್ತಿರುವ ಕೆಎಸ್‌ಐಎಸ್‌ಎಫ್ ಸಿಬ್ಬಂದಿ.

ಶ್ರೀರಂಗಪಟ್ಟಣ ಸ್ನಾನಘಟ್ಟದ ಬಳಿ ಕಾವೇರಿ ಆರತಿಗಾಗಿ ಸ್ಥಳ ಪರಿಶೀಲನೆ

ಶ್ರೀರಂಗಪಟ್ಟಣ: ಗಂಗಾ ಆರತಿ ಮಾದರಿಯಲ್ಲಿ ಕಾವೇರಿ ಆರತಿ ನಡೆಸಲು ಸರ್ಕಾರ ನಿರ್ಧರಿಸಿರುವ ಹಿನ್ನೆಲೆಯಲ್ಲಿ ಶ್ರೀರಂಗಪಟ್ಟಣದ ಸ್ನಾನಘಟ್ಟ ಬಳಿಯ ಕಾವೇರಿ ನದಿಯಲ್ಲಿ ಶಾಸಕರ ರಮೇಶ ಬಂಡಿಸಿದ್ದೇಗೌಡ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ದಸರಾ ಅ.3 ರಿಂದ 5 ದಿನಗಳ ಕಾಲ ನಡೆಯಲಿದ್ದು ಈ ವೇಳೆ ಕಾವೇರಿ ಪೂಜೆ ಹಾಗೂ ಕಾವೇರಿ ಆರತಿ ನಡೆಸಲು ಸರ್ಕಾರ ಚಿಂತನೆ ನಡೆಸಿರುವುದರಿಂದ ಶಾಸಕ ರಮೇಶ ಬಂಡಿಸಿದ್ದೇಗೌಡ ಮಂಗಳವಾರ ಸ್ಥಳ ಪರಿಶೀಲನೆ ನಡೆಸಿದರು.

ಇತ್ತೀಚೆಗೆ ಸಚಿವ ಚಲುವರಾಯಸ್ವಾಮಿ ಸೇರಿದಂತೆ ಮಂಡ್ಯ, ಮೈಸೂರು ಭಾಗದ ಶಾಸಕರು, ಜನಪ್ರತಿನಿಧಿಗಳು ಹಾಗೂ ಜಿಲ್ಲಾಧಿಕಾರಿ ಸೇರಿದಂತೆ ಅಧಿಕಾರಿಗಳ ತಂಡ ವಾರಣಾಸಿ, ಹರಿದ್ವಾರ, ಕಾಶಿಗೆ ಭೇಟಿ ನೀಡಿ ಅಲ್ಲಿನ ಗಂಗಾ ಆರತಿ ಬಗ್ಗೆ ಅಧ್ಯಯನ ನಡೆಸಿ, ರಾಜ್ಯದ ಜೀವನಾಡಿ ಕಾವೇರಿ ನದಿಯಲ್ಲೂ ಸಹ ಕಾವೇರಿ ಆರತಿ ನಡೆಸುವ ಸಂಬಂಧ ಮಾಹಿತಿ ಸಂಗ್ರಹಿಸಿತ್ತು. ರಮೇಶ್ ಬಂಡಿಸಿದ್ದೇಗೌಡರೊಂದಿಗೆ ವೇದಬ್ರಹ್ಮ ಡಾ.ಭಾನುಪ್ರಕಾಶ್ ಶರ್ಮಾ, ತಾ.ಪಂ ಇಒ ವೇಣು, ಪುರಸಭೆ ಮುಖ್ಯಾಧಿಕಾರಿ ಎಂ.ರಾಜಣ್ಣ, ಪುರಸಭಾ ಸದಸ್ಯ ಎಂ.ಎಲ್.ದಿನೇಶ್ ಇತರರು ಸ್ಥಳ ಪರಿಶೀಲನೆ ವೇಳೆ ಉಪಸ್ಥಿತರಿದ್ದರು.



ಒಂದನೇ ಪುಟದಿಂದ

ಹೈಕೋರ್ಟ್

ಕಾಯ್ದಿರಿ ಸಿದ್ದ ತೀರ್ಪನ್ನು ನ್ಯಾಯಪೀಠ ಇಂದು ಪ್ರಕಟಿಸಿತು. ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಖಾಸಗಿ ದೂರುದಾರರು ಅನುಮತಿ ಕೋರಿದ್ದರು. ರಾಜ್ಯಪಾಲರು ಸಂವಿಧಾನದ ವಿಧಿ 17ಎ ಅಡಿ ಪ್ರಾಸಿ ಕ್ಯೂಷನ್‌ಗೆ ಅನುಮತಿ ನೀಡಿದ್ದು ಸರಿಯಾಗಿದೆ. ತನಿಖೆ ಎದುರಿಸಲಿ, ಹಿಂಜರಿಕೆ ಏಕೆ ಎಂದು ತನ್ನ 197 ಪುಟಗಳ ತೀರ್ಪಿನಲ್ಲಿ ನ್ಯಾಯಪೀಠ ತಿಳಿಸಿದೆ.

ಸಚಿವ ಸಂಪುಟದ ಶಿಫಾರಸ್ಸನ್ನು ರಾಜ್ಯಪಾಲರು ತಿರಸ್ಕರಿಸಿದ್ದು ಕಾನೂನು ಬದ್ಧವಾಗಿದ್ದು, ಅವರು ವಿವೇಚನೆ ಬಳಸಿದ್ದಾರೆ ಎಂದು ಹೇಳುವ ಮೂಲಕ ಹೈಕೋರ್ಟ್, ರಿಟ್ ಅರ್ಜಿಯನ್ನು ವಜಾಗೊಳಿಸಿತು. ಮುಖ್ಯಮಂತ್ರಿ ಅವರ ಕುಟುಂಬ ಫಲಾನುಭವಿಗಳಾಗಿದ್ದಾರೆ. ರಾಜ್ಯಪಾಲರ ಕ್ರಮ ಸೂಕ್ತವಾಗಿದೆ ಎಂದು ಸಿದ್ದರಾಮಯ್ಯ ಅವರ ವಾದವನ್ನು ನ್ಯಾಯಮೂರ್ತಿ ತಿರಸ್ಕರಿಸಿದರು.

ಸಿದ್ದರಾಮಯ್ಯ, ರಾಜ್ಯಪಾಲರ ತೀರ್ಮಾನವನ್ನು ಪ್ರಶ್ನಿಸಿ ರಿಟ್ ಅರ್ಜಿ ಸಲ್ಲಿಸಿದ ನಂತರ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಹಿರಿಯ ನ್ಯಾಯವಾದಿಗಳು ಪರ ಮತ್ತು ವಿರೋಧ ವಾದ ಮಂಡಿಸಿದ್ದರು.

ಮುಖ್ಯಮಂತ್ರಿ ಪರ ವಾದ ಮಂಡಿಸಿದ ಸುಪ್ರೀಂಕೋರ್ಟ್‌ನ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಪಾತ್ರ ಏನಿತ್ತೆಂಬುದನ್ನು ರಾಜ್ಯಪಾಲರು ತಿಳಿಸಿಲ್ಲ.

ನಮ್ಮ ಕಕ್ಷಿದಾರರು ಅಧಿಕಾರದ ವಿವಿಧ ಹುದ್ದೆಗಳಲ್ಲಿ ಇದ್ದರೂ, ಎಂದೂ ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು ತಮ್ಮ ಕುಟುಂಬ ವರ್ಗಕ್ಕೆ ನಿವೇಶನ ಪಡೆಯುವ ಕೆಲಸ ಮಾಡಲಿಲ್ಲ.

ರಾಜ್ಯಪಾಲರು ತಮ್ಮ ವಿವೇಚನಾಧಿಕಾರವನ್ನು ವಿಶೇಷ ಸಂದರ್ಭದಲ್ಲಷ್ಟೇ ಬಳಸಬೇಕು, ಹಾಗೆ ಬಳಸಿದ ಸಂದರ್ಭಗಳಲ್ಲಿ ಕಾರಣಗಳನ್ನು ನೀಡಬೇಕು. ಆದರೆ, ಯಾವುದೇ ಪ್ರಕ್ರಿಯೆ ಪಾಲಿಸದೆ, ತರಾತುರಿಯಲ್ಲಿ ತನಿಖೆಗೆ ಆದೇಶ ನೀಡಿದ್ದಾರೆ.

ಖಾಸಗಿ ದೂರಿನ ಮೇಲೆ 17ಎ ಅಡಿ ತನಿಖೆಗೆ ಆದೇಶ ನೀಡಲು ಸಾಧ್ಯವಿಲ್ಲ ಮತ್ತು ರಾಜ್ಯ ಸಚಿವ ಸಂಪುಟ ತೆಗೆದುಕೊಂಡ ತೀರ್ಮಾನವನ್ನು ಕಡೆಗಣಿಸಲಾಗಿದೆ ಎಂದು ವಾದ ಮಾಡಿದ್ದರು.

ಇದಕ್ಕೆ ಪುಷ್ಟಿ ನೀಡುವಂತೆ ರಾಜ್ಯದ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಮಾಜಿ ಅಡ್ವೋಕೇಟ್ ಜನರಲ್ ರವಿವರ್ಮಕುಮಾರ್ ವಾದ ಮಂಡಿಸಿದರೆ, ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ದೂರುದಾರರ ಪರ ಮಣೀಂದರ್ ಸಿಂಗ್, ರಾಘವನ್, ಲಕ್ಷ್ಮೀ ಐಯ್ಯಂಗಾರ್ ಮತ್ತಿತರರು ವಾದ ಮಂಡಿಸಿದ್ದರು.

ಅಕ್ಟೋಬರ್ 21ರಿಂದ ವಾರಾಂತ್ಯಗಳಲ್ಲೂ ಸಬ್ ರಿಜಿಸ್ಟ್ರಾರ್ ಕಚೇರಿ ತೆರೆಯುತ್ತವೆ


ಪತ್ರಿಕಾಗೋಷ್ಠಿಯಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ಮಾತನಾಡಿದರು.

ಬೆಂಗಳೂರು, ಸೆ.24– ಅಕ್ಟೋಬರ್ 21 ರಿಂದ ವಾರಾಂತ್ಯದ ದಿನಗಳಲ್ಲೂ ಉಪನೋಂದಣಿ ಕಚೇರಿ ಕಾರ್ಯನಿರ್ವಹಿಸಲಿವೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ತಿಳಿಸಿದ್ದಾರೆ.

ವಿಕಾಸಸೌಧದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ದುಡಿಯುವ ಮಧ್ಯಮ ವರ್ಗದ ಜನ ವಾರದ ದಿನಗಳಲ್ಲಿ ತಮ್ಮ ಕೆಲಸಗಳನ್ನು ಬಿಟ್ಟು ಉಪ ನೋಂದಣಿ ಕಚೇರಿಗಳಿಗೆ ಆಗಮಿಸುವುದು ಕಷ್ಟ, ಅಲ್ಲದೆ, ನೋಂದಣಿಗಾಗಿ ಹೊರ ರಾಜ್ಯದಿಂದ ಆಗಮಿಸುವವರಿಗೂ ಅನಾನುಕೂಲ ಉಂಟಾಗುತ್ತಿದೆ. ಹೀಗಾಗಿ ದುಡಿಯುವ ವರ್ಗದ ಜನರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಎರಡನೇ–ನಾಲ್ಕನೇ ಶನಿವಾರ ಹಾಗೂ ಭಾನುವಾರಗಳಲ್ಲೂ ಉಪ ನೋಂದಣಿ ಕಚೇರಿಗಳನ್ನು ತೆರೆಯಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಅಕ್ಟೋಬರ್ 21ರ ನಂತರ ಪ್ರತಿ ನೋಂದಣಿ ಜಿಲ್ಲೆಗಳಲ್ಲಿ ಒಂದು ಸಬ್ ರಿಜಿಸ್ಟ್ರಾರ್ ಕಚೇರಿ ಶನಿವಾರ, ಭಾನು ವಾರ ರಜಾ ದಿನಗಳಲ್ಲೂ ಕಾರ್ಯನಿರ್ವ ಹಿಸಲಿವೆ. ರಜೆ ದಿನಗಳಲ್ಲಿ ಯಾವ ನೋಂದಣಿ ಕಚೇರಿ ಕಾರ್ಯನಿರ್ವ ಹಿಸಲಿವೆ ಎಂದು ಅವಧಿಗೆ ಮೊದಲೇ ಪಟ್ಟಿ ಬಿಡುಗಡೆ ಮಾಡಲಾಗುತ್ತದೆ. ನೋಂದಣಿಗಾಗಿ ಸಾರ್ವಜನಿಕರು ಅರ್ಜಿ ಹಾಕಿದಾಗ ಯಾವ ಕಚೇರಿ ತೆರೆದಿರುತ್ತದೆ ಎಂಬ ಮಾಹಿತಿಯನ್ನು ಆನ್ಲೈನ್ ಮೂಲಕ ನೀಡಲಾಗುತ್ತದೆ ಎಂದು ತಿಳಿಸಿದರು.

ಶನಿವಾರ–ಭಾನುವಾರಗಳಲ್ಲೂ ನೋಂದಣಿ ಕಚೇರಿಗಳನ್ನು ತೆರೆಯಬೇಕು ಎಂಬ ಒತ್ತಾಯ ಈ ಹಿಂದಿನಿಂದಲೂ ಇತ್ತು. ಅಲ್ಲದೆ, ಬಜೆಟ್ ವೇಳೆ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಬಗ್ಗೆ ಇಲಾಖೆಗೆ ಸೂಚನೆ ನೀಡಿದ್ದರು. ಹೀಗಾಗಿ ಇದಕ್ಕೆ ಬೇಕಾದಂತೆ ಕಾನೂನುಗಳನ್ನು ತಿದ್ದುಪಡಿ ಮಾಡಿ, ಈ ಬಗ್ಗೆ ಸಚಿವ ಸಂಪುಟದಿಂದಲೂ ಅನುಮೋದನೆ ಪಡೆಯಲಾಗಿದೆ ಎಂದರು.

ಅಕ್ರಮ ನೋಂದಣಿ ಹಾಗೂ ತೆರಿಗೆ ವಂಚನೆಯನ್ನು ತಡೆಯುವ ಸಲುವಾಗಿ ನೋಂದಣಿ ಸಮಯದಲ್ಲಿ ಡಿಜಿಟಲ್ ಇಂಟಗ್ರೇಷನ್ ಖಾತಾ ನಿಯಮವನ್ನು ಜಾರಿಗೊಳಿಸಲಾಗಿದೆ. ನಿಜವಾದ ಸ್ವತ್ತಿಗೆ ಖಾತೆ ಇಲ್ಲದಿದ್ದರೂ ಕೆಲವರು ಕೇವಲ ಪೇಪರ್‌ನಲ್ಲಿ ಖಾತೆ ಪ್ರಿಂಟ್ ಮಾಡಿಸಿ ಅದರ ಮೂಲಕ ನೋಂದಣಿ ಮಾಡಿಸಿ ಕೊಳ್ಳುತ್ತಿದ್ದಾರೆ. ಗ್ರಾಮ ಪಂಚಾಯತ್, ಬಿಬಿಎಂಪಿ, ನಗರಸಭೆ ಖಾತೆ ಮಾಡಿಸದಿದ್ದರೂ ಇಂತಹ ಬೋಗಸ್ ಖಾತೆ ಮೂಲಕ ಅಕ್ರಮ ನೋಂದಣಿ ಮಾಡಲಾಗುತ್ತಿದೆ ಇದರಿಂದ ಅನೇಕ ಅಮಾಯಕರಿಗೆ ತೊಂದರೆಯಾಗುತ್ತಿದೆ.

ನೋಂದಣಿ ಮಾಡಿಸುವಾಗ ಇತರೆ ಎಂಬ ಒಂದು ಕ್ಯಾಟಗರಿ ಇದೆ. ಆಶ್ರಯ ನಿವೇಶನಗಳನ್ನು ನೋಂದಾಯಿಸುವಾಗ ಮಾತ್ರ ಈ ಕ್ಯಾಟಗರಿಯನ್ನು ಬಳಸಲಾಗುತ್ತದೆ. ಇದರಲ್ಲಿ ಮಾರುಕಟ್ಟೆ ಬೆಲೆ (ಗೈಡನ್ಸ್ ವ್ಯಾಲ್ಯೂ) ಕಡಿಮೆ ಇರುತ್ತೆ. ನೋಂದಣಿ ಶುಲ್ಕವೂ ಕಡಿಮೆ ಇರುತ್ತದೆ. ಹೀಗಾಗಿ ಹಲವರು ತಮ್ಮದು ಖಾಸಗಿ ಸ್ವತ್ತಾಗಿದ್ದರೂ ಇತರೆ ಎಂದು ತೋರಿಸಿ ದೊಡ್ಡ ಪ್ರಮಾಣದಲ್ಲಿ ಕಟ್ಟಬೇಕಿರುವ ವೆಚ್ಚವನ್ನು ಮೋಸ ಮಾಡುತ್ತಿದ್ದಾರೆ.

ಈ ಹಿಂದೆ ನೋಂದಣಿ ಮುಖ್ಯಸ್ಥರಾಗಿದ್ದ ತ್ರಿಲೋಕ್ ಚಂದ್ರ ನಡೆಸಿದ ಅಧ್ಯಯನದಂತೆ ಬೆಂಗಳೂರಿನ 4 ನೋಂದಣಿ ಕಚೇರಿಗಳಲ್ಲಿ ನಕಲಿ ಖಾತೆ ಮೂಲಕ ಎಷ್ಟು ನೋಂದಣಿಯಾಗುತ್ತಿವೆ ಹಾಗೂ ತೆರಿಗೆ ವಂಚನೆ ಪ್ರಕರಣಗಳನ್ನೂ ಗುರುತಿಸಿದ್ದಾರೆ. ಅವರ ಪ್ರಕಾರ 2018ರ ಜು.1ರಿಂದ 2019ರ ಡಿ.10ರ ಅವಧಿಯಲ್ಲಿ ಬೆಂಗಳೂರು ಒಂದರಲ್ಲೇ 250 ಕೋಟಿ ರೂ.ನಷ್ಟವಾಗಿದೆ ಎಂದು ಅಂದಾಜಿಸಿದ್ದಾರೆ.

ಡಿಜಿಟಲ್ ಇಂಟಿಗ್ರೇಷನ್ ಖಾತಾವನ್ನು ಈ ತಿಂಗಳ ಆರಂಭದಲ್ಲೆ ಪ್ರಾಯೋಗಿಕವಾಗಿ 4 ಜಿಲ್ಲೆಗಳಲ್ಲಿ ಜಾರಿ ಮಾಡಲಾಗಿದೆ. ಮತ್ತೆ 8 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ರಾಜ್ಯದಲ್ಲಿ ಈವರೆಗೆ ಎಲ್ಲೂ ಸಮಸ್ಯೆ ಬಂದಿಲ್ಲ. ಬೆಂಗಳೂರಲ್ಲಿ ಸಮಸ್ಯೆ ಬರಬಹುದು. ಹೀಗಾಗಿ ಫೆಬ್ರವರಿಯಲ್ಲೆ ಬಿಡಿಎ, ಕೆಐಎಡಿಬಿ, ಕರ್ನಾಟಕ ಹೌಸಿಂಗ್ ಬೋರ್ಡ್, ಕರ್ನಾಟಕ ರಾಜೀವ್ ಗಾಂಧಿ ವಸತಿ ನಿಗಮ ಎಲ್ಲರನ್ನೂ ಕರೆಸಿ ತಮ್ಮ ಖಾತೆಗಳನ್ನು ಡಿಜಿಟಲೀಕರಣಗೊಳಿಸಿ ಎಂದು ತಿಳಿಸಲಾಗಿದೆ ಎಂದು ಹೇಳಿದರು.

ಜಮ್ಮು–ಕಾಶ್ಮೀರ ವಿಧಾನಸಭೆಗೆ ಇಂದು ಎರಡನೇ ಹಂತದ ಮತದಾನ

ಶ್ರೀನಗರ, ಸೆ.24– ಜಮ್ಮು–ಕಾಶ್ಮೀರ ವಿಧಾನಸಭೆಯ 26 ಕ್ಷೇತ್ರಗಳಿಗೆ ಬುಧವಾರ ಎರಡನೇ ಹಂತದ ಮತದಾನ ನಡೆಯಲಿದೆ. ಆರು ಜಿಲ್ಲೆಗಳ 25.78 ಲಕ್ಷ ಮತದಾರರು ಮಾಜಿ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಮಾಜಿ ಸ್ಪೀಕರ್ ಮುಬಾರಕ್ ಗುಲ್, ಜಮ್ಮು–ಕಾಶ್ಮೀರ ಕಾಂಗ್ರೆಸ್ ಘಟಕದ ಅಧ್ಯಕ್ಷ ತಾರಿಕ್ ಹಮೀದ್ ಕರ್ರಾ ಸೇರಿದಂತೆ 239 ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ಪಿಡಿಪಿಯ ಮಾಜಿ ಸಚಿವರಾದ ಆಸಿಯಾ ನಕಾಶ್, ಗುಲಾಂ ನಬಿ ಹಂಜೂರಾ, ಜೈಲಿನಲ್ಲಿರುವ ಪ್ರತ್ಯೇಕತಾವಾದಿ ನಾಯಕ ಸರ್ಜನ್ ಅಹ್ಮದ್ ವಾಗೇ, ಅಪ್ನಿ ಪಕ್ಷದ ಅಧ್ಯಕ್ಷ ಅಲ್ತಾಫ್ ಬುಖಾರಿ, ಮಾಜಿ ಸಚಿವರಾದ ಅಲಿ ಮೊಹಮ್ಮದ್ ಸಾಗರ್ ಸಹ ಚುನಾವಣಾ ಅಖಾಡದಲ್ಲಿರುವ ಪ್ರಮುಖ ಅಭ್ಯರ್ಥಿಗಳು. ನಗರ ಪ್ರದೇಶದಲ್ಲಿ 1,056 ಹಾಗೂ ಗ್ರಾಮೀಣ ಪ್ರದೇಶದಲ್ಲಿ 2,446 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಪಾರದರ್ಶಕತೆಯ ಖಚಿತತೆಗಾಗಿ ಎಲ್ಲ ಮತಗಟ್ಟೆಗಳು ವೆಬ್‌ಕಾಸ್ಟಿಂಗ್ ಸೌಲಭ್ಯ ಹೊಂದಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಭದ್ರತೆಯ ದೃಷ್ಟಿಯಿಂದ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ ವಾಹನಗಳ ಮೇಲೆ ಕಣ್ಗಾವಲಿಡಲಾಗಿದೆ.

ಅತಿಥಿ ಉಪನ್ಯಾಸಕರ ನೇಮಕ: ಯುಜಿಸಿ ನಿಯಮಾವಳಿ ಅನುಸರಿಸಿ

ಸರ್ಕಾರಕ್ಕೆ ಹೈಕೋರ್ಟ್ ಸೂಚನೆ

ಬೆಂಗಳೂರು, ಸೆ.24– ಅತಿಥಿ ಉಪನ್ಯಾಸಕರ ಹುದ್ದೆಗೆ ಯಾವುದೇ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದಕ್ಕೂ ಮುನ್ನ ವಿಶ್ವವಿದ್ಯಾಲಯ ಧನಸಹಾಯ ಆಯೋಗ (ಯುಜಿಸಿ) ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆ ನಿಯಮಾವಳಿ ಅನುಸರಿಸುವಂತೆ ಹೈಕೋರ್ಟ್ ಉನ್ನತ ಶಿಕ್ಷಣ ಇಲಾಖೆ ಮತ್ತು ಕಾಲೇಜು ಶಿಕ್ಷಣ ಇಲಾಖೆಗೆ ಹೈಕೋರ್ಟ್ ನಿರ್ದೇಶನ ನೀಡಿದೆ. ಎಚ್.ಸಂಜೀವಯ್ಯ ಮತ್ತು ಇತರ ಮೂವರು ಸಲ್ಲಿಸಿದ್ದ ಅರ್ಜಿಯನ್ನು ಭಾಗಶಃ ಪುರಸ್ಕರಿಸಿದ ನ್ಯಾಯಮೂರ್ತಿ ಆರ್.ನಟರಾಜ್ ಈ ನಿರ್ದೇಶನ ನೀಡಿದ್ದಾರೆ.

ಕರ್ನಾಟಕ ರಾಜ್ಯ ಅರ್ಹತಾ ಪರೀಕ್ಷೆ (ಕೆಎಸ್‌ಇಟಿ), ರಾಜ್ಯ ಅರ್ಹತಾ ಪರೀಕ್ಷೆ (ಎಸ್‌ಇಟಿ), ರಾಷ್ಟ್ರೀಯ ಅರ್ಹತಾ ಪರೀಕ್ಷೆ (ಎನ್‌ಇಟಿ), ಪಿಎಚ್‌ಡಿ ಪರೀಕ್ಷೆಗಳನ್ನು ಒತ್ತಾಯಿಸದೆ ಸ್ನಾತಕೋತ್ತರ ಪದವೀಧರರನ್ನು ಮಾತ್ರ ಪರಿಗಣಿಸುವ ಆಗಸ್ಟ್ 24, 2024ರ ಅಧಿಸೂಚನೆಯನ್ನು ಅರ್ಜಿದಾರರು ಪ್ರಶ್ನಿಸಿದ್ದರು.

ಅರ್ಜಿ ಪರಿಶೀಲಿಸಿದ ನ್ಯಾಯಾಲಯ, ಯುಜಿಸಿ ನಿಯಮಾವಳಿಗಳು, 2018ರಲ್ಲಿ ಸೂಚಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರದ ಯಾವುದೇ ಅಭ್ಯರ್ಥಿಯನ್ನು ಇಲಾಖೆಗಳು ಆಯ್ಕೆ ಮಾಡಬಾರದು ಎಂದು ಸ್ಪಷ್ಟಪಡಿಸಿದೆ.

ನಟಿ ಮೇಲೆ ಅತ್ಯಾಚಾರ ಆರೋಪ: ಕೇರಳ ಶಾಸಕ ನಟ ಮುಖೇಶ್ ಬಂಧನ

ಕೊಚ್ಚಿ, ಸೆ.24–ಮಹಿಳಾ ನಟಿಯೊಬ್ಬರ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಆಡಳಿತಾರೂಢ ಸಿಪಿಐ(ಎಂ) ಶಾಸಕ ಹಾಗೂ ನಟ ಎಂ ಮುಖೇಶ್ ಅವರನ್ನು ವಿಶೇಷ ತನಿಖಾ ತಂಡ(ಎಸ್‌ಐಟಿ) ಮಂಗಳವಾರ ಔಪಚಾರಿಕವಾಗಿ ಬಂಧಿಸಿ, ಬಳಿಕ ಜಾಮೀನಿನ ಮೇಲೆ ಬಿಡುಗಡೆ ಮಾಡಿದೆ.

ಶಾಸಕರನ್ನು ಬಂಧಿಸಲಾಗಿತ್ತು. ಅವರ ವೈದ್ಯಕೀಯ ಪರೀಕ್ಷೆ ಮತ್ತು ಪುರುಷತ್ವ ಪರೀಕ್ಷೆಯನ್ನು ನಡೆಸಲಾಯಿತು. ಈ ತಿಂಗಳ ಆರಂಭದಲ್ಲಿ ಅವರು ಸೆಷನ್ಸ್ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದಿದ್ದರಿಂದ ಅವರನ್ನು ಬಿಡುಗಡೆ ಮಾಡಲಾಯಿತು ಎಂದು ಅವರ ವಕೀಲರು ಖಚಿತಪಡಿಸಿದ್ದಾರೆ.

ನಟನ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆ ನಡೆ ಸುತ್ತಿರುವ ಎಸ್‌ಐಟಿ ಅವರನ್ನು ವಿಚಾರಣೆಗೆ ಕರೆದ ನಂತರ ವಶಕ್ಕೆ ಪಡೆದು, ವೈದ್ಯಕೀಯ ಪರೀಕ್ಷೆಗೆ ಒಳಪಡಿಸ ಲಾಗಿದೆ.



ಇಂದು ಬೆಳಗ್ಗೆ 9.45ಕ್ಕೆ ಇಲ್ಲಿನ ಕರಾವಳಿ ಪೊಲೀಸ್ ಹೆಡ್ ಕ್ವಾರ್ಟರ್‌ನಲ್ಲಿರುವ ಎಸ್‌ಐಟಿ ಎದುರು ಮುಕೇಶ್ ಅವರು ವಿಚಾರಣೆಗೆ ಹಾಜರಾಗಿದ್ದು, ಮೂರೂವರೆ ಗಂಟೆಗಳ ಕಾಲ ವಿಚಾರಣೆ ನಡೆಸಲಾಯಿತು.

ಮುಖೇಶ್ ವಿರುದ್ಧ ಎರಡು ಪ್ರಕರಣಗಳು ದಾಖಲಾಗಿವೆ. ಒಂದು ವಡಕ್ಕಂಚೇರಿ ಪೊಲೀಸ್ ಠಾಣೆಯಲ್ಲಿ ಮತ್ತು ಇನ್ನೊಂದು ಮರಡು ಪೊಲೀಸರು ನಟನ ವಿರುದ್ಧ ಕೇಸ್ ದಾಖಲಿಸಿದ್ದಾರೆ.

ಶ್ರೀಲಂಕಾ ನೂತನ ಪ್ರಧಾನಿಯಾಗಿ ಹರಿಣಿ ಅಮರಸೂರ್ಯ ಪ್ರಮಾಣವಚನ ಸ್ವೀಕಾರ



ಕೊಲಂಬೊ, ಸೆ.24– ಶ್ರೀಲಂಕಾದ ನೂತನ ಪ್ರಧಾನಿಯಾಗಿ ಹರಿಣಿ ಅಮರ ಸೂರ್ಯ ಅವರು ಮಂಗಳವಾರ ಪ್ರಮಾಣ ವಚನ ಸ್ವೀಕರಿಸಿದ್ದು, 2000ನೇ ಇಸವಿಯಲ್ಲಿ ಸಿರಿಮಾವೋ ಬಂಡಾರನಾಯಕೆ ನಂತರ ಪ್ರಧಾನಿ ಹುದ್ದೆ ಅಲಂಕರಿಸಿದ ಎರಡನೇ ಮಹಿಳೆ ಎಂಬ ಗೌರವಕ್ಕೆ ಪಾತ್ರರಾಗಿದ್ದಾರೆ.

54 ವರ್ಷದ ನ್ಯಾಷನಲ್ ಪೀಪಲ್ಸ್ ಪವರ್(ಎನ್‌ಪಿಪಿ) ನಾಯಕಿಗೆ ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ಅವರು ಪ್ರಮಾಣ ವಚನ ಬೋಧಿಸಿದರು.

ದಿಸ್ಸಾನಾಯಕೆ ಅವರೇ ಹರಿಣಿ ಅಮರ ಸೂರ್ಯ ಅವರನ್ನು ಪ್ರಧಾನಿಯಾಗಿ ನೇಮಕ ಮಾಡಿದ್ದು, ಅವರೊಂದಿಗೆ ಮೂವರು ಸಚಿವರನ್ನು ಸಹ ನೇಮಕ ಮಾಡಿದ್ದಾರೆ.

ಹರಿಣಿ ಅಮರಸೂರ್ಯ ಅವರಿಗೆ ನ್ಯಾಯ, ಶಿಕ್ಷಣ, ಕಾರ್ಮಿಕ, ಕೈಗಾರಿಕೆಗಳು, ವಿಜ್ಞಾನ ಮತ್ತು ತಂತ್ರಜ್ಞಾನ, ಆರೋಗ್ಯ ಮತ್ತು ಹೂಡಿಕೆ ಸಚಿವರ ಖಾತೆಗಳನ್ನು ನೀಡಲಾಗಿದೆ. ಅಧ್ಯಕ್ಷೀಯ ಚುನಾವಣೆಯ ನಂತರ ದಿನೇಶ್ ಗುಣವರ್ಧನ ಅವರು ಶ್ರೀಲಂಕಾ ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಅವರ ಸ್ಥಾನಕ್ಕೆ ಹರಿಣಿ ಅವರನ್ನು ನೇಮಕ ಮಾಡಲಾಗಿದೆ. ಅಧ್ಯಕ್ಷೀಯ ಚುನಾವಣೆಯಲ್ಲಿ ಜಯಗಳಿಸಿದ್ದ 56 ವರ್ಷದ ದಿಸ್ಸಾನಾಯಕೆ ಅವರು ಭಾನುವಾರ ಶ್ರೀಲಂಕಾದ ಒಂಬತ್ತನೇ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು.

'ಸಖಿ ಸಸಿ–ಪರಿಸರ ದೀವಿಗೆ' ಅರಿವು ಕಾರ್ಯಕ್ರಮ

ಮೈಸೂರು, ಸೆ.24(ಎಸ್‌ಬಿಡಿ)– ಮೈಸೂರಿನ ಸಖಿ ಫೌಂಡೇಷನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ 'ಸಖಿ ಸಸಿ– ಪರಿಸರ ದೀವಿಗೆ' ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಗಾಯತ್ರಿ ಸುಂದರೇಶ್ ಮಾತನಾಡಿ, ನಮ್ಮ ಪರಿಸರದಲ್ಲಿ ಸಾಕಷ್ಟು ಸಸ್ಯ ಪ್ರಬೇಧಗಳಿವೆ. ಅವುಗಳ ಪ್ರಯೋಜನ ಮತ್ತು ಪ್ರಾಮುಖ್ಯತೆ ಬಗ್ಗೆ ತಿಳಿದುಕೊಂಡರೆ ಪರಿಸರ ಪ್ರೇಮ ಹೆಚ್ಚುತ್ತದೆ. ಕೇವಲ ಸಾಮಾಜಿಕ ಜಾಲತಾಣಗಳ ಮಾಹಿತಿಗಳನ್ನಷ್ಟೇ ನೆಚ್ಚಿಕೊಳ್ಳದೇ ಪ್ರತ್ಯಕ್ಷವಾಗಿ ಪ್ರಾತ್ಯಕ್ಷಿಕೆಗಳ ಮೂಲಕ ಅನುಭವ ಪಡೆಯಬೇಕು. ಪ್ರಕೃತಿ ಹಾಗೂ ಮಾನವನ ಸಂಬಂಧ ನಿತ್ಯ ನಿರಂತರ. ಸಸ್ಯಗಳನ್ನು ಪೂಜಿಸಿ, ಆರಾಧಿಸುವ ಸನಾತನ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಬೇಕು ಎಂದರು. ಈ ವೇಳೆ ಪರಿಸರ ಪ್ರೇಮಿಗಳಾದ ನಂದಿನಿ ಹಾಗೂ ಜಾಹ್ನವಿಯವರು ದೊಡ್ಡಪತ್ರೆ ಸಸ್ಯದ ವಿಶೇಷ, ಅದರಲ್ಲಿರುವ ಔಷಧೀಯ ಗುಣ, ಪ್ರಯೋಜನದ ಬಗ್ಗೆ ವಿವರಣೆ ನೀಡಿದರಲ್ಲದೆ, ದೊಡ್ಡಪತ್ರೆ ಗಿಡ ಬೆಳೆಸುವುದು ಹಾಗೂ ಅದನ್ನು ಅಡುಗೆಯಲ್ಲಿ ಬಳಸುವ ವಿಧಾನದ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಬಿ.ಆರ್.ನಾಗರತ್ನ, ಕೆ.ಟಿ.ಶ್ರೀಮತಿ, ಪದ್ಮ, ವೀಣಾ ಶಂಕರ್ ಮತ್ತಿತರರು ಉಪಸ್ಥಿತರಿದ್ದರು.


ಸಖಿ ಫೌಂಡೇಷನ್ ವತಿಯಿಂದ ಆಯೋಜಿಸಿದ್ದ ಪರಿಸರ ಅರಿವು ಕಾರ್ಯಕ್ರಮದಲ್ಲಿ ದೊಡ್ಡಪತ್ರೆ ಪ್ರಯೋಜನದ ಬಗ್ಗೆ ತಿಳಿಸಿಕೊಡಲಾಯಿತು.

ಮೈಸೂರು ಮಿತ್ರ

ವರುಣ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ



ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ ನಡೆಸಲಾಯಿತು.

ಮೈಸೂರು, ಸೆ.24(ಎಂಕೆ)– ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಆಳಗಂಚಿ, ಆಳಗಂಚಿಪುರ, ಇಮ್ಮಾವು, ಇಮ್ಮಾವು ಹುಂಡಿ, ಏಚಗಳ್ಳಿಯಲ್ಲಿ ಬಿಜೆಪಿ ಮೈಸೂರು ಜಿಲ್ಲಾ ಗ್ರಾಮಾಂತರ ವಿಭಾಗದ ವತಿಯಿಂದ ಸದಸ್ಯತ್ವ ಅಭಿಯಾನ ನಡೆಸಲಾಯಿತು. ಈ ವೇಳೆ ಹಲವಾರು ಸದಸ್ಯತ್ವ ನೋಂದಣಿ ಮಾಡಿಸುವ ಮೂಲಕ ಬಿಜೆಪಿ ಸೇರ್ಪಡೆಯಾದರು.

ಬಳಿಕ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್ ಮಹದೇವಸ್ವಾಮಿ, ರಾಜ್ಯದೆಲ್ಲೆಡೆ ಬಿಜೆಪಿ ಸದಸ್ಯತ್ವ ಅಭಿಯಾನ ಚುರುಕಾಗಿ ಸಾಗುತ್ತಿದೆ. ಅಭಿಯಾನದ ನೇತೃತ್ವ ವಹಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಪ್ರತೀ ಜಿಲ್ಲೆಗಳಿಗೂ ತೆರಳಿ ಕಾರ್ಯಕರ್ತರು ಹಾಗೂ ಪದಾಧಿಕಾರಿ ಸೇರಿ ಪಕ್ಷವನ್ನು ಮತ್ತಷ್ಟು ಬಲಿಷ್ಠಗೊಳಿಸಲು ಶ್ರಮಿಸುತ್ತಿದ್ದಾರೆ. ಕೇಂದ್ರ ಸರ್ಕಾರ 'ಒಂದು ರಾಷ್ಟ್ರ ಒಂದು ಚುನಾವಣೆ' ಎಂಬ ಕ್ರಾಂತಿಕಾರಿ ಬೆಳವಣಿಗೆಗೆ ಅಡಿಪಾಯ ಹಾಕಿರುವುದರಿಂದ ದೇಶದ ಅಭಿವೃದ್ಧಿಗೆ ವೇಗ ಬಂದಿದೆ ಎಂದರು.

ಒಂದೇ ಖರ್ಚಿನಲ್ಲಿ ಕೇಂದ್ರ ಹಾಗೂ ರಾಜ್ಯಗಳ ಚುನಾವಣೆ ನಡೆಸುವುದರಿಂದ ಖರ್ಚು ಕಡಿಮೆಯಾಗಲಿದೆ. 31 ರಾಜ್ಯಗಳಲ್ಲಿ ಸುಮಾರು 4120 ಶಾಸಕರಿದ್ದು, ಪ್ರತ್ಯೇಕ ನೂರಾರು ಕೋಟಿ ರೂ. ವೆಚ್ಚವಾಗುತ್ತದೆ ಚುನಾವಣಾ ನೀತಿ ಸಂಹಿತೆಯೂ ಏಕಕಾಲದಲ್ಲಿ ಜಾರಿಯಾಗುವುದರಿಂದ ದೇಶದ ಅಭಿವೃದ್ಧಿಗೂ ಅನುಕೂಲವಾಗಲಿದೆ. ಕಾನೂನು ಮತ್ತು ಸುವ್ಯವಸ್ಥೆಯಲ್ಲಿನ ಸಮಸ್ಯೆಗಳು ಕಡಿಮೆಯಾಗಲಿವೆ ಎಂದು ಅಭಿಪ್ರಾಯಿಸಿದರು.

ಒಬಿಸಿ ಘಟಕದ ಜಿಲ್ಲಾಧ್ಯಕ್ಷ ಬಾಲಚಂದ್ರು, ವರುಣ ಕ್ಷೇತ್ರದ ಸಂಚಾಲಕ ನರ್ಗಲ್ ಮಹದೇವಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಲಕೃಷ್ಣ, ಇಮ್ಮಾವು ಮನು, ಇಮ್ಮಾವುಹುಂಡಿ ಮಹೇಶ್, ನಾಗೇಶ್, ಆಳಗಂಚಿ ಶಿವಯ್ಯ, ತಾ.ಪಂ ಸದಸ್ಯ ಆಳಗಂಚಿ ರಾಜೇಂದ್ರ, ಗುರುಸ್ವಾಮಿ, ಮಹದೇವಸ್ವಾಮಿ, ಸಂದೀಪ್, ನಿರಂಜನ್, ಸಿದ್ದಶೆಟ್ಟಿ, ಶಂಕರ, ಏಚಗಳ್ಳಿ ದಿನೇಶ್, ಶಿವಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಅಭಿನಂದನೆ...



ಮೈಸೂರು ಕುವೆಂಪುನಗರದ ಕೆ ಬ್ಲಾಕ್ ಯೂತ್ಸ್ ವಿನಾಯಕ ಗೆಳೆಯರ ಬಳಗದ 16ನೇ ವರ್ಷದ ಶ್ರೀ ಗಣಪತಿ ಪೂಜಾ ಮಹೋತ್ಸವದ ಅಂಗವಾಗಿ ಕುವೆಂಪುನಗರ ಒಕ್ಕಲಿಗರ ಪ್ರಜ್ಞಾವಂತ ವೇದಿಕೆ ಅಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ ಅವರನ್ನು ಅಭಿನಂದಿಸಲಾಯಿತು. ವೆಂಕಟೇಶ್ ಪ್ರಸಾದ್ (ದಾಸ), ದಿಲೀಪ್‌ಗೌಡ, ಯೋಗೇಶ್, ಭರತ್, ಕಿರಣ್, ಪ್ರದೀಪ್ (ದೇವೇಗೌಡ) ಇತರರು ಚಿತ್ರದಲ್ಲಿದ್ದಾರೆ.

ಇಂದು ಉತ್ತಮ ಪ್ರಪಂಚಕ್ಕಾಗಿ ದೂರದೃಷ್ಟಿಯ ಸಿದ್ಧತೆ: ಎಸ್‌ಡಿಜಿ9 ಕಾರ್ಯಕ್ರಮ

ಮೈಸೂರು, ಸೆ.24–ಬೆಂಗಳೂರು ಭಾರತೀಯ ಮಾನಕ ಬ್ಯೂರೋ ಮತ್ತು ಕರ್ನಾಟಕ ಸಣ್ಣ ಪ್ರಮಾಣದ ಕೈಗಾರಿಕೆಗಳ ಸಂಘ (ಕಾಸ್ಸಿಯಾ) ಇವರ ಸಹಯೋಗದಲ್ಲಿ ಸೆಪ್ಟೆಂಬರ್ 25ರಂದು ಉತ್ತಮ ಪ್ರಪಂಚಕ್ಕಾಗಿ ದೂರದೃಷ್ಟಿಯ ಸಿದ್ಧತೆ: ಎಸ್‌ಡಿಜಿ9 'ಕೃತಕ ಬುದ್ಧಿಮತ್ತೆಯ ಮೂಲಕ ಉದ್ಯಮ, ನಾವೀನ್ಯತೆ ಮತ್ತು ಮೂಲ ಸೌಕರ್ಯವನ್ನು ಸಾಧಿಸುವುದು' ಕಾರ್ಯಕ್ರಮವನ್ನು ಮಧ್ಯಾಹ್ನ 3.30 ಗಂಟೆಗೆ ಮೈಸೂರಿನ ಪೈ ವಿಸ್ತಾ ಹೋಟೆಲ್‌ನಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ' ಕೆ.ಎಂ.ಗಾಯತ್ರಿ ಮಾಡಲಿದ್ದು, ಮುಖ್ಯ ಅತಿಥಿಗಳಾಗಿ ಬಿಐಎಸ್ ಬೆಂಗಳೂರು ಪ್ರಯೋಗಾಲಯದ ವಿಜ್ಞಾನಿ– ಇ/ ನಿರ್ದೇಶಕರು ಮತ್ತು ಮುಖ್ಯಸ್ಥರಾದ ನಾಗಮಣಿ ಟಿ ಮತ್ತು ಕಾಸ್ಸಿಯಾ ಅಧ್ಯಕ್ಷರಾದ ಎಂ.ಜಿ ರಾಜಗೋಪಾಲ್ ಆಗಮಿಸಲಿದ್ದಾರೆ. ಗೌರವ ಅತಿಥಿಗಳಾಗಿ ಹುಣಸೂರಿನ ಸರ್ಕಾರ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಶಸ್ತಿ ಪುರಸ್ಕೃತ ಉಪನ್ಯಾಸಕರಾದ ಹೆಚ್.ಎನ್ ಗಿರೀಶ್ ಮತ್ತು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಕೆ.ಶಿವಲಿಂಗಯ್ಯ ಭಾಗವಹಿಸುವರು.

ಇಂದು ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್‌ನಿಂದ ಚಲನಚಿತ್ರ ಗೀತೆಗಳ ಗಾಯನ

ಮೈಸೂರು, ಸೆ.24(ಜಿಎ)–ಮೈಸೂರಿನ ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಸೆ.25ರಂದು ಸಂಜೆ 5.30ಕ್ಕೆ ನಗರದ ನಾದಬ್ರಹ್ಮ ಸಂಗೀತ ಸಭಾದಲ್ಲಿ ಗಾಯನ ಲೋಕದ ಧ್ರುವತಾರೆಗಳಾದ ಡಾ.ಕೆ.ಜೆ.ಯೇಸುದಾಸ್ ಹಾಗೂ ಡಾ.ಎಸ್.ಪಿ. ಬಾಲಸುಬ್ರಹ್ಮಣ್ಯಂ ಅವರು ಹಾಡಿರುವ ಪ್ರಸಿದ್ಧ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ತಂಡದ ಮುಖ್ಯಸ್ಥ ಮೈಸೂರು ಜಯರಾಂ ಈ ವಿಷಯ ತಿಳಿಸಿ, ಈ ಬಂಧನ ಎಂಬ ಶೀರ್ಷಿಕೆ ಈ ಕಾರ್ಯಕ್ರಮಕ್ಕೆ ನೀಡಲಾಗಿದ್ದು, ಸುಮಾರು 40 ಹಾಡುಗಳನ್ನು ಹಾಡಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಮಹೇಂದ್ರ, ರಾಮಚಂದ್ರು, ಸುರೇಶ್, ಅಶ್ವಿನಿ ಶಾಸ್ತ್ರಿ, ಕಲಾ ಪೋಷಕರಾದ ಲತಾ ಬಾಲಕೃಷ್ಣ ಉಪಸ್ಥಿತರಿದ್ದರು.

ಸೆ.29ರಂದು ನಿಧಿ ಸಂಗ್ರಹ ಕಾರ್ಯಕ್ರಮ

ಮೈಸೂರು: ಮೈಸೂರಿನ ಗಾಂಧಿನಗರದಲ್ಲಿ ಲಿಟಲ್ ಸಿಸ್ಟರ್ಸ್ ಆಫ್ ದಿ ಪೂರ್ ನಡೆಸುತ್ತಿರುವ ವೃದ್ಧಾಶ್ರಮದ ಸಹಾಯಾರ್ಥ ಸೆ.29ರಂದು ಬೆಳಗ್ಗೆ 9ರಿಂದ ಸಂಜೆ 4ರವರೆಗೆ ನಿಧಿ ಸಂಗ್ರಹಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–2455017 ಸಂಪರ್ಕಿಸಬಹುದು.

ಸಿದ್ದರಾಮಯ್ಯ ವಿರುದ್ಧ ತನಿಖೆ ಏಕೆ ಅಗತ್ಯ?

ಹೈಕೋರ್ಟ್ ತೀರ್ಪಿನ ಸಂಪೂರ್ಣ ವಿವರ



ಬೆಂಗಳೂರು, ಸೆ.24– ಪತ್ನಿ ಹೆಸರಿಗೆ 14 ಮುಡಾ ನಿವೇಶನ ಹಂಚಿಕೆ ಪ್ರಕರಣ ಮುಖ್ಯಮಂತ್ರಿ ಸಿದ್ದರಾಮಯ್ಯ ನಿದ್ದೆಗೆಡಿಸಿದೆ. ಭ್ರಷ್ಟಾಚಾರ ತಡೆ ಕಾಯ್ದೆ ಸೆಕ್ಷನ್ 17ಎ ಅಡಿ ರಾಜ್ಯಪಾಲರು ನೀಡಿರುವ ಅನುಮತಿಯನ್ನು ಎತ್ತಿಹಿಡಿದಿರುವ ಹೈಕೋರ್ಟ್ ಸಿಎಂ ಅರ್ಜಿಯನ್ನು ವಜಾಗೊಳಿಸಿದೆ.

ತೀರ್ಪು ಪ್ರಕಟಿಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ತನ್ನ 197 ಪುಟಗಳ ತೀರ್ಪಿನಲ್ಲಿ ವಿವರವಾದ ಕಾರಣಗಳನ್ನೂ ನೀಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆ ಏಕೆ ಅಗತ್ಯವೆಂಬುವುದಕ್ಕೂ ಹೈಕೋರ್ಟ್ ಸ್ಪಷ್ಟ ಕಾರಣಗಳನ್ನು ನೀಡಿದೆ. ರಾಜ್ಯಪಾಲರ ಆದೇಶ ಏಕೆ ಸರಿಯಾಗಿದೆ ಎಂಬುದಕ್ಕೂ ವಿವರಣೆಯನ್ನು ಹೈಕೋರ್ಟ್ ನೀಡಿದೆ.

ಸಿದ್ದರಾಮಯ್ಯ ವಿರುದ್ಧ ತನಿಖೆ ಏಕೆ?: ಭ್ರಷ್ಟಾಚಾರ ತಡೆ ಕಾಯ್ದೆಯ ಸೆಕ್ಷನ್ 7 ಸಿ ಅಡಿ ಸಿದ್ದರಾಮಯ್ಯ ವಿರುದ್ಧ ಆರೋಪವಿದೆ. ಈ ಸೆಕ್ಷನ್ ಅಡಿ ಸಾರ್ವಜನಿಕ ಸೇವಕನಾದವನು ತನಗಾಗಲೀ ಅಥವಾ ಇತರರಿಗಾಗಲೀ ತನ್ನ ಅಧಿಕಾರ ದುರುಪಯೋಗಪಡಿಸಿಕೊಂಡು ನ್ಯಾಯವಲ್ಲದ ಲಾಭ ಪಡೆದರೆ ಅದು ಅಪರಾಧವಾಗುತ್ತದೆ. ಮುಡಾ ಪ್ರಕರಣದ ವಾಸ್ತವಾಂಶಗಳನ್ನು ಗಮನಿಸಿದರೆ ಮೇಲ್ನೋಟಕ್ಕೆ ಸಿಎಂ ಕುಟುಂಬ ನ್ಯಾಯವಲ್ಲದ ಲಾಭ ಪಡೆದಿರುವುದು ಸ್ಪಷ್ಟವಾಗಿದೆ. 40 ಕಿಲೋ ಮೀಟರ್ ದೂರದ ಜಮೀನು ಬಿಟ್ಟುಕೊಟ್ಟು ಅದರ ಬದಲಿಗೆ ಮೈಸೂರಿನ ಹೃದಯ ಭಾಗದ ನಿವೇಶನಗಳನ್ನು ಪಡೆದಿದ್ದಾರೆ.

ಸಾರ್ವಜನಿಕ ಸೇವಕ ತನ್ನ ಕುಟುಂಬದವರಿಗಾಗಿ ಪ್ರಭಾವ ಬಳಸಿರುವುದಕ್ಕೆ ಇದು ಸಾಕು. ಪ್ರಭಾವ ಬಳಸಲು ಸಾರ್ವಜನಿಕ ಸೇವಕ ಯಾವುದೇ ಶಿಫಾರಸು ಅಥವಾ ಆದೇಶ ಮಾಡಬೇಕಿಲ್ಲ. ಪತ್ನಿಗೆ ಲಾಭವಾಗುವುದರ ಹಿಂದೆ ನಿಸ್ಸಂದೇಹವಾಗಿ ಸಿದ್ದರಾಮಯ್ಯ ಇದ್ದಾರೆ. ಸಿದ್ದರಾಮಯ್ಯ ಅವರಿಗಿರುವ ಅಧಿಕಾರದ ಬಲದಿಂದಲೇ ಅವರ ಕುಟುಂಬ ಅನುಕೂಲ ಪಡೆದಿದೆ.

ಕೆಸರೆ ಗ್ರಾಮದಲ್ಲಿ ಜಮೀನು ಕಳೆದುಕೊಂಡವರಿಗೆ ವಿಜಯನಗರ ಮೂರನೇ ಹಂತದ ಬಡಾವಣೆಯಲ್ಲಿ ಬದಲಿ ನಿವೇಶನ ಮಂಜೂರು ಮಾಡಿದ ಬೇರೆ ಉದಾಹರಣೆಗಳಿಲ್ಲ. ಅಚ್ಚರಿಯ ವಿಚಾರವೆಂದರೆ ಸಿಎಂ ಪತ್ನಿಗೆ 50:50 ಅನುಪಾತದಲ್ಲಿ ನಿವೇಶನ ಹಂಚಿಕೆಯಾದ ಬಳಿಕ ಈ ನಿಯಮವನ್ನೇ ರದ್ದುಪಡಿಸಲಾಗಿದೆ. ಸಿಎಂ ಪುತ್ರ ಭಾಗಿಯಾಗಿದ್ದ ಸಭೆಯಲ್ಲಿ 50 50 ನಿವೇಶನ ಹಂಚಿಕೆ ತೀರ್ಮಾನವಾಗಿದೆ. 50:50 ಹಂಚಿಕೆ ಕಾನೂನುಬಾಹಿರವೆಂದು ರದ್ದಾಗಿದ್ದರೆ ಸಿಎಂ ಪತ್ನಿಗೆ ದೊರಕಿದ 14 ನಿವೇಶನಗಳಿಗೆ ಏನಾಗಲಿದೆ ಎಂಬ ಬಗ್ಗೆ ತನಿಖೆಯಾಗಬೇಕಿದೆ. ಸಾಮಾನ್ಯ ನಾಗರಿಕನಾಗಿದ್ದರೆ ತನಿಖೆಗೆ ನಾಚುತ್ತಿರಲಿಲ್ಲ. ಮುಖ್ಯಮಂತ್ರಿ ಹಿಂಜರಿಯಬಾರದು. ಸಿದ್ದರಾಮಯ್ಯ ಕುಟುಂಬದ ವಿರುದ್ಧ 56 ಕೋಟಿಯ ಅಕ್ರಮ ಲಾಭ ಪಡೆದ ಆರೋಪ, ಅನುಮಾನಗಳಿರುವಾಗ ತನಿಖೆ ಅತ್ಯಗತ್ಯವೆಂದು ಭಾವಿಸುತ್ತೇನೆ ಎಂದು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿದೆ.

ಇನ್ನು ಶಶಿಕಲಾ ಜೊಲ್ಲೆ ಪ್ರಕರಣದಲ್ಲಿ ತನಿಖೆಗೆ ಅನುಮತಿ ನಿರಾಕರಿಸಿ, ಸಿಎಂ ಕೇಸ್‌ನಲ್ಲಿ ಅನುಮತಿ ಕೊಟ್ಟಿದ್ದೇಕೆಂದು ಉತ್ತರಿಸಲು ಜೊಲ್ಲೆ ಪ್ರಕರಣ ತಮ್ಮ ಮುಂದಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯ ವ್ಯಕ್ತಪಡಿಸಿದೆ.

ಅಲ್ಲದೇ ಸಿಎಂ ಪರ ವಕೀಲರು ಎತ್ತಿರುವ ಪ್ರಶ್ನೆಗಳಿಗೆ 11 ಅಂಶಗಳ ಕಾರಣಗಳನ್ನೂ ಸಹ ಕೊಡಲಾಗಿದೆ.

- ದೂರುದಾರರು ತಮ್ಮ ದೂರು ಸಲ್ಲಿಸಿರುವುದು ಅಥವಾ ರಾಜ್ಯಪಾಲರಿಂದ ಅನುಮತಿ ಕೋರಿರುವುದು ಸೂಕ್ತವಾಗಿದೆ.
- ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಗಮನಿಸಿದರೆ ಸೆಕ್ಷನ್ 17–ಎ ಅಡಿ ಅನುಮತಿ ಪಡೆಯುವುದು ಅತ್ಯಗತ್ಯವಾಗಿತ್ತು.
- ಸೆ. 17 ಎ ಅಡಿ ಪೊಲೀಸ್ ಅಧಿಕಾರಿಯೇ ಅನುಮತಿ ಪಡೆಯಬೇಕೆಂದಿಲ್ಲ. ಅನುಮತಿ ಪಡೆಯುವುದು ಕೋರ್ಟ್‌ಗೆ ಸಿಆರ್‌ಪಿಸಿ ಸೆಕ್ಷನ್ 200 ಅಡಿ ನೇರವಾಗಿ ದೂರು ಸಲ್ಲಿಸುವ ಖಾಸಗಿ ದೂರುದಾರರ ಕರ್ತವ್ಯವಾಗಿದೆ.
- ರಾಜ್ಯಪಾಲರು ಸಾಮಾನ್ಯ ಸಂದರ್ಭಗಳಲ್ಲಿ ಸಚಿವ ಸಂಪುಟದ ನಿರ್ದೇಶನ ಪಾಲಿಸಬೇಕು. ಅಪರೂಪದ ಸಂದರ್ಭದಲ್ಲಿ ರಾಜ್ಯಪಾಲರು ಸ್ವಂತ ವಿವೇಚನೆ ಬಳಸಬಹುದು. ಈ ಪ್ರಕರಣ ಸ್ವಂತ ವಿವೇಚನೆ ಬಳಸಲು ಅರ್ಹವಾದ ಪ್ರಕರಣ.
- ಸ್ವತಂತ್ರ ವಿವೇಚನೆ ಬಳಸಿದ ರಾಜ್ಯಪಾಲರ ಕ್ರಮದಲ್ಲಿ ತಪ್ಪು ಕಂಡಿಲ್ಲ.
- ನಿರ್ಧಾರ ಕೈಗೊಳ್ಳುವ ಸಕ್ಷಮ ಪ್ರಾಧಿಕಾರದ ಕಡತದಲ್ಲಿ ಕಾರಣಗಳಿದ್ದರೆ ಸಾಕು. ಅದರಲ್ಲೂ ಉನ್ನತ ಪ್ರಾಧಿಕಾರವು ನೀಡುವ ಕಾರಣ ಆದೇಶದ ಭಾಗವಾಗಲಿದೆ. ಆಕ್ಷೇಪಣೆಯ ರೂಪದಲ್ಲಿ ಅಂತಹ ಕಾರಣಗಳನ್ನು ಹೈಕೋರ್ಟ್‌ಗೆ ಸಲ್ಲಿಸಬೇಕಿಲ್ಲ.
- ರಾಜ್ಯಪಾಲರ ಆದೇಶದಲ್ಲಿ ವಿವೇಚನೆ ಬಳಸಿಲ್ಲ ಎಂಬುವಂತಿಲ್ಲ. ಸಂಪೂರ್ಣ ವಿವೇಚನೆ ಬಳಸಿಯೇ ಆದೇಶ ನೀಡಿದ್ದಾರೆ.
- ಸೆ. 17–ಎ ಅಡಿಯಲ್ಲಿ ಆದೇಶಕ್ಕೂ ಮುನ್ನ ಎದುರುದಾರರ ಅಹವಾಲು ಆಲಿಸಬೇಕೆಂದಿಲ್ಲ. ಸಕ್ಷಮ ಪ್ರಾಧಿಕಾರಕ್ಕೆ ಬೇಕೆನಿಸಿದರೆ ಎದುರುದಾರರ ಅಹವಾಲು ಆಲಿಸಬಹುದು.
- ರಾಜ್ಯಪಾಲರ ತರಾತುರಿಯ ಕ್ರಮ ಕೈಗೊಂಡಿದ್ದಾರೆಂಬ ಆರೋಪ ಅವರ ಆದೇಶವನ್ನು ನಿಷ್ಫಲಗೊಳಿಸಿಲ್ಲ.
- ರಾಜ್ಯಪಾಲರು ಭ್ರಷ್ಟಾಚಾರ ತಡೆ ಕಾಯ್ದೆ ಸೆಕ್ಷನ್ 17 ಎ ಅಡಿಯಲ್ಲಿ ತನಿಖೆ ನಡೆಸಲು ಅನುಮತಿಯಷ್ಟೇ ನೀಡಿದ್ದಾರೆ ಬಿಎನ್ ಎಸ್‌ಎಸ್ 218 ಅಡಿ ಪೂರ್ವಾನುಮತಿ ನೀಡಿಲ್ಲವೆಂದು ಸೀಮಿತವಾಗಿ ರಾಜ್ಯಪಾಲರ ಆದೇಶವನ್ನು ಓದತಕ್ಕದ್ದು.
- ದೂರಿನಲ್ಲಿರುವ ಅಂಶಗಳು ನಿಸ್ಸಂದೇಹವಾಗಿ ತನಿಖೆಯನ್ನು ಬಯಸುತ್ತವೆ. ಏಕೆಂದರೆ ಫಲಾನುಭವಿಗಳು ಹೊರಗಿನವರಲ್ಲ . ಸಿದ್ದರಾಮಯ್ಯ ಪತ್ನಿಯೇ ಇದರ ಫಲಾನುಭವಿಯಾಗಿದ್ದಾರೆ ಎಂದು ರಾಜ್ಯಪಾಲರ ಕ್ರಮ ಎತ್ತಿಹಿಡಿಯಲು 11 ಕಾರಣಗಳನ್ನು ನೀಡಿರುವ ಹೈಕೋರ್ಟ್ ಅಂತಿಮವಾಗಿ ತತ್ವಜ್ಞಾನಿ ಬೆಂಜಮಿನ್ ಡಿಸ್ರೇಲಿಯ ಹೇಳಿಕೆಯನ್ನೂ ಉಲ್ಲೇಖಿಸಿದೆ.

ಎಲ್ಲ ಅಧಿಕಾರಗಳೂ ನಂಬಿಕೆಯ ಆಧಾರದಲ್ಲಿ ನೀಡಲ್ಪಟ್ಟಿವೆ. ಅಧಿಕಾರ ಬಳಸುವವರು ಉತ್ತರದಾಯಿಗಳಾಗಿರಬೇಕು. ಜನರಿಂದ ಜನರಿಗಾಗಿ ಈ ಅಧಿಕಾರ ಬಂದಿದೆ. ಅವರಿಗಾಗಿಯೇ ಅದನ್ನು ಮೀಸಲಿಡಬೇಕು ಎಂದು ಉಲ್ಲೇಖಿಸಿ ಸಿಎಂ ಸಿದ್ದರಾಮಯ್ಯ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ಅ.3ರಿಂದ ವಿದ್ಯಾರ್ಥಿಗಳು, ಶಿಕ್ಷಕರಿಗೆ ದೂರದರ್ಶಕ ತಯಾರಿಕಾ ಕಾರ್ಯಾಗಾರ

ಮೈಸೂರು, ಸೆ.24–ಮೈಸೂರ್ ಸೈನ್ಸ್ ಫೌಂಡೇಷನ್ ಮತ್ತು ಬಿ.ಎಸ್.ಎಸ್ ವಿದ್ಯೋದಯ ಸಹಯೋಗದಲ್ಲಿ ಅ.3ರಿಂದ 6ರವರೆಗೆ 5ನೇ ತರಗತಿ ಮೇಲ್ಪಟ್ಟ ವಿದ್ಯಾರ್ಥಿಗಳು ಮತ್ತು ಆಸಕ್ತ ಶಿಕ್ಷಕರಿಗೆ ನಾಲ್ಕು ದಿನಗಳ ದೂರದರ್ಶಕ ತಯಾರಿಕೆ ಕಾರ್ಯಾಗಾರ ಕಾಸ್ಮೊಸ್–2024 ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರವು ಕೃಷ್ಣಮೂರ್ತಿಪುರಂನ ಬಿ.ಎಸ್.ಎಸ್ ವಿದ್ಯೋದಯ ಶಾಲೆಯಲ್ಲಿ ಬೆಳಗ್ಗೆ 10ರಿಂದ ಸಂಜೆ 4ರವರೆಗೆ ನಡೆಯಲಿದೆ. ಕಾರ್ಯಾಗಾರದ ವಿಶೇಷತೆಯೆಂದರೆ 4 ದಿನಗಳು ವಿದ್ಯಾರ್ಥಿಗಳು ಕಚ್ಚಾ ಪದಾರ್ಥಗಳನ್ನು ಬಳಸಿ ಮಾದರಿಗಳನ್ನು ತಯಾರಿಸುತ್ತಾರೆ, ಪ್ರಯೋಗಗಳನ್ನು ಮಾಡುತ್ತಾರೆ ಮತ್ತು ಪ್ರಯೋಗಗಳಿಂದ ಕಲಿತ ಪರಿಕಲ್ಪನೆಗಳನ್ನು ವಿಶ್ಲೇಷಿಸುತ್ತಾರೆ. ಭಾಗವಹಿಸುವ ಎಲ್ಲಾ ಶಿಬಿರಾರ್ಥಿಗಳಿಗೆ ಅಭಿನಂದನಾ ಪತ್ರ ನೀಡಲಾಗುವುದು. ಆಸಕ್ತರು ನೋಂದಾಯಿಸಲು ಜಿ.ಬಿ.ಸಂತೋಷ್ ಕುಮಾರ್ ಮೊ: 8105503863 ಎಚ್.ವಿ.ಮುರಳೀಧರ್ ಮೊ; 8970909949 ಸಂಪರ್ಕಿಸಬಹುದು.

ಉಚಿತ ತಪಾಸಣೆ; ಕ್ಷಾರ ಸೂತ್ರ ಚಿಕಿತ್ಸಾ ಶಿಬಿರ

ಮೈಸೂರು, ಸೆ.24–ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ವತಿಯಿಂದ ಸೆಪ್ಟೆಂಬರ್ 26ರಂದು ಬೆಳಿಗ್ಗೆ 9 ಗಂಟೆಗೆ ಗುದಗತ ರೋಗಗಳಾದ ಫೈಲ್ಸ್, ಫಿಸ್ಚುಲ, ಫಿಶರ್ ಮತ್ತು ಪೈಲೋನೈಡಲ್ ಸೈನಸ್ ಮುಂತಾದವುಗಳ ಉಚಿತ ತಪಾಸಣಾ ಶಿಬಿರ ಮತ್ತು ಕ್ಷಾರ ಸೂತ್ರ ಚಿಕಿತ್ಸೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 7975491224ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚೇತನ್ ವಿಷಕಂಠೇಗೌಡರಿಗೆ ಹುಟ್ಟುಹಬ್ಬದ ಸಂಭ್ರಮ...



ಮೈಸೂರು ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚೇತನ್ ವಿಷಕಂಠೇಗೌಡರ ಹುಟ್ಟುಹಬ್ಬವನ್ನು ಚಾಮರಾಜ ಕ್ಷೇತ್ರದ ಇಂದಿರಾಗಾಂಧಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಆಚರಿಸಲಾಯಿತು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು, ವಾರ್ಡ್ ಅಧ್ಯಕ್ಷ ಕೇಬಲ್ ನಾಗರಾಜು, ಸುರೇಶ್, ಕಾರ್ಯದರ್ಶಿ ರಾಮಚಂದ್ರು, ಮಂಚೇಗೌಡನಕೊಪ್ಪಲು ಮೂರ್ತಿ, ಶ್ರೀಧರ್, ಡೆಲ್ಲಿ ರವಿ, ಪಟೇಲ್ ಗೋವಿಂದರಾಜು, ಕಾಂಗ್ರೆಸ್ ಮುಖಂಡರಾದ ಜಯರಾಮಾಚಾರ್, ಮಾಜಿ ಉಪಮಹಾಪೌರ ಮಹದೇವಪ್ಪ, ಜಗದೀಶ್ ಇತರರು ಆತ್ಮೀಯವಾಗಿ ಅಭಿನಂದಿಸಿ, ಶುಭಾಶಯ ಕೋರಿದರು.

ಕೆ.ಸಿ.ನಗರದಲ್ಲಿ ಶಾಸಕ ಶ್ರೀವತ್ಸ ಪಾದಯಾತ್ರೆ; ಸಾರ್ವಜನಿಕರಿಂದ ಅಹವಾಲು ಆಲಿಕೆ

ಮೈಸೂರು, ಸೆ.24(ಎಸ್‌ಬಿಡಿ)– ಮೈಸೂರಿನ 52ನೇ ವಾರ್ಡ್ ವ್ಯಾಪ್ತಿಯ ಕೆ.ಸಿ.ಲೇಔಟ್‌ನಲ್ಲಿ ಸೋಮವಾರ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಪಾದಯಾತ್ರೆ ನಡೆಸಿ, ಸಾರ್ವಜನಿಕರ ಕುಂದುಕೊರತೆ ಆಲಿಸಿದರು.

ಕೆ.ಸಿ.ಲೇಔಟ್‌ನಲ್ಲಿರುವ ಉದ್ಯಾನಗಳಲ್ಲಿನ ಅವ್ಯವಸ್ಥೆ, ಮಳೆ ನೀರು ಚರಂಡಿ ಹಾಗೂ ಒಳಚರಂಡಿ ಸಮಸ್ಯೆ, ಹೂಳು ತೆಗೆಯದ ಕಾರಣ ನೀರಿನ ಹರಿವಿಗೆ ಅಡ್ಡಿಯಾಗಿ ಸೊಳ್ಳೆ ವಿಪರೀತವಾಗಿರುವುದು, ಬೀದಿನಾಯಿಗಳ ಕಾಟ, ಪಾರ್ಕ್‌ಗಳಲ್ಲಿ ಪುಂಡರ ಉಪಟಳದಿಂದ ಮಹಿಳೆಯರು, ಮಕ್ಕಳು, ಹಿರಿಯ ನಾಗರಿಕರಿಗೆ ತೊಂದರೆಯಾಗುತ್ತಿರುವುದು ಸೇರಿದಂತೆ ಸ್ಥಳೀಯರು ನಿತ್ಯ ಅನುಭವಿಸುತ್ತಿರುವ ಹತ್ತಾರು ಸಮಸ್ಯೆಗಳನ್ನು ಶಾಸಕರ ಮುಂದಿಟ್ಟರು.

ಕೆಲವು ನಾಗರಿಕ ಸಮಸ್ಯೆಗಳನ್ನು ಕಣ್ಣಾರೆ ಕಂಡ ಶಾಸಕರು, ಸ್ಥಳೀಯರು ತಿಳಿಸಿರುವ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಶೀಘ್ರ ಕ್ರಮ ಕೈಗೊಳ್ಳಬೇಕೆಂದು ಸ್ಥಳದಲ್ಲಿದ್ದ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಮೈಸೂರಿನ ಕೆ.ಸಿ.ಲೇಔಟ್‌ನಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಪಾದಯಾತ್ರೆ ನಡೆಸಿ, ಸಾರ್ವಜನಿಕರ ಸಮಸ್ಯೆ ಆಲಿಸಿದರು.

ಈ ವೇಳೆ ನಗರಪಾಲಿಕೆ ಮಾಜಿ ಸದಸ್ಯೆ ಛಾಯಾ ನವೀನ್, ಬಿಜೆಪಿ ಮುಖಂಡರಾದ ಪ್ರಸನ್ನ, ನವೀನ್, ಗೋಕುಲ್ ಗೋವರ್ಧನ್, ಹರೀಶ್, ಹೊಯ್ಸಳ, ಸಂತೋಷ್, ಶೇಖರ್, ವಿಜಯ ಲಕ್ಷ್ಮಿ, ಪದ್ಮ, ಕೆ.ಸಿ.ಬಡಾವಣೆ ನಿವಾಸಿಗಳ ಸಂಘದ ವಿಶ್ವನಾಥ್, ಧರ್ಮೇಂದ್ರ, ನಿಂಗೇಗೌಡ, ವೆಂಕಟೇಶ್, ಕೃಷ್ಣ, ಪ್ರದೀಪ್‌ಕುಮಾರ್, ಮಧು, ಕಿಶೋರ್ ಮತ್ತಿತರರು ಹಾಜರಿದ್ದರು.

ಕುಲಾಂತರಿ ಬೆಳೆ, ಆಹಾರ ವಿರೋಧಿಸಿ ನಾಳೆ ರಾಜ್ಯಾದ್ಯಂತ ರೈತ ಸಂಘದ ಹಸಿರು ಸೇನೆಯಿಂದ ಪ್ರತಿಭಟನೆ

ಮೈಸೂರು, ಸೆ.24(ಜಿಎ)–ಕುಲಾಂತರಿ ಬೆಳೆ ಮತ್ತು ಕುಲಾಂತರಿ ಆಹಾರ ವಿರೋಧಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ರಾಜ್ಯಾದ್ಯಂತ ಸೆ.26ರಂದು ಸಾಮೂಹಿಕ ನಾಯಕತ್ವದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವತಿಯಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಜಿಲ್ಲಾಧ್ಯಕ್ಷ ಟಿ.ಆರ್.ವಿದ್ಯಾಸಾಗರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.26ರಂದು ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದರು.

ಕುಲಾಂತರಿ ಬೆಳೆ ಮತ್ತು ಕುಲಾಂತರಿ ಆಹಾರ ಬೇಡವೇ ಬೇಡ ಎಂದ ಮೇಲೆ ಅದಕ್ಕಾಗಿ ನೀತಿ ರೂಪಿಸುವ ಅಗತ್ಯವಿಲ್ಲ. ರಾಜ್ಯವನ್ನು ಕುಲಾಂತರಿ ಮುಕ್ತ ಕರ್ನಾಟಕವೆಂದು ಘೋಷಿಸಬೇಕೆಂದು ಪ್ರತಿಭಟನೆ ಮೂಲಕ ಆಗ್ರಹಿಸಲಾಗುತ್ತದೆ ಎಂದರು.

ಸರ್ವೋಚ್ಚ ನ್ಯಾಯಾಲಯವು ಸಾರ್ವಜನಿಕ ಸಮಾಲೋಚನೆ ಮೂಲಕ ಕುಲಾಂತರಿ ಬೆಳೆಗಳ ಕುರಿತಾಗಿ ರಾಷ್ಟ್ರೀಯ ನೀತಿ ರೂಪಿಸಲು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಕ್ಕೆ ಆದೇಶಿಸಿದೆ. ಹೀಗಾಗಿ ಒಂದು ವೇಳೆ ನೀತಿ ರೂಪಿಸುವುದಿದ್ದಲ್ಲಿ ರೈತರ ಅಹವಾಲು ಸಹಾ ಆಲಿಸಬೇಕು. ಬೃಹತ್ ಕಂಪನಿಗಳು ತಮ್ಮ ಲಾಭದ ಉದ್ದೇಶದಿಂದ ನಮ್ಮ ಸ್ಥಳೀಯ ಕೃಷಿ, ಸಮುದಾಯಗಳು ಮತ್ತು ದೇಶದ ಸಾರ್ವಭೌಮತ್ವಕ್ಕೆ ಹಾನಿಯುಂಟು ಮಾಡುವ ಕುಲಾಂತರಿ ಬೆಳೆಗಳನ್ನು ಮಾರುಕಟ್ಟೆಗೆ ತರುವ ಹುನ್ನಾರ ಮಾಡುತ್ತಿವೆ ಎಂದರು.

ಬಿತ್ತನೆ ಬೀಜಗಳ ಮೇಲೆ ಬೆರಳೆಣಿಕೆಯಷ್ಟು ಕಂಪನಿಗಳು ಒಡೆತನ ಸಾಧಿಸಲಿವೆ. ಇದರ ಅರ್ಥ ದೇಶ ಮತ್ತೆ ಹೊಸ ರೀತಿಯ ವಸಾಹತುಶಾಹಿ ವ್ಯವಸ್ಥೆಯೊಳಗೆ ಸಿಕ್ಕಿಕೊಳ್ಳಲಿದೆ. ಹೀಗಾಗಿ ನಮ್ಮ ಬೆಳೆ ಪದ್ಧತಿ, ತಿನ್ನುವ ಆಹಾರ ಮತ್ತು ಪೌಷ್ಟಿಕತೆ ಮೇಲೆ ನಾವು ನಿಯಂತ್ರಣ ಕಳೆದುಕೊಳ್ಳಬೇಕಾಗುತ್ತದೆ. ಆದ್ದರಿಂದ ಇದನ್ನು ವಿರೋಧಿಸಿ ರಾಜ್ಯಾದ್ಯಂತ ಅಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಿದ್ದು, ನಗರದಲ್ಲಿಯೂ ನಡೆಯಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಎಸ್.ರಘು, ಸತೀಶ್, ತಿಮ್ಮನಾಯಕ, ವೆಂಕಟೇಶ್, ಸಿದ್ದಲಿಂಗಪುರ ಮೋಹನ್‌ಕುಮಾರ್ ಉಪಸ್ಥಿತರಿದ್ದರು.

ಸದ್ವಿದ್ಯಾ ಶಿಕ್ಷಣ ಸಂಸ್ಥೆಯ ನೂತನ ಪದಾಧಿಕಾರಿಗಳು

ಮೈಸೂರು: ಸೆ.22ರಂದು ನಡೆದ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ 2024–25, 2025–26 ಮತ್ತು 2026–27ರ ಅವಧಿಗೆ ಸದ್ವಿದ್ಯಾ ಶಿಕ್ಷಣ ಸಂಸ್ಥೆಯ ನೂತನ ಪದಾಧಿಕಾರಿಗಳು ಮತ್ತು ಆಡಳಿತ ಮಂಡಳಿ ಅಧ್ಯಕ್ಷರಾಗಿ ಪ್ರೊ.ಎಂ.ಎಸ್.ಕೆ.ನರಹರಿಬಾಬು, ಕಾರ್ಯದರ್ಶಿಯಾಗಿ ಎಂ.ಡಿ.ಗೋಪಿನಾಥ್, ಉಪಾಧ್ಯಕ್ಷರಾಗಿ ಎಸ್.ಬಾಲಾಜಿ ಮತ್ತು ಜಂಟಿ ಕಾರ್ಯದರ್ಶಿಯಾಗಿ ಕೆ.ಎನ್.ಫಣೀಶ ಆಯ್ಕೆಯಾಗಿದ್ದಾರೆ. ಆಡಳಿತ ಮಂಡಳಿ ಸದಸ್ಯರಾಗಿ ಸಿ.ಆರ್.ನಾಗರಾಜ್, ಕೆ.ರಘುರಾಮ್, ಬಿ.ಮೋಹನ್, ಡಾ.ನಳಿನಿ ಚಂದರ್, ಆರ್.ಎಸ್.ಪ್ರಸನ್ನ ಮತ್ತು ಕೆ.ಆರ್.ವಾಸುಕಿ ಆಯ್ಕೆಯಾಗಿದ್ದಾರೆ.



ನರಹರಿಬಾಬು




ಗೋಪಿನಾಥ್

ಸೆ.29, ಹಿರಿಯ ನಾಗರಿಕರಿಗೆ ವೇಷಭೂಷಣ ಸ್ಪರ್ಧೆ

ಮೈಸೂರು,ಸೆ.24–ಮೈಸೂರಿನ ನಾದಬ್ರಹ್ಮ ಸಂಗೀತ ಸಭಾದಲ್ಲಿ ಸ್ವರಾಂಜಲಿ ತಂಡದ ವತಿಯಿಂದ ಸೆ.29ರಂದು ಬೆಳಗ್ಗೆ 10 ಗಂಟೆಗೆ ಹಿರಿಯ ನಾಗರಿಕರಿಗೆ ವೇಷಭೂಷಣ ಸ್ಪರ್ಧೆ ಏರ್ಪಡಿಸಲಾಗಿದೆ. ಮಾಹಿತಿಗೆ ಮೊ. 9986230050, 9663977949 ಸಂಪರ್ಕಿಸಿ.

ದೇಶ - ವಿದೇಶ

ಜಪಾನ್‌ನ ಇಜು ದ್ವೀಪದಲ್ಲಿ 5.9 ತೀವ್ರತೆ ಭೂಕಂಪ: ಸುನಾಮಿ ಎಚ್ಚರಿಕೆ



ಟೋಕಿಯೋ: ಜಪಾನ್ ಭೂಕಂಪ ಮತ್ತು ಸುನಾಮಿಗಳಿಗೆ ಗುರಿಯಾಗುವ ದೇಶವಾಗಿದೆ ಮತ್ತು ಇತ್ತೀಚಿನ ನವೀಕರಣದಲ್ಲಿ, ದೇಶದ ಇಜು ದ್ವೀಪಗಳು 5.9 ತೀವ್ರತೆಯ ಭಾರಿ ಭೂಕಂಪಕ್ಕೆ ತುತ್ತಾಗಿವೆ, ಅದರ ನಂತರ ಸುನಾಮಿ ಎಚ್ಚರಿಕೆ ನೀಡಲಾಗಿದೆ. ಪ್ರಬಲ ಭೂಕಂಪದ ನಂತರ ಜಪಾನಿನ ಹವಾಮಾನ ಸಂಸ್ಥೆ ಮಂಗಳವಾರ ಟೋಕಿಯೊದ ದಕ್ಷಿಣದ ದೂರದ ದ್ವೀಪಗಳ ಗುಂಪಿಗೆ ಸುನಾಮಿ ಸಲಹೆ ನೀಡಿದೆ. ಟೋಕಿಯೊದಿಂದ ದಕ್ಷಿಣಕ್ಕೆ 300 ಕಿ.ಮೀ. (186 ಮೈಲಿ) ದೂರದಲ್ಲಿರುವ ಹಚಿಜೊ ದ್ವೀಪದ ದಕ್ಷಿಣಕ್ಕೆ ಸುಮಾರು 180 ಕಿ.ಮೀ. (111 ಮೈಲಿ) ದೂರದಲ್ಲಿ ಕಡಲಾಚೆ ಭೂಕಂಪ ಸಂಭವಿಸಿದೆ ಎಂದು ಏಜೆನ್ಸಿ ತಿಳಿಸಿದೆ. ಮಂಗಳವಾರ ಬೆಳಗ್ಗೆ ಇಜು ದ್ವೀಪಗಳ ಕರಾವಳಿ ನಿವಾಸಿಗಳಿಗೆ 5.9 ತೀವ್ರತೆಯ ಭೂಕಂಪ ಸಂಭವಿಸಿದೆ. ಮತ್ತು ನಿಮಿಷಗಳಲ್ಲಿ ಈ ಪ್ರದೇಶದಲ್ಲಿ 1 ಮೀಟರ್‌ವರೆಗೆ ಅಲೆಗಳ ಸುನಾಮಿ ಸಲಹೆ ನೀಡಿದೆ. ಪ್ರಬಲ ಭೂಕಂಪದ ನಂತರ ಟೋಕಿಯೊದ ದಕ್ಷಿಣದ ದೂರದ ದ್ವೀಪಗಳ ಗುಂಪಿಗೆ ಈ ಸಲಹೆ ನೀಡಲಾಗಿದೆ.


ನವಜಾತ ಶಿಶು ಮಾರಾಟಕ್ಕೆ ಮುಂದಾದ ಪೋಷಕರು: 10 ಮಂದಿ ಬಂಧನ



ಹೈದರಾಬಾದ್: ನವಜಾತ ಶಿಶುವನ್ನು ಮಾರಾಟ ಮಾಡಲು ಯತ್ನಿಸಿದ ಆರೋಪದಡಿ ಪೋಷಕರು ಸೇರಿದಂತೆ 10 ಜನರನ್ನು ಬಂಧಿಸಿರುವ ಘಟನೆ ಹೈದರಾಬಾದ್‌ನಲ್ಲಿ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನವಜಾತ ಶಿಶುವನ್ನು 2.5 ಲಕ್ಷಕ್ಕೆ ಮಾರಾಟ ಮಾಡಲು ಯತ್ನಿಸಿದ್ದ ಪೋಷಕರು ಸೇರಿದಂತೆ ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆ. ಆರ್ಥಿಕ ಬಿಕ್ಕಟ್ಟಿಗೆ ಸಿಲುಕಿದ್ದ ಪೋಷಕರು 15 ದಿನದ ಶಿಶುವನ್ನು ಮಾರಾಟ ಮಾಡಲು ಮಧ್ಯವರ್ತಿಗಳ ಸಹಾಯ ಪಡೆದಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಆ್ಯಪ್‌ವೊಂದರ ಮೂಲಕ ಶಿಶುವನ್ನು ಮಾರಾಟ ಮಾಡಲು ಯತ್ನಿಸಿದ್ದಾರೆ. ಖಚಿತ ಮಾಹಿತಿ ಮೇರೆಗೆ ದಕ್ಷಿಣ ವಲಯದ ಕಮಿಷನರ್ ಟಾಸ್ಕ್‌ಫೋರ್ಸ್ ಪೊಲೀಸರು ಕಾರ್ಯಾಚರಣೆ ನಡೆಸಿ, ಆರೋಪಿಗಳನ್ನು ಬಂಧಿಸಿದ್ದಾರೆ. ಶಿಶುವನ್ನು ರಕ್ಷಿಸಿ ಮಕ್ಕಳ ಕಲ್ಯಾಣ ಕೇಂದ್ರಕ್ಕೆ ಹಸ್ತಾಂತರಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ತನಿಖೆ ನಡೆಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭೂಮಿಗೆ ಮರಳಿದ 'ಸೊಯುಜ್' ಅಂತರಿಕ್ಷ ನೌಕೆ



ಮಾಸ್ಕೊ: ಅಂತರರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ತೆರಳಿದ್ದ 'ಸೊಯುಜ್' ಅಂತರಿಕ್ಷ ನೌಕೆಯು ಕಜಕಿಸ್ತಾನದ ನಿರ್ಜನ ಪ್ರದೇಶದಲ್ಲಿ ಸುರಕ್ಷಿತವಾಗಿ ಸೋಮವಾರ ಇಳಿದಿದೆ. ನೌಕೆಯಲ್ಲಿ ರಷ್ಯಾದ ಇಬ್ಬರು ಮತ್ತು ಅಮೆರಿಕದ ಒಬ್ಬರು ಇದ್ದರು.

ಒಲೆಗ್ ನೊವಿಟ್ಸ್ಕಿ, ನಿಕೊಲಾಯ್ ಚುಬ್ ಅವರು ಸುದೀರ್ಘ 374 ದಿನಗಳನ್ನು ಬಾಹ್ಯಾಕಾಶ ಕೇಂದ್ರದಲ್ಲಿ ಕಳೆದಿದ್ದಾರೆ. ಇದರೊಂದಿಗೆ ದಾಖಲೆಗಳನ್ನು ಮುರಿದು ಸುದೀರ್ಘ ಕಾಲ ಬಾಹ್ಯಾಕಾಶ ಕೇಂದ್ರದಲ್ಲಿ ಜೀವಿಸಿದ ಮೊದಲಿಗರು ಎಂಬ ಹೆಗ್ಗಳಿಕೆಯನ್ನು ಪಡೆದಿದ್ದಾರೆ.

ನೌಕೆಯಲ್ಲಿ ಅಮೆರಿಕದ ಟ್ರೇಸಿ ಡೈಸನ್ ಅವರೂ ಇದ್ದರು. ಇವರು ಕಳೆದ ಆರು ತಿಂಗಳಿನಿಂದ ಬಾಹ್ಯಾಕಾಶ ಕೇಂದ್ರದಲ್ಲಿ ಇದ್ದರು. ಸುನಿತಾ ವಿಲಿಯಮ್ಸ್ ಸೇರಿ ಇನ್ನೂ ಎಂಟು ಗಗನಯಾತ್ರಿಗಳು ಬಾಹ್ಯಾಕಾಶ ಕೇಂದ್ರದಲ್ಲಿಯೇ ಉಳಿದಿದ್ದಾರೆ.


ಪುಲ್ವಾಮಾ ದಾಳಿಯ ಆರೋಪಿ ಬಿಲಾಲ್ ಅಹ್ಮದ್ ಹೃದಯಾಘಾತದಿಂದ ಸಾವು



ಜಮ್ಮು: ಪುಲ್ವಾಮಾ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಆರೋಪಿಯೊಬ್ಬ ಜಮ್ಮುವಿನ ಸರ್ಕಾರಿ ಆಸ್ಪತ್ರೆಯಲ್ಲಿ ಹೃದಯಾಘಾತದಿಂದ ಮೃತಪಟ್ಟಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾಕಪೋರಾದ ಹಾಜಿಬಲ್ ಗ್ರಾಮದ ನಿವಾಸಿ ಬಿಲಾಲ್ ಅಹ್ಮದ್ ಕುಚೆ(32) ಮೃತ ಆರೋಪಿ. ಪ್ರಕರಣಕ್ಕೆ ಸಂಬಂಧಿಸಿದಂತೆ 19 ಆರೋಪಿಗಳಲ್ಲಿ ಬಿಲಾಲ್ ಒಬ್ಬನಾಗಿದ್ದನು. ಕಿಶ್ತ್ವಾರ್ ಜಿಲ್ಲಾ ಕಾರಾಗೃಹದಲ್ಲಿದ್ದಾಗ ಅನಾರೋಗ್ಯಕ್ಕೆ ಒಳಗಾಗಿದ್ದ ಬಿಲಾಲ್‌ನನ್ನು ಸೆ.17ರಂದು ಆಸ್ಪತ್ರೆಗೆ ದಾಖಲಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸೋಮವಾರ ರಾತ್ರಿ ಬಿಲಾಲ್ ಹೃದಯಾಘಾತದಿಂದ ಮೃತಪಟ್ಟಿದ್ದಾನೆ. ಈ ಪ್ರಕರಣ ಸಂಬಂಧ ಬಿಲಾಲ್ ಸೇರಿ ಇತರ 18 ಆರೋಪಿಗಳ ವಿರುದ್ಧ 2020ರ ಆಗಸ್ಟ್ 25ರಂದು ಎನ್‌ಐಎ ದೋಷಾರೋಪ ಪಟ್ಟಿ ಸಲ್ಲಿಸಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತ ಏಳು ಮಂದಿಯಲ್ಲಿ ಈತನೂ ಒಬ್ಬನಾಗಿದ್ದಾನೆ. 2019ರ ಫೆಬ್ರವರಿ 14ರಂದು ಪುಲ್ವಾಮಾದ ಲೆತಪೋರಾದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 40 ಸಿಆರ್‌ಪಿಎಫ್ ಸಿಬ್ಬಂದಿ ಮೃತಪಟ್ಟು, ಎಂಟು ಮಂದಿ ಗಾಯಗೊಂಡಿದ್ದರು.

ಚುನಾವಣೆಯಲ್ಲಿ ಸೋತರೆ ಮತ್ತೆ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸುವುದಿಲ್ಲ



ವಾಷಿಂಗ್ಟನ್: ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಈ ಬಾರಿ ಸೋತರೆ, 2028ರ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಈ ಬಗ್ಗೆ ಪತ್ರಕರ್ತರೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಇದು ಸಾಧ್ಯವಿಲ್ಲ ಅನಿಸುತ್ತಿದೆ ಎಂದು ಹೇಳಿದ್ದಾರೆ. 2020ರ ಚುನಾವಣೆಯಲ್ಲಿ ಜೋ ಬೈಡನ್ ಅವರ ವಿರುದ್ಧ ಸೋತ ಬಳಿಕ, ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಟ್ರಂಪ್ ಆರೋಪಿಸಿದ್ದರು. ಅದೇ ವಿಚಾರವನ್ನು ಚುನಾವಣಾ ಪ್ರಚಾರದಲ್ಲಿಯೂ ಬಳಸಿಕೊಂಡಿದ್ದರು.

81 ವರ್ಷದ ಜೋ ಬೈಡನ್ ಅವರನ್ನು ವಯಸ್ಸಿನ ಕಾರಣಕ್ಕೆ ಟ್ರಂಪ್ ಅವರು ನಿರಂತರವಾಗಿ ಟೀಕೆ ಮಾಡುತ್ತಿದ್ದರು. ಇದರಿಂದಾಗಿ ಬೈಡನ್ ಚುನಾವಣಾ ಕಣದಿಂದ ಹಿಂದೆ ಸರಿದಿದ್ದರು. 2028ರ ವೇಳೆಗೆ ಟ್ರಂಪ್ ಅವರಿಗೆ 82 ವರ್ಷ ಆಗಲಿದೆ. ಯುಎಸ್ ಅಧ್ಯಕ್ಷ ಸ್ಥಾನಕ್ಕೆ ಸತತ ನಾಲ್ಕನೇ ಓಟವನ್ನು ಮಾಡುವುದಿಲ್ಲ ಎಂದು ಸಂದರ್ಶನವೊಂದರಲ್ಲಿ ತಿಳಿಸಿದ್ದಾರೆ.

ಜಮ್ಮಾ–ಬಾಣೆ, ಜಾಗೀರು, ಉಂಬಳಿ ಜಮೀನುಗಳ ಮರಗಳ ಕಡಿಯದಂತೆ
ಸರ್ಕಾರ, ಜಿಲ್ಲಾಡಳಿತಕ್ಕೆ ಹೈಕೋರ್ಟ್ ನೋಟಿಸ್



ಜಮ್ಮಾ–ಬಾಣೆ, ಜಾಗೀರು, ಉಂಬಳಿ ಜಮೀನುಗಳ ಮರಗಳು.

ಮಡಿಕೇರಿ, ಸೆ.24–ಕೊಡಗು ಜಿಲ್ಲೆಯ ಅರಣ್ಯ, ಸರ್ಕಾರಿ, ಪಶ್ಚಿಮಘಟ್ಟ ಪ್ರದೇಶ ಹಾಗೂ ಜಮ್ಮಾ–ಬಾಣೆ, ಜಾಗೀರು, ಉಂಬಳಿ ಜಮೀನಿನ ಹಿಡುವಳಿದಾರರ ಜಮೀನುಗಳ ಮರಗಳನ್ನು ಕಡಿಯುವುದನ್ನು ನಿರ್ಬಂಧಿಸುವಂತೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐಎಲ್) ಸಂಬಂಧ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಮಡಿಕೇರಿ ನಿವಾಸಿ ಕಾವೇರಿ ಸೇನೆ ಸಂಚಾಲಕ ಕಿಮ್ಮುಡಿರ ರವಿ ಚೆಂಗಪ್ಪ ಹಾಗೂ ವಿರಾಜಪೇಟೆ ನಿವಾಸಿ ಸಿ.ಸಿ.ದೇವಯ್ಯ ಅವರು ಸಲ್ಲಿಸಿದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಹಾಗೂ ನ್ಯಾಯಮೂರ್ತಿ ಕೆ.ವಿ.ಅರವಿಂದ್ ಅವರಿದ್ದ ವಿಭಾಗೀಯ ಪೀಠ ನಡೆಸಿತು.

ಈ ಕುರಿತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಅರಣ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಕೊಡಗು ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಕೊಡಗು ಜಿಲ್ಲಾಧಿಕಾರಿಗೆ ನೋಟಿಸ್ ಜಾರಿಗೊಳಿಸಿ, ಆಕ್ಷೇಪಣೆ ಸಲ್ಲಿಸಲು ಸೂಚಿಸಿದೆ. ಮುಂದಿನ ವಿಚಾರಣೆವರೆಗೂ ಯಾವುದೇ ಮರಗಳನ್ನು ಕಡಿದಿದ್ದರೆ ಅದರ ಮಾಹಿತಿಯನ್ನು ಅರ್ಜಿದಾರರು ನ್ಯಾಯಾಲಯಕ್ಕೆ ತಿಳಿಸಬೇಕು ಎಂದು ಇದೇ ವೇಳೆ ನ್ಯಾಯಪೀಠ ತಿಳಿಸಿದೆ.

ಅರ್ಜಿದಾರರ ಪರ ವಕೀಲರು ವಾದ ಮಂಡಿಸಿ, ಜಮ್ಮಾ–ಬಾಣೆ, ಉಂಬಳಿ, ಜಾಗೀರು ಹಾಗೂ ಇತರೆ ಜಮೀನುಗಳಿಗೆ 'ಪರಾಧೀನ ಜಮೀನು' ಎಂದು ನಮೂದಿಸಿ ಆ ಜಮೀನಿನಲ್ಲಿರುವ ಲಕ್ಷಾಂತರ ಮರಗಳನ್ನು ಅವ್ಯಾಹತವಾಗಿ ಕಡಿಯಲಾಗುತ್ತಿದೆ. ಮರ ಕಡಿಯುವ ಸಂಬಂಧ ಈಗಾಗಲೇ ಹತ್ತಾರು ಆದೇಶಗಳನ್ನು ಹೊರಡಿಸಲಾಗಿದೆ. ಪರಾಧೀನ ಜಮೀನು ಎಂಬ ಪದ ಭೂಕಂದಾಯ ಕಾಯ್ದೆಯಲ್ಲೂ ಇಲ್ಲ ಅಥವಾ ಸರ್ಕಾರದ ಯಾವ ಅಧಿಸೂಚನೆಗಳಲ್ಲೂ ಈ ಪದ ಬಳಕೆ ಮಾಡಿಲ್ಲ. ಇದರ ಹಿಂದೆ ಜಿಲ್ಲೆಯ ಟಿಂಬರ್ ಮಾಫಿಯಾ ಕೆಲಸ ಮಾಡುತ್ತಿದೆ. ಮರಗಳನ್ನು ಕಡಿಯುವುದಕ್ಕೆ ಬ್ರೇಕ್ ಇಲ್ಲದಿದ್ದರೆ ಕೇರಳದ ವಯನಾಡ್‌ನಲ್ಲಿ ಸಂಭವಿಸಿದಂತೆ ಕೊಡಗು ಜಿಲ್ಲೆಯಲ್ಲೂ ಭೂಕುಸಿತ ಆಗುತ್ತದೆ. 2018ರಲ್ಲಿ ಜಿಲ್ಲೆಯಲ್ಲಿ ನಡೆದ ಭೂಕುಸಿತಕ್ಕೆ ಮರಗಳನ್ನು ಕಡಿದಿರುವುದೇ ಕಾರಣ. ಹಾಗಾಗಿ ಕೊಡಗು ಉಳಿಸಬೇಕಾಗಿದೆ. ಆದ್ದರಿಂದ ಮರಗಳನ್ನು ಕತ್ತರಿಸಿದಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದ್ದರು.

ಸಿಎಂ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ



ಮಡಿಕೇರಿಯಲ್ಲಿ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ಸೆ.24– ಮುಡಾ ಪ್ರಕರಣ ಸಂಬಂಧ ರಾಜ್ಯಪಾಲರ ಆದೇಶವನ್ನು ಹೈಕೋರ್ಟ್ ಎತ್ತಿ ಹಿಡಿದಿದ್ದು, ನ್ಯಾಯಾಲಯದ ತೀರ್ಪಿಗೆ ಗೌರವ ನೀಡಿ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಜಿಲ್ಲಾ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ನಗರದ ಜನರಲ್ ತಿಮ್ಮಯ್ಯ ವೃತ್ತದಲ್ಲಿ ಸಮಾವೇಶಗೊಂಡ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿ, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಆಗ್ರಹಿಸಿದರು. ರಾಜ್ಯ ಕಾಂಗ್ರೆಸ್ ಸರ್ಕಾರ ಮುಡಾ ಸೇರಿದಂತೆ ವಿವಿಧ ಹಗರಣಗಳಲ್ಲಿ ಸಿಲುಕಿದ್ದು, ಈ ಎಲ್ಲಾ ಪ್ರಕರಣಗಳ ಬಗ್ಗೆ ತನಿಖೆಯಾಗಬೇಕೆಂದು ಆಗ್ರಹಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ಮಾತನಾಡಿ, ಮುಡಾ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯ ಬಿಜೆಪಿ ಪಾದಯಾತ್ರೆ ಹೋರಾಟ ಮಾಡಲಾಗಿತ್ತು. ಆದರೆ, ರಾಜೀನಾಮೆ ನೀಡದೆ ಸಿದ್ದರಾಮಯ್ಯ ಕೋರ್ಟ್ ಮೊರೆ ಹೋಗಿದ್ದರು. ಇದೀಗ ರಾಜ್ಯಪಾಲರ ಆದೇಶವನ್ನು ಹೈಕೋರ್ಟ್ ಎತ್ತಿ ಹಿಡಿದಿದೆ. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಬಿಜೆಪಿ ನಗರಾಧ್ಯಕ್ಷ ಮನು ಮಂಜುನಾಥ್, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಅನಿತಾ ಪೂವಯ್ಯ, ನಗರಸಭಾ ಸದಸ್ಯರಾದ ಮಹೇಶ್ ಜೈನಿ, ಅರುಣ್ ಶೆಟ್ಟಿ ಮತ್ತಿತರರು ಪಾಲ್ಗೊಂಡಿದ್ದರು.

ನಿಟ್ಟೂರಿನಲ್ಲಿ ಗ್ರಾಮ ಮಟ್ಟದ ಕಾಫಿ ಕಾರ್ಯಾಗಾರ

ಗೋಣಿಕೊಪ್ಪ, ಸೆ.24–ಕಾಫಿ ಮಂಡಳಿ ವತಿಯಿಂದ ನಿಟ್ಟೂರು ಗ್ರಾಮ ಪಂಚಾಯಿತಿ ಸಮುದಾಯ ಭವನದಲ್ಲಿ ಗ್ರಾಮ ಮಟ್ಟದ ಕಾಫಿ ಕಾರ್ಯಾಗಾರ ನಡೆಯಿತು.

ಕಾರ್ಯಾಗಾರದಲ್ಲಿ ಬೆಳೆಗಾರರಿಗೆ ಕಾಫಿ ಮಂಡಳಿ ಉಪನಿರ್ದೇಶಕಿ ಶ್ರೀದೇವಿ ಮತ್ತು ಸಂಪರ್ಕಾಧಿಕಾರಿ ಮುಬಾರೀಬ್ ಅವರು, ಅತಿ ಹೆಚ್ಚು ಮಳೆಯಿಂದಾಗಿ ಕಾಫಿ ಗಿಡಗಳಲ್ಲಿ ಕೊಳೆ ರೋಗ ನಿರ್ವಹಣೆ, ಕಾಫಿ ಉದುರುವುದು ಹಾಗೂ ಮರು ನಾಟಿ, ಗೋದಾಮು, ಕಾಫಿ ಕಣ, ಹೊಸ ಕೆರೆ, ಬಾವಿ, ಸ್ಪಿಂಕ್ಲರ್ ಉಪಕರಣ, ಮೋಟಾರ್, ಮಿನಿ ಟ್ರ್ಯಾಕ್ಟರ್ ಮುಂತಾದವುಗಳಿಗೆ ಸಬ್ಸಿಡಿ ಮಾಹಿತಿ ನೀಡಿದರು. ಕಾರ್ಯಾಗಾರದಲ್ಲಿ ನಿಟ್ಟೂರು ಗ್ರಾಪಂ ಅಧ್ಯಕ್ಷೆ ಅಮ್ಮುಣಿ, ಉಪಾಧ್ಯಕ್ಷ ಚೆಕ್ಕೇರ ಸೂರ್ಯ ಅಯ್ಯಪ್ಪ, ಸದಸ್ಯರಾದ ಕಾಟಿಮಾಡ ಶರೀನ್ ಮುತ್ತಣ್ಣ, ಪಡಿಞರಂಡ ಕವಿತಾ ಪ್ರಭು, ಅಭಿವೃದ್ಧಿ ಅಧಿಕಾರಿ ಸುರೇಶ್, ಪ್ರಮುಖರಾದ ಪಾರುವಂಗಡ ಪವನ್, ಮುಕ್ಕಾಟಿರ ಪ್ರಿನ್ಸ್ ಇದ್ದರು.

ಕಾಡಾನೆ ಹಿಂಡು ಕಾಡಿಗಟ್ಟಿದ ಕಾರ್ಮಿಕರು



ಸಿದ್ದಾಪುರ ಗ್ರಾಪಂ ವ್ಯಾಪ್ತಿಯ ತೋಟವೊಂದರಲ್ಲಿ ಬೀಡುಬಿಟ್ಟಿದ್ದ ಕಾಡಾನೆ ಹಿಂಡು.

ಮಡಿಕೇರಿ, ಸೆ.24– ವಿರಾಜಪೇಟೆ ತಾಲೂಕಿನ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೋಟವೊಂದರಲ್ಲಿ ಬೀಡುಬಿಟ್ಟಿದ್ದ ಸುಮಾರು 15 ಕಾಡಾನೆಗಳನ್ನು, ಕಾರ್ಮಿಕರೇ ಕಾಡಿಗಟ್ಟಿದ್ದಾರೆ.

ಪ್ರತಿ ದಿನದಂತೆ ಮಂಗಳವಾರ ಕೆಲಸಕ್ಕೆ ಬಂದ ಕಾರ್ಮಿಕರಿಗೆ ಕಾಡಾನೆಗಳ ಹಿಂಡು ಪ್ರತ್ಯಕ್ಷವಾಗಿದೆ. ತೋಟದೊಳಗಿದ್ದ ಕಾಡಾನೆಗಳನ್ನು ಹೇಗಾದರೂ ಮಾಡಿ ಓಡಿಸಬೇಕೆಂದು ಧೈರ್ಯ ಮಾಡಿದ ಕಾರ್ಮಿಕರು, ಮರವೊಂದರ ಮೇಲೆ ಹತ್ತಿ ಜೋರಾಗಿ ಕಿರುಚಿ ಶಬ್ಧ ಮಾಡಿ ಆನೆಗಳನ್ನು ಬೆದರಿಸಿದರು. ಬಳಿಕ ಕಾಫಿ ತೋಟದಿಂದ ಚಿಕ್ಕನಹಳ್ಳಿ ಮಾರ್ಗವಾಗಿ 1 ಕಿ.ಮೀ.ವರೆಗೆ ಆನೆಗಳನ್ನು ಓಡಿಸಿ ಅರಣ್ಯ ಸೇರುವಂತೆ ಮಾಡುವಲ್ಲಿ ಸಫಲರಾದರು.

ದಸರಾ ಮೆರುಗು ಗಣೇಶ ವಿಸರ್ಜನೆ ಶೋಭಾಯಾತ್ರೆ



ಮಡಿಕೇರಿ ಅಶೋಕಪುರ ಗಣೇಶ ವಿಸರ್ಜನೋತ್ಸವ ಶೋಭಾಯಾತ್ರೆ.

ಮಡಿಕೇರಿ, ಸೆ.24– ನಗರದ ಅಶೋಕಪುರ ಗಣೇಶೋತ್ಸವ ಸಮಿತಿಯಿಂದ ಪ್ರತಿಷ್ಠಾಪಿಸಿದ್ದ ಗಣೇಶ ಮೂರ್ತಿ ವಿಸರ್ಜನೋತ್ಸವದ ಶೋಭಾಯಾತ್ರೆ ಐತಿಹಾಸಿಕ ಮಡಿಕೇರಿ ದಸರಾ ಉತ್ಸವವನ್ನು ಪ್ರತಿಬಿಂಬಿಸಿತು.

ಶ್ರೀ ಅನ್ನಪೂರ್ಣೇಶ್ವರಿ ದೇಗುಲದಲ್ಲಿ ಪ್ರತಿಷ್ಠಾಪಿಸಿದ್ದ ಮೂರ್ತಿಯನ್ನು ಭವ್ಯ ಮಂಟಪದಲ್ಲಿಟ್ಟು ವಿಶೇಷ ಪೂಜೆ ಸಲ್ಲಿಸಿ, ಶೋಭಾಯಾತ್ರೆಗೆ ಸೋಮವಾರ ರಾತ್ರಿ ಚಾಲನೆ ನೀಡಲಾಯಿತು. ಮಳೆ, ಚಳಿಯಲ್ಲಿಯೂ ಪೌರಾಣಿಕ ಹಿನ್ನೆಲೆಯ ಕಥಾ ಸಾರಾಂಶ ನೋಡುಗರಿಗೆ ರೋಮಾಂಚನ ಮೂಡಿಸಿತಲ್ಲದೆ, ದಸರಾ ಅನುಭವ ನೀಡಿತು.

ನಗರದ ರಾಜ ಬೀದಿಯಲ್ಲಿ ಸಾಗಿದ ಶೋಭಾಯಾತ್ರೆ ನೋಡುಗರನ್ನು ಸೆಳೆದರೆ ಡಿಜೆ, ಕೊಡಗಿನ ಸಾಂಪ್ರದಾಯಿಕ ವಾಲಗಕ್ಕೆ ಯುವಕ–ಯುವತಿಯರು ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. 50ನೇ ವರ್ಷ ಸಂಭ್ರಮದ ಗಣೇಶೋತ್ಸವ ಸಮಿತಿ ಈ ಬಾರಿ 'ಗಜಾನನನಿಂದ ಶತ ಮಹಿಷಿಯ ಸಂಹಾರ' ಕುರಿತ ಪೌರಾಣಿಕ ಹಿನ್ನೆಲೆಯ ಮಂಟಪವನ್ನು ಶೋಭಾ ಯಾತ್ರೆಗೆ ಅಣಿಗೊಳಿಸಿತ್ತು. ಗಣೇಶ ಸೇರಿದಂತೆ ದೇವಾನುದೇವತೆ, ಅಸುರರ ಕಲಾಕೃತಿಗಳು ಮಂಟಪಕ್ಕೆ ಮೆರುಗು ತುಂಬಿದ್ದವು.

ಅಶೋಕಪುರದಿಂದ ಹೊರಟ ಶೋಭಾಯಾತ್ರೆ ಫೀ.ಮಾ.ಕಾರ್ಯಪ್ಪ, ಜನರಲ್ ತಿಮ್ಮಯ್ಯ, ಮಂಗೇರಿರ ಮುತ್ತಣ್ಣ, ಇಂದಿರಾ ಗಾಂಧಿ ವೃತ್ತದಲ್ಲಿ ಸಾಗಿತು. ನಂತರ ಓಂಕಾರೇಶ್ವರ ದೇವಾಲಯ ಸಮೀಪದ ಗೌರಿಕೆರೆಯಲ್ಲಿ ಗಣೇಶ ಮೂರ್ತಿಯನ್ನು ವಿಸರ್ಜಿಸಲಾಯಿತು. ಪೊಲೀಸ್ ಬಿಗಿಬಂದೋಬಸ್ತ್ ಸಹಿತ ಮುಂಜಾಗ್ರತ ಕ್ರಮವಾಗಿ ನಗರ ಸೇರಿದಂತೆ ಸುತ್ತಮುತ್ತ ಮದ್ಯ ಮಾರಾಟ ನಿಷೇಧಿಸಲಾಗಿತ್ತು.

ಶವ ಸಂಸ್ಕಾರಕ್ಕೆ ಜಾಗ ನೀಡುವಂತೆ ಆಗ್ರಹಿಸಿ ಅಣಕು ಶವ ಪ್ರತಿಭಟನೆ



ನೆಲ್ಯಹುದಿಕೇರಿ ಗ್ರಾಪಂ ಕಚೇರಿ ಎದುರು ಸಿಪಿಐ(ಎಂ) ಕಾರ್ಯಕರ್ತರು ಅಣಕು ಶವ ಪ್ರತಿಭಟನೆ ನಡೆಸಿದರು.

ಸಿದ್ದಾಪುರ, 24–ಹಿಂದೂಗಳ ಶವ ಸಂಸ್ಕಾರಕ್ಕೆ ಶಾಶ್ವತ ಜಾಗ ನೀಡುವಂತೆ ಒತ್ತಾಯಿಸಿ ಸಿಪಿಐ(ಎಂ) ಕಾರ್ಯಕರ್ತರು ಕುಶಾಲನಗರ ತಾಲೂಕಿನ ನೆಲ್ಯಹುದಿಕೇರಿ ಗ್ರಾಪಂ ಕಚೇರಿ ಎದುರು ಅಣಕು ಶವ ಪ್ರತಿಭಟನೆ ನಡೆಸಿದರು.

ಸಿಪಿಐ(ಎಂ) ಪ್ರಮುಖ ಪಿ.ಆರ್.ಭರತ್ ಮಾತನಾಡಿ, ನೆಲ್ಯಹುದಿಕೇರಿ ಗ್ರಾಪಂ ವ್ಯಾಪ್ತಿಯ ಬಹುಸಂಖ್ಯಾತ ಹಿಂದೂಗಳ ಶವ ಸಂಸ್ಕಾರಕ್ಕೆ ಸ್ಮಶಾನವಿಲ್ಲ. ಶವ ಸಂಸ್ಕಾರಕ್ಕೆ ಕಾವೇರಿ ನದಿ ದಡದ ಕುಸಿಯುವ ಅಂಗೈ ಅಗಲ ಜಾಗವನ್ನು ಆಶ್ರಯಿಸಬೇಕಾದ ದುಸ್ಥಿತಿ ಬಂದಿದೆ. ಅಲ್ಲದೆ, ಮಳೆಗಾಲದಲ್ಲಿ ನದಿದಡ ಸಂಪೂರ್ಣವಾಗಿ ಮುಳುಗಡೆಯಾಗುವ ಹಿನ್ನೆಲೆಯಲ್ಲಿ ಶವ ಸಂಸ್ಕಾರಕ್ಕೆ ಪಕ್ಕದ ಗ್ರಾಮಗಳನ್ನು ಆಶ್ರಯಿಸಬೇಕಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನೆಲ್ಯಹುದಿಕೇರಿಯಲ್ಲಿ ಹಿಂದೂಗಳ ಶವ ಸಂಸ್ಕಾರಕ್ಕೆ ಇದ್ದ 1.08 ಎಕರೆ ಜಾಗ ಒತ್ತುವರಿಯಾಗಿದೆ. ಈ ಸಂಬಂಧ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು, ಗ್ರಾಮ ಪಂಚಾಯಿತಿಗೆ ದಾಖಲೆ ಸಹಿತ ಮನವಿ ನೀಡಿದರು ಯಾವುದೇ ಪ್ರಯೋಜನವಾಗಿಲ್ಲ. ಈ ಸಮಸ್ಯೆಯನ್ನು ಶೀಘ್ರ ಬಗೆಹರಿಸದಿದ್ದರೆ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವದು ಎಂದು ಎಚ್ಚರಿಸಿದರು.

ಬಳಿಕ ಗ್ರಾಪಂ ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಪಕ್ಷದ ಪ್ರಮುಖರಾದ ರಮೇಶ್, ಉದಯ, ಮೊಣ್ಣಪ್ಪ, ಗ್ರಾಮಸ್ಥರಾದ ಶಿವರಾಮ್, ರಮೇಶ್, ಸುರೇಶ್ ಇನ್ನಿತರರು ಹಾಜರಿದ್ದರು.

ಸೆ.30ರಿಂದ ಮಹದೇಶ್ವರಬೆಟ್ಟದಲ್ಲಿ ಜಾತ್ರಾ ಮಹೋತ್ಸವ

ಹನೂರು, ಸೆ.24–ತಾಲೂಕಿನ ಮಲೆಮಹದೇಶ್ವರಬೆಟ್ಟದ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸೆ.30ರಿಂದ ಡಿ.1ರವರೆಗೆ ಮಹಾಲಯ ಅಮಾವಾಸ್ಯೆ, ದಸರಾ, ದೀಪಾವಳಿ ಹಾಗೂ ಕಾರ್ತಿಕ ಸೋಮವಾರ ಜಾತ್ರೆಗಳು ನಡೆಯಲಿದ್ದು, ಜಾತ್ರೆ ಪ್ರಯುಕ್ತ ವಿವಿಧ ಪೂಜಾ ಕೈಂಕರ್ಯ ಜರುಗಲಿವೆ.



ಸೆ.30ರಂದು ಮಹಾಲಯ ಜಾತ್ರೆ ಮಹೋತ್ಸವ, ಅ.1ರಂದು ಚತುರ್ದಶಿ ಪ್ರಯುಕ್ತ ಸ್ವಾಮಿಗೆ ಎಣ್ಣೆ ಮಜ್ಜನ ಹಾಗೂ ವಿಶೇಷ ಸೇವೆ, ಉತ್ಸವ, 2ರಂದು ಮಹಾಲಯ ಅಮಾವಾಸ್ಯೆ ವಿಶೇಷ ಸೇವೆ ಮತ್ತು ಉತ್ಸವ, 3ರಂದು ದಸರಾ ಜಾತ್ರಾ ಮಹೋತ್ಸವದ ಅಂಗವಾಗಿ ಶರನ್ನವರಾತ್ರಿ ಉಯ್ಯಾಲೋತ್ಸವ ಪ್ರಾರಂಭ, 11ರಂದು ಮಹಾನವಮಿ, ಆಯುಧ ಪೂಜೆ ಹಾಗೂ 12ರಂದು ವಿಜಯದಶಮಿ, ಕುದುರೆ ವಾಹನೋತ್ಸವ, ದಶಮಿ ಪೂಜೆಗಳು ಜರುಗಲಿದೆ.

29ರಂದು ದೀಪಾವಳಿ ಜಾತ್ರೆ ಪ್ರಯುಕ್ತ ವಿಶೇಷ ಪೂಜಾ ಕಾರ್ಯ ಪ್ರಾರಂಭವಾಗಲಿದೆ. 30ರಂದು ಸ್ವಾಮಿಗೆ ಎಣ್ಣೆಮಜ್ಜನ ಹಾಗೂ ವಿಶೇಷ ಸೇವೆ ಉತ್ಸವ, 31ರಂದು ನರಕ ಚತುರ್ದಶಿ, ನ.1ರಂದು ದೀಪಾವಳಿ ಅಮವಾಸ್ಯೆ, ಹಾಲರುವೆ ಉತ್ಸವ ಹಾಗೂ 2ರಂದು ಬೆಳಗ್ಗೆ 7.50 ರಿಂದ 9 ಗಂಟೆವರೆಗೆ ದೀಪಾವಳಿ ಮಹಾರಥೋತ್ಸವ ನಡೆಯಲಿದೆ.

ನ.4ರಂದು ಮೊದಲ ಕಾರ್ತಿಕ ಸೋಮವಾರ, 11ರಂದು ಎರಡನೇ ಕಾರ್ತಿಕ ಸೋಮವಾರ, 18ರಂದು ಮೂರನೇ ಕಾರ್ತಿಕ ಸೋಮವಾರ, 25ರಂದು ನಾಲ್ಕನೇ ಕಾರ್ತಿಕ ಸೋಮವಾರ ರಾತ್ರಿ ಮಹದೇಶ್ವರ ಜ್ಯೋತಿದರ್ಶನ, 29ರಂದು ಎಣ್ಣೆಮಜ್ಜನ ಸೇವೆ, ಕಾರ್ತಿಕ ಅಮಾವಾಸ್ಯೆ ಹಾಗೂ ಡಿ.1ರಂದು ವಿಶೇಷ ಸೇವೆ ಉತ್ಸವ ಜರುಗಲಿವೆ ಎಂದು ಮಲೆಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ ಕಾರ್ಯದರ್ಶಿ ರಘು ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ
ಕ್ರೀಡಾಪಟುಗಳಲ್ಲಿ ಹುರುಪು, ಉತ್ಸಾಹ ಇಮ್ಮಡಿಗೊಳಿಸಿದ ಜಿಲ್ಲಾಧಿಕಾರಿ ಶಿಲ್ಪನಾಗ್



ದಸರಾ ಕ್ರೀಡಾಕೂಟದ ಉದ್ದ ಜಿಗಿತದ ಸ್ಪರ್ಧೆ.



ಚಾಮರಾಜನಗರದಲ್ಲಿ ನಡೆದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಜಿಪಂ ಸಿಇಓ ಮೋನಾ ರೋತ್ ಕ್ರೀಡಾಜ್ಯೋತಿ ಸ್ವೀಕರಿಸಿದರು.

ಚಾಮರಾಜನಗರ, ಸೆ.24–ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿರುವ ಎರಡು ದಿನಗಳ ಚಾಮರಾಜನಗರ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಮಂಗಳವಾರ ಜಿಲ್ಲಾಧಿಕಾರಿ ಶಿಲ್ಪನಾಗ್ ಚಾಲನೆ ನೀಡಿದರು.

ಗುಂಡು ಎಸೆಯುವ ಮೂಲಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ. ತಾಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವಿಜೇತರಾಗಿ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಜಿಲ್ಲೆಯ ಐದು ತಾಲೂಕುಗಳ ತಂಡಗಳ ಪರಿಚಯ ಮಾಡಿಕೊಂಡರು. ನಂತರ ಕ್ರೀಡಾಪಟುಗಳೊಂದಿಗೆ ಆತ್ಮೀಯವಾಗಿ ಮಾತನಾಡಿ, ಕ್ರೀಡಾಪಟುಗಳಲ್ಲಿ ಹುರುಪು, ಉತ್ಸಾಹ ಇಮ್ಮಡಿಗೊಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್, ಕ್ರೀಡಾಜ್ಯೋತಿ ಸ್ವೀಕರಿಸಿ ಕ್ರೀಡಾಪಟುಗಳಲ್ಲಿ ಸ್ಫೂರ್ತಿ ತುಂಬಿದರು.

ಇದೇ ವೇಳೆ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ವಿದ್ಯಾರ್ಥಿಗಳು ಪಾಠ, ಪ್ರವಚನದ ಜೊತೆಗೆ ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕ, ಮಾನಸಿಕ ಆರೋಗ್ಯ ಉತ್ತಮಗೊಳ್ಳಲಿದೆ. ಕ್ರೀಡೆಯಲ್ಲಿ ಸೋಲು–ಗೆಲುವು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯ ಎಂದರು.

ವಿದ್ಯಾರ್ಥಿಗಳು ಕೂಟದಲ್ಲಿ ಕ್ರೀಡಾ ಮನೋಭಾವ ಮೆರೆಯಬೇಕು. ಜಿಲ್ಲಾ ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಮೈಸೂರಿನಲ್ಲಿ ನಡೆಯುವ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಗೆದ್ದು ಜಿಲ್ಲೆಗೆ ಕೀರ್ತಿ ತರುವಂತಾಗಬೇಕು. ಕ್ರೀಡೆಯಲ್ಲಿ ಸೋತವರು ಹತಾಶರಾಗದೇ ಮತ್ತೊಮ್ಮೆ ಗೆಲುವಿಗೆ ಪ್ರಯತ್ನಿಸಬೇಕು ಎಂದು ಹೇಳಿದರು.

ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿ ಸಮಿತಿ ಸದಸ್ಯ ಶ್ರೀನಿವಾಸಪ್ರಸಾದ್ ಮಾತನಾಡಿ, ಚಾಮರಾಜನಗರ ಜಿಲ್ಲಾ ಕೇಂದ್ರವಾಗಿ 25 ವರ್ಷಗಳೇ ಕಳೆದಿದ್ದರೂ ಜಿಲ್ಲಾ ಕ್ರೀಡಾಂಗಣ ಇನ್ನೂ ಅಭಿವೃದ್ಧಿಯಾಗಬೇಕಿದೆ. ಕ್ರೀಡಾಂಗಣಕ್ಕೆ ಕುಡಿಯುವ ನೀರು ಸೇರಿದಂತೆ ಇತರೆ ಮೂಲಸೌಲಭ್ಯಗಳ ಕೊರತೆ ಇದ್ದು, ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸಲ್ಲಿಸಿರುವ ಪ್ರಸ್ತಾವನೆಗೆ ಅನುಮೋದನೆ ದೊರೆತಿದೆ. ಅಲ್ಲದೆ, ಜಿಮ್ ಸ್ಥಾಪನೆ, ಕ್ರೀಡಾ ಇಲಾಖೆ ಕಚೇರಿ ಹಾಗೂ ಕ್ರೀಡಾಂಗಣದ ಪ್ರವೇಶ ದ್ವಾರದ ಕ್ರಿಯಾ ಯೋಜನೆಗೆ ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿ ಆರಂಭಿಸಬೇಕಾಗಿದೆ ಎಂದರು.

ಸರ್ಕಾರ ನಿಗದಿಪಡಿಸಿರುವ ಶೇ.2ರಷ್ಟು ಕ್ರೀಡಾ ಮೀಸಲಾತಿಗೆ ನೆಟ್‌ಬಾಲ್ ಕ್ರೀಡೆಯನ್ನು ಸೇರ್ಪಡೆ ಮಾಡಿರುವುದು ಆರೋಗ್ಯಕರ ಬೆಳವಣಿಗೆಯಾಗಿದ್ದು, ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ನೆಟ್‌ಬಾಲ್ ತರಬೇತಿ ನೀಡಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶಿವಸ್ವಾಮಿ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಬಸವರಾಜು, ಗ್ರೇಡ್–2 ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಚಿಕ್ಕಬಸವಯ್ಯ, ಉಪಾಧ್ಯಕ್ಷ ಶಶಿಕುಮಾರ್, ಪ್ರಧಾನ ಕಾರ್ಯದರ್ಶಿ ಶಿವಮಲ್ಲು, ಪದಾಧಿಕಾರಿ ಕುಮಾರಸ್ವಾಮಿ, ಕ್ರೀಡಾ ತರಬೇತುದಾರ ಗಣೇಶ್ ಇತರರು ಇದ್ದರು.

ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಪ್ರತಿಭಟನೆ



ಚಾಮರಾಜನಗರದಲ್ಲಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಸೆ.24–ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಎಂದು ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಚಾಮರಾಜೇಶ್ವರ ಉದ್ಯಾನ ಎದುರು ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆಯಲ್ಲಿ ಭುವನೇಶ್ವರಿ ವೃತ್ತಕ್ಕೆ ತೆರಳಿ ಮಾನವ ಸರಪಳಿ ರಚಿಸಿ ಕೆಲಕಾಲ ರಸ್ತೆ ಸಂಚಾರ ತಡೆದರು.

ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಮಾತನಾಡಿ, ಸಿದ್ದರಾಮಯ್ಯ ಹೈಕೋರ್ಟ್ ತೀರ್ಪು ಗೌರವಿಸಿ ಸಿಎಂ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು. ಮುಡಾ ಹಗರಣ ತನಿಖೆಗೆ ಅವಕಾಶ ನೀಡಿ ರಾಜ್ಯಪಾಲರ ಕ್ರಮವನ್ನು ಹೈಕೋರ್ಟ್ ಎತ್ತಿ ಹಿಡಿದಿದೆ. ಕಾನೂನಿನ ಎದುರು ಎಲ್ಲರೂ ಒಂದೇ ಎಂದು ಹೈಕೋರ್ಟ್ ತಿಳಿಸಿದೆ. ಹೈಕೋರ್ಟ್‌ನಲ್ಲಿ ಸುದೀರ್ಘ ವಾದ, ಪ್ರತಿವಾದ ಬಳಿಕ ತೀರ್ಪು ಹೊರಬಿದ್ದಿದೆ. ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ನಗರಸಭಾ ಅಧ್ಯಕ್ಷ ಎಸ್.ಸುರೇಶ್, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು, ಚುಡಾ ಮಾಜಿ ಅಧ್ಯಕ್ಷ ಕುಲಗಾಣ ಶಾಂತಮೂರ್ತಿ, ಬಾಲಸುಬ್ರಹ್ಮಣ್ಯ, ಬಿಜೆಪಿ ನಗರಮಂಡಲ ಅಧ್ಯಕ್ಷ ಶಿವರಾಜು, ಪ್ರಧಾನ ಕಾರ್ಯದರ್ಶಿ ಕೂಸಣ್ಣ, ಮಹೇಶ್, ಜಿಲ್ಲಾ ಉಪಾಧ್ಯಕ್ಷ ವಿರಾಟ್ ಶಿವು, ಪ್ರಧಾನ ಹೊನ್ನೂರು ಮಹದೇವಸ್ವಾಮಿ, ನಗರಸಭಾ ಮಾಜಿ ಸದಸ್ಯ ಶಿವಣ್ಣ, ಎಸ್‌ಸಿ ಮೋರ್ಚಾ ಅಧ್ಯಕ್ಷ ಮೂಡಳ್ಳಿಮೂರ್ತಿ, ಎಸ್‌ಟಿ ಮೋರ್ಚಾ ಉಪಾಧ್ಯಕ್ಷ ಬುಲೆಟ್ ಚಂದ್ರು, ಆರ್.ಸುಂದರ್, ಆನಂದ್ ಭಗೀರಥ, ಪುನೀತ್, ರಾಜೇಂದ್ರ, ಚಂದ್ರಶೇಖರ್, ಗುರು ಸೋಮವಾರಪೇಟೆ, ಗಿರಿ, ಶಿವು, ವಿರೇಂದ್ರ, ಮುತ್ತಿಗೆ ಮೂರ್ತಿ, ರಂಗಸ್ವಾಮಿ, ಪ್ರವೀಣ್, ಸುಮಂತ್, ಬಲವೀರ್ ಸಿಂಗ್, ರುದ್ರ, ಭಾಸ್ಕರ್ ಭಾಗವಹಿಸಿದ್ದರು.

ಸದೃಢ ಭಾರತ ಕಟ್ಟಲು ಸರ್ಕಾರದ ಯೋಜನೆ ಸಹಕಾರಿ
ಪೋಷಣ ಮಾಸ ಕಾರ್ಯಕ್ರಮದಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಅಭಿಮತ



ಕೊಳ್ಳೇಗಾಲದಲ್ಲಿ ಆಯೋಜಿಸಿದ್ದ ಪೋಷಣ ಮಾಸ ಛಾಯಾಚಿತ್ರ ಪ್ರದರ್ಶನಕ್ಕೆ ಶಾಸಕ ಎ.ಆರ್.ಕೃಷ್ಣಮೂರ್ತಿ ಚಾಲನೆ ನೀಡಿದರು.

ಕೊಳ್ಳೇಗಾಲ, ಸೆ.24–ಆರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಯೋಜನೆಗಳ ಸದ್ಬಳಕೆಯಿಂದ ಪೋಷಣೆಯುಕ್ತ ಸದೃಢ ಭಾರತ ಕಟ್ಟಲು ಸಾಧ್ಯ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಪಟ್ಟಣದ ಮಾನಸ ಶಿಕ್ಷಣ ಸಂಸ್ಥೆ ಆವರಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕು ಪಂಚಾಯಿತಿ, ಶಿಶು ಅಭಿವೃದ್ಧಿ ಯೋಜನೆ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಪೋಷಣ ಮಾಸ- 2024ರ ಅಂಗವಾಗಿ ಛಾಯಾಚಿತ್ರ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಚಾಮರಾಜನಗರದ ಹಲವೆಡೆ ಸಿಕಲ್ ಸೆಲ್ ಅನಿಮಿಯ ಕಾಯಿಲೆಯಿಂದ ಬುಡಕಟ್ಟು ಸಮುದಾಯದ ಕೆಲವರು ಬಳಲುತ್ತಿದ್ದು, ಇದರ ನಿವಾರಣೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿವೆ. ಯೋಜನೆಗಳ ಮೂಲಕ ಆರೋಗ್ಯ ಸೌಲಭ್ಯ ಒದಗಿಸಲಾಗಿದ್ದು, ಗ್ರಾಮದಿಂದ ನಗರ ಪ್ರದೇಶದವರೆಗೂ ಆರೋಗ್ಯಯುತ ಸಮಾಜ ನಿರ್ಮಿಸಲು ಇದು ಸಹಕಾರಿಯಾಗಿದೆ ಎಂದು ತಿಳಿಸಿದರು.

ಕೇಂದ್ರ ಸಂವಹನ ಇಲಾಖೆ ಕ್ಷೇತ್ರ ಪ್ರಚಾರ ಅಧಿಕಾರಿ ಎಸ್.ಟಿ.ಶೃತಿ ಮಾತನಾಡಿ, ಪೋಷಣ ಮಾಸ, ಪ್ರಧಾನ ಮಂತ್ರಿ ಜನಮನ, ಏಕ್ ಪೇಡ್ ಮಾಕೇ ನಾಮ್, ಸ್ವಚ್ಛತೆಯೇ ಸೇವೆ ಸೇರಿದಂತೆ ಕೇಂದ್ರ ಸರ್ಕಾರದ ಹಲವು ಯೋಜನೆಗಳ ಮಾಹಿತಿಯನ್ನು ಛಾಯಾಚಿತ್ರದ ಮೂಲಕ ಪ್ರದರ್ಶಿಸಲಾಗುತ್ತಿದೆ ಎಂದರು.

ಮಾನಸ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಡಾ.ಎಸ್.ದತ್ತೇಶ್‌ಕುಮಾರ್, ಸಿಎಫ್‌ಟಿಆರ್‌ಐ ನಿವೃತ್ತ ವಿಜ್ಞಾನಿ ಕೊಳ್ಳೇಗಾಲದ ಶರ್ಮಾ ಮಾತನಾಡಿ, ಪೋಷಣ ಮಾಸದ ಮಹತ್ವ ಹಾಗೂ ಸರ್ಕಾರದ ಯೋಜನೆಗಳ ಬಗ್ಗೆ ವಿವರಿಸಿದರು.

ಇದೇ ವೇಳೆ ತಾಯಿ ಹೆಸರಲ್ಲಿ ಒಂದು ಸಸಿ ನೆಡುವ ಕಾರ್ಯಕ್ರಮದ ಅಂಗವಾಗಿ ವಿವಿಧ ಸಸಿ ನೆಡಲಾಯಿತು. ಅಂಗನವಾಡಿ ಕಾರ್ಯಕರ್ತೆಯರು ಜಾಥಾ ನಡೆಸಿದರು. ಕಾರ್ಯಕ್ರಮದಲ್ಲಿ ಆರೋಗ್ಯವಂತ ಮಗು ಹಾಗೂ ಪೌಷ್ಟಿಕಾಂಶವುಳ್ಳ ಆಹಾರ ಸ್ಪರ್ಧೆಗಳನ್ನು ಏರ್ಪಡಿಸಲಾಯಿತು. ರಂಗೋಲಿ ಹಾಗೂ ಸ್ವಚ್ಛ ಭಾರತ ಚಿತ್ರಕಲಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಮಾತೃ ವಂದನಾ ಯೋಜನೆಯಡಿ ಗರ್ಭಿಣಿಯರಿಗೆ ಸೀಮಂತ ನೆರವೇರಿಸಲಾಯಿತು. ಸ್ವಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ಉತ್ಪನ್ನಗಳನ್ನು ಪ್ರದರ್ಶಿಸಲಾಯಿತು. ಸಂಗೀತ ಮತ್ತು ನಾಟಕ ವಿಭಾಗದ ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ತಾಪಂ ಇಓ ಗುರುಶಾಂತಪ್ಪ ಬೆಳ್ಳುಂಡಗಿ, ವಲಯ ಅರಣ್ಯಾಧಿಕಾರಿ ಕೆ.ಪಿ.ಪ್ರಫುಲ್ಲಾ, ಕ್ಷೇತ್ರ ಪ್ರಚಾರ ಸಹಾಯಕ ದರ್ಶನ್, ಕನ್ನಡ ಉಪನ್ಯಾಸಕರಾದ ಪುನೀತ್ ಕುಮಾರ್, ರೋಹಿ ವಿನೋಲಿಯಾ ಉಪಸ್ಥಿತರಿದ್ದರು.

ಬಿಜೆಪಿ, ಜೆಡಿಎಸ್‌ಗೆ ಸಿಎಂ ರಾಜೀನಾಮೆ ಕೇಳುವ ನೈತಿಕತೆ ಇಲ್ಲ

ಚಾಮರಾಜನಗರ, ಸೆ.24–ಬಿಜೆಪಿ ಮತ್ತು ಜೆಡಿಎಸ್ ಮುಖಂಡರಿಗೆ ಸಿಎಂ ಸಿದ್ದರಾಮಯ್ಯ ರಾಜೀನಾಮೆ ಕೇಳುವ ನೈತಿಕತೆ ಇಲ್ಲ ಎಂದು ಕೆಪಿಸಿಸಿ ಉಪಾಧ್ಯಕ್ಷ ಹಾಗೂ ವಿಧಾನ ಪರಿಷತ್ ಮಾಜಿ ಸಭಾಪತಿ ವಿ.ಎಸ್.ಸುದರ್ಶನ್ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಜನ ಸಿದ್ದರಾಮಯ್ಯ ಅವರ ರಾಜೀನಾಮೆ ಬಯಸುತ್ತಿಲ್ಲ. ಆದರೆ, ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ತೇಜೋವಧೆ ಮಾಡುವ ಉದ್ದೇಶದಿಂದ ಮುಡಾ ನೆಪ ಇಟ್ಟುಕೊಂಡು ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ರಾಜೀನಾಮೆ ಕೇಳುತ್ತಿದ್ದಾರೆ. ಇವರಿಗೆ ರಾಜೀನಾಮೆ ಕೇಳುವ ಯಾವುದೇ ನೈತಿಕತೆ ಇಲ್ಲ ಎಂದು ತಿಳಿಸಿದರು. ಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ, ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ, ಎಸ್.ಸಿ.ಬಸವರಾಜ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಚಂದ್ರು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್ ಹಾಜರಿದ್ದರು.



ಅ.4ರಿಂದ 10ರವರೆಗೆ ದಸರಾ ಚಲನಚಿತ್ರೋತ್ಸವ

● ಆರು ವಿಭಾಗದಲ್ಲಿ 112 ಚಿತ್ರ ಪ್ರದರ್ಶನ ● ಡಿಆರ್‌ಸಿಯ ಒಂದು, ಮಾಲ್ ಆಫ್ ಮೈಸೂರ್‌ನ ಐನಾಕ್ಸ್‌ನ ಮೂರು ಸ್ಕ್ರೀನ್‌ನಲ್ಲಿ ವ್ಯವಸ್ಥೆ ● ಅ.3, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಚಾಲನೆ; ರಮೇಶ್ ಅರವಿಂದ್, ಡಾಲಿ ಧನಂಜಯ, ಸಪ್ತಮಿಗೌಡ, ಶರಣ್ಯ ಶೆಟ್ಟಿ, ಅಕ್ಷತ ಬೋಪಯ್ಯ ಉಪಸ್ಥಿತಿ ● ಕನ್ನಡ ಕುಳ್ಳ ದ್ವಾರಕೀಶ್ ವಿಶೇಷ ಗೌರವ ಸಲ್ಲಿಕೆ


ರಮೇಶ್ ಧನಂಜಯ್ ಸಪ್ತಮಿ ಗೌಡ ಶರಣ್ಯ ಶೆಟ್ಟಿ ಅಕ್ಷತ ಬೋಪಯ್ಯ


ದಸರಾ ಚಲನ ಚಿತ್ರೋತ್ಸವ ಸಮಿತಿಯ ಉಪವಿಶೇಷಾಧಿಕಾರಿ ಡಾ.ಕೆ.ಎನ್.ಬಸವರಾಜ್ ದಸರಾ ಚಲನಚಿತ್ರೋತ್ಸವದ ಪೋಸ್ಟರ್ ಬಿಡುಗಡೆ ಮಾಡಿದರು.

ಮೈಸೂರು,ಸೆ.24(ಎಂಟಿವೈ)- ದಸರಾ ಮಹೋತ್ಸವದ ಅಂಗವಾಗಿ ಅ.4ರಿಂದ 10ರವರೆಗೆ ಆಯೋಜಿಸಿರುವ ದಸರಾ ಚಲನಚಿತ್ರೋತ್ಸವದಲ್ಲಿ ಆರು ವಿಭಾಗದಲ್ಲಿ 112 ಚಿತ್ರಗಳ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ದಸರಾ ಚಲನ ಚಿತ್ರೋತ್ಸವ ಸಮಿತಿಯ ಉಪ ವಿಶೇಷಾಧಿಕಾರಿ ಹಾಗೂ ಡಿಸಿಎಫ್ ಡಾ.ಕೆ.ಎನ್.ಬಸವರಾಜ್ ತಿಳಿಸಿದ್ದಾರೆ.

ಮೈಸೂರಿನ ಅಶೋಕಪುರಂನಲ್ಲಿರುವ ಅರಣ್ಯ ಭವನದಲ್ಲಿ ದಸರಾ ಚಲನಚಿತ್ರೋತ್ಸವದ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಪ್ರಸಕ್ತ ಸಾಲಿನ ದಸರಾ ಮಹೋತ್ಸವದ ಚಲನಚಿತ್ರೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಮೈಸೂರಿನ ಬಿ.ಎಂ.ಹ್ಯಾಬಿಟಾಟ್ ಮಾಲ್‌ನ ಡಿಆರ್‌ಸಿಯಲ್ಲಿ ಒಂದು ಪರದೆ(ಸ್ಕ್ರೀನ್) ಹಾಗೂ ಮಾಲ್ ಆಫ್ ಮೈಸೂರ್‌ನ ಐನಾಕ್ಸ್‌ನಲ್ಲಿ 3 ಪರದೆ(ಸ್ಕ್ರೀನ್)ಯಲ್ಲಿ ಚಲನಚಿತ್ರಗಳು ಪ್ರದರ್ಶನಗೊಳ್ಳಲಿವೆ. ಒಟ್ಟು 4 ಸ್ಕ್ರೀನ್‌ನಲ್ಲಿ ದಿನಕ್ಕೆ 16 ಚಲನಚಿತ್ರಗಳು ಪ್ರದರ್ಶನಗೊಳ್ಳಲಿವೆ ಎಂದರು.

ಚಾಲನೆ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಅ.3ರಂದು ಬೆಳಗ್ಗೆ 11ಕ್ಕೆ ದಸರಾ ಚಲನಚಿತ್ರೋತ್ಸವವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಈ ವೇಳೆ ಕನ್ನಡದ ನಾಯಕ ನಟರಾದ ರಮೇಶ್ ಅರವಿಂದ್, ಡಾಲಿ ಧನಂಜಯ, 'ಕಾಂತಾರ' ಖ್ಯಾತಿಯ ಸಪ್ತಮಿ ಗೌಡ, ಶರಣ್ಯ ಶೆಟ್ಟಿ, ಅಕ್ಷಿತ ಬೋಪಯ್ಯ ಹಾಜರಿರುವರು ಎಂದು ತಿಳಿಸಿದರು.

> **ಆನ್‌ಲೈನ್ ಪಾಸ್**
> ಸಿನಿರಸಿಕರಿಗೆ ಅನುಕೂಲವಾಗುವಂತೆ ಆನ್‌ಲೈನ್ ಮೂಲಕ ಪಾಸ್ ಪಡೆಯಬಹುದು. ವಿದ್ಯಾರ್ಥಿಗಳು, ಹಿರಿಯ ನಾಗರಿಕರಿಗೆ 300 ರೂ. ಹಾಗೂ ಇತರರಿಗೆ 500 ರೂ., ದಿನದ ಪಾಸ್‌ಗೆ 100 ರೂ. ದರ ನಿಗದಿ ಮಾಡಲಾಗಿದೆ. ಸೆ.26 ರಿಂದ ಮೈಸೂರಿನ ವಾರ್ತಾ ಭವನದಲ್ಲಿ ಪಾಸ್ ಪಡೆಯಬಹುದು.

ಅಂದು ಸಂಗೀತ ನಿರ್ದೇಶಕ ಸಾಧು ಕೋಕಿಲಾ ಹಾಗೂ ತಂಡದವರಿಂದ ಸಂಗೀತ ಮತ್ತು ಮನರಂಜನೆ ಕಾರ್ಯಕ್ರಮವಿದೆ. ಹಿರಿಯ ನಟ, ನಿರ್ದೇಶಕ ಹಾಗೂ ನಿರ್ಮಾಪಕ, 'ಕನ್ನಡದ ಮುತ್ತು-ಕರ್ನಾಟಕದ ಕುಳ್ಳ' ದಿ.ದ್ವಾರಕೀಶ್‌ರವರ ಸವಿನೆನಪಿನಲ್ಲಿ ಈ ಬಾರಿಯ ಚಲನಚಿತ್ರೋತ್ಸವ ಏರ್ಪಡಿಸಲಾಗುತ್ತಿದ್ದು, ಅವರ ಪುತ್ರ ಯೋಗೀಶ್ ಅವರ ಮೂಲಕ ಗೌರವ ಸಮರ್ಪಿಸಲಾಗುತ್ತಿದೆ. ಅಲ್ಲದೆ ದ್ವಾರಕೀಶ್ ಅಭಿನಯದ ಚಲನಚಿತ್ರಗಳನ್ನು ಇದೇ ವೇಳೆ ಪ್ರದರ್ಶಿಸಲಾಗುತ್ತಿದೆ ಎಂದರು.

ಸದಭಿರುಚಿಯ ಸಾಮಾಜಿಕ ಸಂದೇಶ ಸಾರುವ ಹಾಗೂ ರಾಷ್ಟ್ರ, ಅಂತಾರಾಷ್ಟ್ರ ಮಟ್ಟದ ಪ್ರಶಸ್ತಿ ಪುರಸ್ಕೃತ ಚಲನಚಿತ್ರಗಳನ್ನು ಪ್ರದರ್ಶಿಸಲಾಗುತ್ತದೆ. ಮಕ್ಕಳ ಚಿತ್ರಗಳು ಹಾಗೂ ಮಹಿಳಾ ನಿರ್ದೇಶನದ ಚಿತ್ರಗಳಿಗೆ ಪ್ರಾಧಾನ್ಯತೆ ನೀಡಲಾಗಿದೆ. 'ಓಲ್ಡ್ ಈಸ್ ಗೋಲ್ಡ್' ಶೀರ್ಷಿಕೆ ಅಡಿಯಲ್ಲಿ ಡಾ.ರಾಜ್‌ಕುಮಾರ್, ಡಾ.ವಿಷ್ಣುವರ್ಧನ್, ಡಾ.ಅಂಬರೀಷ್, ಶಂಕರ್‌ನಾಗ್ ಹಾಗೂ ಪುನೀತ್ ರಾಜಕುಮಾರ್, ರಮೇಶ್ ಅರವಿಂದ, ಶ್ರೀನಾಥ್, ಶಿವರಾಜ್‌ಕುಮಾರ್, ರವಿಚಂದ್ರನ್ ಹಾಗೂ ದಿ. ಅಪರ್ಣ ಅವರ ಸಿನಿಮಾಗಳನ್ನು ವೀಕ್ಷಿಸಬಹುದಾಗಿದೆ ಎಂದರು.

ಈ ಬಾರಿ ವಿಶೇಷವಾಗಿ ಭಾರತದ ಅಧಿಕೃತ ಭಾಷೆಗಳ ಜೊತೆಗೆ ಬುಡಕಟ್ಟು ಭಾಷೆಗಳಾದ ಬೋಡೊ, ಜನ್ಸಿಯ, ಕರ್ನಾಟಕದ ಕೊಡವ, ಅರೆಭಾಷೆಯ ಚಲನಚಿತ್ರಗಳು ಪ್ರದರ್ಶನವಾಗುತ್ತಿವೆ. ಈ ಬಾರಿ ಒಟ್ಟಾರೆ 112 ಚಲನಚಿತ್ರಗಳನ್ನು ವೀಕ್ಷಿಸುವ ಅವಕಾಶ ಚಿತ್ರರಸಿಕರಿಗೆ ದೊರೆಯಲಿದೆ.

ಸಿನಿ-ಫೋಟೋ ಪ್ರದರ್ಶನ: ಈ ಬಾರಿ ವಿಶೇಷವಾಗಿ ಸಿನಿ ಫೋಟೋ ಪ್ರದರ್ಶನವನ್ನು ಐನಾಕ್ಸ್ ಸಿನಿಮಾಸ್ ಹೊರ ಆವರಣದಲ್ಲಿ ಅ. 4ರಿಂದ 10 ರವರೆಗೆ ಆಯೋಜಿಸಿದ್ದು, ಈ ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಕಿರುಗೂರಿನ ಗಯ್ಯಾಳಿಗಳು ಖ್ಯಾತಿಯ ನಿರ್ದೇಶಕಿ ಸುಮನಾ ಕಿತ್ತೂರು ಭಾಗವಹಿಸಲಿದ್ದಾರೆ ಎಂದರು.

ಅತ್ಯುತ್ತಮ ಕಿರುಚಿತ್ರಗಳ ಪ್ರದರ್ಶನ: ಯುವಜನಾಂಗಕ್ಕೆ ಪ್ರೋತ್ಸಾಹ ನೀಡಲು ಕಿರುಚಿತ್ರ ಸ್ಪರ್ಧೆ ಏರ್ಪಡಿಸಲಾಗಿದ್ದು, ಆಯ್ಕೆಗೊಂಡ ಅತ್ಯುತ್ತಮ 10 ಕಿರುಚಿತ್ರಗಳನ್ನು ಸಹ ದೊಡ್ಡ ಪರದೆಯಲ್ಲಿ ಪ್ರದರ್ಶಿಸಲಾಗುವುದು. ಅ.8ರಂದು ಕಿರುಚಿತ್ರಗಳಲ್ಲಿ ಪ್ರಥಮ, ದ್ವಿತೀಯ, ತೃತೀಯ ಬಹುಮಾನಗಳನ್ನು ಹಾಗೂ ಉತ್ತಮ ಸಂಕಲನಗಾರ, ಛಾಯಾಗ್ರಾಹಕರಿಗೂ ಬಹುಮಾನ ನೀಡಲಿದ್ದು, ಕಾರ್ಯಕ್ರಮದಲ್ಲಿ ನಟ ಮಂಡ್ಯ ರಮೇಶ್ ಭಾಗವಹಿಸಲಿದ್ದಾರೆ ಎಂದರು. ಗೋಷ್ಠಿಯಲ್ಲಿ ದಸರಾ ಚಲನಚಿತ್ರೋತ್ಸವ ಉಪಸಮಿತಿ ಕಾರ್ಯಾಧ್ಯಕ್ಷ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ, ಸಮಿತಿ ಕಾರ್ಯದರ್ಶಿ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ ಉಪಸ್ಥಿತರಿದ್ದರು.

ಚಲನಚಿತ್ರೋತ್ಸವದಲ್ಲಿ ಪ್ರದರ್ಶನ ಚಿತ್ರಗಳಿವು

ದ್ವಾರಕೀಶ್ ಚಿತ್ರಗಳು

ಗುರು ಶಿಷ್ಯರು, ಮೇಯರ್ ಮುತ್ತಣ್ಣ, ಪ್ರಚಂಡ ಕುಳ್ಳ

ಭಾರತೀಯ ಸಿನಿಮಾ ವಿಭಾಗ

12ನೇ ತರಗತಿ ಫೇಲ್, ಅಬ್ರಕಡಬ್ರ, ಅನ್ನ, ಬೆಳ್ಳಿ ಹೂ, ಬೇರ್, ಬಂಪರ್, ಡೀಪ್ ಫ್ರಿಜ್, ಡಿಎನ್‌ಎ, ಡಾ.ಅಂಬೇಡ್ಕರ್, ಡಂಕಿ, ದ್ವಯಮ್, ಘುಕ್ರೆ-3, ಗಾಂಧಿ, ಹೂವಿನ ಹಾರ, ಜೋಸೆಫ್ಸ್ ಸನ್, ಮಿಥ್ಯ, ಮೈ ಹೀರೊ, ನಾಯಿಗೆರೆ, ಓಂಕಾರ, ಪೂವು, ರೂಟ್ ನಂ-17, ಸಹಾರಾ, ಶಿವಮ್ಮ ಶ್ಯಾಮ್ಚಿ ಐ, ಶ್ರೀಕಾಂತ್, ತರ್ಪಣ, ತಂಗಳಾನ್, ತಾರಿಣಿ ಹಾಗೂ ವರ್ಷಾಂಗಳಕ್ಕೂ ಶೇಷಮ್.

ವಿಶ್ವ ಸಿನಿಮಾ ವಿಭಾಗ

ಅಬೌಟ್ ಡ್ರೈ ಗ್ರಾಸಸ್, ಅಫೈರ್, ಅಮಲ್, ಬಕುರೌ, ಡ್ರೈವ್ ಮೈ ಕಾರ್, ಫಾಲನ್ ಲೀವ್ಸ್, ಮಾನ್‌ಸ್ಟರ್, ಪರ್ಫೆಕ್ಟ್ ಡೇಸ್, ಸಿಸಿ&ಐ, ಸ್ಕಿನ್ ಡೀಪ್, ಸನ್ಸ್, ಸನ್ & ಕಾಂಕ್ರೀಟ್, ದ ಮಾಂಕ್ & ದ ಗನ್, ದ ಝೋನ್ ಆಫ್ ಇಂಟರೆಸ್ಟ್, ವಾಕಿಂಗ್ ವಿಥ್ ವುಲ್ವ್ಸ್ ಚಲನಚಿತ್ರಗಳು ಪ್ರದರ್ಶಿಸಲಾಗುತ್ತದೆ.

ಕನ್ನಡ ಸಿನಿಮಾ ವಿಭಾಗ

ಅವತಾರ ಪುರುಷ, ಬ್ಯಾಕ್ ಬೆಂಚರ್ಸ್, ಭೀಮ, ಬ್ಲಿಂಕ್, ಕೇಸ್ ಆಫ್ ಕೊಂಡಾಣ, ಚೆಫ್ ಚಿದಂಬರ, ಚೌಚೌ ಬಾತ್, ಫ್ಯಾಮಿಲಿ ಡ್ರಾಮಾ, ಗರಡಿ, ಗರುಡ ಪುರಾಣ, ಜೀನಿಯಸ್ ಮುತ್ತ, ಘೋಸ್ಟ್, ಹೆಜ್ಜಾರು, ಕಾಗದ, ಕಬಂಧ, ಕೈವ, ಕರಟಕ ದಮನಕ, ಕಾಟೇರ, ಕೃಷ್ಣಂ ಪ್ರಣಯ ಸಖಿ, ಕ್ಷೇತ್ರಪತಿ, ಲಾಫಿಂಗ್ ಬುದ್ಧ, ಲೈನ್‌ಮ್ಯಾನ್, ಮಹಾರಾಜ, ಮೂರನೇ ಕೃಷ್ಣಪ್ಪ, ನಾಟ್‌ಔಟ್, ಒಂದು ಸರಳ ಪ್ರೇಮಕಥೆ, ಪೆಪೆ, ಪೌಡರ್, ರಾನ್ನಿ, ರೂಪಾಂತರ, ಸಪ್ತ ಸಾಗರದಾಚೆ ಎಲ್ಲೋ, ಶಾಖಹಾರಿ, ಶಾಲಿವಾಹನ ಶಖೆ, ಸ್ವಾತಿ ಮುತ್ತಿನ ಮಳೆ ಹನಿಯೇ, ಟಗರು ಪಲ್ಯ.

ಓಲ್ಡ್ ಈಸ್ ಗೋಲ್ಡ್ ವಿಭಾಗ

ಅಮೃತ ವರ್ಷಿಣಿ, ಭಕ್ತ ಪ್ರಹ್ಲಾದ, ಭೂತಯ್ಯನ ಮಗ ಅಯ್ಯು, ಗಂಧದ ಗುಡಿ, ಘಟಶ್ರಾದ್ಧ, ಮಾನಸ ಸರೋವರ, ಮಸಣದ ಹೂವು, ಮಿಂಚಿನ ಓಟ, ಓಂ ಹಾಗೂ ಪ್ರೇಮಲೋಕ.

ಮಹಿಳಾ ನಿರ್ದೇಶನದ ಸಿನಿಮಾ ವಿಭಾಗ

ಗೋರ್ರೈ ಫಖ್ರಿ, ಕ ಚಿಥಿ, ಕಂದೀಲು, ಲಾಪತಾ ಲೇಡೀಸ್, ಸೂರರೈ ಪೊಟ್ರು, ಸುಮ ದಿ ಫ್ಲವರ್, ಎಲಹಾ.

ಮಕ್ಕಳ ಸಿನಿಮಾ ವಿಭಾಗ

ದೂಪದ ಮಕ್ಕಳು, ಗುರುದಕ್ಷಿಣೆ, ಮಂಕುತಿಮ್ಮನ ಕಗ್ಗ, ಮೂಗಜ್ಜನ ಕೋಳಿ, ನಾನು ಇವಳ ಅಭಿಮಾನಿ, ಟೈಕ್ವಾಂಡೋ ಗರ್ಲ್.

ಕಿರು ಚಿತ್ರ ವಿಭಾಗ

99, ಲಕ್ಷ್ಮೀ, ಪೋಲಾರ್, ರಾಜ್ ಅಮ್ಮು, ಶಥ್‌ಪಥ, ಥ್ರೆಡ್ ಆಫ್ ಡೆಸ್ಟಿನಿ, ಎ ಹ್ಯಾಪಿ ಡಿಸ್ಕವರಿ, ತ್ರಿಕಾಲಂ, ಅನ್ವಾಂಟೆಡ್ ಕಿಡ್, ವರ್ಧಕಳ್ಳಿ ಯಾರೇ ನೀ ಯಾರೆ ಹಾಗೂ 77ನೇ ಕಾನ್ ಚಲನಚಿತ್ರೋತ್ಸವದಲ್ಲಿ ಅತ್ಯುತ್ತಮ ಕಿರುಚಿತ್ರ ವಿಭಾಗದಲ್ಲಿ ಪ್ರಶಸ್ತಿ ಪಡೆದ 'ಸನ್‌ಫ್ಲವರ್ಸ್ ವೇರ್ ದಿ ಫಸ್ಟ್ ಒನ್ಸ್ ಟು ನೋ'.

ಯುವದಸರಾ ಜಾಗದ ಬದಲಾವಣೆಗೆ ಆಹಾರ ಮೇಳದ ವಿರೋಧ

ಯುವದಸರಾ, ಆಹಾರ ಮೇಳ ಅಕ್ಕಪಕ್ಕದಲ್ಲಿದ್ದರೆ ಸರಿ, ಇಲ್ಲದಿದ್ದರೆ ಭಾರಿ ನಷ್ಟ

ಮೈಸೂರು, ಸೆ.24(ಜಿಎ)- ಯುವ ದಸರಾ ಕಾರ್ಯಕ್ರಮದ ಜಾಗ ಬದಲಾವಣೆ ಸರಿಯಲ್ಲ. ಹೀಗಾಗಿ ಅದನ್ನು ಎಂದಿನಂತೆ ಮಹಾರಾಜ ಕಾಲೇಜಿನ ಮೈದಾನದಲ್ಲಿ ಆಯೋಜಿಸಬೇಕೆಂದು ಮೈಸೂರು ದಸರಾ ಆಹಾರ ಮೇಳ ತಿಂಡಿ ತಿನಿಸುಗಳ ಮಾರಾಟಗಾರರ ಸಂಘ ಆಗ್ರಹಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಘದ ಕಾರ್ಯದರ್ಶಿ ಕಂಸಾಳೆ ರವಿ ಮಾತನಾಡಿ, ಯುವ ದಸರಾ ಹಾಗೂ ಆಹಾರ ಮೇಳಗಳು ಅಕ್ಕಪಕ್ಕದಲ್ಲಿದ್ದರೆ ಮಾತ್ರ ಆಹಾರ ಮೇಳದಲ್ಲಿ ಮಳಿಗೆ ಇರಿಸುವವರಿಗೆ ಅನುಕೂಲವಾಗುತ್ತದೆ. ಹೀಗಾಗಿ ಇವೆರಡನ್ನೂ ಬೇರೆ ಬೇರೆ ಕಡೆ ಇರಿಸುವುದರಿಂದ ನಷ್ಟವಾಗುತ್ತದೆ. ಆದ್ದರಿಂದ ಆಯೋಜಕರು ಈ ಬಗ್ಗೆ ಗಮನ ಹರಿಸಬೇಕು. ಕಳೆದ ಆಹಾರ ಮೇಳದಲ್ಲಿ ದುಬಾರಿ ದರಗಳನ್ನು ಮಳಿಗೆದಾರರಿಗೆ ವಿಧಿಸಿದ್ದ ಕಾರಣ ಅಪಾರ ನಷ್ಟವಾಗಿದೆ. ಹೀಗಾಗಿ ಈ ಬಾರಿ ಕಡಿಮೆ ದರ ನಿಗದಿ ಪಡಿಸಬೇಕು ಎಂದು ಒತ್ತಾಯಿಸಿದರು.

ಮಹಾರಾಜ ಕಾಲೇಜು ಮೈದಾನದಲ್ಲಿ ಈ ಬಾರಿಯ ಆಹಾರ ಮೇಳದ 180 ಮಳಿಗೆಗಳಿಗೆ ಅವಕಾಶ ನೀಡಲು ನಿರ್ಧರಿಸಿದ್ದಾರೆ. ಇದರಿಂದ ಎಲ್ಲರಿಗೂ ನಷ್ಟ ಉಂಟಾಗಲಿದೆ. ಎಂದಿನಂತೆ ಸ್ಕೌಟ್ ಅಂಡ್ ಗೈಡ್ ಮೈದಾನದಲ್ಲಿ 100 ಮಳಿಗೆಗಳು ಹಾಗೂ ಜಂಬೂ ಸರ್ಕಸ್ ನಡೆಯುವ ಸ್ಥಳದಲ್ಲಿ 75 ಮಳಿಗೆಗೆ ಅವಕಾಶ ಕಲ್ಪಿಸುವಂತೆ ಹಾಗೂ ಮಳಿಗೆಗಳಿಗೆ ನಿಗದಿಪಡಿಸಿರುವ ಡಿಡಿಯನ್ನು ಕಡಿಮೆಗೊಳಿಸುವಂತೆ ಈವರೆಗೂ 10ಕ್ಕೂ ಹೆಚ್ಚು ಬಾರಿ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡಿದರು, ಯಾವುದೇ ಪ್ರಯೋಜನವಾಗುತ್ತಿಲ್ಲ. ಅಧಿಕಾರಿಗಳು ಯಾರ ಮಾತನ್ನು ಕೇಳುತ್ತಿಲ್ಲ ಎಂದು ಆರೋಪಿಸಿದರು.

ಈಗಾಗಲೇ 248 ಅರ್ಜಿಗಳು ಸಲ್ಲಿಕೆಯಾಗಿವೆ. ಯಾರು ಸಹ ಈಗ ನಿಗದಿ ಪಡಿಸಿರುವ ಡಿಡಿ ಹಣವನ್ನು ಕಟ್ಟಬೇಡಿ ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಎಸ್. ನಾಗರಾಜು ಶಂಕರ್, ಸವಿತ, ಮಲ್ಲೇಶ್, ಚಂದ್ರಶೇಖರ್ ಮತ್ತಿತರರು ಉಪಸ್ಥಿತರಿದ್ದರು.

ದಸರಾ ಮಹೋತ್ಸವ-2024 ಹತ್ತು-ಹಲವು ವಿಶೇಷ

ಪಾರಂಪರಿಕ ನಡಿಗೆ, ಟಾಂಗಾ ಸವಾರಿ, ಜಾವಾ ಬೈಕ್ ರ‍್ಯಾಲಿ ರಂಜನೆ





ಮೈಸೂರು,ಸೆ.24(ಎಂಟಿವೈ)-ದಸರಾ ಮಹೋತ್ಸವದ ಅಂಗವಾಗಿ ಅ.4ರಿಂದ 6ರವರೆಗೆ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಪಾರಂಪರಿಕ ನಡಿಗೆ, ಟಾಂಗಾ ಸವಾರಿ, ಜಾವಾ ಮೋಟಾರ್ ಬೈಕ್ ರ‍್ಯಾಲಿ ಸೇರಿದಂತೆ ವಿವಿಧ ಕಾರ್ಯಕ್ರಮ ಆಯೋಜಿಸಿದೆ.

ಪ್ರತಿವರ್ಷದಂತೆ ಈ ಬಾರಿಯೂ ದಸರಾ ಮಹೋತ್ಸವದಲ್ಲಿ ಮೈಸೂರಿನ ರಂಗಾಚಾರ್ಲು ಪುರಭವನ(ಟೌನ್‌ಹಾಲ್)ದ ಆವರಣದಲ್ಲಿ ಅ.4ರಿಂದ 6ರವರೆಗೆ ಬೆಳಗ್ಗೆ 7ಕ್ಕೆ ವಿವಿಧ ಕಾರ್ಯಕ್ರಮಗಳು ಆರಂಭವಾಗಲಿದ್ದು, ಜನರಿಗೆ ಪಾರಂಪರಿಕತೆ ಬಗ್ಗೆ ಅರಿವು ಮೂಡಿಸಲು ಕ್ರಮ ಕೈಗೊಂಡಿದೆ.

ಜಾವಾ ಮೋಟಾರ್ ಬೈಕ್ ಸವಾರಿ: ಅ.4ರಂದು ಪಾರಂಪರಿಕ ಜಾವಾ ಮೋಟಾರ್ ಬೈಕ್ ಸವಾರಿ ಏರ್ಪಡಿಸಲಾಗಿದೆ. ಜಾವ ಬೈಕ್‌ವುಳ್ಳ 25ರಿಂದ 50ವರ್ಷದೊಳಗಿನ ಪುರುಷರು, ವಿದ್ಯಾರ್ಥಿಗಳು, ಯುವಕರು ಇದರಲ್ಲಿ ಪಾಲ್ಗೊಳ್ಳಬಹುದಾಗಿದೆ. ಮೊದಲು ನೋಂದಣಿ ಮಾಡಿಕೊಂಡ 10 ಮಂದಿಗೆ ಅವಕಾಶ ನೀಡಲಾಗುತ್ತದೆ. ಪುರಭವನದ ಆವರಣದಿಂದ ಸವಾರಿ ಆರಂಭವಾಗಿ ದೊಡ್ಡ ಗಡಿಯಾರ(ಸಿಲ್ವರ್ ಜುಬಿಲಿ ಕ್ಲಾಕ್ ಟವರ್), ಫ್ರೀ ಮೇಸನ್ಸ್ ಕ್ಲಬ್, 10ನೇ ಚಾಮರಾಜೇಂದ್ರ ವೃತ್ತ, ಅಂಬಾವಿಲಾಸ ಅರಮನೆ, ನಾಲ್ವಡಿ ಕೃಷ್ಣರಾಜ ಒಡೆಯರ್ ವೃತ್ತ, ಲಾನ್ಸ್‌ಡೌನ್ ಕಟ್ಟಡ, ಬನುಮಯ್ಯ ಶಿಕ್ಷಣ ಸಂಸ್ಥೆ, ಮೈಸೂರು ಮಹಾನಗರ ಪಾಲಿಕೆ(ಕಾರ್ಪೋರೇಷನ್ ಕಚೇರಿ), ಮಹಾರಾಜ ಸಂಸ್ಕೃತ ಪಾಠಶಾಲೆ, ಸಾರ್ವಜನಿಕ ಕಚೇರಿಗಳ ಸಂಕೀರ್ಣ(ಕಾಡಾ), ಅರಮನೆಯ ವರಹಾಗೇಟ್, ಗನ್‌ಹೌಸ್, ಶಿವರಾತ್ರೀಶ್ವರ ಮಠದ ಆಡಳಿತ ಕಟ್ಟಡ, 6 ಗೇಟ್, ಕರ್ಜನ್ ಪಾರ್ಕ್, ಬ್ಯಾಂಡ್ ಹೌಸ್, ಆಡಳಿತ ತರಬೇತಿ ಸಂಸ್ಥೆ, ಕೆಎಸ್‌ಆರ್‌ಪಿ ಕಟ್ಟಡ ಮೈಸೂರು ಪ್ರವೇಶದ್ವಾರ, ಲಲಿತ್ ಮಹಲ್, ಪೋಸ್ಟಲ್ ಟ್ರೈನಿಂಗ್ ಸೆಂಟರ್, ವಸಂತ್ ಮಹಲ್(ಡಯಟ್) ಮೂಲಕ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹತ್ತಿರ ಮುಕ್ತಾಯಗೊಳ್ಳಲಿದೆ.

ಟಾಂಗಾ ಸವಾರಿ: ಅ.5ರಂದು ಬೆಳಗ್ಗೆ 7 ಗಂಟೆಗೆ ಪಾರಂಪರಿಕ ಉಡುಗೆಯಲ್ಲಿ ದಂಪತಿಗಳಿಗಾಗಿ ಪಾರಂಪರಿಕ ಟಾಂಗಾ ಸವಾರಿ ಕಾರ್ಯಕ್ರಮ ಆಯೋಜಿಸಲಾಗಿದೆ. 25ರಿಂದ 55 ವರ್ಷದೊಳಗಿನ ದಂಪತಿ ಮಾತ್ರ ಪಾಲ್ಗೊಳ್ಳಬಹುದು. ಮೊದಲು ನೋಂದಣಿ ಮಾಡಿಕೊಳ್ಳುವ 50 ಜೋಡಿಗಳಿಗೆ ಆದ್ಯತೆ ಮೇರೆಗೆ ಭಾಗವಹಿಸಲು ಅವಕಾಶ ನೀಡಲಾಗುವುದು. ಟಾಂಗಾ ಸವಾರಿಯು ರಂಗಾಚಾರ್ಲು ಪುರಭವನದಿಂದ ಪ್ರಾರಂಭವಾಗಿ ದೊಡ್ಡ ಗಡಿಯಾರ, ಫ್ರೀ ಮೇಸನ್ಸ್ ಕ್ಲಬ್, 10ನೇ ಚಾಮರಾಜೇಂದ್ರ ವೃತ್ತ, ಅರಮನೆ, ನಾಲ್ವಡಿ ಕೃಷ್ಣರಾಜ ಒಡೆಯರ್ ವೃತ್ತ, ಲ್ಯಾನ್ಸ್‌ಡೌನ್ ಕಟ್ಟಡ, ಜಗನ್ಮೋಹನ ಅರಮನೆ, ಪರಕಾಲ ಮಠ, ಶೇಷಾದ್ರಿ ಹೌಸ್- ವಾಣಿಜ್ಯ ತೆರಿಗೆ ಕಚೇರಿ, ಪದ್ಮಾಲಯ, ಹಳೇ ಡಿಸಿ ಕಚೇರಿ, ಕ್ರಾಫರ್ಡ್ ಹಾಲ್, ಹೋಟೆಲ್ ಮೆಟ್ರೊಪೋಲ್, ಮೈಸೂರು ರೈಲ್ವೆ ಜಂಕ್ಷನ್, ಕೃಷ್ಣ ರಾಜೇಂದ್ರ ಆಸ್ಪತ್ರೆ(ಕೆ.ಆರ್.ಆಸ್ಪತೆ) ವೃತ್ತ, ಮೈಸೂರು ಮೆಡಿಕಲ್ ಕಾಲೇಜು, ಆಯುರ್ವೇದಿಕ್ ಆಸ್ಪತ್ರೆ, ಚಾಮರಾಜೇಂದ್ರ ಟೆಕ್ನಿಕಲ್ ಇನ್‌ಸ್ಟಿಟ್ಯೂಟ್, ಕಾವೇರಿ ಎಂಪೋರಿಯಂ, ಗಾಂಧಿ ವೃತ್ತ ಮೂಲಕ ಪುರಭವನದ ಆವರಣದಲ್ಲಿ ಮುಕ್ತಾಯಗೊಳ್ಳಲಿದೆ.

ಪಾರಂಪರಿಕ ನಡಿಗೆ: ಅ.6ರಂದು ಬೆಳಗ್ಗೆ 7ಕ್ಕೆ 'ಪಾರಂಪರಿಕ ನಡಿಗೆ' ಆಯೋಜಿಸಲಾಗಿದೆ. 18ರಿಂದ 50ವರ್ಷದೊಳಗಿನ ವಿದ್ಯಾರ್ಥಿಗಳು, ಪುರುಷರು ಮತ್ತು ಮಹಿಳೆಯರು ಪಾಲ್ಗೊಳ್ಳಬಹುದು. ಮೊದಲು ನೋಂದಣಿ ಮಾಡಿಕೊಳ್ಳುವ 200 ಜನರಿಗೆ ಮಾತ್ರ ಪಾರಂಪರಿಕ ನಡಿಗೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದು. 3 ದಿನಗಳ ಕಾಲ ನಡೆಯುವ ಕಾರ್ಯಕ್ರಮಗಳಲ್ಲಿ ನುರಿತ ಇತಿಹಾಸ ಹಾಗೂ ಪುರಾತತ್ವ ತಜ್ಞರು ಮೈಸೂರಿನ ವಿವಿಧ ಪಾರಂಪರಿಕ ಕಟ್ಟಡಗಳ ಪರಿಚಯವನ್ನು ಮಾಡಿಕೊಡಲಿದ್ದಾರೆ. ಕಾರ್ಯಕ್ರಮದಲ್ಲಿ ಭಾಗವಹಿಸಲಿಚ್ಛಿಸುವವರು ಸೆ.30ರೊಳಗೆ ದಸರಾ ವಸ್ತು ಪ್ರದರ್ಶನದ ಆವರಣದಲ್ಲಿರುವ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪ ನಿರ್ದೇಶಕರನ್ನು ನೇರವಾಗಿ ಅಥವಾ ದೂರವಾಣಿ ಅಥವಾ ಕಚೇರಿಯ ಇ-ಮೇಲ್ ವಿಳಾಸ commramh@yahoo.in ಮತ್ತು ddheritagemysore@gmail.comನ ಮೂಲಕ ಹೆಸರು ನೋಂದಾಯಿಸಿಕೊಳ್ಳಬಹುದು. ನೋಂದಣಿ ವೇಳೆ ಕಡ್ಡಾಯವಾಗಿ ದೂರವಾಣಿ ಅಥವಾ ಮೊಬೈಲ್ ಸಂಖ್ಯೆಗಳನ್ನು ನಮೂದಿಸಬೇಕಾಗಿದೆ. ಮಾಹಿತಿಗೆ ದೂ.ಸಂ 0821-2424671/2424673 ಹಾಗೂ ಉಪ ನಿರ್ದೇಶಕಿ ಡಾ.ಸಿ.ಎನ್.ಮಂಜುಳಾ ಅವರ ಮೊ.. ಸಂ 8310250733 ಸಂಪರ್ಕಿಸಬಹುದು.

ದಸರಾ ಗಜಪಡೆ ಬಳಿ ಜನ ಸುಳಿಯದಂತೆ ಕಟ್ಟೆಚ್ಚರ

ಮೈಸೂರು,ಸೆ.24(ಎಂಟಿವೈ)-ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ದಸರಾ ಗಜಪಡೆ ಕ್ಯಾಂಪ್ ಬಳಿ ಸಾರ್ವಜನಿಕರ ಪ್ರವೇಶ ಕಟ್ಟುನಿಟ್ಟಾಗಿ ನಿರ್ಬಂಧಿಸಲಾಗಿದೆ ಎಂದು ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ ತಿಳಿಸಿದ್ದಾರೆ. ಆನೆಗಳ ಬಳಿ ಜನ ಬರುವುದರಿಂದ ಅವುಗಳಿಗೆ ಕಿರಿಕಿರಿ ಉಂಟಾಗುತ್ತಿದೆ. ಆನೆಗಳ ಮುಂದೆ ಸೆಲ್ಫಿ ತೆಗೆದುಕೊಳ್ಳುವ ಹಾಗೂ ಅವುಗಳ ಮುಂದೆ ಅನುಚಿತವಾಗಿ ವರ್ತಿಸುತ್ತಿರುವ ಬಗ್ಗೆ ದೂರು ಕೇಳಿ ಬಂದಿದೆ. ಈ ಹಿನ್ನೆಲೆಯಲ್ಲಿ ವಿನಾ ಕಾರಣ ಸಾರ್ವಜನಿಕರು ಆನೆಗಳ ಬಳಿ ಹೋಗುವುದು, ಸೆಲ್ಫಿ ತೆಗೆದುಕೊಳ್ಳುವುದನ್ನು ನಿರ್ಬಂಧಿಸಲಾಗಿದೆ. ಆನೆಗಳ ಮಾವುತರು, ಕಾವಾಡಿಗಳು ಹಾಗೂ ಇನ್ನಿತರೆ ಸಿಬ್ಬಂದಿ ಆನೆಗಳ ಮೇಲೆ ನಿಗಾ ಇಟ್ಟು ಆರೈಕೆ ಮಾಡುತ್ತಿದ್ದಾರೆ. ಆದರೂ ಜನರನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಹೆಚ್ಚುವರಿಯಾಗಿ ಮೂವರು ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಇನ್ನು ಮುಂದೆ ಜನರು ಆನೆಗಳ ಬಳಿ ಹೋಗುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದರು.


ಸಂಗ್ರಹ ಚಿತ್ರ

ಪಾರಂಪರಿಕ ವೃತ್ತಗಳ ಅಂದಗೊಳಿಸಲು ಹೋದ ಅಧಿಕಾರಿಗಳ ಮಹಾ ಯಡವಟ್ಟು!

ಮೈಸೂರಿನ ಕೆ.ಆರ್.ವೃತ್ತ, ಚಾಮರಾಜ ವೃತ್ತದ ಸುತ್ತ ರೇಡಿಯಂ ಪೇಂಟ್ ಬಳಿದು ವಿರೂಪ!!




ಮೈಸೂರು ನಗರದ ಪಾರಂಪರಿಕತೆಯ ಹೆಗ್ಗುರುತಾದ ಕೆ.ಆರ್.ವೃತ್ತಕ್ಕೆ ರೇಡಿಯಂ ಪೇಂಟ್ ಬಳಿದು ವಿರೂಪಗೊಳಿಸಲಾಗುತ್ತಿದೆ.

ಮೈಸೂರು, ಸೆ.24(ಬಿಎಲ್‌ಯು)- ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ನಗರದ ವೃತ್ತಗಳಿಗೆ ಆಧುನಿಕತೆಯ ಸ್ಪರ್ಶ ನೀಡಲು ಹೋಗಿ ಮೈಸೂರು ನಗರಪಾಲಿಕೆ ಅಧಿಕಾರಿಗಳು ಮಹಾ ಯಡವಟ್ಟು ಮಾಡಿದ್ದಾರೆ. ಮೈಸೂರಿನ ಪಾರಂಪರಿಕತೆಯ ಹೆಗ್ಗುರುತಾದ ಕೆ.ಆರ್.ವೃತ್ತ ಹಾಗೂ ಅರಮನೆ ಮುಂಭಾಗದ ಚಾಮರಾಜ ವೃತ್ತದ ಸುತ್ತ ತ್ರೀಡಿ ರೇಡಿಯಂ ಪೇಂಟ್ ಮಾಡಿ ನಗರದ ಪಾರಂಪರಿಕ ಸೌಂದರ್ಯಕ್ಕೆ ಧಕ್ಕೆ ತಂದಿದ್ದಾರೆ.

ಯುನೆಸ್ಕೊ ಪಟ್ಟಿಯಲ್ಲಿರುವ ಜಗತ್ತಿನ 10 ದೇಶಗಳಲ್ಲಿ ಭಾರತ ಕೂಡ ಒಂದು. ಭಾರತ, ಇಂಗ್ಲೆಂಡ್, ಫ್ರಾನ್ಸ್, ಜರ್ಮನಿ, ಸ್ಪೇನ್ ಸೇರಿದಂತೆ ವಿಶ್ವದ ಹತ್ತು ದೇಶಗಳಲ್ಲಿರುವ ಅತ್ಯದ್ಭುತ ಪಾರಂಪರಿಕ ಶೈಲಿಯ ಕಟ್ಟಡಗಳ ವೈಶಿಷ್ಟ್ಯತೆ ಆಧರಿಸಿ, ಯುನೆಸ್ಕೊ ಹತ್ತು ದೇಶಗಳನ್ನು ಪಟ್ಟಿ ಮಾಡಿದೆ. ಈ ಹಿನ್ನೆಲೆ ವಿದೇಶಿ ಪ್ರವಾಸಿಗರು ಪಾರಂಪರಿಕ ಕಟ್ಟಡಗಳ ಅಂದ ನೋಡಲು ಭಾರತಕ್ಕೆ ಬರುತ್ತಾರೆ. ಈ ಹೆಸರು ಉಳಿಸಲು ಭಾರತ ಸೇರಿದಂತೆ ವಿಶ್ವದ 10 ದೇಶಗಳಲ್ಲಿ ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಿಸಲಾಗುತ್ತಿದೆ. ಇಂತಹ ಕಟ್ಟಡಗಳ ಸೌಂದರ್ಯಕ್ಕೆ ಕಿಂಚಿತ್ತೂ ಧಕ್ಕೆಯಾಗದಂತೆ ಹಲವು ರೀತಿಯ ಸಂರಕ್ಷಣಾ ಕ್ರಮ ವಹಿಸಲಾಗುತ್ತಿದೆ. ಪಾರಂಪರಿಕ ಕಟ್ಟಡಗಳು ಶಿಥಿಲಗೊಂಡಾಗ ತಜ್ಞರ ಸಲಹೆಯಂತೆ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ಮೂಲ ಸ್ವರೂಪಕ್ಕೆ ಧಕ್ಕೆ ಆಗದಂತೆ ನವೀಕರಿಸಲಾಗುತ್ತಿದೆ.

ಭಾರತದ ಪಾರಂಪರಿಕ ಕಟ್ಟಡಗಳ ತವರೂರುಗಳಲ್ಲಿ ಮೈಸೂರು ಕೂಡ ಒಂದು. ಮೈಸೂರಿಗೆ ಸಾಂಸ್ಕೃತಿಕ ನಗರಿ ಖ್ಯಾತಿ ಜೊತೆಗೆ ಪಾರಂಪರಿಕ ನಗರಿ ಹೆಸರು ಕೂಡ ಇದೆ. ಈ ಕಾರಣದಿಂದ ಮೈಸೂರಿನ ಪಾರಂಪರಿಕ ಕಟ್ಟಡಗಳನ್ನು ಹೇಗಿದೆಯೊ ಹಾಗೆ ಸಂರಕ್ಷಿಸಬೇಕೇ ಹೊರತು, ಅದರ ಸೌಂದರ್ಯಕ್ಕೆ ಧಕ್ಕೆ ತಂದು ವಿರೂಪಗೊಳಿಸಬಾರದು. ಆಧುನಿಕತೆಯ ಯಾವುದೇ ಸ್ಪರ್ಶ ನೀಡದೆ ಅದರ ಸೌಂದರ್ಯ ಉಳಿಸಬೇಕು.

ಆದರೆ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ಪ್ರವಾಸಿಗರನ್ನು ಮತ್ತಷ್ಟು ಆಕರ್ಷಿಸಲು ನಗರದ ಪಾರಂಪರಿಕ ಶೈಲಿಯ ಕೆ.ಆರ್.ವೃತ್ತ ಹಾಗೂ ಚಾಮರಾಜ ವೃತ್ತದ ಸುತ್ತಲಿನ ರಸ್ತೆಗೆ ಶ್ವೇತವರ್ಣದ ರೇಡಿಯಂ ತ್ರೀಡಿ ಪೇಂಟ್ ಬಳಿದು ವಿರೂಪಗೊಳಿಸಲಾಗುತ್ತಿದೆ.

ವೃತ್ತದ ಸುತ್ತ 10 ಅಡಿ ರೇಡಿಯಂ ಪೇಂಟ್ ಮಾಡಿ, ಅದರೊಳಗೆ ಕಮಲ, ಮರದ ಎಲೆ ಹಾಗೂ ಇತರೆ ಚಿತ್ರಗಳನ್ನು ಬಿಡಿಸಲಾಗುತ್ತಿದೆ. ನಿನ್ನೆ ರಾತ್ರಿ ವೃತ್ತದ ರಸ್ತೆ ಸುತ್ತ ರೇಡಿಯಂ ಪೇಂಟ್ ಮಾಡಿದ್ದು, ಅರ್ಧ ಕೆಲಸ ಮುಗಿಸಿದ್ದಾರೆ. ಇಂದು ರಾತ್ರಿ ವೇಳೆಗೆ ಪೂರ್ಣಗೊಳಿಸಲಿದ್ದಾರೆ. ರಾತ್ರಿ ವೇಳೆ ರೇಡಿಯಂ ಪೇಂಟ್ ಮೂಲಕ ವೃತ್ತವನ್ನು ಅತ್ಯಾಕರ್ಷಿಸುವುದು ನಗರಪಾಲಿಕೆ ಅಧಿಕಾರಿಗಳ ವಿನೂತನ ಚಿಂತನೆ. ಆದರೆ ಪಾರಂಪರಿಕ ವೃತ್ತದ ಸುತ್ತ ಹೀಗೆ ರೇಡಿಯಂ ಪೇಂಟ್ ಮಾಡಿದರೆ ವೃತ್ತದ ಸೊಬಗು ಮಂಕಾಗುತ್ತದೆ, ಸಹಜ ಸೌಂದರ್ಯ ಮಸುಕಾಗುತ್ತದೆ. ಪಾರಂಪರಿಕ ವೃತ್ತಕ್ಕೆ ಆಧುನಿಕತೆಯ ಮೆರಗು ನೀಡುವ ಭರದಲ್ಲಿ ರೇಡಿಯಂ-ಇನ್ ಫ್ಯೂಸ್ಡ್ ಪೇಂಟ್ ಬಳಸಿದ್ದಾರೆ. ಸದ್ಯಕ್ಕೆ ಈ ಪೇಂಟ್ ಆಕರ್ಷಕವಾಗಿ ಕಾಣಬಹುದು. ಆದರೆ ದಿನ ಕಳೆದಂತೆ ಶ್ವೇತವರ್ಣದ ಮೇಲೆ ಕೊಳೆ ಮುತ್ತುತ್ತದೆ, ಪೇಂಟ್ ಕಿತ್ತು ಬರುತ್ತದೆ. ಇದರಿಂದ ಕೆಲವೇ ದಿನಗಳಲ್ಲಿ ಅದು ಮತ್ತಷ್ಟು ವಿಕಾರವಾಗಿ ಕಾಣುತ್ತದೆ. ಇದರಿಂದ ಪಾರಂಪರಿಕ ಶೈಲಿಯ ವೃತ್ತದ ಪ್ರಜ್ವಲತೆ ಕಳೆದುಕೊಳ್ಳುತ್ತದೆ.

ರೇಡಿಯಂ ಪೇಂಟ್‌ನಲ್ಲಿ ವರ್ಣಚಿತ್ರ ಬಿಡಿಸಲಾಗುತ್ತಿದ್ದು, ಸಾಮ್ಯತೆ ಇಲ್ಲದ ವರ್ಣಚಿತ್ರಗಳಿಗೆ ರೂಪ ನೀಡಲಾಗುತ್ತಿದೆ. ರಾತ್ರಿ ವೇಳೆ ವೃತ್ತ ಅದ್ಭುತವಾಗಿ ಹೊಳೆಯಲಿ ಎಂಬ ಉದ್ದೇಶದಿಂದ ಪಾರಂಪರಿಕ ಶೈಲಿಯ ವೃತ್ತದ ಭವ್ಯತೆ ಹಾಳು ಮಾಡುತ್ತಿದ್ದಾರೆ. ರಸ್ತೆ ಅಪಘಾತಗಳನ್ನು ತಡೆಗಟ್ಟಲು ರೇಡಿಯಂ ಪೇಂಟ್‌ಗಳನ್ನು ಪರಿಣಾಮಕಾರಿಯಾಗಿ ಹಾಕಲಿ. ಅದು ಬಿಟ್ಟು ಪಾರಂಪರಿಕ ವೃತ್ತಕ್ಕೆ ಆಧುನಿಕ ಸ್ಪರ್ಶ ನೀಡುವ ಪೂರ್ವಾಗ್ರಹ ಚಿಂತನೆಯಲ್ಲಿ ಪರಂಪರೆಯ ಗುರುತನ್ನು ಅಳಿಸಿ ಹಾಕುವುದು ಎಷ್ಟು ಸರಿ ಎಂಬುದು ಮೈಸೂರಿನ ಪಾರಂಪರಿಕ ಪ್ರಿಯರ ಪ್ರಶ್ನೆಯಾಗಿದೆ.

ಪೌರ ಕಾರ್ಮಿಕರ ಕಾರ್ಯ ಶ್ಲಾಘನೀಯ

ಪೌರಕಾರ್ಮಿಕರ ದಿನಾಚರಣೆಯಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡ



ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದರನ್ನು ಸನ್ಮಾನಿಸಲಾಯಿತು.

ಹುಣಸೂರು, ಸೆ.24– ಗಾಳಿ, ಮಳೆ, ಬಿಸಿಲು, ಚಳಿ ಎನ್ನದೆ ನಿತ್ಯ ಸ್ವಚ್ಛತಾ ಕಾರ್ಯ ನಡೆಸುವ ಪೌರ ಕಾರ್ಮಿಕರು ನೈಜ ಕಾಯಕ ಯೋಗಿಗಳು. ಕೊರೊನಾ ಸಂದರ್ಭದಲ್ಲಿ ಜೀವದ ಹಂಗನ್ನು ತೊರೆದು ಸ್ವಚ್ಛತಾ ಕಾರ್ಯ ಕೈಗೊಂಡಿದ್ದು ಶ್ಲಾಘನೀಯ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ನಗರ ಸಭೆ ವತಿಯಿಂದ ಏರ್ಪಡಿಸಿದ್ದ ಪೌರ ಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಇಲ್ಲಿನ ಪೌರ ಕಾರ್ಮಿಕರ ಶ್ರಮದಿಂದಾಗಿ ಸ್ವಚ್ಛತೆ ವಿಚಾರದಲ್ಲಿ ಹುಣಸೂರು ನಗರಸಭೆ ಜಿಲ್ಲೆಯಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಪ್ರಶಂಸಿಸಿದ ಅವರು, ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಪೌರಕಾರ್ಮಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಒಂದೇ ಮನೆಯಲ್ಲಿ ಹಲವು ಕುಟುಂಬಗಳು ವಾಸಿಸುತ್ತಿದ್ದು, ತಕ್ಷಣ ಪೌರಕಾರ್ಮಿಕರಿಗೆ ನಿವೇಶನ ನೀಡಲು ಎಲ್ಲಾ ಸದಸ್ಯರು ಹಾಗೂ ಪೌರಾಯುಕ್ತರು ಚರ್ಚೆ ನಡೆಸಿ ಸ್ಥಳ ಗುರುತಿಸಬೇಕು. ನಗರ ಸ್ವಚ್ಛಗೊಳಿಸುವ ಪೌರಕಾರ್ಮಿಕರ ಕಾಲೋನಿಯ ಸಮಸ್ಯೆಗಳ ಬಗ್ಗೆ ಅರಿವಿದೆ. ಶೀಘ್ರ ಕಾವೇರಿ ಕುಡಿಯುವ ನೀರಿನ ಕಾಮಗಾರಿಗೆ ಚಾಲನೆ ನೀಡುತ್ತೇನೆ. ಪೌರಕಾರ್ಮಿಕರು ಆರೋಗ್ಯವಾಗಿದ್ದರೇ ಇಡೀ ನಗರ ಆರೋಗ್ಯವಾದಂತೆ ಎಂದರು. ಇದೇ ವೇಳೆ ಶಾಸಕರು ಪೌರ ಕಾರ್ಮಿಕರಿಗೆ ಸಮವಸ್ತ್ರ ವಿತರಿಸಿದರು.

ಸದಸ್ಯೆ ರಾಣಿಪೆರುಮಾಳ್ ಮಾತನಾಡಿ, ಪೌರಕಾರ್ಮಿಕರು ನಿತ್ಯ ಬೆಳಗ್ಗೆ ನಗರದ ಸ್ವಚ್ಛತೆಯಲ್ಲಿ ತೊಡಗಿಸಿಕೊಳ್ಳಲಿದ್ದು, ಅವರಿಗೆ ಅಗತ್ಯವಿರುವ ಸಲಕರಣೆಗಳನ್ನು ಅಧಿಕಾರಿಗಳು ವಿತರಿಸಬೇಕು. ಅಲ್ಲದೇ ಅವರ ಮಕ್ಕಳ ಉತ್ತಮ ಶಿಕ್ಷಣಕ್ಕೆ ನೆರವು ನೀಡಬೇಕು ಎಂದರು.

ಇದೇ ವೇಳೆ ನಗರಸಭಾಧ್ಯಕ್ಷ ಶರವಣ, ಸದಸ್ಯರಾದ ಗಣೇಶ ಕುಮಾರಸ್ವಾಮಿ, ಸಿ.ದೇವರಾಜು, ಅನುಷಾ ನಾತನಾಡಿದರು. ಹಿರಿಯ ಕಲಾವಿದರಾದ ಸಿ.ರಾಮು, ಆರ್. ಚಂದ್ರ ಎನ್.ಮಂಜುನಾಥ್, ಮುರುಗೇಶ್, ಹೊನ್ನಯ್ಯ ಅವರನ್ನು ಸನ್ಮಾನಿಸಲಾಯಿತು. ಪೌರಕಾರ್ಮಿಕರ ದಿನಾಚರಣೆ ಅಂಗವಾಗಿ ನಡೆದ ಆಟೋಟಗಳ ವಿಜೇತರಿಗೆ ಇದೇ ವೇಳೆ ಬಹುಮಾನ ವಿತರಿಸಲಾಯಿತು.

ಈ ವೇಳೆ ಪೌರಯುಕ್ತೆ ಮಾನಸ, ಉಪಾಧ್ಯಕ್ಷೆ ಆಶಾ, ಸದಸ್ಯರಾದ ಕೃಷ್ಣರಾಜ ಗುಪ್ತ, ಹೆಚ್.ಪಿ.ಸತೀಶ್, ಶ್ರೀನಾಥ್, ಗೀತಾ, ದೇವನಾಯ್ಕ, ಸಾಯಿನ್ ತಾಜ್, ಮಾಲಿಕ್ ಪಾಷ, ರಿಜ್ವಾನ್ ಪಾಷ, ಹರೀಶ, ರಮೇಶ, ಸೌರಭ, ಯುನೂಸ್, ವಿವೇಕ, ಸಿರಾಜ್ ಪಾಷ, ಎಇಇ ಶರ್ಮಿಳಾ, ಲೋಕೇಶ್, ಸೋಮಶೇಖರ್, ಆರೋಗ್ಯ ನಿರೀಕ್ಷಕರಾದ ಸತೀಶ್, ಶಶಿನಾಯಕ್, ಪರಿಸರ ಇಂಜಿನಿಯರ್ ರೂಪಾ, ಕಂದಾಯಾಧಿಕಾರಿ ಮಧು, ಜೋಯಲ್, ಸುರೇಂದ್ರ, ಮುಖಂಡರಾದ ಕೆಂಪೇಗೌಡ, ಗೋವಿಂದೇಗೌಡ ಇನ್ನಿತರರಿದ್ದರು. ಬಳಿಕ ನಗರದ ಪೌಂಪ್‌ಹೌಸ್‌ನಲ್ಲಿ ಪೌರಕಾರ್ಮಿಕರಿಗೆ ಏರ್ಪಡಿಸಿದ್ಧ ಭೋಜನ ಕೂಟದಲ್ಲಿ ಶಾಸಕರು ಪೌರಕಾರ್ಮಿಕರಿಗೆ ಭೋಜನ ಬಡಿಸಿದರು. ಅಲ್ಲದೆ ತಾವು ಸಹ ಪೌರಕಾರ್ಮಿಕರೊಂದಿಗೆ ಕುಳಿತು ಭೋಜನ ಮಾಡಿದರು.

ಟನ್ ಕಬ್ಬಿಗೆ 4 ಸಾವಿರ ನಿಗದಿಗೆ ಆಗ್ರಹಿಸಿ ಪ್ರತಿಭಟನೆ



ಟನ್ ಕಬ್ಬಿಗೆ 4 ಸಾವಿರ ನಿಗದಿಗೆ ಆಗ್ರಹಿಸಿ ರೈತರು ಪ್ರತಿಭಟನೆ ನಡೆಸಿದರು.

ನಂಜನಗೂಡು, ಸೆ.24– ಪ್ರಸಕ್ತ ಸಾಲಿನಲ್ಲಿ ರೈತರು ಪೂರೈಸುವ ಪ್ರತಿ ಟನ್ ಕಬ್ಬಿಗೆ 4 ಸಾವಿರ ರೂ. ನಿಗದಿಪಡಿಸುವಂತೆ ಆಗ್ರಹಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ನಗರದ ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಮಂಗಳವಾರ ಪ್ರತಿಭಟನೆ ನಡೆಸಿದರು.

ನಗರದ ವಿಶ್ವೇಶ್ವರಯ್ಯ ವೃತ್ತದ ಬಳಿ ಜಮಾಯಿಸಿದ ನೂರಕ್ಕೂ ಹೆಚ್ಚು ರೈತರು, ಅಲ್ಲಿಂದ ಪಾದಯಾತ್ರೆ ಮೂಲಕ ತಾಲೂಕು ಕಚೇರಿಗೆ ತೆರಳಿ ಪ್ರತಿಭಟನೆ ನಡೆಸಿದರು.

ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದಾಗಿ ಸಕ್ಕರೆ ಕಾರ್ಖಾನೆಗಳು ರೈತರಿಗೆ 950 ಕೋಟಿ ರೂ.ಗಳಿಗೂ ಹೆಚ್ಚು ಬಾಕಿ ನೀಡಬೇಕಿದೆ. ರೈತರು ಪ್ರಸಕ್ತ ವರ್ಷ ಪೂರೈಸುವ ಕಬ್ಬಿಗೆ 4 ಸಾವಿರ ದರ ನೀಡಬೇಕು. ಬಜೆಟ್‌ನಲ್ಲಿ ಘೋಷಿಸಿದಂತೆ ಸಕ್ಕರೆ ಕಾರ್ಖಾನೆಗಳ ಆವರಣದಲ್ಲಿ ತೂಕದ ಯಂತ್ರ ಅಳವಡಿಸಬೇಕು ಹಾಗೂ ರೈತರ ಕೃಷಿ ಚಟುವಟಿಕೆಗಳಿಗೆ ನೆರವಾಗುವಂತೆ ಅಕ್ರಮ ಸಕ್ರಮ ಯೋಜನೆ ಮೂಲಕ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಇನ್ನು ರೈತರ ಪಂಪ್‌ಸೆಟ್‌ಗಳಿಗೆ ಆಧಾರ್ ಜೋಡಿಸುವ ಪ್ರಕ್ರಿಯೆ ಕೈ ಬಿಡಬೇಕು. ಪ್ರಸ್ತುತ ಎಷ್ಟಾದರೂ ಕೃಷಿ ಜಮೀನು ಖರೀದಿಸಬಹುದು ಎಂಬ ನಿಯಮಾವಳಿ ಚಾಲ್ತಿಯಲ್ಲಿದ್ದು, ಇದರಿಂದ ಕೃಷಿ ಸಂಸ್ಕೃತಿ ವಿನಾಶವಾಗುವ ಆತಂಕವಿದೆ. ಹೀಗಾಗಿ ರೈತರನ್ನು ಉಳಿಸುವ ಸಲುವಾಗಿ ಭೂ ಸುಧಾರಣಾ ಕಾಯ್ದೆ ತಿದ್ದುಪಡಿ ಮಾಡಿ ಕೃಷಿ ಹಿನ್ನೆಲೆಯವರು ಮಾತ್ರ ಭೂಮಿ ಖರೀದಿಸುವಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಬಳಿಕ ಸ್ಥಳಕ್ಕಾಗಮಿಸಿದ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿ ರೈತರು ಪ್ರತಿಭಟನೆ ಅಂತ್ಯಗೊಳಿಸಿದರು. ಪ್ರತಿಭಟನೆಯಲ್ಲಿ ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ರವಿ, ಚಿಕ್ಕಸ್ವಾಮಿ, ರಾಜೇಂದ್ರ, ರಾಜಣ್ಣ, ಮಂಜೇಶ್, ನಾಗೇಂದ್ರ, ಮಹೇಶ್ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಡೈರಿ ವಾರ್ಷಿಕ ಮಹಾಸಭೆ

ಬೆಟ್ಟದಪುರ ಸಮೀಪದ ಕೋಮಲಾಪುರದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಮಂಗಳವಾರ ನಡೆಯಿತು. ಈ ವೇಳೆ ಒಕ್ಕೂಟದ ವಿಸ್ತರಣಾಧಿಕಾರಿ ಶ್ರೀಕಾಂತ್, ರೈತ ಮುಖಂಡ ಸ್ವಾಮಿಗೌಡ, ಗ್ರಾಪಂ ಅಧ್ಯಕ್ಷ ಮಂಜನಾಥ, ಮುಖಂಡ ಕೃಷ್ಣೇಗೌಡ, ವಸಂತ್, ಕುಮಾರ್, ಹರೀಶ್ ಸೇರಿದಂತೆ ಇತರರಿದ್ದರು.



ಜಯಪುರ ಡೇರಿಗೆ 2.80 ಲಕ್ಷ ನಿವ್ವಳ ಲಾಭ



ಜಯಪುರ ಡೈರಿ ವಾರ್ಷಿಕ ಮಹಾಸಭೆ ನಡೆಯಿತು.

ಜಯಪುರ, ಸೆ.24– ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಬಿಎಂಸಿ ಕಟ್ಟಡ ಆವರಣದಲ್ಲಿ ನಡೆದ ವಾರ್ಷಿಕ ಮಹಾಸಭೆಯನ್ನು, ಡೇರಿ ಅಧ್ಯಕ್ಷ ಮೂಗನಾಯಕ ಉದ್ಘಾಟಿಸಿದರು.

ಮೈಮುಲ್ ವಿಸ್ತರಣಾಧಿಕಾರಿ ಕೆ.ಎಸ್. ಪ್ರವೀಣ್ ವಾರ್ಷಿಕ ಮಹಾಸಭೆ 2023–24ನೇ ಸಾಲಿನ ನಡಾವಳಿಯನ್ನು ಸಭೆಗೆ ಓದಿ ತಿಳಿಸಿದರು. ಅಲ್ಲದೇ ಲೆಕ್ಕಪರಿಶೋಧನಾ ವರದಿ ಮಂಡಿಸಿದರು. 2024–25ನೇ ಸಾಲಿಗೆ ಅಂದಾಜು ಪತ್ರ ಅನುಮೋದಿಸಿ ಅಂಗೀಕರಿಸಿದರು. ಪ್ರಸಕ್ತ ಸಾಲಿನಲ್ಲಿ ಸಂಘವು 2.80 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದು ತಿಳಿಸಿದರು. ಸಭೆಯಲ್ಲಿ ಉಪಾಧ್ಯಕ್ಷೆ ಜಯಮ್ಮ, ಸಿಇಓ ಪಿ.ಬಸವರಾಜು, ತಾಪಂ ಮಾಜಿ ಸದಸ್ಯ ಜವರನಾಯಕ, ಜಯಪುರ ಗ್ರಾಪಂ ಅಧ್ಯಕ್ಷ ಎಂ.ಮಾದೇವಯ್ಯ, ಸದಸ್ಯರಾದ ಎಂ.ನಾಗರಾಜು, ಬಿ.ರೇಣುಕಾ, ಡೇರಿ ಮಾಜಿ ಅಧ್ಯಕ್ಷ ಬಿ.ಮಲ್ಲಪ್ಪ, ಚಾಮನಾಯಕ, ನಿರ್ದೇಶಕರಾದ ವೆಂಕಟ ರಮಣ, ಪುಟ್ಟಸಿದ್ದನಾಯಕ, ಗುಜ್ಜನಾಯಕ, ಅಬ್ದುಲ್ ರೆಹಮಾನ್, ಕೃಷ್ಣೇಗೌಡ, ರಾಚನಾಯಕ ಮತ್ತು ನಾಮ ನಿರ್ದೇಶನ ಸದಸ್ಯ ಮೊಹಮ್ಮದ್, ಸುಜಾತ ಭಾಗವಹಿಸಿದ್ದರು.

ಒಳ ಮೀಸಲಾತಿಗಾಗಿ ಮಾದಿಗ ಸಮುದಾಯದಿಂದ ಪ್ರತಿಭಟನೆ



ನಂಜನಗೂಡಿನಲ್ಲಿ ಒಳ ಮೀಸಲಾತಿಗೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ನಂಜನಗೂಡು, ಸೆ.24– ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿ ಜಾರಿಗೊಳಿಸಿ ಪ.ಜಾತಿಯ ಒಳ ಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ಮಂಗಳವಾರ ತಾಲೂಕು ಆದಿಜಾಂಬವ ಸಂಘಗಳ ಒಕ್ಕೂಟ ಹಾಗೂ ಮಾದಿಗ ಹೋರಾಟ ಸಮಿತಿ ಸದಸ್ಯರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಬಳಿಕ ಹುಲ್ಲಹಳ್ಳಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ತಾಲೂಕು ಕಚೇರಿವರೆಗೆ ತಮಟೆ ಚಳವಳಿ ಮೆರವಣಿಗೆ ನಡೆಸಿ ಪ್ರತಿಭಟನೆ ನಡೆಸಿದರು.

ಆದಿಜಾಂಬವ ಸಂಘದ ತಾಲೂಕು ಅಧ್ಯಕ್ಷ ಸ್ವಾಮಿ ಮಾತನಾಡಿ, ಪರಿಶಿಷ್ಟ ಜಾತಿಯಲ್ಲಿ ಅಧಿಕ ಸಂಖ್ಯೆಯಲ್ಲಿರುವ ಮಾದಿಗ ಸಮುದಾಯ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿದ್ದು, ನಾವು ನಮ್ಮ ನ್ಯಾಯಯುತ ಹಕ್ಕಿಗಾಗಿ ಹಲವು ವರ್ಷಗಳಿಂದ ಹೋರಾಟ ನಡೆಸಿದ ಫಲವಾಗಿ ಸುಪ್ರೀಂಕೋರ್ಟ್ ಸಂವಿಧಾನ ಬದ್ಧವಾಗಿ ಆಯಾಯ ರಾಜ್ಯ ಸರ್ಕಾರಗಳು ಒಳ ಮೀಸಲಾತಿ ಜಾರಿಗೊಳಿಸಬೇಕೆಂಬ ಆದೇಶ ನೀಡಿದ್ದರೂ ಸರ್ಕಾರ ಮಾದಿಗ ಸಮುದಾಯಕ್ಕೆ ಒಳ ಮೀಸಲಾತಿ ನೀಡುವ ಬಗ್ಗೆ ನಿರ್ಲಕ್ಷ್ಯ ವಹಿಸಿದೆ. ಮುಖ್ಯಮಂತ್ರಿಗಳು ಕೂಡಲೇ ಸುಪ್ರೀಂಕೋರ್ಟ್ ಆದೇಶ ಜಾರಿಗೊಳಿಸಿ ಒಳಮೀಸಲಾತಿ ನೀಡಬೇಕು ಎಂದರು.

ಮುಖಂಡ ದೇವರಾಜು ಮಾತನಾಡಿ, ಪ.ಜಾತಿಯಲ್ಲಿ ಅತೀ ಹಿಂದುಳಿದ ನಾವು ಮೀಸಲಾತಿ ಪಡೆಯುವಲ್ಲಿ ವಿಫಲರಾಗಿದ್ದೇವೆ. ಉತ್ತರ ಕರ್ನಾಟಕದಲ್ಲಿ ನಮ್ಮ ಸಮುದಾಯದ ನಿರಂತರ ಹೋರಾಟ ಫಲವಾಗಿ ನಮ್ಮ ಹೋರಾಟಕ್ಕೆ ಬಲ ಬಂದಿದೆ. ರಾಜ್ಯ ಸರ್ಕಾರ ಸಂವಿಧಾನ ಬದ್ಧವಾಗಿ ನಮಗೆ ದೊರಕಬೇಕಾದ ಒಳ ಮೀಸಲಾತಿ ನೀಡಬೇಕು. ಬೋವಿ ಜನಾಂಗ ಒಳ ಮೀಸಲಾತಿಯಲ್ಲಿ ಮಾದಿಗ ಸಮುದಾಯಕ್ಕೆ ಪಾಲು ದೊರೆತರೆ ತಮಗೆ ಅನ್ಯಾಯವಾಗುತ್ತದೆ ಎಂಬ ತಪ್ಪು ತಿಳುವಳಿಕೆಯಿಂದ ನಮ್ಮ ಸಮುದಾಯಕ್ಕೆ ಮೀಸಲಾತಿ ನೀಡಬಾರದೆಂದು ಹೇಳುತ್ತಿದೆ. ಸಂವಿಧಾನಬದ್ಧವಾಗಿ ನಮಗೆ ನೀಡಬೇಕಾದ ಮೀಸಲಾತಿ ನಿರಾಕರಿಸುವಂತಿಲ್ಲ. ಹೀಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಎಚ್ಚತ್ತು ಸದಾಶಿವ ಆಯೋಗದ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಿ ಮಾದಿಗ ಸಮುದಾಯಕ್ಕೆ ಒಳ ಮೀಸಲಾತಿ ನೀಡದಿದ್ದರೆ ಹೋರಾಟ ತೀವ್ರ ಸ್ವರೂಪ ಪಡೆಯಲಿದೆ ಎಂದರು.

ಪ್ರತಿಭಟನೆಯಲ್ಲಿ ನಗರಸಭಾ ಸದಸ್ಯರಾದ ಮಂಗಳಮ್ಮ, ವಿಜಯಲಕ್ಷ್ಮಿ, ಆನಂದ್, ಚಂದ್ರು, ಸ್ವಾಮಿ, ಸುಂದರ್ ರಾಜ್, ರಾಜೇಶ್, ಮಾಧುರಾಜ್, ಚಂದ್ರು, ಆನಂದ, ಪ್ರಕಾಶ್, ಸಿದ್ದಪ್ಪ, ಕಾಳಯ್ಯ, ಕರಿಯಪ್ಪ, ಸಿದ್ದರಾಜು, ರವಿ, ವೆಂಕಟಸ್ವಾಮಿ, ಹೆತ್ತಯ್ಯ, ಪಾಪು, ಪ್ರಸಾದ್, ಚೇತನ್, ರೇವಣ್ಣ, ಮಹದೇವು, ನಾಗಣ್ಣ, ಚಿಕ್ಕಣ್ಣ ಉಪಸ್ಥಿತರಿದ್ದರು.

ಹೊಮ್ಮರಗಳ್ಳಿಯಲ್ಲಿ ವಿಶ್ವಕರ್ಮ ಜಯಂತಿ



ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿಯಲ್ಲಿ ಶ್ರೀವಿಶ್ವಕರ್ಮ ಯುವ ಬಳಗದಿಂದ ನಡೆದ ವಿಶ್ವಕರ್ಮ ಜಯಂತಿಯಲ್ಲಿ ವಿಶ್ವಕರ್ಮ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ನಂದಕುಮಾರ್ ಮಾತನಾಡಿದರು. ಈ ವೇಳೆ ಶಾಸಕ ಅನಿಲ್, ಕೋಟೆ ವಿಶ್ವಕರ್ಮ ಸಮಾಜದ ಅಧ್ಯಕ್ಷ ರಾಜು, ಬಳಗದ ಪದಾಧಿಕಾರಿಗಳು ಹಾಗೂ ವಿಶ್ವಕರ್ಮ ಸಮಾಜದ ಮುಖಂಡರು ಇದ್ದರು.

ಮೂಗೂರು ಪಿಎಸಿಎಸ್‌ಗೆ 6.95 ಲಕ್ಷ ನಿವ್ವಳ ಲಾಭ



ಅಧ್ಯಕ್ಷ ಮಹೇಂದ್ರ ಕುಮಾರ್ ಮಾತನಾಡಿದರು.

ಮೂಗೂರು, ಸೆ.24– ಆಡಳಿತ ಮಂಡಳಿ, ಸದಸ್ಯರ ಸಹಕಾರದಿಂದ ಸಂಘ ಪ್ರಸಕ್ತ ಸಾಲಿನಲ್ಲಿ 6.95 ಲಕ್ಷ ರೂ. ನಿವ್ವಳ ಲಾಭ ಗಳಿಸಿದೆ ಎಂದು ಮೂಗೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಬಿ. ಮಹೇಂದ್ರ ಕುಮಾರ್ ತಿಳಿಸಿದರು.

ಸಂಘದ ಆವರಣದಲ್ಲಿ ನಡೆದ 2023–24ನೇ ಸಾಲಿನ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾಲ ಪಡೆದ ಸದಸ್ಯರು ಸಕಾಲಕ್ಕೆ ಮರು ಪಾವತಿಸಿದರೇ ಸಂಘದ ಅಭಿವೃದ್ಧಿ ಸಾಧ್ಯ ಎಂದರು.

ಪ್ರಸ್ತುತ 21 ಮಂದಿ ಸುಸ್ತಿದಾರಿಂದ 38 ಲಕ್ಷ, ಸ್ತ್ರೀ ಶಕ್ತಿ ಸಂಘಗಳಿಂದ 11.28 ಲಕ್ಷ ಬರಬೇಕಿದೆ ಎಂದ ಅವರು ರೈತರು ಶೂನ್ಯ ಬಡ್ಡಿ ದರದ ಸಾಲದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಮುಖಂಡ ಎಂ.ಎಂ.ಜಗದೀಶ್ ಮಾತನಾಡಿ, ಸಂಘದ ಮಾಹಿತಿ ಪ್ರತಿಯನ್ನು ಸಭೆಗೆ ಮುನ್ನಾ ಸದಸ್ಯರಿಗೆ ಕಿರು ಪುಸ್ತಕದ ರೂಪದಲ್ಲಿ ನೀಡಬೇಕು. ಸಭೆಯಲ್ಲಿ ನೀಡುವುದು ಸರಿಯಲ್ಲ. ಸಂಘದಲ್ಲಿ ಮಾರಾಟ ಪರಿಕರದಿಂದ ಬಂದ ಲಾಭದ ಮಾಹಿತಿ ಅಸಂಬದ್ಧವಾಗಿದೆ ಎಂದು ಆಕ್ಷೇಪಿಸಿದರು.

ನಿರ್ದೇಶಕ ಎಂ.ಪಿ.ಚಂದ್ರಶೇಖರ್ ಮಾತನಾಡಿ, 5 ವರ್ಷದಲ್ಲಿ 5 ಕೋಟಿ ರೂ.ಗಳಿಗೂ ಹೆಚ್ಚು ರೈತರಿಗೆ ಬೆಳೆ ಸಾಲ ವಿತರಿಸಲಾಗಿದೆ ಹಾಗೆಯೇ ಸಂಘದ ವಿವಿಧ ಉದ್ದೇಶಗಳಿಗೆ ಮೀಸಲಾದ ಸಾಲ ಸೌಲಭ್ಯ ಬಳಸಿಕೊಳ್ಳುವಂತೆ ಸದಸ್ಯರಿಗೆ ಸಲಹೆ ನೀಡಿದರು. ಈ ವೇಳೆ ಸಂಘದ ನಿರ್ದೇಶಕ ಎಂ.ಆರ್.ಸುಂದರ್, ದೇವರಾಜ್, ನಿಜಗುಣ, ಶಿವಮೂರ್ತಿ, ಸತೀಶ್, ಪರಶಿವಮೂರ್ತಿ, ರಾಚಮ್ಮ, ಗ್ರಾಮದ ಮುಖಂಡರು, ಸಂಘದ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಹೊಸಹೊಳಲು ಶಾಲಾ ಮಕ್ಕಳು ಜಿಲ್ಲಾ ಮಟ್ಟಕ್ಕೆ ಆಯ್ಕೆ



ಪ್ರಶಸ್ತಿಯೊಂದಿಗೆ ಮಕ್ಕಳನ್ನು ಕಾಣಬಹುದು.

ಹೆಚ್.ಡಿ.ಕೋಟೆ, ಸೆ.24– ತಾಲೂಕಿನ ಹೊಸಹೊಳಲು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ಇತ್ತೀಚೆಗೆ ನಡೆದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಕ್ರೀಡಾಕೂಟದ ಬಾಲಕರ ವಿಭಾಗದಲ್ಲಿ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದು ಸತತ 2ನೇ ಬಾರಿಗೆ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರೇ, ಬಾಲಕಿಯರ ವಿಭಾಗದಲ್ಲಿ ಖೋಖೋ ತಂಡ ಹಾಗೂ ವೈಯಕ್ತಿಕ ವಿಭಾಗದಲ್ಲಿ 100 ಮೀಟರ್ ಓಟ, 400 ಮೀಟರ್ ಓಟ ಮತ್ತು ಉದ್ದ ಜಿಗಿತದಲ್ಲಿ ಜಯಗಳಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಎಸ್‌ಡಿಎಂಸಿ ಅಧ್ಯಕ್ಷ ನಿಂಗರಾಜು, ನಾಗರಾಜು, ಮುಖ್ಯ ಶಿಕ್ಷಕ ಮಹದೇವಸ್ವಾಮಿ, ಶಿಕ್ಷಕರಾದ ರಜಿನಿ, ದೈಹಿಕ ಶಿಕ್ಷಣ ಶಿಕ್ಷಕರಾದ ಹಮೀದ, ನವೀನ್ ಕುಮಾರ್, ಬಸವರಾಜು, ವೀರಭದ್ರನಾಯಕ ಅಭಿನಂದಿಸಿದ್ದಾರೆ.

ಸಹಕಾರ ಸಂಘದ ಸವಲತ್ತು ಬಳಸಿಕೊಳ್ಳಿ

ಮುಸುವಿನಕೊಪ್ಪಲು ಪಿಎಸಿಎಸ್ ಅಧ್ಯಕ್ಷ ಶಿವರಾಮು



ವಾರ್ಷಿಕ ಮಹಾ ಸಭೆಯನ್ನು ಸಂಘದ ಅಧ್ಯಕ್ಷ ಎಂ.ಶಿವರಾಮು ಉದ್ಘಾಟಿಸಿದರು.

ತಿ.ನರಸೀಪುರ, ಸೆ.24– ಸಂಘದ ಸದಸ್ಯರು ಪಡೆದ ಸಾಲವನ್ನು ಮರುಪಾವತಿಸುವ ಮೂಲಕ ಸಹಕಾರ ಸಂಘದ ಸವಲತ್ತುಗಳನ್ನು ಬಳಸಿಕೊಳ್ಳಬೇಕು ಎಂದು ತಾಲೂಕಿನ ಮುಸುವಿನಕೊಪ್ಪಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ. ಶಿವರಾಮು ತಿಳಿಸಿದರು.

ಸಂಘದ ಕಚೇರಿ ಆವರಣದಲ್ಲಿ ನಡೆದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಂಘದಿಂದ ಸಾಲ ಪಡೆದ ಸಂಘದ ಸದಸ್ಯರು ಸಕಾಲಕ್ಕೆ ಸಾಲ ಮರುಪಾವತಿಸಿದಲ್ಲಿ ಸಂಘದ ಬೆಳವಣಿಗೆ ಸಾಧ್ಯವಾಗಲಿದ್ದು, ಆರ್ಥಿಕವಾಗಿ ಮುಂದುವರೆಯಲು ಸಹಕಾರಿಯಾಗುತ್ತದೆ. ಹಾಗಾಗಿ ಸಾಲ ಪಡೆದ ರೈತರು ಸುಸ್ತಿದಾರರಾಗದೇ ಸಕಾಲಕ್ಕೆ ಸಾಲ ಮರುಪಾವತಿಸಿ ಎಂದರು.

ವಾರ್ಷಿಕ ವರದಿಯನ್ನು ಸಿಇಓ ಎನ್.ರಾಜು, ವಾರ್ಷಿಕ ವರದಿ ಮಂಡಿಸಿ ಸಂಘವು ಪ್ರತಿ ವರ್ಷ ಲಾಭಗಳಿಸುತ್ತಲೇ ಬಂದಿದ್ದರೂ ಕೂಡ 2023–24ನೇ ಸಾಲಿನಲ್ಲಿ ನಷ್ಟದಲ್ಲಿದೆ ಎಂದರು. ರೈತರಿಗೆ ಮೇಲ್ವಿಚಾರಕ ಶೇಖರ್ ಉಪಯುಕ್ತ ಮಾಹಿತಿ ನೀಡಿದರು. ಸಂಘದ ಉಪಾಧ್ಯಕ್ಷ ಮಹೇಶ್, ನಿರ್ದೇಶಕರಾದ ಎಂ.ಚಂದ್ರಪ್ಪ, ಪುಟ್ಟಮಾದಯ್ಯ, ಶಿವಣ್ಣ, ಚಿಕ್ಕಮಾದನಾಯ್ಕ, ಎನ್.ಮಹೇಶ್, ಆರ್.ಶಿವಕುಮಾರ ಸ್ವಾಮಿ, ನಿಂಗರಾಜು, ಶಾಂತಮ್ಮ, ಕಮಲಮ್ಮ, ಷೇರುದಾರರು, ರೈತರು ಹಾಜರಿದ್ದರು.

ಗುಣಮಟ್ಟದ ಹಾಲು ನೀಡಿ ಸಂಘದ ಅಭಿವೃದ್ಧಿಗೆ ಸಹಕರಿಸಿ



ವಾರ್ಷಿಕ ಮಹಾಸಭೆಯಲ್ಲಿ ಅಧ್ಯಕ್ಷ ಎಲ್.ಕುಮಾರ್ ಮಾತನಾಡಿದರು.

ಮಲ್ಕುಂಡಿ, ಸೆ.24– ರಾಸುಗಳ ಆರೋಗ್ಯ ಕಾಪಾಡುವ ಮೂಲಕ ಗುಣಮಟ್ಟದ ಹಾಲು ಸರಬರಾಜು ಮಾಡಿ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಡೈರಿ ಅಧ್ಯಕ್ಷ ಎಲ್.ಕುಮಾರ್ ತಿಳಿಸಿದರು.

ನಂಜನಗೂಡು ತಾಲೂಕಿನ ಬಿದರಗೂಡು ಡೈರಿ ಆವರಣದಲ್ಲಿ ನಡೆದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಂಘದ ಸದಸ್ಯರು ಹೆಚ್ಚಿನ ಪ್ರಮಾಣದಲ್ಲಿ ಗುಣಮಟ್ಟದ ಹಾಲು ಸರಬರಾಜು ಮಾಡಿದರೆ ಅಷ್ಟೇ ಪ್ರಮಾಣದಲ್ಲಿ ಲಾಭ ಗಳಿಸಬಹುದು. ರಾಸುಗಳಿಗೆ ಸಮ ಪ್ರಮಾಣದ ಆಹಾರ ನೀಡಬೇಕು. ಇಲ್ಲದಿದ್ದರೆ ಫ್ಯಾಟ್‌ಗಳಲ್ಲಿ ಏರಿಳಿತ ಕಂಡು ಬರುತ್ತದೆ. ಇದರಿಂದ ಸಂಘಕ್ಕೆ ಆರ್ಥಿಕ ಸಂಕಷ್ಟ ಉಂಟಾಗುತ್ತದೆ. ಆದ್ದರಿಂದ ಗುಣಮಟ್ಟದ ಹಾಲು ಸರಬರಾಜು ಮಾಡಬೇಕು ಎಂದರು. ಈ ವೇಳೆ ಮೈಮುಲ್ ವಿಸ್ತರಣಾಧಿಕಾರಿ ನಂಜುಂಡಸ್ವಾಮಿ, ಉಪಾಧ್ಯಕ್ಷ ಪ್ರಕಾಶ್, ನಿರ್ದೇಶಕರಾದ ಶಿವಣ್ಣ, ಶಿವಕುಮಾರ್, ರಾಮಣ್ಣ, ಮಹದೇವಸ್ವಾಮಿ, ಮುದ್ದುರಾಮಪ್ಪ, ಸಿದ್ದಪ್ಪ ಚಿನ್ನಮಣಿ, ಶಾಂತಮ್ಮ, ಸಿಇಓ ಶಿವಪ್ರಸಾದ್ ಸೇರಿದಂತೆ ಇನ್ನಿತರರಿದ್ದರು.

ಗುಣಮಟ್ಟದ ಹಾಲು ಪೂರೈಕೆಯಿಂದ ಮಾತ್ರ ಲಾಭ ಸಾಧ್ಯ

ಕೆಂಪಯ್ಯನಹುಂಡಿ ಡೇರಿ ಅಧ್ಯಕ್ಷ ಕೆ.ಮುದ್ದೇಗೌಡ ಅಭಿಪ್ರಾಯ



ವಾರ್ಷಿಕ ಮಹಾಸಭೆಯಲ್ಲಿ ಸಂಘದ ಅಧ್ಯಕ್ಷ ಕೆ.ಮುದ್ದೇಗೌಡ ಮಾತನಾಡಿದರು.

ಕೆಂಪಯ್ಯನಹುಂಡಿ, ಸೆ.24– ಗುಣಮಟ್ಟದ ಹಾಲು ಪೂರೈಕೆಯಿಂದ ಮಾತ್ರ ಡೇರಿ ಲಾಭ ಗಳಿಸಲು ಸಾಧ್ಯ ಎಂದು ಕೆಂಪಯ್ಯನಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಕೆ.ಮುದ್ದೇಗೌಡ ತಿಳಿಸಿದರು.

ಗ್ರಾಮದ ಡೈರಿ ಆವರಣದಲ್ಲಿ ನಡೆದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೈತರು ಹೈನುಗಾರಿಕೆಯನ್ನು ವೈಜ್ಞಾನಿಕವಾಗಿ ಮಾಡಿದರೆ ಅಧಿಕ ಲಾಭ ಗಳಿಸಬಹುದು. ಹಾಲಿನ ಕೊಬ್ಬಿನ ಅಂಶ 3.5ಕ್ಕಿಂತ ಹೆಚ್ಚಾಗಿರಬೇಕು. ಹೆಚ್ಚಾದಷ್ಟು ರೈತರು ಉತ್ತಮ ದರ ಪಡೆಯಬಹುದು. ರಾಸುಗಳಿಗೆ ಸಮತೋಲನ ಆಹಾರ ನೀಡಿದ್ದಲ್ಲಿ ಹಾಲಿನ ಗುಣಮಟ್ಟ ಕಾಪಾಡಬಹುದು ಎಂದರು.

ರೈತರು ಕಳಪೆ ಗುಣಮಟ್ಟದ ಪಶು ಆಹಾರ ಖರೀದಿಸಿ ಹಸುಗಳಿಗೆ ಹಾಕುವುದರಿಂದ ರಾಸುಗಳು ಮರಣ ಹೊಂದುವ ಸಾಧ್ಯತೆ ಹೆಚ್ಚಿರುತ್ತದೆ. ಮಾರುಕಟ್ಟೆಯಲ್ಲಿ ಕಳಪೆ ಗುಣಮಟ್ಟದ ಪಶು ಆಹಾರ ಕಡಿಮೆ ದರಕ್ಕೆ ಸಿಗುತ್ತಿದೆ. ಬಿಯರ್ ವೇಸ್ಟ್ ಎಂಬ ಪಶು ಆಹಾರದಿಂದ ಹಸುಗಳ ಗರ್ಭಧಾರಣೆಗೆ ಕಷ್ಟವಾಗುತ್ತದೆ. ತಾತ್ಕಾಲಿಕವಾಗಿ ಈ ಪಶು ಆಹಾರದಿಂದ ಹೆಚ್ಚಿನ ಹಾಲು ಉತ್ಪಾದನೆಯಾಗಬಹುದಾದರೂ ಮುಂದೆ ಹಸುಗಳ ಜೀವಕ್ಕೆ ಸಂಚಕಾರ ಬರಬಹುದು. ಹಾಗಾಗಿ ಮಾರುಕಟ್ಟೆಯಲ್ಲಿ ಸಿಗುವ ನಕಲಿ ಪಶು ಆಹಾರದ ಬಗ್ಗೆ ಎಚ್ಚರಿಕೆಯಿಂದಿರಿ. ಒಕ್ಕೂಟದಿಂದ ದೊರಕುವ ಪಶು ಆಹಾರದಿಂದ ನಿಮ್ಮ ಜಾನುವಾರು ಆರೋಗ್ಯಕರವಾಗಿರುತ್ತವೆ. ಪಶು ಆಹಾರವನ್ನು ನೀರಿನಲ್ಲಿ ನೆನೆಸಿ ಕೊಡಬೇಡಿ ಎಂದ ಅವರು ರೈತರು ಗುಣಮಟ್ಟದ ಹಾಲನ್ನು ಡೈರಿಗೆ ಸರಬರಾಜು ಮಾಡುವ ಮೂಲಕ ಸಂಘದ ಬೆಳವಣಿಗೆಗೆ ಸಹಕಾರ ನೀಡಿ ಹಾಗೂ ನೀವು ಆರ್ಥಿಕ ಅಭಿವೃದ್ಧಿ ಹೊಂದಿ ಎಂದರು.

ಗ್ರಾಮದಲ್ಲಿ ಡೈರಿ ಕಟ್ಟಡವನ್ನು 13.5 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದೆ. ಕಟ್ಟಡಕ್ಕೆ ಮೈಮುಲ್ 8.5 ಲಕ್ಷ ಹಾಗೂ ನಿರ್ಮಿತಿ ಕೇಂದ್ರ 5 ಲಕ್ಷ ರೂ. ಅನುದಾನ ನೀಡಿದೆ ಎಂದು ತಿಳಿಸಿದರು.

ಸಭೆಯಲ್ಲಿ ಹಾಲು ಸರಬರಾಜುದಾರರಿಗೆ ಬಟವಾಡೆ ಸರಿಯಾಗಿ ಆಗುತ್ತಿಲ್ಲವಾದ್ದರಿಂದ ಮಾರಾಟಗಾರರಿಗೆ ತೊಂದರೆಯಾಗಿದೆ ಎಂಬ ದೂರು ಕೇಳಿ ಬಂದ ಹಿನ್ನೆಲೆಯಲ್ಲಿ ಒಕ್ಕೂಟಕ್ಕೆ ಹೆಚ್ಚಿನ ಹಾಲು ಸರಬರಾಜಾಗುತ್ತಿರುವುದರಿಂದ ಹೆಚ್ಚಿನ ಹಾಲು ಮಾರಾಟವಾಗುತ್ತಿಲ್ಲ. ಹಾಗಾಗಿ ಹಣದ ಬಟವಾಡೆ ಸ್ವಲ್ಪ ವಿಳಂಬವಾಗಿದೆ. ಕೆಲವೇ ದಿನಗಳಲ್ಲಿ ಸಮಸ್ಯೆ ಬಗೆಹರಿಯಲಿದ್ದು ಹಾಲು ಸರಬರಾಜುದಾರರಿಗೆ ಬರಬೇಕಾದ ಹಣ ಸಮಯಕ್ಕೆ ಸರಿಯಾಗಿ ತಲುಪುತ್ತದೆ ಎಂದರು.

ಮೈಮುಲ್ ವಿಸ್ತರಣಾಧಿಕಾರಿ ಶಿವಕುಮಾರ್ ಬೂವಿ, ಹಸುಗಳ ಸಾಕಣೆ, ನಿರ್ವಹಣೆ, ಪಶು ಆಹಾರ, ಒಕ್ಕೂಟದಿಂದ ದೊರೆಯಲಿರುವ ಸೌಲಭ್ಯಗಳ ಬಗ್ಗೆ ರೈತರಿಗೆ ಮಾಹಿತಿ ನೀಡಿದರು.

ಸಂಘದ ಸಿಇಓ ಕೆ.ಮಂಜುಳಾ ಸಂಘದ ವಾರ್ಷಿಕ ವರದಿ ಮಂಡಿಸಿ 2023–24ನೇ ಸಾಲಿನಲ್ಲಿ 63 ಸಾವಿರ ರೂ. ನಿವ್ವಳ ಲಾಭಗಳಿಸಿದೆ ಎಂದರು. ಸಂಘದ ಉಪಾಧ್ಯಕ್ಷ ಎಸ್.ಕುಮಾರ್, ನಿರ್ದೇಶಕರಾದ ಕೆ.ಎಂ.ನಾಗೇಶ್, ಕೆ.ರಘು, ರಾಚನಾಯಕ, ಶಾರದಮ್ಮ, ಕೆ.ಪಿ.ಸುರೇಶ್, ಹೊಂಬಾಳಮ್ಮ, ಪುಟ್ಟಮ್ಮ, ಸಿದ್ದಪ್ಪ, ಕೆ.ಕೃಷ್ಣೇಗೌಡ, ಗ್ರಾಪಂ ಮಾಜಿ ಅಧ್ಯಕ್ಷ ಆನಂದ್, ಮುಖಂಡರಾದ ಅಂದಾನಿಗೌಡ, ನಂಜುಂಡೇಗೌಡ, ಶಶಿಕುಮಾರ್, ಶಿವಕುಮಾರ್, ಮಂಜುನಾಥ್, ಚೌಡೇಗೌಡ, ಸ್ವಾಮಿ, ರಂಗನಾಯಕ, ಬುಲ್ಲಯ್ಯ, ಹಾಲು ಪರೀಕ್ಷಕ ಕೆ.ವಿನಯ್ ಮತ್ತಿತರಿದ್ದರು.

ಗೃಹಲಕ್ಷ್ಮಿ ಯೋಜನೆಯ ಎರಡು ಕಂತಿನ ಹಣ ಒಟ್ಟಿಗೆ ಪಾವತಿ

ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಭರವಸೆ

ಮೈಸೂರು, ಸೆ.24(ಬಿಎಲ್‌ಯು)– ಎರಡು ತಿಂಗಳ ಗೃಹಲಕ್ಷ್ಮಿ ಯೋಜನೆ ಹಣವನ್ನು ಒಟ್ಟಿಗೆ ಪಾವತಿಸುತ್ತೇವೆ. ಶಕ್ತಿ ಯೋಜನೆಯಡಿ ಬಸ್‌ಗಳಲ್ಲಿ ಪ್ರಯಾಣಿಸುವ ಮಹಿಳೆಯರನ್ನು ಅಗೌರವದಿಂದ ಕಾಣುವ ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್, ಡ್ರೈವರ್‌ಗಳನ್ನು ಸಸ್ಪೆಂಡ್ ಮಾಡಲಾಗುವುದು. ಗ್ಯಾರಂಟಿ ಯೋಜನೆ ಅರ್ಹರಿಗೆ ಮಾತ್ರವೇ ಸಿಗಬೇಕು, ಅನರ್ಹರನ್ನು ಕೈ ಬಿಡಬೇಕು. ಗೃಹಜ್ಯೋತಿ ಯೋಜನೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಉಚಿತ ವಿದ್ಯುತ್ ನೀಡಿ, ಸರ್ಕಾರಿ ಕಚೇರಿಗಳಲ್ಲಿ ಗ್ಯಾರಂಟಿ ಯೋಜನೆಯ ಫಲಕ ಕಡ್ಡಾಯವಾಗಿ ಹಾಕಬೇಕು.

ಮೈಸೂರಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ನಡೆದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಾಧಿಕಾರದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ನೀಡಿದ ಭರವಸೆ ಘೋಷಣೆಗಳಿವು.

ಫಲಾನುಭವಿಗಳು ದಾಖಲಾತಿ ನೀಡದಿರುವುದು ಸೇರಿದಂತೆ ಹಲವು ತಾಂತ್ರಿಕ ಕಾರಣಗಳಿಂದ ಗೃಹಲಕ್ಷ್ಮಿ ಯೋಜನೆಯ ಎರಡು ತಿಂಗಳ ಕಂತಿನ ಹಣ ಪಾವತಿಸಲು ಸಾಧ್ಯವಾಗಿಲ್ಲ. ಈಗ ಎರಡು ತಿಂಗಳ ಕಂತಿನ ಹಣವನ್ನು ಒಟ್ಟಿಗೆ ಪಾವತಿ ಮಾಡಲಾಗುವುದು ಎಂದು ಭರವಸೆ ನೀಡಿದರು.

ಗ್ಯಾರಂಟಿ ಯೋಜನೆಗೆ ಈಗಾಗಲೇ ಸರ್ಕಾರ ಬಜೆಟ್‌ನಲ್ಲಿ 56 ಸಾವಿರ ಕೋಟಿ ರೂಪಾಯಿ ಮೀಸಲಿಟ್ಟಿದೆ. ಹಾಗಾಗಿ ಗ್ಯಾರಂಟಿ ಯೋಜನೆಗಳಿಗೆ ಹಣದ ಕೊರತೆ ಇಲ್ಲ. ತಾಂತ್ರಿಕ ದೋಷವನ್ನು ಪರಿಹರಿಸಿ ಎರಡು ತಿಂಗಳ ಕಂತಿನ ಹಣವನ್ನು ಒಟ್ಟಿಗೆ ಪಾವತಿ ಮಾಡಲಾಗುವುದು ಎಂದು ಆಶ್ವಾಸನೆ ನೀಡಿದರು.

ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆ ಸ್ಥಗಿತ ಮಾಡುವುದಿಲ್ಲ ಎಂದು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಸ್ಪಷ್ಟಪಡಿಸಿದ್ದಾರೆ. ಇದರಿಂದ ರಾಜ್ಯದ ಜನರು ಆತಂಕಪಡುವ ಪ್ರಮೇಯವಿಲ್ಲ ಎಂದು ಅಭಯ ನೀಡಿದರು.

ಗ್ಯಾರಂಟಿ ಯೋಜನೆಯ ಸೌಲಭ್ಯ ಅರ್ಹರಿಗೆ ದೊರೆಯಬೇಕು. ಈ ಹಿನ್ನೆಲೆಯಲ್ಲಿ ಅನರ್ಹರನ್ನು ಕೈ ಬಿಡುವ ಪರಿಷ್ಕರಣಾ ಕಾರ್ಯ ನಡೆಯುತ್ತಿದೆ ಎಂದು ಈಗಾಗಲೇ ಸರ್ಕಾರವೇ ಸ್ಪಷ್ಟಪಡಿಸಿದೆ. ಇದಕ್ಕಾಗಿ ಕೆಲವು ಮಾನದಂಡ ರೂಪಿಸಲಾಗಿದೆ. ಇದು ಸರ್ಕಾರದ ಒಳ್ಳೆಯ ಕ್ರಮ ಎಂದು ಸಮರ್ಥಿಸಿಕೊಂಡರು.

ಅಗೌರವ ತೋರಿದರೆ ಸಸ್ಪೆಂಡ್: ಶಕ್ತಿ ಯೋಜನೆಯಡಿ ಪ್ರಯಾಣಿಸುವ ಮಹಿಳೆಯರನ್ನು ಬಸ್ ಕಂಡಕ್ಟರ್ ಹಾಗೂ ಡ್ರೈವರ್‌ಗಳು ಅಗೌರವದಿಂದ ಕಾಣುತ್ತಿದ್ದಾರೆ ಎಂಬ ಆರೋಪವಿದೆ. ಈ ಹಿನ್ನೆಲೆಯಲ್ಲಿ ಅಂತಹ ಕಂಡಕ್ಟರ್ ಹಾಗೂ ಚಾಲಕರನ್ನು ಮುಲಾಜಿಲ್ಲದೆ ಅಮಾನತು ಮಾಡಿ ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶಕ್ತಿ ಯೋಜನೆಯಡಿ ಪ್ರಯಾಣಿಸುವ ಮಹಿಳೆಯರ ಟಿಕೆಟ್ ಹಣವನ್ನು ಸರ್ಕಾರ ಭರಿಸುತ್ತಿದೆ ಎಂಬುದು ಕೆಎಸ್‌ಆರ್‌ಟಿಸಿ ಸಿಬ್ಬಂದಿಗಳಿಗೆ ಅರಿವಿರಬೇಕು ಎಂದರು.

ಕೆಲವು ಕಡೆ ಮಹಿಳಾ ಪ್ರಯಾಣಿಕರೆ ಕಂಡಕ್ಟರ್ ಹಾಗೂ ಡ್ರೈವರ್‌ಗಳನ್ನು ಅವಮಾನಿಸುತ್ತಿದ್ದಾರೆ. ವಿನಾಕಾರಣ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ನಾವು ಯಾವುದೇ ತಪ್ಪು ಮಾಡದ ಬಸ್ ಕಂಡಕ್ಟರ್ ಹಾಗೂ ಡ್ರೈವರ್ ಪರವಾಗಿ ನಿಲ್ಲುತ್ತೇವೆ ಎಂದು ಡಾ.ಪುಷ್ಪಾ ಅಮರನಾಥ್ ಸ್ಪಷ್ಟಪಡಿಸಿದರು. ಮೈಸೂರು ಜಿಲ್ಲೆಯಲ್ಲಿ ದಿನದ ಮಹಿಳಾ ಪ್ರಯಾಣಿಕರ ಸಂಖ್ಯೆ 3.94 ಲಕ್ಷದಿಂದ 4.28 ಲಕ್ಷಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದರು.

ಗೃಹ ಜ್ಯೋತಿ ಯೋಜನೆಯಲ್ಲಿ ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಆದರೆ ಅಂಗನವಾಡಿ ಕೇಂದ್ರಗಳಿಗೆ ಮಾತ್ರ ನೀಡುತ್ತಿಲ್ಲ. ಇದರಿಂದ ವಿದ್ಯುತ್ ಬಿಲ್ ಪಾವತಿ ಮಾಡದ ಬಹಳಷ್ಟು ಅಂಗನವಾಡಿ ಕೇಂದ್ರಗಳ ವಿದ್ಯುತ್ ಸಂಪರ್ಕ ಕಡಿತ ಮಾಡಿದ್ದು, ಕತ್ತಲೆಯಲ್ಲಿವೆ. ಕೂಡಲೇ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಉಚಿತ ವಿದ್ಯುತ್ ಸಂಪರ್ಕ ನೀಡಬೇಕು ಎಂದು ಚೆಸ್ಕಾಂ ಅಧಿಕಾರಿಗಳಿಗೆ ಡಾ.ಪುಷ್ಪಾ ಅಮರನಾಥ್ ತಾಕೀತು ಮಾಡಿದರು.

ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು. ಈ ಹಿನ್ನೆಲೆಯಲ್ಲಿ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಗ್ಯಾರಂಟಿ ಯೋಜನೆಯ ಫಲಕ ಹಾಕಬೇಕು. ಈ ಮೂಲಕ ಯೋಜನೆ ಬಗ್ಗೆ ಪರಿಣಾಮಕಾರಿ ಅರಿವು ಮೂಡಿಸಬೇಕು. ಯೋಜನೆಯ ಸದುಪಯೋಗಪಡಿಸಿಕೊಳ್ಳಲು ತಿಳಿ ಹೇಳಬೇಕು ಎಂದು ಸಲಹೆ ನೀಡಿದರು.

ರಾಜ್ಯದ ಗ್ಯಾರಂಟಿ ಯೋಜನೆ ಜಾರಿಯಲ್ಲಿ ಮೈಸೂರು 5 ನೇ ಸ್ಥಾನದಲ್ಲಿದೆ. ಇದನ್ನು ಮೊದಲ ಸ್ಥಾನದಲ್ಲಿ ತರಲಾಗುವುದು. ಮೈಸೂರು ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಲ್ಲಿ ಶೇಕಡ 98.66 ರಷ್ಟು ಪ್ರಗತಿ ಸಾಧಿಸಲಾಗಿದೆ. ಗೃಹಲಕ್ಷ್ಮಿ ಯೋಜನೆಯಲ್ಲಿ ಶೇಕಡ 97.6, ಗೃಹಜ್ಯೋತಿ ಯೋಜನೆಯಲ್ಲಿ ಶೇಕಡ 99.4, ಯುವ ನಿಧಿ ಯೋಜನೆಯಲ್ಲಿ ಶೇಕಡ 88 ರಷ್ಟು ಪ್ರಗತಿ ಸಾಧಿಸಿದ್ದು, ಶಕ್ತಿ ಯೋಜನೆಯಲ್ಲಿ ಪ್ರತಿದಿನ 34 ಸಾವಿರ ಹೆಚ್ಚುವರಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ್ದಾರೆ ಎಂದು ಡಾ.ಪುಷ್ಪಾ ಅಮರನಾಥ್ ಅಂಕಿ ಅಂಶಗಳ ವಿವರ ನೀಡಿದರು.

ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಕೆ.ಎಂ.ಗಾಯತ್ರಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅರುಣ್, ಸದಸ್ಯರಾದ ಮಾರುತಿ, ನಾಗೇಶ್, ಚಂದ್ರಶೇಖರ್ ಸೇರಿದಂತೆ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಅಧ್ಯಕ್ಷತೆಯಲ್ಲಿ ಮಂಗಳವಾರ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಿತು.

ಗೃಹಲಕ್ಷ್ಮಿಯಿಂದ ಬದುಕು ಕಟ್ಟಿಕೊಂಡೆವು...

ಗೃಹಲಕ್ಷ್ಮಿ ಯೋಜನೆಯ ಹಣದಿಂದ ಹೊಲಿಗೆ ಯಂತ್ರ ಖರೀದಿಸಿ, ಬದುಕು ಕಟ್ಟಿಕೊಂಡಿರುವುದಾಗಿ ಮೈಸೂರಿನ ವರುಣ ಗ್ರಾಮದ ನಜ್ಮಾ ಕೌಸಲ್ ಗ್ಯಾರಂಟಿ ಯೋಜನೆ ಪ್ರಯೋಜನದ ಬಗ್ಗೆ ಅಭಿಪ್ರಾಯ ಮಂಡಿಸಿದರು.

ಗ್ಯಾರಂಟಿ ಯೋಜನೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಂವಾದದ ವೇಳೆ ಮಾತನಾಡಿದ ನಜ್ಮಾ ಕೌಸಲ್, ಗೃಹಲಕ್ಷ್ಮಿ ಯೋಜನೆಯ ಹಣದಿಂದ ಹೊಲಿಗೆ ಯಂತ್ರ ಖರೀದಿಸಿದೆ. ಈಗ ಪ್ರತಿದಿನ 250 ರೂಪಾಯಿ ಸಂಪಾದನೆ ಮಾಡುತ್ತಿದ್ದು, ಬದುಕು ಕಟ್ಟಿಕೊಂಡಿದ್ದೇನೆ ಎಂದರು.

ಇತ್ತೀಚೆಗೆ ನನ್ನ ತಂದೆ ಮೃತಪಟ್ಟರು. ನನ್ನ ತಾಯಿ ನೋಡಲು ಹಾಗಾಗೆ ತವರಿಗೆ ಹೋಗಲು ಶಕ್ತಿ ಯೋಜನೆಯಲ್ಲಿ ಉಚಿತ ಪ್ರಯಾಣ ಮಾಡುತ್ತಿರುವೆ. ಇದರಿಂದ ನನಗೆ ಸಾವಿರಾರು ರೂಪಾಯಿ ಹಣ ಉಳಿತಾಯವಾಗಿದೆ ಎಂದು ತಿಳಿಸಿದರು. ನಂಜನಗೂಡು ತಾಲೂಕು ಕುಪ್ಪರಹಳ್ಳಿಯ ಲಕ್ಷ್ಮಿ, ಗೃಹಲಕ್ಷ್ಮಿ ಯೋಜನೆಯ ಕಂತಿನ ಹಣ ಒಟ್ಟುಗೂಡಿಸಿ ಈಗ ಗುಡಿ ಕೈಗಾರಿಕೆ ನಡೆಸುತ್ತಿದ್ದೇನೆ. ಬಟ್ಟೆ ಬ್ಯಾಗ್ ತಯಾರಿಸಿ ಹಣ ಸಂಪಾದನೆ ಮಾಡುತ್ತಿದ್ದೇನೆ ಎಂದರು.

ಗ್ಯಾರಂಟಿ ಯೋಜನೆ ನನ್ನ ತಾಯಿ ಕಾಲದಲ್ಲೆ ಜಾರಿಯಾಗಿದ್ದರೆ ಆ ಹಣದಲ್ಲಿ ನಾನು ಸೇರಿದಂತೆ ನನ್ನ ಸಹೋದರ, ಸಹೋದರಿಯರು ಉನ್ನತ ಶಿಕ್ಷಣ ಪಡೆಯುತ್ತಿದ್ದೆವು. ಈಗ ಗೃಹಲಕ್ಷ್ಮಿ ಹಣದಲ್ಲಿ ನನ್ನ ಮಕ್ಕಳಿಗೆ ಅವಶ್ಯ ವಸ್ತು ಖರೀದಿಸಿ ಕೊಡಿಸುತ್ತಿರುವೆ. ಒಟ್ಟಾರೆ ಗ್ಯಾರಂಟಿ ಯೋಜನೆಯಲ್ಲಿ ನಾಲ್ಕು ಸೌಲಭ್ಯ ಪಡೆಯುತ್ತಿದ್ದು, ಇದರಿಂದ ಬಹುಪಯೋಗವಾಗಿದೆ ಎಂದು ಪ್ರೇಮಾ ಎಂಬುವವರು ಹೇಳಿದರು.

21 ಸಾವಿರ ಬಿಪಿಎಲ್ ಕಾರ್ಡ್ ರದ್ದು

ಮೈಸೂರು ಜಿಲ್ಲೆಯಲ್ಲಿ ಬಿಪಿಎಲ್ ಕಾರ್ಡ್‌ಗಳ ಪರಿಷ್ಕರಣಾ ಕಾರ್ಯ ಚುರುಕಿನಿಂದ ನಡೆಯುತ್ತಿದ್ದು, ಅನರ್ಹ 21 ಸಾವಿರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕಿ ಕುಮುದಾ ತಿಳಿಸಿದರು. ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಮಾಹಿತಿ ನೀಡಿದರು.

2.50 ಲಕ್ಷಕ್ಕಿಂತ ಹೆಚ್ಚು ಆದಾಯ ಹೊಂದಿರುವವರು, ಆದಾಯ ತೆರಿಗೆ ಪಾವತಿ ಮಾಡಿರುವವರು ಸೇರಿದಂತೆ ಸರ್ಕಾರದ ಮಾನದಂಡದಂತೆ ಅನರ್ಹಗೊಂಡಿರುವ 21 ಸಾವಿರ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲಾಗಿದೆ. ಪರಿಷ್ಕರಣಾ ಕಾರ್ಯ ನಿರಂತರವಾಗಿ ನಡೆಯುತ್ತಿದೆ ಎಂದು ತಿಳಿಸಿದರು. ಇದಲ್ಲದೆ ಮರಣ ಹೊಂದಿರುವ 16 ಸಾವಿರ ಜನರನ್ನು ಪಡಿತರ ಚೀಟಿಯಿಂದ ಕೈ ಬಿಡಲಾಗಿದೆ ಎಂದು ಕುಮುದಾ ಹೇಳಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಚಿತ್ರಮಂದಿರ / ಚಿತ್ರ	
ಪದ್ಮ ಚಿತ್ರಮಂದಿರ	(ದೂ: 2521923)
ಗೋಟ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಯುದ್ಧ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಲಂಗೋಟಿ ಮ್ಯಾನ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಲಂಗೋಟಿ ಮ್ಯಾನ್ (ಕ)	4 ಪ್ರದರ್ಶನಗಳು
ರಾಜಕಮಲ್	
ಯುದ್ಧ (ಹಿಂ)	4 ಪ್ರದರ್ಶನಗಳು
ಸಂಗಂ	
ಹಗ್ಗ (ಕ)	4 ಪ್ರದರ್ಶನಗಳು
ಲಿಡೋ	
ಉಪೇಂದ್ರ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗೋಟ್ (ತ)	4 ಪ್ರದರ್ಶನಗಳು
ಪ್ರಭಾ	
ಖೈದಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಟ್ರಾನ್ಸ್‌ಫಾರ್ಮರ್ಸ್ ಒನ್ (3ಡಿ) (ಇಂ): ಬೆ.11.20ಕ್ಕೆ, ರಾ.7.40ಕ್ಕೆ, ರಾ.9.55ಕ್ಕೆ, ಹಗ್ಗ (ಕ): ಮ.1.35ಕ್ಕೆ, ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಸಂ.4.15ಕ್ಕೆ.
ಸ್ಕ್ರೀನ್ 2	ಲಂಗೋಟಿ ಮ್ಯಾನ್ (ಕ): ಬೆ.10.30ಕ್ಕೆ, ಲಬ್ಬರ್ ಪಾಂಡು (ತ): ಮ.1.40ಕ್ಕೆ, ನಂದನ್ (ತ): ಸಂ.4.35ಕ್ಕೆ, ಕಹಾನ್ ಶುರು ಕಹಾನ್ ಕಥಂ (ಹಿಂ): ರಾ.7.15ಕ್ಕೆ, ತುಂಬ್ಬಾಡ್ (ಹಿಂ): ರಾ.9.55ಕ್ಕೆ.
ಸ್ಕ್ರೀನ್ 3	ಉಪೇಂದ್ರ (ಕ): ಬೆ.10.50ಕ್ಕೆ, ಕರ್ಕಿ ನಾನು ಬಿಎ ಎಲ್‌ಎಲ್‌ಬಿ (ಕ): ಮ.1.35ಕ್ಕೆ, ಅನ್ನ (ಕ): ಸಂ.4.35ಕ್ಕೆ, ಯುದ್ರ (ಹಿಂ): ರಾ.7.15ಕ್ಕೆ, ಕಿಷ್ಕಿಂಧಾ ಖಂಡಂ (ಮ): ರಾ.10.10ಕ್ಕೆ.
ಸ್ಕ್ರೀನ್ 4	ಸ್ತ್ರೀ 2 (ಹಿಂ): ಬೆ.10.05ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ಮ.1ಕ್ಕೆ, ರಾ.7.10ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಸಂ.4.05ಕ್ಕೆ, ಯುದ್ರ (ಹಿಂ): ರಾ.10.15ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಧ್ರುವತಾರೆ (ಕ): ಮ.1.05ಕ್ಕೆ, ಕರ್ಕಿ ನಾನು ಬಿಎ ಎಲ್‌ಎಲ್‌ಬಿ (ಕ): ಸಂ.4.10ಕ್ಕೆ, ಹಗ್ಗ (ಕ): ರಾ.7.05ಕ್ಕೆ, ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ರಾ.9.35ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಮ.1.10ಕ್ಕೆ, ಲಂಗೋಟಿ ಮ್ಯಾನ್ (ಕ): ಸಂ.4.10ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ರಾ.7.15ಕ್ಕೆ.
ಸ್ಕ್ರೀನ್ 3	ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಸಂ.6.15ಕ್ಕೆ, ಕೋಳಿಪಣ್ಣೈ ಚೆಲ್ಲದುರೈ (ತ): ರಾ.9.40ಕ್ಕೆ.
ಸ್ಕ್ರೀನ್ 4	ಇಬ್ಬನಿ ತಬ್ಬಿದ ಇಳೆಯಲಿ (ಕ): ಮ.1.15ಕ್ಕೆ, ರಾ.9.30ಕ್ಕೆ, ನಂದನ್ (ತ): ಸಂ.4.20ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಸಂ.6.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸಿಎಂ ವಿರುದ್ಧ ತನಿಖೆಗೆ ಹೈಕೋರ್ಟ್ ಅಸ್ತು ಹಿನ್ನೆಲೆ

ಮೈಸೂರಲ್ಲಿ ಭಾರಿ ಬಂದೋಬಸ್ತ್, ಕಟ್ಟೆಚ್ಚರ



ಸಾಂದರ್ಭಿಕ ಚಿತ್ರ

ಮೈಸೂರು, ಸೆ. 24(ಆರ್‌ಕೆ)– ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲರ ನಿಲುವು ಎತ್ತಿ ಹಿಡಿದಿರುವ ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಮೈಸೂರಲ್ಲಿ ಭಾರಿ ಪೊಲೀಸ್ ಬಂದೋಬಸ್ತ್ ಮಾಡಿ, ಕಟ್ಟೆಚ್ಚರ ವಹಿಸಲಾಗಿದೆ.

ಇಂದು ಮಧ್ಯಾಹ್ನ 12.10 ಗಂಟೆ ವೇಳೆಗೆ ಹೈಕೋರ್ಟ್ ಏಕಸದಸ್ಯ ಪೀಠವು ಸಿಎಂ ಸಿದ್ದರಾಮಯ್ಯ ವಿರುದ್ಧ ತೀರ್ಪು ನೀಡುತ್ತಿದ್ದಂತೆಯೇ ಪ್ರತಿಪಕ್ಷಗಳ ಕಾರ್ಯಕರ್ತರು ಪ್ರತಿಭಟನೆ ನಡೆಸಲಿದ್ದಾರೆ ಎಂಬ ಸುಳಿವು ಇದ್ದ ಕಾರಣ ಮೈಸೂರು ನಗರದಾದ್ಯಂತ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ ಕಟ್ಟೆಚ್ಚರ ವಹಿಸಲಾಗಿದೆ.

ರಾಜ್ಯ ಉಚ್ಚ ನ್ಯಾಯಾಲಯ ತೀರ್ಪು ಪ್ರಕಟಿಸುತ್ತಿದ್ದಂತೆಯೇ ಬಿಜೆಪಿ ಕಾರ್ಯಕರ್ತರು ಪಕ್ಷದ ಕಚೇರಿ ಬಳಿ ಪ್ರತಿಭಟನೆ ನಡೆಸಿದರಲ್ಲದೇ, ಮುಖ್ಯಮಂತ್ರಿ ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡುವಂತೆ ಒತ್ತಾಯಿಸಿದರು.

ಈ ಬೆಳವಣಿಗೆ ಹಿನ್ನೆಲೆಯಲ್ಲಿ ಮೈಸೂರಿನ ಕೆ.ಆರ್.ಸರ್ಕಲ್, ಹೊಸ ಡಿಸಿ ಕಚೇರಿ, ಶಾರದಾದೇವಿನಗರದ ಸಿದ್ದರಾಮಯ್ಯ ಅವರ ನಿವಾಸ, ಮುಡಾ ಕಚೇರಿ ಸೇರಿದಂತೆ ಹಲವೆಡೆ ಸಿಎಆರ್, ಕೆಎಸ್‌ಆರ್‌ಪಿ, ಮೌಂಟೆಡ್, ಚಾಮುಂಡಿ ಪಡೆ ಹಾಗೂ ಸಿವಿಲ್ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ ಸೂಕ್ತ ಭದ್ರತೆ ಒದಗಿಸಲಾಗಿದೆ.

ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ. ಮುತ್ತುರಾಜ್ ನಗರದಾದ್ಯಂತ ಗಸ್ತು ತಿರುಗಿ ಬಂದೋಬಸ್ತ್ ವ್ಯವಸ್ಥೆಯನ್ನು ಪರಿಶೀಲಿಸಿದರು. ಎಲ್ಲಾ ಉಪ ವಿಭಾಗದ ಎಸಿಪಿಗಳು, ಎಲ್ಲಾ ಠಾಣೆಗಳ ಇನ್ಸ್‌ಪೆಕ್ಟರ್, ಸಬ್‌ಇನ್ಸ್‌ಪೆಕ್ಟರ್‌ಗಳು ತಮ್ಮ ವ್ಯಾಪ್ತಿಯಲ್ಲಿ ಭದ್ರತಾ ವ್ಯವಸ್ಥೆ ಮಾಡಲಾಗಿದ್ದು, ಬಿಜೆಪಿ, ಜೆಡಿಎಸ್ ಕಾರ್ಯಕರ್ತರ ನಡೆ ಬಗ್ಗೆ ಪೊಲೀಸರು ತೀವ್ರ ನಿಗಾ ವಹಿಸಿದ್ದಾರೆ.

ಸಿದ್ದರಾಮಯ್ಯ ರಾಜೀನಾಮೆ ಕೊಡುವುದೊಂದೇ ದಾರಿ: ಸಿ.ಟಿ.ರವಿ



ಬೆಂಗಳೂರು, ಸೆ.24– ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಯವರಿಗೆ ರಾಜೀನಾಮೆ ಕೊಡುವುದೊಂದೇ ದಾರಿ ಎಂದು ರಾಜ್ಯ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಹೇಳಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಭ್ರಷ್ಟಾಚಾರದ ವಿರುದ್ಧ ಬಿಜೆಪಿ ನಡೆಸಿದ ಹೋರಾಟಕ್ಕೆ ಜಯ ಲಭಿಸಿದೆ. 'ಸತ್ಯಮೇವ ಜಯತೇ' ಎಂದು ನುಡಿದರು. ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ಕೊಟ್ಟಿದ್ದೇ ಸಂವಿಧಾನಬಾಹಿರ, ಅಪರಾಧ ಎಂದು ಆರೋಪಿಸಿದ ಕಾಂಗ್ರೆಸ್ಸಿಗರು, ಸಾರ್ವಜನಿಕವಾಗಿ ಕ್ಷಮೆ ಯಾಚನೆ ಮಾಡಬೇಕು. ಒಂದು ಸಾಂವಿಧಾನಿಕ ಹುದ್ದೆಯನ್ನು ಅಗೌರವಿಸಿದ ಕಾರಣಕ್ಕೋಸ್ಕರ ಸಾರ್ವಜನಿಕ ಕ್ಷಮೆ ಯಾಚನೆ ಮಾಡಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿಗಳಿಗೆ ಬೇರೆ ದಾರಿ ಉಳಿದಿಲ್ಲ ಅವರು ಕಾನೂನು ಪಂಡಿತರು. ಸಿಂಪಲ್ ಚೀಫ್ ಮಿನಿಸ್ಟರ್, ಕಾಸ್ಟ್ಲಿ ಲಾಯರನ್ನು ಕರೆಸಿ ವಾದ ಮಂಡಿಸಿದ್ದರು. ಸಿಎಂ ನೋಡೋಕೆ ಸಿಂಪಲ್. ಆದರೆ ಬಂದ ಲಾಯರ್‌ಗಳೆಲ್ಲರೂ ಕಾಸ್ಟ್ಲಿ. ಅವರೆಲ್ಲರೂ ವಾದ ಮಾಡಿದ್ದರೂ ಸತ್ಯವನ್ನು ಮುಚ್ಚಿಡಲು ಸಾಧ್ಯವಾಗಿಲ್ಲ. ಇನ್ನೆಲ್ಲಿಗೆ ಹೋದರೂ ಸತ್ಯ ಮುಚ್ಚಿಡಲು ಸಾಧ್ಯವಿಲ್ಲ. ಸುಳ್ಳು ಗೆಲ್ಲುವುದಿಲ್ಲ. ಸುಳ್ಳು ಹಿಡಿದುಕೊಂಡು ಹೋದರೆ ನಗೆಪಾಟಲಿಗೆ ಈಡಾಗುತ್ತೀರಿ ಎಂದು ಎಚ್ಚರಿಸಿದರು.

ನೀವೂ ಸತ್ಯಕ್ಕೆ ಜೈ ಎನ್ನಿ. ರಾಜೀನಾಮೆ ಕೊಡುವುದೊಂದೇ ನಿಮಗಿರುವ ದಾರಿ. ಸಿದ್ದರಾಮಯ್ಯನವರೇ ಇದಕ್ಕಿಂತ ಜಾಸ್ತಿ ಭಂಡತನ ಮಾಡದಿರಿ. ಈಗ ಮಾಡಿದ್ದೇ ಜಾಸ್ತಿ ಭಂಡತನ. ಇನ್ನೂ ಭಂಡತನ ರಾಜೀನಾಮೆ ಕೊಟ್ಟು ಕರ್ನಾಟಕದ ಘನತೆಯನ್ನು ಎತ್ತಿ ಹಿಡಿಯಿರಿ ಎಂದು ತಿಳಿಸಿದರು.

ನೀವು ಎಸಿಬಿ ಮೂಲಕ ಸಾಕಷ್ಟು ಕೇಸು ಗಳನ್ನು ಮುಚ್ಚಿ ಹಾಕಿದ್ದೀರಿ. ಭ್ರಷ್ಟಾಚಾರ ಪ್ರಕರಣ ಬಂದ ಕಾರಣ ಲೋಕಾಯುಕ್ತವನ್ನೂ ದುರ್ಬಲಗೊಳಿಸಿದ್ದೀರಿ. ಬಳಿಕ ಎಸಿಬಿ ಮೂಲಕ ಕ್ಲೀನ್‌ಚಿಟ್ ಕೊಡುವ ಕೆಲಸ ಮಾಡಿದ್ದೀರಿ. ಎಲ್ಲಾ ಕಾಲದಲ್ಲೂ ಇದು ನಡೆಯದೆಂಬ ಸತ್ಯ ನಿಮಗೆ ಅರಿವಾಗಿದೆ. ಸಿದ್ದರಾಮಯ್ಯನವರೇ ನೀವು ನ್ಯಾಯಾಲಯದ ತೀರ್ಪನ್ನು ಗೌರವಿಸಿ. ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಿ ಎಂದು ಒತ್ತಾಯಿಸಿದರು.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು, ಸೆ.24–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಹುಣಸೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 5 ಅಂಗನವಾಡಿ ಕಾರ್ಯಕರ್ತೆ ಮತ್ತು 46 ಅಂಗನವಾಡಿ ಸಹಾಯಕಿಯರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು https://karnemakaone.kar.nic.in/abcd ವೆಬ್‌ಸೈಟ್ ಮೂಲಕ ಅಕ್ಟೋಬರ್ 19ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08222–252254 ಅನ್ನು ಸಂಪರ್ಕಿಸಬಹುದು ಎಂದು ಹುಣಸೂರಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾ.ಬೆಟ್ಟದ ಸ್ವಚ್ಛತಾ ಕಾರ್ಮಿಕನಿಗೆ ಕಿರುಕುಳ: ಕಾನೂನು ಕ್ರಮಕ್ಕೆ ಪೌರಕಾರ್ಮಿಕ ಆಗ್ರಹ

ಮೈಸೂರು, ಸೆ.24(ಜಿಎ)–ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಸ್ವಚ್ಛತಾ ಕಾರ್ಯ ನಿರ್ವಹಿಸಿ, ಬೆಟ್ಟದ ನೆಹರು ಪಿ.ಕೆ ಕಾಲೋನಿಯ ನಿವಾಸಿಯಾಗಿರುವ ಮುರುಗೇಶ್ ಅವರಿಗೆ ಕಿರುಕುಳ ನೀಡುತ್ತಿರುವವರ ವಿರುದ್ಧ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಕಾನೂನು ಕ್ರಮ ಜರುಗಿಸಿ ನ್ಯಾಯ ದೊರೆಕಿಸಿಕೊಡುವಂತೆ ಕರ್ನಾಟಕ ರಾಜ್ಯ ಡಾ.ಬಿ.ಆರ್. ಅಂಬೇಡ್ಕರ್ ಆದಿ ದ್ರಾವಿಡ (ಪೌರಕಾರ್ಮಿಕ) ಯುವಕರ ಅಭಿವೃದ್ಧಿ ಸಂಘ ಆಗ್ರಹಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಘದ ಗೌರವಾಧ್ಯಕ್ಷ ಕೆನಂಜಪ್ಪ ಬಸವನಗುಡಿ ಮಾತನಾಡಿ, ಮುರುಗೇಶ್ ಅವರ ಕುಟುಂಬಸ್ಥರು ಹಲವಾರು ವರ್ಷಗಳಿಂದ ಚಾಮುಂಡಿಬೆಟ್ಟದಲ್ಲಿ ಸ್ವಚ್ಛತಾ ಕಾರ್ಯ ಮಾಡಿಕೊಂಡು ಬರುತ್ತಿದ್ದಾರೆ ಆದರೆ, ಸೆ18ರಂದು ಇವರ ತಾಯಿ ಗೋಪಮ್ಮ ಮತ್ತು ಮೊಮ್ಮಗಳು ಇರುವ ಸಂದರ್ಭದಲ್ಲಿ ಟಿ.ಎಸ್. ಸುಬ್ಬಣ್ಣ ಸಾರ್ವಜನಿಕ ಹಾಸ್ಟೆಲ್‌ನ ಪ್ರಾಂಶುಪಾಲ ಇತರರು ವಿದ್ಯಾರ್ಥಿಗಳನ್ನು ಬಳಸಿಕೊಂಡು ಮನೆಯ ಚಾವಣಿ ಶೀಟ್ ಹಾಗೂ ಇನ್ನಿತರ ವಸ್ತುಗಳು ಧ್ವಂಸಗೊಳ್ಳಲು ಕಾರಣರಾಗಿದ್ದಾರೆ ಎಂದರು.

ಅವರುಗಳು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಈ ಕುರಿತು ಈಗಾಗಲೇ ಪೊಲೀಸ್ ಠಾಣೆ, ಪಿಡಿಒಗೆ ದೂರು ನೀಡಿದ್ದರೂ ಪ್ರಯೋಜನವಾಗಿಲ್ಲ ಹಿರಿಯ ಅಧಿಕಾರಿಗಳು ಮಧ್ಯ ಪ್ರವೇಶಿಸಬೇಕೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಆರ್.ಶಿವ ಸಿ.ಆರ್.ವಿಜಯ್, ರಂಗಸ್ವಾಮಿ, ಕುಮಾರಸ್ವಾಮಿ ಉಪಸ್ಥಿತರಿದ್ದರು.

ಕ್ರೀಡಾ ಸ್ಪರ್ಧೆಯಲ್ಲಿ ವಿಜೇತರು



ಸಾರ್ವಜನಿಕ ಶಿಕ್ಷಣ ಇಲಾಖೆಯವರು ನಡೆಸಿದ ವಲಯ ಮಟ್ಟದ ಅಥ್ಲೆಟಿಕ್ ಕ್ರೀಡಾ ವಿಭಾಗದಲ್ಲಿ ಶ್ರೀರಾಂಪುರದಲ್ಲಿರುವ ಮಹಾವೀರ ವಿದ್ಯಾಮಂದಿರ ಶಾಲೆಯ ವಿದ್ಯಾರ್ಥಿಗಳಾದ 9ನೇ ತರಗತಿಯ ದಿಗಂತ್ 3000 ಮೀ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ, 9ನೇ ತರಗತಿಯ ನಂದನ್ ಕೆ 1500 ಮೀ ಓಟದ ಸ್ಪರ್ಧೆಯಲ್ಲಿ ತೃತೀಯ ಸ್ಥಾನ, ಡಿಸ್ಕಸ್ ಥ್ರೋ ನಲ್ಲಿ ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ, 7ನೇ ತರಗತಿಯ ಮೋನಿಷ ಜೆ 600 ಮೀ ತೋಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ, ಆರನೇ ತರಗತಿಯ ಅಭಿಷೇಕ್ ಲಾಂಗ್ ಜಂಪ್‌ನಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಶಾಲೆಯ ಪ್ರಾಂಶುಪಾಲರಾದ ಅನಿತಾ ಡಿ, ದೈಹಿಕ ಶಿಕ್ಷಣ ಶಿಕ್ಷಕ ಸುರೇಶ್ ಎಸ್‌ಎಂ ಹಾಗೂ ಶಾಲಾ ಸಹ ಶಿಕ್ಷಕರು ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

ರಾಜ್ಯಪಾಲರ ಆದೇಶ ಪಾಲಿಸಿ ರಾಜೀನಾಮೆ ಕೊಟ್ಟಿದ್ದರೆ ಈ ಪರಿಸ್ಥಿತಿ ಬರುತ್ತಿರಲಿಲ್ಲ

ಮೈಸೂರು, ಸೆ24(ಜಿಎ)–ಮುಡಾ ಹಗರಣ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಹೈಕೋರ್ಟ್ ನೀಡಿರುವ ತೀರ್ಪನ್ನು ಸ್ವಾಗತಿಸಿರುವ ಬಿಜೆಪಿ, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ನಗರದ ಬಿಜೆಪಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿತು.

ಈ ವೇಳೆ ವಿಧಾನಪರಿಷತ್‌ನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮುಡಾ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಿಂದ ಮೈಸೂರಿಗೆ ನಾವು ಪಾದಯಾತ್ರೆ ಬಂದಾಗ ಕಾಂಗ್ರೆಸ್‌ನವರು ತಿದ್ದುಕೊಳ್ಳುವ ಅವಕಾಶ ಇತ್ತು. ಅಲ್ಲದೇ ರಾಜ್ಯಪಾಲರು ಕೊಟ್ಟ ಆದೇಶದ ವಿರುದ್ಧ ಕೋರ್ಟ್ ಮೆಟ್ಟಿಲು ಏರಿದರು. ರಾಜಭವನ ಬಿಜೆಪಿ ಕಚೇರಿ ಆಪಾದನೆ ಮಾಡಿದರು.ಆದರೀಗ ನ್ಯಾಯಾಲಯ ತೀರ್ಪು ಬಂದಿದೆ. ಈಗ ಕಾಂಗ್ರೆಸ್ ಭ್ರಷ್ಟಾಚಾರ ಬೆಳಕಿಗೆ ಬಂದಿದೆ. ಸಿಎಂ ಕಾನೂನು ಚೌಕಟ್ಟಿನಲ್ಲಿ ರಾಜೀನಾಮೆ ಕೊಡುವ ಪರಿಸ್ಥಿತಿ ಬಂದಿದೆ ಎಂದರು.



ನಗರದ ಬಿಜೆಪಿ ಕಚೇರಿ ಮುಂಭಾಗ ಸಿದ್ದರಾಮಯ್ಯರ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಸಿದ್ದರಾಮಯ್ಯ ಸಿಎಂ ಆಗಿದ್ದವರು, ನಾವೆಲ್ಲರೂ ಅವರನ್ನು ವಿರೋಧಿಸುತ್ತಿಲ್ಲ. ರಾಜ್ಯಪಾಲರ ಆದೇಶ ಪಾಲಿಸಿ ರಾಜೀನಾಮೆ ಕೊಟ್ಟಿದ್ದರೆ, ಈ ಪ್ರಸಂಗ ಬರುತ್ತಿರಲಿಲ್ಲ. ರಾಜೀನಾಮೆ ಕೊಟ್ಟು ಪ್ರಾಸಿಕ್ಯೂಷನ್ ಎದುರಿಸಿ ಮತ್ತೆ ಸಿಎಂ ಆದರೆ ನಾವು ಸ್ವಾಗತಿಸುತ್ತೇವೆ. ನಿಮ್ಮ ಪಕ್ಷದ ಹೈಕಮಾಂಡ್ ನಿಮ್ಮ ಬೆನ್ನ ಹಿಂದೆ ಇದ್ದರೂ, ಕೋರ್ಟ್ ಆದೇಶ ಬದಲಾಗುವುದಿಲ್ಲ. ನ್ಯಾಯಾಲಯಕ್ಕೆ ಎಲ್ಲರೂ ತಲೆಬಾಗಬೇಕು ಎಂದು ತಿಳಿಸಿದರು.

ಮಾಜಿ ಸಚಿವ ಎನ್.ಮಹೇಶ್ ಮಾತನಾಡಿ, ಕಾಂಗ್ರೆಸ್ ಭ್ರಷ್ಟಾಚಾರಗಳ ವಿರುದ್ಧ ಅಹೋರಾತ್ರಿ ಧರಣಿ ಮಾಡಿದ್ದೇವೆ. ಹೋರಾಟದ ಫಲವಾಗಿ ನ್ಯಾಯಾಲಯದಿಂದ ಸರಿಯಾದ ತೀರ್ಪು ಬಂದಿದೆ, ನೈತಿಕತೆ ಇದ್ದರೆ ಸಿದ್ದರಾಮಯ್ಯನವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಮುಡಾ ವಿಚಾರದಲ್ಲಿ ದಲಿತರಿಗೆ ಸೇರಿದ ಜಮೀನನ್ನು ತಪ್ಪಾಗಿ ನೋಂದಣಿ ಮಾಡಿದ್ದೀರಿ. ಇದರ ಬಗ್ಗೆ ವಿಧಾನಸಭೆಯಲ್ಲಿ ಮಾತನಾಡಲು ಅವಕಾಶ ಕೊಡಲಿಲ್ಲ. ಈ ವಿಚಾರವಾಗಿ ರಾಜ್ಯಪಾಲರಿಗೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡಿ ಅಂತ ಕೇಳಿದ್ದಾರೆ. ಕೋರ್ಟ್ ನಡವಳಿಕೆ ಗಮನಿಸಿದರೆ ಕೊನೆ ಜಡ್ಜ್‌ಮೆಂಟ್ ಬಂದಿದೆ ಎಂದರು.

ರಾಜ್ಯಪಾಲರು ಪೂರ್ವಗ್ರಹಪೀಡಿತರಾಗಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿದ್ದರೆ, ಈ ತೀರ್ಪು ಬರುತ್ತಿರಲಿಲ್ಲ. ನ್ಯಾಯಾಲಯದ ಆದೇಶಕ್ಕೆ ತಲೆಬಾಗಬೇಕು. ಕೋರ್ಟ್ ಸಂವಿಧಾನ ಪರವಾಗಿ ಇದೇ. ನೀವೂ ವಕೀಲರಾಗಿದ್ದಿರಿ, ತೀರ್ಪನ್ನು ಗೌರವಿಸಿ, ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ವಿಚಾರಣೆ ಎದುರಿಸಿ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಶಾಸಕ ನಿರಂಜನ್ ಕುಮಾರ್, ಬಿಜೆಪಿ ನಗರಾಧ್ಯಕ್ಷ ಎಲ್. ನಾಗೇಂದ್ರ ಗ್ರಾಮಾಂತರ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಮಾಜಿ ಮೇಯರ್ ಶಿವಕುಮಾರ್, ಉಪಮೇಯರ್ ಶೈಲೇಂದ್ರ, ಮುಖಂಡರಾದ ಕೇಬಲ್ ಮಹೇಶ್, ಜೋಗಿಮಂಜು, ಗಿರಿಧರ್, ಮತ್ತಿತರರು ಪಾಲ್ಗೊಂಡಿದ್ದರು.

ಕಾಂಗ್ರೆಸ್ ಶಾಸಕಾಂಗ ಪಕ್ಷ ಸಭೆ ಕರೆದಿಲ್ಲ

ಮುಖ್ಯ ಸಚೇತಕ ಅಶೋಕ್ ಪಟ್ಟಣ್ ಸ್ಪಷ್ಟನೆ

ಮೈಸೂರು, ಸೆ.24(ಎಸ್‌ಬಿಡಿ)– ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆದಿಲ್ಲ ಎಂದು ಕರ್ನಾಟಕ ವಿಧಾನಸಭೆ ಮುಖ್ಯ ಸಚೇತಕ ಅಶೋಕ್ ಪಟ್ಟಣ್ ಸ್ಪಷ್ಟಪಡಿಸಿದ್ದಾರೆ.

ಕೆಲವು ಮಾಧ್ಯಮಗಳಲ್ಲಿ ನಾಳೆ(ಸೆ.25) ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ ಎನ್ನುವ ಸುದ್ದಿ ಪ್ರಸಾರ ಆಗುತ್ತಿದೆ. ಆ ರೀತಿಯ ಚರ್ಚೆಯೇ ನಮ್ಮಲ್ಲಿ ನಡೆದಿಲ್ಲ. ಶಾಸಕಾಂಗ ಸಭೆ ಕರೆದಿದ್ದೇವೆ ಎನ್ನುವ ಸುದ್ದಿ ಸತ್ಯಕ್ಕೆ ದೂರವಾದದ್ದು ಎಂಬ ಸಂದೇಶವನ್ನು ಅವರು, ಮುಖ್ಯಮಂತ್ರಿಗಳ ಹೆಸರಿನ ವಾಟ್ಸಾಪ್ ಗ್ರೂಪ್‌ನಲ್ಲಿ ಹಂಚಿಕೊಂಡಿದ್ದಾರೆ.

ಮುಡಾ ನಿವೇಶನ ಹಂಚಿಕೆಯಲ್ಲಿ ಹಗರಣ ಆರೋಪ ಪ್ರಕರಣ ಸಂಬಂಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದನ್ನು ಪ್ರಶ್ನಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದ ಹಿನ್ನೆಲೆಯಲ್ಲಿ ಮಂಗಳವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ. 24 ಗಂಟೆಯೊಳಗೆ ಸಭೆ ನಡೆಸುವಂತೆ ಹೈಕಮಾಂಡ್ ಸೂಚನೆ ನೀಡಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿತ್ತು.

ಜಂಬೂಸವಾರಿಯಲ್ಲಿ ರಾರಾಜಿಸುತ್ತವೆ ಮೈಸೂರು ಪ್ರಾದೇಶಿಕ ಉತ್ಪನ್ನಗಳು

ಮೈಸೂರು ಸಿಲ್ಕ್, ಮೈಸೂರು ಸ್ಯಾಂಡಲ್ ಸೋಪ್, ಸಿಎಫ್‌ಟಿಆರ್‌ಐ, ಮೈಮುಲ್, ರೈಲ್ವೆ ವಿಭಾಗ, ಜಂಗಲ್ ಲಾಡ್ಜ್ ರೆಸಾರ್ಟ್ಸ್ ಮೇಳೈಸಲಿವೆ

ಸಾಂದರ್ಭಿಕ ಚಿತ್ರ



ಮೈಸೂರು, ಸೆ24(ಎಸ್‌ಪಿಎನ್)–ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತಾವಧಿಯಲ್ಲಿ ಹಾಗೂ ರಾಜ್ಯ–ಕೇಂದ್ರ ಸರ್ಕಾರದಿಂದ ಸ್ಥಾಪಿತವಾಗಿ 'ಮೈಸೂರು ಬ್ರಾಂಡ್'ಗೆ ಹೆಸರುವಾಸಿಯಾಗಿರುವ 'ಮೈಸೂರು ಸಿಲ್ಕ್', 'ಮೈಸೂರು ಸ್ಯಾಂಡಲ್ ಸೋಪ್ ಕಾರ್ಖಾನೆ', 'ಸಿಎಫ್‌ಟಿಆರ್‌ಐ', 'ಕೆಎಂಎಫ್‌ನ ಮೈಮುಲ್', 'ರೈಲ್ವೆ ವಿಭಾಗ' ಮತ್ತು 'ಜಂಗಲ್ ರೆಸಾರ್ಟ್ ಸಂಸ್ಥೆಗಳು' ಈ ಬಾರಿ ಜಂಬೂಸವಾರಿ ಮೆರವಣಿಗೆಯಲ್ಲಿ ತಮ್ಮ ಇತಿಹಾಸ ಪರಿಚಯಿಸಲು ಮುಂದಾಗಿವೆ.

ದಸರಾ ಜಂಬೂಸವಾರಿ ಮೆರವಣಿಗೆಗೆ ಮತ್ತಷ್ಟು ಮೆರುಗು ನೀಡುವ ಸ್ತಬ್ಧಚಿತ್ರಗಳ ಪ್ರದರ್ಶನಕ್ಕೆ ಚುರುಕಿನ ತಯಾರಿ ನಡೆಯುತ್ತಿದ್ದು, ಈ ಬಾರಿ 40–42 ಸ್ತಬ್ಧಚಿತ್ರಗಳಿಗೆ ಮಾತ್ರ ಅವಕಾಶ ನೀಡಿ, ಕಲಾತಂಡಗಳ ಕಲೆ ವೀಕ್ಷಣೆಗೆ ಹೆಚ್ಚು ಸಮಯಾವಕಾಶ ದೊರಕಿಸಲು ದಸರಾ ಸ್ತಬ್ಧ ಚಿತ್ರ ಉಪ ಸಮಿತಿ ಚಿಂತನೆ ನಡೆಸಿದೆ.

ಮೈಸೂರು ರಾಜ್ಯ ಬದಲು 'ಕರ್ನಾಟಕ' ಎಂದು ಮರು ನಾಮಕರಣಗೊಂಡ ಸಂಭ್ರಮವನ್ನು 'ಕರ್ನಾಟಕ ಸಂಭ್ರಮ–50' ಲೋಗೋವನ್ನು ಎಲ್ಲ ಸ್ತಬ್ಧ ಚಿತ್ರಗಳಲ್ಲೂ ಬಳಸುವಂತೆ ಈಗಾಗಲೇ ಸೂಚಿಸಿದ್ದು, ಆಯಾ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕನ್ನಡ ನಾಡು, ನುಡಿಗಾಗಿ ಹೋರಾಡಿದ ಮಹನೀಯರನ್ನು ಸ್ಮರಿಸಿ, ಅಲ್ಲಿನ ವಿಶೇಷತೆ ಸಾರುವ ಸ್ತಬ್ಧಚಿತ್ರಗಳ ತಯಾರಿಗೆ ಸೂಚಿಸಲಾಗಿದೆ ಎಂದು ದಸರಾ ಸ್ತಬ್ಧ ಚಿತ್ರ ಉಪ ಸಮಿತಿ ಉಪ ವಿಶೇಷಾಧಿಕಾರಿ ಪ್ರಭುಸ್ವಾಮಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಕಳೆದ ಬಾರಿ ಜಂಬೂಸವಾರಿ ಮೆರವಣಿಗೆಯಲ್ಲಿ 49 ಸ್ತಬ್ಧಚಿತ್ರಗಳು ಮತ್ತು ಅಷ್ಟೇ ಪ್ರಮಾಣದ ಕಲಾ ತಂಡಗಳು ಭಾಗವಹಿಸಿದ್ದವು. ಆದರೆ, ಮೆರವಣಿಗೆಯಲ್ಲಿ ಕಲಾತಂಡಗಳು ತಮ್ಮ ಕಲೆಗಳನ್ನು ಸಾವಧಾನವಾಗಿ ಪ್ರದರ್ಶನ ನೀಡಲು ಸಾಧ್ಯವಾಗದೇ ವೇಗವಾಗಿ ಪ್ರದರ್ಶನ ನೀಡುವ ಅನಿವಾರ್ಯತೆ ಎದುರಾಗಿತ್ತು. ಈ ಸೊಬಗನ್ನು ಕಣ್ತುಂಬಿಗಳು ಸಾರ್ವಜನಿಕರಿಗೆ ಕಾಲಾವಕಾಶ ಸಾಕಾಗುತ್ತಿಲ್ಲ ಎಂಬ ದೂರು ಸಾರ್ವಜನಿಕ ವಲಯದಿಂದ ಕೇಳಿ ಬಂದಿದ್ದವು. ಈ ಬಾರಿ ಆಗಾಗದಂತೆ ಸೂಕ್ತ ತಯಾರಿ ಮಾಡಲಾಗುತ್ತಿದ್ದು, 40ರಿಂದ 42 ಸ್ತಬ್ಧ ಚಿತ್ರಗಳಿಗೆ ಮಿತಿ ಹೇರಿ ಕಲಾ ತಂಡಗಳ ಪ್ರದರ್ಶನಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ರಾಜ್ಯದ ಎಲ್ಲ ಜಿಲ್ಲೆಗಳಿಂದ ಹಾಗೂ ಕೆಲ ಇಲಾಖೆಗಳು ತಾವು ಹಿಂದೆ ಪ್ರಸ್ತುತಪಡಿಸಿರುವ ಮಾದರಿಗಳನ್ನು ಉಪಸಮಿತಿಗೆ ಕಳುಹಿಸಿಕೊಟ್ಟಿದ್ದರು. ಇದಕ್ಕೆ ಕಡಿವಾಣ ಹಾಕಲು ಕಳೆದ 3 ವರ್ಷಗಳ ಸ್ತಬ್ಧಚಿತ್ರದ ಪರಿಕಲ್ಪನೆ ಮರುಕಳಿಸದಂತೆ ಎಚ್ಚರಿಕೆ ವಹಿಸುತ್ತಿದ್ದೇವೆ. ಕೆಲ ಜಿಲ್ಲೆಗಳಿಂದ ಬಂದ ಪ್ರಸ್ತಾವನ್ನು ಆಯಾಯ ಜಿಲ್ಲಾಡಳಿತಕ್ಕೆ ಮರು ಕಳುಹಿಸಿ, ಬದಲಿ ಸ್ತಬ್ಧಗಳ ತಯಾರಿಗೆ ಸೂಚಿಸಿದ್ದೇವೆ ಎಂದು ತಿಳಿಸಿದರು.

ಕಳೆದ ಬಾರಿ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಸ್ತಬ್ಧಚಿತ್ರಗಳ ಪ್ರದರ್ಶನಕ್ಕೆ ಪ್ರಥಮ ಆದ್ಯತೆ ನೀಡಲಾಗಿತ್ತು. ಈ ಬಾರಿ ಅದನ್ನು ಪ್ರಥಮವಾಗಿ ಪರಿಗಣಿಸದೇ, ಕರ್ನಾಟಕ ಸುವರ್ಣ ಸಂಭ್ರಮ ಪ್ರದರ್ಶನಕ್ಕೆ ಹೆಚ್ಚು ಒತ್ತು ನೀಡಲಾಗಿದೆ. ಈ ಕುರಿತು ಸ್ತಬ್ಧಚಿತ್ರ ಉಪ ಸಮಿತಿಯು ಈಗಾಗಲೇ 2 ಸಭೆ ನಡೆಸಿದ್ದು, ಸೆ.27ರಂದು ಮತ್ತೆ ಸಭೆ ಸೇರಿ ಸ್ತಬ್ಧಚಿತ್ರಗಳ ಪಟ್ಟಿ ಅಂತಿಮಗೊಳಿಸುವ ಯೋಚನೆಯಲ್ಲಿದ್ದೇವೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕರಿಂದ ಸಲಹೆ: ಈ ಬಾರಿ ಜಂಬೂಸವಾರಿ ಮೆರವಣಿಗೆಯಲ್ಲಿ ವಿಶೇಷ ಸ್ತಬ್ಧಚಿತ್ರ ತಯಾರಿಸುವ ಉದ್ದೇಶದಿಂದ ಸಮಿತಿಯು ಉತ್ತಮ ಸ್ತಬ್ಧಚಿತ್ರಗಳ ಮಾದರಿ ನೀಡುವಂತೆ ಸಾರ್ವಜನಿಕರು ಆನ್‌ಲೈನ್ ಮೂಲಕ ಸಲಹೆ ನೀಡಬಹುದು ಎಂದರು.

ಕಾರ್ಮಿಕ ಇಲಾಖೆಯ ಸ್ತಬ್ಧಚಿತ್ರ: ಈ ಬಾರಿ ದಸರಾ ಸ್ತಬ್ಧಚಿತ್ರಗಳ ಪ್ರದರ್ಶನದಲ್ಲಿ ಕಾರ್ಮಿಕ ಇಲಾಖೆಯಿಂದ ಪ್ರಥಮ ಬಾರಿಗೆ ಸ್ತಬ್ಧಚಿತ್ರ ಪ್ರದರ್ಶನಕ್ಕೆ ಸಜ್ಜಾಗುತ್ತಿದೆ. ಕಾರ್ಮಿಕರ ಆರೋಗ್ಯ ರಕ್ಷಣೆಗಾಗಿ ಸ್ಥಾಪಿತವಾಗಿರುವ ಬಿ.ಆರ್.ಅಂಬೇಡ್ಕರ್ ಸಹಾಯ ಕೇಂದ್ರ, ವಲಸೆ ಕಾರ್ಮಿಕರ ವಸತಿ ಯೋಜನೆ ಸೇರಿದಂತೆ ಇಲಾಖೆಯಿಂದ ಕಾರ್ಮಿಕರಿಗೆ ನೀಡಲಾಗುವ ಸೌಲಭ್ಯಗಳ ಮಾಹಿತಿ ಕಲಾತ್ಮಕವಾಗಿ ಪ್ರದರ್ಶಿಸಲಾಗುತ್ತಿದೆ ಎಂದು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಜಂಟಿ ಕಾರ್ಯದರ್ಶಿ ಸಂಗಪ್ಪ ಉಪಾಸೆ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ತನಿಖೆಯಾಗಿ ತಪ್ಪು ಕಂಡುಬಂದರೆ ಸಿಎಂ ರಾಜೀನಾಮೆ ನೀಡಬೇಕಾಗುತ್ತದೆ

ಸಚಿವ ಸತೀಶ್ ಜಾರಕಿಹೊಳಿ ಅಭಿಮತ



ಬೆಳಗಾವಿ, ಸೆ24– ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯದ ಎಲ್ಲ ಶಾಸಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆನ್ನಿಗೆ ಇದ್ದೇವೆ. ಅವರು ರಾಜೀನಾಮೆ ಕೊಡುವ ಪ್ರಶ್ನೆಯೇ ಇಲ್ಲ. ಕಾನೂನು ಹೋರಾಟ ಮಾಡುತ್ತೇವೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನೈತಿಕ ಹೊಣೆ ಹೊತ್ತು ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು ಎಂಬ ಬಿಜೆಪಿ ಹೋರಾಟಕ್ಕೆ ಅರ್ಥವಿಲ್ಲ. ಹೈಕೋರ್ಟ್ ತನಿಖೆಗೆ ಆದೇಶ ನೀಡಿದೆ ಅಷ್ಟೇ. ತನಿಖೆಯಾಗಲಿ. ತಪ್ಪು ಕಂಡುಬಂದರೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕಾಗುತ್ತದೆ ಎಂದು ಅವರು ನಗರದಲ್ಲಿ ಮಂಗಳವಾರ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು.

ಮುಡಾ ಪ್ರಕರಣ ತನಿಖೆ ಸಮಗ್ರವಾಗಿ ಆಗಲಿ. ಅಲ್ಲಿಯವರೆಗೆ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಿ ಮುಂದುವರಿಯುತ್ತಾರೆ. ಎಲ್ಲ ಶಾಸಕರದ್ದು, ಹೈಕಮಾಂಡ್‌ನದ್ದು ಕೂಡ ಇದೇ ಆಗ್ರಹವಾಗಿದೆ ಎಂದರು. ಹಾಗಾಗಿ, ಯಾರೂ ಈಗ ಮುಖ್ಯಮಂತ್ರಿ ರೇಸ್‌ನಲ್ಲಿ ಇಲ್ಲ. ಅದರ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಹೈಕೋರ್ಟ್ ಆದೇಶ ಪ್ರಶ್ನಿಸಿ ವಿಭಾಗೀಯ ಪೀಠ ಅಥವಾ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ. ಈ ವಿಚಾರದಲ್ಲಿ ಸಿದ್ದರಾಮಯ್ಯ ಅವರೇ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದರು.

ರಾಜ್ಯಪಾಲರು ಪಕ್ಷಪಾತ ಧೋರಣೆ ಅನುಸರಿಸುತ್ತಿದ್ದಾರೆ ಎಂಬುದು ಮೇಲ್ನೋಟಕ್ಕೇ ಗೊತ್ತಾಗುತ್ತಿದೆ. ಈ ಹಿಂದಿನ ಯಾವುದೇ ರಾಜ್ಯಪಾಲರು ಈ ರೀತಿ ಸರ್ಕಾರದ ವಿರುದ್ಧ ಧೋರಣೆ ಹೊಂದಿರಲಿಲ್ಲ. ಕೇಂದ್ರ ಸರ್ಕಾರ ತನ್ನ ಏಜೆನ್ಸಿಗಳ ಮೂಲಕ, ರಾಜ್ಯಪಾಲರುಗಳ ಮೂಲಕ ಕಾಂಗ್ರೆಸ್ ಶಕ್ತಿ ಕುಂದಿಸುವ ಹುನ್ನಾರ ಮುಂದುವರಿಸಿದೆ ಎಂದೂ ಆರೋಪಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಅವ್ಯವಹಾರವೇ ಬೇರೆ, ಸಿದ್ದರಾಮಯ್ಯ ಪ್ರಕರಣವೇ ಬೇರೆ. ಅಲ್ಲಿ ಹಣ ವರ್ಗಾವಣೆ ನೇರವಾಗಿ ಆಗಿದ್ದರಿಂದ ಸಚಿವರ ರಾಜೀನಾಮೆ ಪಡೆಯಲಾಗಿದೆ. ಆದರೆ, ಸಿ.ಎಂ ವಿಚಾರದಲ್ಲಿ ಅಂಥ ಆರೋಪಗಳು ಇಲ್ಲ.

ಮಹಿಷ ದಸರಾ ವೈಯಕ್ತಿಕ; ಆಚರಿಸಿದರೆ ತಪ್ಪೇನು

ಕಾಂಗ್ರೆಸ್ ವಕ್ತಾರ ಲಕ್ಷ್ಮಣ್ ಪ್ರಶ್ನೆ



ಮೈಸೂರು,ಸೆ.24(ಎಸ್‌ಪಿಎನ್)– ಮಹಿಷ ದಸರಾ ಆಚರಣೆ ವಿರುದ್ಧ ಮಾಜಿ ಸಂಸದ ಪ್ರತಾಪ ಸಿಂಹ ದ್ವೇಷದ ಹೇಳಿಕೆ ನೀಡುತ್ತಿರುವುದು ಬೇಸರದ ಸಂಗತಿ. ಈ ಆಚರಣೆ ವೈಯಕ್ತಿಕವಾಗಿದ್ದು, ವಿರೋಧ ಸಲ್ಲದು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ತಿಳಿಸಿದರು.

ಈ ಕುರಿತು ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಹಿಷ ದಸರಾ ಆಚರಣೆಯಿಂದ ಚಾಮುಂಡೇಶ್ವರಿ ದೇವಿ, ಭಕ್ತರ ನಂಬಿಕೆಗೆ ಧಕ್ಕೆ ಆಗುವುದಿಲ್ಲ. ಮಹಿಷ ಪ್ರತಿಮೆಯೇ ಚಾಮುಂಡಿಬೆಟ್ಟದ ಮೇಲಿದೆ. ಆ ಜಾಗದಲ್ಲಿ ಪೂಜೆ ಮಾಡಿದರೆ ತಪ್ಪೇನು ಎಂದು ಪ್ರಶ್ನಿಸಿದರು.

ಸಂಸದ ಯದುವೀರ್‌ಗೆ ತಮ್ಮ ಆಸ್ತಿಗಳ ರಕ್ಷಣೆಯೇ ಪ್ರಧಾನವಾಗಿದ್ದು, ಅವರಿಗೆ ಬಡವರ ಕಷ್ಟ ಗೊತ್ತಿಲ್ಲ. ಚಾಮುಂಡಿಬೆಟ್ಟ ಪ್ರಾಧಿಕಾರ ರಚನೆಯನ್ನೂ ವಿರೋಧಿಸುತ್ತಿದ್ದಾರೆ. ಅರಮನೆ ಮುಂಭಾಗ ನೂರಾರು ವರ್ಷಗಳಿಂದ ಪಾರಿವಾಳಗಳಿವೆ ಹಾಗೂ ಅಲ್ಲಿ ಪಾರಿವಾಳ ಪಿಕ್ಕೆ ಹಾಕಿದರೆ ಅರಮನೆಗೇನು ತೊಂದರೆ ಇಲ್ಲ. ಅವುಗಳನ್ನು ಆ ಜಾಗದಿಂದ ಓಡಿಸಬೇಕೇ ಎಂದು ಪತ್ರಕರ್ತರ ಪ್ರಶ್ನಿಸಿದರು.

ಸಿಎಂ ರಾಜೀನಾಮೆ ನೀಡಬಾರದು: ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ತನಿಖೆಗೆ ಅನುಮತಿಸಿ ಹೈಕೋರ್ಟ್ ತೀರ್ಪು ನೀಡಿದ್ದು, ಅವರು ಯಾವುದೇ ಕಾರಣಕ್ಕೂ ರಾಜೀನಾಮೆ ನೀಡಬಾರದು ಎಂದು ಆಗ್ರಹಿಸಿದರಲ್ಲದೆ, ಈ ಬಾರಿ ವಿಧಾನ ಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನ 136 ಶಾಸಕರು, 9 ಸಂಸದರು ಗೆಲುವು ಸಾಧಿಸಿದ್ದಾರೆ. ಅಲ್ಲದೆ, ಕಾಂಗ್ರೆಸ್ ಕಾರ್ಯಕರ್ತರು, ಹೈಕಮಾಂಡ್ ಹಾಗೂ ಜನರ ಬೆಂಬಲವೂ ಇದೆ ಎಂದರು.

ರಾಜ್ಯಪಾಲರ ವಿರುದ್ಧ ಗರಂ: ಸಂವಿಧಾನ ವಿರೋಧಿ ಕೆಲಸ ಮಾಡುವುದಕ್ಕೆ ರಾಜ್ಯಪಾಲರನ್ನು ಕೇಂದ್ರವು ರಾಜ್ಯಕ್ಕೆ ನಿಯೋಜಿಸಿದೆ. ಕಾಂಗ್ರೆಸ್ ಸರ್ಕಾರವನ್ನು ಬೀಳಿಸುವುದೇ ಗುರಿಯಾಗಿದೆ. ರಾಜ್ಯ ರಾಜಕೀಯ ಇತಿಹಾಸದಲ್ಲೇ ಇದು ಕರಾಳ ದಿನ. ಸಿದ್ದರಾಮಯ್ಯ ಎರಡನೇ ಬಾರಿ ಮುಖ್ಯಮಂತ್ರಿ ಆಗಿರುವುದನ್ನು ಬಿಜೆಪಿ, ಜೆಡಿಎಸ್‌ಗೆ ಸಹಿಸಲಾಗುತ್ತಿಲ್ಲ ಎಲ್ಲರಿಗೂ ಗ್ಯಾರಂಟಿ ಯೋಜನೆ ನೀಡಿರುವುದರಿಂದಲೇ ಅವರನ್ನು ಪದಚ್ಯುತಿಗೊಳಿಸುವ ಹುನ್ನಾರ ನಡೆಸಿದ್ದಾರೆ ಎಂದು ಆರೋಪಿಸಿದರು.

ರಾಜ್ಯದ ಅಭಿವೃದ್ಧಿಗೆ ರಾಜ್ಯಪಾಲರು ತೊಡಕಾಗಿದ್ದು, ಎಲ್ಲದಕ್ಕೂ ವರದಿ ಕೇಳುತ್ತಿದ್ದಾರೆ. ಅವರು ಮಲ್ಲೇಶ್ವರಂನ ಬಿಜೆಪಿ ಕಚೇರಿಗೆ ಹೋಗುವುದು ಒಳಿತು. ಅವರನ್ನು ರಾಷ್ಟ್ರಪತಿ ವಾಪಸ್ ಕರೆಸಿಕೊಳ್ಳಬೇಕು. ಇಲ್ಲದಿದ್ದರೆ ಅನಾಹುತಗಳಾಗಲಿವೆ' ಎಂದು ಎಚ್ಚರಿಸಿದರು.

ದೇಶದ ವಿವಿಧರಾಜ್ಯದಲ್ಲಿ ಅಧಿಕಾರಕ್ಕೆಬರಲು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ದಶಕದಿಂದ 463 ಶಾಸಕರನ್ನು ಖರೀದಿಸಿ, 10 ರಾಜ್ಯಗಳ ವಿವಿಧ ಪಕ್ಷಗಳ ಸರ್ಕಾರಗಳನ್ನು ಬೀಳಿಸಿದೆ ಅಧಿಕಾರದ ಆಸೆಗಾಗಿ ಕೇಂದ್ರೀಯ ತನಿಖಾ ಸಂಸ್ಥೆಗಳಾದ ಆದಾಯ ತೆರಿಗೆ, ಜಾರಿ ನಿರ್ದೇಶನಾಲಯ, ಸಿಬಿಐ ಅನ್ನು ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ ಇದೀಗ ನ್ಯಾಯಾಂಗ ವ್ಯವಸ್ಥೆಯನ್ನು ಹಾಳು ಮಾಡುತ್ತಿದೆ ಎಂದು ಟೀಕಿಸಿದರು.

ಶ್ರೀರಂಗಪಟ್ಟಣ ಬಳಿಯ ಶನಿಮಠದ ಕಾರ್ಯ ಚಟುವಟಿಕೆಗಳಿಗೆ ರಾಜಕೀಯ ಪ್ರಭಾವಿಗಳ ಅಡ್ಡಿ

ಸಚಿವ, ಡಿಸಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರಿಗೆ ಪತ್ರ

ಮೈಸೂರು, ಸೆ.24(ಜಿಎ)–ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕಿನ ಹೊಂಗಳ್ಳಿ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 291ರ ಶ್ರೀಕ್ಷೇತ್ರ ಶನಿಮಠದ ಚಟುವಟಿಕೆಗಳಿಗೆ ರಾಜಕೀಯ ಪ್ರಭಾವ ಬಳಸಿಕೊಂಡು ನಿರಂತರವಾಗಿ ಕಿರುಕುಳ ನೀಡುತ್ತಿರುವವರಿಗೆ ಪ್ರೋತ್ಸಾಹಿಸುತ್ತಿರುವ ಸಚಿವ ಹಾಗೂ ಜಿಲ್ಲಾಧಿಕಾರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರಿಗೆ ಪತ್ರ ಬರೆದಿರುವುದಾಗಿ ಮಠದ ಧರ್ಮದರ್ಶಿ ಕೆ.ಎನ್.ರಾಜಣ್ಣ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಠದ ಪಕ್ಕದಲ್ಲಿರುವ ಸರ್ಕಾರಿ ಜಮೀನನ್ನು ಪ್ರಭಾವಿ ವ್ಯಕ್ತಿಯೊಬ್ಬರು ಅತಿಕ್ರಮಿಸಿ, ಅಲ್ಲಿ ಕಾಂಪೌಂಡ್ ನಿರ್ಮಿಸಿ, ರೆಸಾರ್ಟ್ ಆರಂಭಿಸಲು ಸಿದ್ಧತೆ ನಡೆಸಿದ್ದಾರೆ. ಇದರಿಂದಾಗಿ ಗ್ರಾಮದ ಶ್ರೀಕ್ಷೇತ್ರ ಶನಿಮಠದ ಚಟುವಟಿಕೆಗಳಿಗೆ ಅಡ್ಡಿಯಾಗಿದೆ. ಆದ್ದರಿಂದ ಮಂಡ್ಯ ಜಿಲ್ಲಾಧಿಕಾರಿ ಹಾಗೂ ಇನ್ನಿತರರು ಅತಿಕ್ರಮಣ ತೆರವುಗೊಳಿಸಬೇಕೆಂದು ಆಗ್ರಹಿಸಿದರು.

ಈ ಪ್ರಭಾವಿ ವ್ಯಕ್ತಿ ನಿರ್ಮಿಸಿರುವ ಕಾಂಪೌಂಡ್ ಪಕ್ಕದಲ್ಲಿಯೇ ಶ್ರೀಕ್ಷೇತ್ರ ಶನಿಮಠದ ವತಿಯಿಂದ ನಡೆಸುತ್ತಿರುವ ಗೋಶಾಲೆ, ವೃದ್ಧಾಶ್ರಮದ ಕಟ್ಟಡಗಳಿವೆ. ಇದರಿಂದಾಗಿ ಆ ಕಾಂಪೌಂಡ್ ಕೆಡವಬೇಕೆಂದು ಈ ಹಿಂದೆ ಮಂಡ್ಯ ಜಿಲ್ಲಾಧಿಕಾರಿ ನೀಡಿದ್ದ ಆದೇಶವೂ ಪಾಲನೆಯಾಗಿಲ್ಲ. ಆ ಪ್ರಭಾವಿ ವ್ಯಕ್ತಿಗೆ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಹಾಗೂ ಜಿಲ್ಲಾಧಿಕಾರಿ ಡಾ.ಕುಮಾರ್ ಮತ್ತು ಈ ಹಿಂದಿನ ತಹಶೀಲ್ದಾರ್‌ಗಳ ಕುಮ್ಮಕ್ಕಿದ್ದು, ಇವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕೆಂದು ಕೋರಿ ಈಗಾಗಲೇ ರಾಜ್ಯಪಾಲರಿಗೆ ಪತ್ರದ ಮೂಲಕ ಮನವಿ ಮಾಡಿರುವುದಾಗಿ ತಿಳಿಸಿದರು. ಶನಿಮಠದ ಸ್ವಾಮೀಜಿ ರುದ್ರೇಶ್ ಪ್ರಸಾದ್, ಸಿ.ಪಿಂಟು, ರವೀಂದ್ರಕುಮಾರ್, ದುರ್ಗಮ್ಮ, ಛಾಯಾದೇವಿ ಉಪಸ್ಥಿತರಿದ್ದರು.

ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣ

ಶಾಸಕ ಮುನಿರತ್ನರನ್ನು ಎಸ್‌ಐಟಿ ಕಸ್ಟಡಿಗೆ ನೀಡಿದ ಕೋರ್ಟ್

ಬೆಂಗಳೂರು, ಸೆ.24– ಅತ್ಯಾಚಾರ ಆರೋಪ ಪ್ರಕರಣ ಎದುರಿಸುತ್ತಿರುವ ರಾಜರಾಜೇಶ್ವರಿ ನಗರದ ಬಿಜೆಪಿ ಶಾಸಕ ಮುನಿರತ್ನರನ್ನ ಇಂದು ಎಸ್‌ಐಟಿ ಕಸ್ಟಡಿಗೆ ಪಡೆದಿದೆ. ಅ.5ರವರೆಗೆ ಎಸ್‌ಐಟಿ ಕಸ್ಟಡಿಗೆ ನೀಡಿ 42ನೇ ಎಸಿಎಂಎಂ ಕೋರ್ಟ್‌ನ ನ್ಯಾಯಾಧೀಶ ಕೆ.ಎನ್.ಶಿವಕುಮಾರ್ ಆದೇಶಿಸಿದ್ದಾರೆ.

ರಾಮನಗರ ಜಿಲ್ಲೆಯ ಕಗ್ಗಲೀಪುರ ಪೊಲೀಸ್ ಠಾಣೆಯಲ್ಲಿ ಶಾಸಕ ಮುನಿರತ್ನ ವಿರುದ್ಧ ದಾಖಲಾಗಿದ್ದ ಅತ್ಯಾಚಾರ ಪ್ರಕರಣ ಸಂಬಂಧಿಸಿದಂತೆ ಮುನಿರತ್ನ ಅವರನ್ನು ಕಳೆದ ಶುಕ್ರವಾರ ಬೆಳಿಗ್ಗೆ ಬಂಧಿಸಲಾಗಿದ್ದು ಅಮರು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದರು. ಇದರ ಬೆನ್ನಲ್ಲೆ ಹೆಚ್ಚಿನ ತನಿಖೆಗಾಗಿ ಇಂದು ಅವರನ್ನು ಎಸ್‌ಐಟಿ ಕಸ್ಟಡಿಗೆ ನೀಡಿ ಕೋರ್ಟ್ ಆದೇಶಿಸಿದೆ.

ಮುನಿರತ್ನ ವಿರುದ್ಧ ಆರೋಪಗಳ ಸುರಿಮಳೆಗೈದಿದ್ದ ಸಂತ್ರಸ್ತೆ ಗುತ್ತಿಗೆದಾರನಿಗೆ ಜೀವ ಬೆದರಿಕೆ ಹಾಕಿದ, ಜಾತಿ ನಿಂದನೆ ಹಾಗೂ ಅತ್ಯಾಚಾರ ಪ್ರಕರಣ ಎದುರಿಸುತ್ತಿರುವ ಬಿಜೆಪಿ ಶಾಸಕ ಮುನಿರತ್ನ ಅಕ್ರಮಗಳಿಗೆ ಸಂಬಂಧಿಸಿದ ಒಂದೊಂದೆ ವಿಚಾರಗಳು ಬೆಳಕಿಗೆ ಬರುತ್ತಿವೆ. ಅದರಂತೆ ಅವರ ಬಳಿ ಹಲವಾರು ಅಶ್ಲೀಲ ವಿಡಿಯೋಗಳಿವೆ. ರಾಜಕೀಯ ಎದುರಾಳಿಗಳನ್ನು ಹಣಿಯಲು ಮುನಿರತ್ನ ಹನಿಟ್ರ್ಯಾಪ್ ಷಡ್ಯಂತ್ರ ಹೂಡುತ್ತಿದ್ದರು.